

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಸೆಪ್ಟೆಂಬರ್ 4 ಬುಧವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

45

ಸಂಪುಟ: 45 | ಸಂಚಿಕೆ: 140 | ಪುಟಗಳು: 10
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಸಿಎಂ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಮೊದಲ ಸಭೆ

ಚಾಮುಂಡಿಬೆಟ್ಟ ಅಭಿವೃದ್ಧಿಗೆ ಮಾಸ್ಟರ್ ಪ್ಲಾನ್

ಚಾಮುಂಡೇಶ್ವರಿ ದೇವಾಲಯ ಸೇರಿ 24 ದೇವಸ್ಥಾನದ ಅಭಿವೃದ್ಧಿ

- 5 ದೇವಾಲಯಗಳ ಜೀರ್ಣೋದ್ಧಾರ
- ಪ್ರಸಾದ ಯೋಜನೆಗೆ ಕೊರತೆಯಾಗುವ 11 ಕೋಟಿ ನೀಡಲು ಸಮ್ಮತಿ
- ದಾಸೋಹ ಭವನ ನವೀಕರಣ
- ಸ್ವಚ್ಛತೆಗೆ ಆದ್ಯತೆ, ಪ್ಲಾಸ್ಟಿಕ್ ಮುಕ್ತ
- ದೇವಾಲಯದಲ್ಲಿ ಫೋಟೋಗ್ರಫಿ ನಿಷಿದ್ಧ
- ದೇವಿಕೆರೆ, ನಂದಿ ಪ್ರತಿಮೆ ಸ್ಥಳದ ಅಭಿವೃದ್ಧಿ
- ದೇವಾಲಯದ ನೌಕರರಿಗೆ ವೈದ್ಯಕೀಯ ಸೌಲಭ್ಯ, ಅವರ ಮಕ್ಕಳಿಗೆ ಶಿಕ್ಷಣ
- ಬೆಟ್ಟದಲ್ಲಿ ಧೂಮಪಾನ, ಮದ್ಯಪಾನ ನಿಷೇಧ



ಮೈಸೂರು, ಸೆ.3(ಬಿಎಲ್‌ಯು)– ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಮೊದಲ ಸಭೆ ನಡೆಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಚಾಮುಂಡಿಬೆಟ್ಟದಲ್ಲಿ ಅಪರಾಧ ತಡೆಗೆ ಟಾಸ್ಕ್ ಫೋರ್ಸ್ ರಚನೆ, ದೇವಾಲಯದ ಸಮಗ್ರ ಅಭಿವೃದ್ಧಿ, ದಾಸೋಹ ಭವನ ನವೀಕರಣ, ಐದು ವರ್ಷದ ಅಭಿವೃದ್ಧಿಗೆ ಮಾಸ್ಟರ್ ಪ್ಲಾನ್ ತಯಾರು ಸೇರಿದಂತೆ ಹಲವು ಮಹತ್ವದ ನಿರ್ಣಯ ಕೈಗೊಂಡರು.

ಮೈಸೂರಿನ ಚಾಮುಂಡಿಬೆಟ್ಟದ ದಾಸೋಹ ಭವನದಲ್ಲಿ ಇಂದು ಮುಖ್ಯಮಂತ್ರಿಗಳು, ಚಾಮುಂಡೇಶ್ವರಿ ದೇವಸ್ಥಾನ ಸೇರಿದಂತೆ ಚಾಮುಂಡಿಬೆಟ್ಟದ ಅಭಿವೃದ್ಧಿ ಸಂಬಂಧ ಸುಮಾರು ಮೂರು ಗಂಟೆಗಳ ಕಾಲ ಸುದೀರ್ಘ ಸಭೆ ನಡೆಸಿದರು. ಸಭೆಯ ನಂತರ ನಡೆದ ಪತ್ರಿಕಾಗೋಷ್ಠಿಯಲ್ಲಿ ಪ್ರಾಧಿಕಾರದ ಸಭೆಯಲ್ಲಿ ಕೈಗೊಂಡ ತೀರ್ಮಾನಗಳನ್ನು ಸಿಎಂ ವಿವರಿಸಿದರು.

ಚಾಮುಂಡಿಬೆಟ್ಟಕ್ಕೆ ಪ್ರತಿದಿನ ಸಾವಿರಾರು ಭಕ್ತಾದಿಗಳು ಭೇಟಿ ನೀಡುತ್ತಾರೆ. ಆದರೆ ಚಾಮುಂಡಿಬೆಟ್ಟದಲ್ಲಿ ಕೆಲವು ಅಭಿವೃದ್ಧಿ ಕಾರ್ಯಗಳು ಪೂರ್ಣಗೊಂಡರೆ, ಕೆಲವು ಅಭಿವೃದ್ಧಿ ಕಾರ್ಯಗಳು ಅಪೂರ್ಣಗೊಂಡಿವೆ. ಇದನ್ನು ಪೂರ್ಣಗೊಳಿಸಿ ದೇವಸ್ಥಾನ ಹಾಗೂ ಬೆಟ್ಟವನ್ನು ಸಮಗ್ರವಾಗಿ ಅಭಿವೃದ್ಧಿ ಮಾಡಲು ನಿರ್ಧಾರ ಮಾಡಲಾಗಿದೆ ಎಂದು ತಿಳಿಸಿದರು. ಚಾಮುಂಡೇಶ್ವರಿ ದೇವಾಲಯದ ವ್ಯಾಪ್ತಿಗೆ 24 ದೇವಾಲಯಗಳು ಸೇರಿದ್ದು, ಇವುಗಳನ್ನು ಅಭಿವೃದ್ಧಿ ಮಾಡಲು ತೀರ್ಮಾನಿಸಲಾಗಿದೆ. ಈ ದೇವಾಲಯದ ವ್ಯಾಪ್ತಿಯಲ್ಲೇ ಇರುವ ಪ್ರಸನ್ನ ಕೃಷ್ಣಸ್ವಾಮಿ ದೇವಾಲಯ, ಗಾಯತ್ರಿ ಅಮ್ಮನವರ ದೇವಾಲಯ, ಭುವನೇಶ್ವರಿ ದೇವಾಲಯ, ವರಹ ಸ್ವಾಮಿ ದೇವಾಲಯ ಹಾಗೂ ಕೋಟೆ ಆಂಜನೇಯ ಸ್ವಾಮಿ ದೇವಾಲಯವನ್ನು ಜೀರ್ಣೋದ್ಧಾರ ಮಾಡಲು ■ 3ನೇ ಪುಟಕ್ಕೆ



ಚಾಮುಂಡಿಬೆಟ್ಟದ ದಾಸೋಹ ಭವನದಲ್ಲಿ ಮಂಗಳವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಸಭೆ ನಡೆಯಿತು.

ಅಪರಾಧ ಚಟುವಟಿಕೆ ತಡೆಗೆ ಟಾಸ್ಕ್ ಫೋರ್ಸ್

ಚಾಮುಂಡಿಬೆಟ್ಟದಲ್ಲಿ ಯಾವುದೇ ರೀತಿಯ ಅಪರಾಧ ಚಟುವಟಿಕೆ ನಡೆಯದಂತೆ ನಿಗಾ ವಹಿಸಲು ಟಾಸ್ಕ್ ಫೋರ್ಸ್ ರಚಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಚಾಮುಂಡೇಶ್ವರಿ ದೇವಸ್ಥಾನ ಹಾಗೂ ಚಾಮುಂಡಿಬೆಟ್ಟದಲ್ಲಿ ಯಾವುದೇ ರೀತಿಯ ಅಪರಾಧ ಚಟುವಟಿಕೆಗೆ ಅವಕಾಶ ಇಲ್ಲದಂತೆ ಸುರಕ್ಷತೆಯ ವಾತಾವರಣ ಇರಬೇಕು. ಈ ಹಿನ್ನೆಲೆ ಟಾಸ್ಕ್‌ಫೋರ್ಸ್ ರಚಿಸಲಾಗುವುದು ಎಂದರು. ಇದಲ್ಲದೆ ಧೂಮಪಾನ, ಮದ್ಯಪಾನ ಹಾಗೂ ಗುಟ್ಕಾವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಹೇಳಿದರು. ಅಗತ್ಯವಿರುವ ಸ್ಥಳದಲ್ಲಿ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲು ತೀರ್ಮಾನಿಸಲಾಗಿದೆ. ಸಿಎಸ್‌ಆರ್ ಫಂಡ್‌ನಲ್ಲಿ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದವರು ಕ್ಯಾಮರಾ ಅಳವಡಿಸಿಕೊಡಲು ಮುಂದೆ ಬಂದಿದ್ದಾರೆ ಎಂದು ತಿಳಿಸಿದರು.

ಪ್ರಾಧಿಕಾರ ವಿಚಾರದಲ್ಲಿ ಪ್ರಮೋದಾದೇವಿ ಒಡೆಯರ್ ತಂದಿದ್ದ ತಡೆಯಾಜ್ಞೆ ತೆರವಾಗಿದೆ

ಮೈಸೂರು,ಸೆ.3(ಎಂಟಿವೈ)– ಸರ್ಕಾರ ರಚಿಸಿದ್ದ ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಅವರು ತಂದಿದ್ದ ತಡೆಯಾಜ್ಞೆ ಆ.22ರಂದು ತೆರವುಗೊಂಡಿರುವುದರಿಂದ ಇಂದು ಕಾನೂನು ಪ್ರಕಾರ ಪ್ರಾಧಿಕಾರದ ಸಭೆ ನಡೆಸುತ್ತಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಮೈಸೂರಿನ ರಾಮಕೃಷ್ಣನಗರದಲ್ಲಿರುವ ತಮ್ಮ ನಿವಾಸ ಬಳಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಚಾಮುಂಡಿಬೆಟ್ಟಕ್ಕೆ ಬರುವ ಭಕ್ತರಿಗೆ ಗುಣಮಟ್ಟದ ಸೇವೆ, ಮೂಲಭೂತ ಸೌಲಭ್ಯಯೊಂದಿಗೆ ದೇವಾಲಯದ ಅಭಿವೃದ್ಧಿಗಾಗಿ ಪ್ರಾಧಿಕಾರ ರಚಿಸಲಾಗಿದೆ. ಆದರೆ, ಪ್ರಾಧಿಕಾರ ರಚನೆಗೆ ಸಂಬಂಧಿಸಿದಂತೆ ರಾಜವಂಶಸ್ಥರಾದ ಪ್ರಮೋದಾದೇವಿ ಒಡೆಯರ್ ತಡೆಯಾಜ್ಞೆ ತಂದಿದ್ದರು. ಅವರು ತಂದಿದ್ದ ತಡೆಯಾಜ್ಞೆ ಆ.22ರಂದು ತೆರವಾಗಿದೆ. ಈ ಹಿನ್ನೆಲೆಯಲ್ಲಿ ಕಾನೂನಿನ ಅನುಸಾರವೇ ಪ್ರಾಧಿಕಾರದ ಸಭೆ ಮಾಡಲಾಗುತ್ತಿದೆ ಎಂದರು.

ಇಂದು ಕಾನೂನಾತ್ಮಕವಾಗಿ ನಡೆಯುತ್ತಿರುವ ಸಭೆಯಾಗಿದೆ. ಯಾರದ್ದೋ ಹೇಳಿಕೆ ಆಧರಿಸಿ ಸಭೆ ಮಾಡಲು ಆಗುವುದಿಲ್ಲ. ಅಲ್ಲದೆ, ಸಭೆ ಮುಂದೂಡಲು ಸಾಧ್ಯವಿಲ್ಲ ಎಂದರು. ಸಭೆ ನಡೆಸುವುದು ಕಾನೂನುಬಾಹಿರ ಎಂದು ರಾಜವಂಶಸ್ಥರಾದ ಪ್ರಮೋದಾದೇವಿ ಒಡೆಯರ್ ಅವರು ಆಡಳಿತ ಮಂಡಳಿ ಕಾರ್ಯದರ್ಶಿಗೆ ಪತ್ರ ಬರೆದಿರುವುದಕ್ಕೆ ಪ್ರತಿಕ್ರಿಯಿಸಿದ ಸಿಎಂ ಸಿದ್ದರಾಮಯ್ಯ, ಈ ಹಿಂದೆಯೂ ಚಾಮುಂಡಿಬೆಟ್ಟದ ದೇವಾಲಯಕ್ಕೆ ಆಡಳಿತ ಮಂಡಳಿ ಇತ್ತು. ಅದಕ್ಕೆ ಸದಸ್ಯರನ್ನು, ಅಧ್ಯಕ್ಷರನ್ನು ಸರ್ಕಾರ ನೇಮಿಸುತ್ತಿತ್ತು. ಅಧ್ಯಕ್ಷರು, ಸದಸ್ಯರನ್ನು ಸರ್ಕಾರವೇ ನೇಮಕ ಮಾಡುತ್ತಿರುವುದರಿಂದ ದೇವಾಲಯ ಸರ್ಕಾರದ ಅಧೀನದಲ್ಲಿಯೇ ಇತ್ತು ಎಂದರ್ಥ. ಹಾಗಾಗಿ ನಿಯಮ ಅನುಸರಿಸಿ ಸಭೆ ನಡೆಸಲಾಗುತ್ತಿದೆ ಎಂದರು.

ಪ್ರಾಧಿಕಾರದ ಸಭೆ ಕಾನೂನುಬಾಹಿರ

ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್

ಮೈಸೂರು, ಸೆ. 3(ಆರ್‌ಕೆ)– ನ್ಯಾಯಾಲಯ ತಡೆಯಾಜ್ಞೆ ನೀಡಿದ್ದರೂ ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಸಬೆ ನಡೆಸಿರುವುದು ಕಾನೂನು ಬಾಹಿರ ಎಂದು ಮೈಸೂರು ರಾಜವಂಶಸ್ಥರೂ ಆದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಇಂದಿಲ್ಲಿ ಗಂಭೀರ ಆರೋಪ ಮಾಡಿದ್ದಾರೆ.



ಮೈಸೂರಿನ ಕಾಡಾ ಕಚೇರಿಯಲ್ಲಿರುವ ಸಂಸದರ ಕಚೇರಿಯಲ್ಲಿ ಸುದ್ದಿಗಾರರಿಗೆ ಪ್ರತಿಕ್ರಿಯೆ ನೀಡಿದ ಅವರು, ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ರಚಿಸಿರುವ ರಾಜ್ಯ ಸರ್ಕಾರದ ವಿರುದ್ಧ ತಮ್ಮ ತಾಯಿ ಪ್ರಮೋದಾದೇವಿ ಒಡೆಯರ್ ನ್ಯಾಯಾಲಯದಲ್ಲಿ ಮೊಕದ್ದಮೆ ಹೂಡಿದ್ದು, ನ್ಯಾಯಾಲಯವು ಸೆ.5ರವರೆಗೆ ತಡೆಯಾಜ್ಞೆ ನೀಡಿದೆ ಎಂದರು. ತಡೆಯಾಜ್ಞೆ ತೆರವಾಗಿಲ್ಲ, ಮಧ್ಯಂತರ ಆದೇಶದಲ್ಲಿ ಪ್ರಾಧಿಕಾರದ ಕಾಯ್ದೆಗೆ ಹೈಕೋರ್ಟ್ ತಡೆಯಾಜ್ಞೆ ನೀಡಿರುವುದರಿಂದ ಸಭೆ ನಡೆಸುವುದು ಕಾನೂನುಬಾಹಿರವಾಗಿದೆ. ಅದಕ್ಕಾಗಿಯೇ ತಾವು ಸಭೆಗೆ ಹಾಜರಾಗಿಲ್ಲ ಎಂದ ಯದುವೀರ್ ತಡೆಯಾಜ್ಞೆ ಜಾರಿಯಲ್ಲಿರುವಾಗ ಸಭೆ ನಡೆದಿರುವುದು ನ್ಯಾಯಾಂಗ ನಿಂದನೆಯಾಗುತ್ತದೆ ಎಂದರು. ಹೈಕೋರ್ಟ್‌ನಲ್ಲಿ ತಡೆಯಾಜ್ಞೆ ಇದ್ದರೂ ಮುಖ್ಯಮಂತ್ರಿಗಳು ಯಾವ ಆಧಾರದಲ್ಲಿ ತೆರವಾಗಿದೆ ಎಂದು ಹೇಳುತ್ತಿದ್ದಾರೋ ನನಗೆ ಗೊತ್ತಿಲ್ಲ. ನಾನು ಕೋರ್ಟ್ ಆದೇಶದಂತೆ ಮಾತನಾಡುತ್ತಿದ್ದೇನೆ. ಅವರು ಯಾವ ಆಧಾರದಲ್ಲಿ ಹೇಳುತ್ತಿದ್ದಾರೆಂಬುದನ್ನು ಮುಖ್ಯಮಂತ್ರಿಗಳೇ ಹೇಳಬೇಕು ಎಂದು ಯದುವೀರ್ ನುಡಿದರು. ಈ ಸಂಬಂಧ ಪ್ರಮೋದಾದೇವಿ ಒಡೆಯರ್ ಜಿಲ್ಲಾಧಿಕಾರಿಗಳಿಗೆ, ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಿಗೆ ಸೆಪ್ಟೆಂಬರ್ 2ರಂದು ಪತ್ರ ಬರೆದು ಸೆಪ್ಟೆಂಬರ್ 3ರಂದು ನಡೆಸಲುದ್ದೇಶಿಸಿರುವ ಸಭೆಯು ನ್ಯಾಯಾಲಯದ ಆದೇಶಕ್ಕೆ ವಿರುದ್ಧವಾಗಿರುವುದರಿಂದ ಯಥಾಸ್ಥಿತಿಯನ್ನು ಬದಲಾವಣೆ ಮಾಡಬಾರದೆಂದು ಕೋರಿಕೊಂಡಿದ್ದಾರೆ ಎಂದು ಅವರು ತಿಳಿಸಿದರು.

ಈ ಪತ್ರಕ್ಕೆ ಅವರಿಂದ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಆದರೆ ನಾವು ನ್ಯಾಯಾಲಯ ನಿಂದನೆ ಅರ್ಜಿ ■ 3ನೇ ಪುಟಕ್ಕೆ



ಅಯೋಧ್ಯೆಯಲ್ಲಿ 4 ದಿನ ಬೆಳಗಲಿವೆ 25 ಲಕ್ಷ ದೀಪಗಳು

ಲಖನೌ, ಸೆ.3– ಅಯೋಧ್ಯೆಯಲ್ಲಿ ಪ್ರತಿಷ್ಠಾಪನೆಗೊಂಡ ಬಾಲರಾಮನ ದೇವಾಲಯದಲ್ಲಿ ಅ.28ರಿಂದ ನಾಲ್ಕು ದಿನಗಳ ಕಾಲ ದೀಪೋತ್ಸವ ಸಂಭ್ರಮ ನಡೆಯಲಿದೆ. ಜ.22ರಂದು ಅಯೋಧ್ಯೆಯ ರಾಮಮಂದಿರದಲ್ಲಿ ಬಾಲರಾಮನ ಮೂರ್ತಿಯ ಪ್ರಾಣ ಪ್ರತಿಷ್ಠಾಪನೆ ನೆರವೇರಿತ್ತು. ಇದೀಗ ಅ.28ರಿಂದ 31ರವರೆಗೆ ದೀಪೋತ್ಸವ ಕಾರ್ಯಕ್ರಮ ಹಮ್ಮಿಕೊಂಡಿದ್ದು, 25 ಲಕ್ಷಕ್ಕೂ ಅಧಿಕ ಹಣತೆಗಳನ್ನು ಅಯೋಧ್ಯೆಯ ವಿವಿಧ ಘಾಟ್‌ಗಳು, ರಾಮ್ ಕಿ ಪೈದಿ ಹಾಗೂ ನಯಾಘಾಟ್‌ನಲ್ಲಿ ಬೆಳಗಲಾಗುವುದು ಎಂದು ಉತ್ತರ ಪ್ರದೇಶ ಸರ್ಕಾರ ತನ್ನ ಪ್ರಕಟಣೆಯಲ್ಲಿ ಹೇಳಿದೆ.

ಈ ಬಾರಿ ದೀಪೋತ್ಸವದಲ್ಲಿ ಆಧುನಿಕ ಬಗೆಯ ಹಾಗೂ ವಿಭಿನ್ನ ಬಗೆಯ ದೀಪಗಳನ್ನು ಬೆಳಗುವ ■ 2ನೇ ಪುಟಕ್ಕೆ



ಡೆಂಗ್ಯೂ ಸಾಂಕ್ರಾಮಿಕ ರೋಗ

ರಾಜ್ಯ ಸರ್ಕಾರದಿಂದ ಅಧಿಕೃತ ಘೋಷಣೆ!



ಬೆಂಗಳೂರು, ಸೆ.3– ರಾಜ್ಯದಲ್ಲಿ ಡೆಂಗ್ಯೂ ಜ್ವರ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಿದ್ದು, ಡೆಂಗ್ಯೂ ಜ್ವರವನ್ನು ಸಾಂಕ್ರಾಮಿಕ ರೋಗವೆಂದು ರಾಜ್ಯ ಸರ್ಕಾರ ಅಧಿಕೃತವಾಗಿ ಘೋಷಿಸಿದೆ. ರಾಜ್ಯ ಸರ್ಕಾರದಿಂದ ಗೆಜೆಟ್ ಅಧಿಸೂಚನೆ ಪ್ರಕಟಿಸಲಾಗಿದ್ದು, ಕರ್ನಾಟಕ ಸಾಂಕ್ರಾಮಿಕ ರೋಗಗಳ ಕಾಯ್ದೆ 2020 ರ ಅಡಿಯಲ್ಲಿ ಡೆಂಗ್ಯೂ ಜ್ವರವನ್ನು ಸಾಂಕ್ರಾಮಿಕ ರೋಗ ಎಂದು ಅಧಿಸೂಚನೆ ಹೊರಡಿಸಲಾಗಿದೆ.

ಮೈ ತಾಪಮಾನ ಹೆಚ್ಚಾಗುವುದು, ತೀವ್ರ ತಲೆನೋವು, ಕೀಲು ಮತ್ತು ಸ್ನಾಯು ನೋವು, ದದ್ದು ಮತ್ತು ಕೆಲವು ಸಲ ರಕ್ತಸ್ರಾವ ಮತ್ತು ವಾಕರಿಕೆ ಕಾಣಿಸಿಕೊಳ್ಳುವುದು ಡೆಂಗ್ಯೂ ರೋಗದ ಪ್ರಮುಖ ಲಕ್ಷಣಗಳಾಗಿವೆ. ಡೆಂಗ್ಯೂ ಜ್ವರವನ್ನು ತಡೆಯಲು ನಿರ್ದಿಷ್ಟವಾದ ಚಿಕಿತ್ಸೆಯಿಲ್ಲ. ಆದರೆ ಮುಂಜಾಗ್ರತಾ ಕ್ರಮವಾಗಿ ತೆರೆದಿಟ್ಟ ನೀರಿನ ತೊಟ್ಟಿ ವಾರಕ್ಕೊಮ್ಮೆ ಖಾಲಿ ಮಾಡುವುದು, ತೊಳೆದು ಭರ್ತಿ ಮಾಡಿ ಮುಚ್ಚುವುದು. ಮನೆ ಸುತ್ತಮುತ್ತ ಬಯಲಲ್ಲಿ ಬಿಸಾಡಿದ ತೆಂಗಿನ ಚಿಪ್ಪು, ಬಿಸಾಡಿದ ಟೀ ಗ್ಲಾಸ್ ಇತರೆ ವಸ್ತುಗಳಲ್ಲಿ ನೀರು ಸಂಗ್ರಹವಾಗಿ ಸೊಳ್ಳೆ ಉತ್ಪತ್ತಿಯಾಗದಂತೆ ಎಚ್ಚರ ವಹಿಸುವ ಮೂಲಕ ಡೆಂಗ್ಯೂ ತಡೆಗಟ್ಟಬಹುದಾಗಿದೆ

ಮಾಜಿ ಆಯುಕ್ತ ಅಮಾನತಿನಿಂದ ಮುಡಾ ನಿರ್ಣಯ ತಪ್ಪೆಂದು ಸಾಬೀತು

ಈಗಲಾದರೂ ಸಿಎಂ ಸಿದ್ದರಾಮಯ್ಯ ರಾಜೀನಾಮೆ ನೀಡಲಿ

ಬೆಂಗಳೂರು, ಸೆ.3–ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಕ್ರಮವಾಗಿ ತಮ್ಮ ಪತ್ನಿ ಹೆಸರಿನಲ್ಲಿ ದೊರೆತಿರುವ ಮೈಸೂರು ಮುಡಾದ 14 ನಿವೇಶನಗಳನ್ನು ವಾಪಸ್ ಮಾಡಬೇಕು ಹಾಗೂ ಅಕ್ರಮದ ಆ ತಪ್ಪಿಗಾಗಿ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ವಿಧಾನಪರಿಷತ್ ಬಿಜೆಪಿ ಸದಸ್ಯ ಎನ್.ರವಿಕುಮಾರ್ ಆಗ್ರಹಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಸುದ್ದಿಗೋಷ್ಠಿ ನಡೆಸಿದ ಅವರು, ನಮ್ಮ ಕಾನೂನು, ನಿಯಮ, ನಿರ್ದೇಶನಗಳಿಗೆ ವಿರುದ್ಧವಾಗಿ ವರ್ತಿಸಿದ್ದರು ಎಂಬ ಕಾರಣಕ್ಕಾಗಿ ಮುಡಾದ ಹಿಂದಿನ ಆಯುಕ್ತ ದಿನೇಶ್‌ಕುಮಾರ್ ಅವರನ್ನು ಸರ್ಕಾರ ಅಮಾನತು ಮಾಡಿದೆ. ಈ ಮೂಲಕ ಮುಡಾದ ನಿರ್ಣಯಗಳು, ನಿರ್ದೇಶನಗಳು, ನಿರ್ಧಾರಗಳು ತಪ್ಪಾಗಿವೆ ಎಂದು ಒಪ್ಪಿಕೊಳ್ಳಲಾಗಿದೆ ಎಂದು ವಿಶ್ಲೇಷಿಸಿದರು.

ಬಿಜೆಪಿ ಎಂಎಲ್‌ಸಿ ಎನ್.ರವಿಕುಮಾರ್ ಆಗ್ರಹ



ಸುದ್ದಿಗೋಷ್ಠಿಯಲ್ಲಿ ವಿಧಾನಪರಿಷತ್ ಬಿಜೆಪಿ ಸದಸ್ಯ ಎನ್.ರವಿಕುಮಾರ್ ಮಾತನಾಡಿದರು. ಬಿಜೆಪಿ ರಾಜ್ಯ ಹಿಂದುಳಿದ ವರ್ಗದ ಮೋರ್ಚಾ ಅಧ್ಯಕ್ಷ ರಘು ಕೌಟಿಲ್ಯ ಇದ್ದಾರೆ.

ಮುಖ್ಯಮಂತ್ರಿಗಳ ಪತ್ನಿಗೆ ಸಮಾನಾಂತರ ಬಡಾವಣೆಯಲ್ಲಿ ನಿವೇಶನ ಮಂಜೂರಾಗಿಲ್ಲ. ಚದರಡಿಗೆ 1 ಸಾವಿರ ರೂ. ಸಿಗುವ ಅವರ ಜಾಗ ಬಿಟ್ಟು ಚದರಡಿಗೆ 10 ಸಾವಿರದಿಂದ 12 ಸಾವಿರ ರೂ. ಮೌಲ್ಯ ಇರುವ ಬಡಾವಣೆಯಲ್ಲಿ ಸಿಎಂ ಪತ್ನಿ ಹೆಸರಲ್ಲಿ ನಿವೇಶನ ಪಡೆದದ್ದು ಅಕ್ರಮ ಎಂದು ತಿಳಿಸಿದರು. ದಿನೇಶ್ ಕುಮಾರ್ ಅಮಾನತು ತಮಗೆ ಗೊತ್ತಿಲ್ಲ ಎಂಬ ಸಿಎಂ ಉತ್ತರವು ಕರ್ನಾಟಕದ ಜನರನ್ನು ಮೂರ್ಖರನ್ನಾಗಿ ಮಾಡುವಂತಹದ್ದು ಎಂದು ರವಿಕುಮಾರ್ ಹೇಳಿದರು.

ನಿವೇಶನ ಅಭಿವೃದ್ಧಿ ವೇಳೆ ಶೇ.15ರಷ್ಟು ಉದ್ಯಾನಕ್ಕೆ ಸಂಬಂಧಿಸಿದ ಜಮೀನು, ಶೇ.10ರಷ್ಟು ನಾಗರಿಕ ಸೌಲಭ್ಯಕ್ಕೆ ಜಾಗ ಕೊಟ್ಟಿಲ್ಲ ಎಂಬುದು ಅಮಾನತಿಗೆ ಒಂದು ಕಾರಣ. 2009ರಿಂದ ಜಾರಿಗೊಂಡ 50:50 ಅನುಪಾತದ ನಿಯಮಗಳು ಅದಕ್ಕೂ ಹಿಂದೆ ಮುಡಾ ರಚಿಸಿದ ಬಡಾವಣೆಗಳಿಗೆ ಅನ್ವಯವಾಗುವುದಿಲ್ಲವಾದ್ದರಿಂದ ಬದಲಿ ನಿವೇಶನ ಮಂಜೂರಾತಿಗೆ ಶೇ.50:50 ಅನುಪಾತದಂತೆ ಕೈಗೊಂಡಿರುವ ಯಾವುದೇ ಕ್ರಮವೂ ಕಾನೂನುಬಾಹಿರ ವಾಗಿರುತ್ತದೆ ಎಂಬ ಪ್ರಮುಖ ವಿಚಾರವನ್ನು ದಿನೇಶ್ ಕುಮಾರ್ ಅಮಾನತು ಆದೇಶದಲ್ಲಿ ಪ್ರಸ್ತಾಪಿಸಲಾಗಿದೆ. ನಾವೂ ಇದೇ ಪ್ರಶ್ನೆಯನ್ನು ಎತ್ತಿದ್ದೆವು ಎಂದು ವಿವರಿಸಿದರು.

ಸಿಎಂ ಪತ್ನಿಗೆ ನಿವೇಶನ ನೀಡುವ ಸಂಬಂಧ ಮುಡಾದಲ್ಲಿ ನಡೆದಿದ್ದ ಸಭೆಯಲ್ಲಿ ಅಂದಿನ ಶಾಸಕರಾದ ಎಸ್.ಎ.ರಾಮದಾಸ್, ಜಿ.ಟಿ.ದೇವೇಗೌಡ, ಮರಿತಿಬ್ಬೇಗೌಡ ಮೊದಲಾದವರು ಭಾಗವಹಿಸಿದ್ದರು. ಈ ಸಭೆಯಲ್ಲಿ ಸಿಎಂ ಪತ್ನಿಗೆ 50:50 ಅನುಪಾತದಡಿ ನಿವೇಶನ ನೀಡಲು ಅಂದಿನ ಮುಡಾ ಅಧ್ಯಕ್ಷ ಹೆಚ್.ವಿ.ರಾಜೀವ್ ಮತ್ತು ಆಯುಕ್ತ ನಟೇಶ್ ಹೊರತುಪಡಿಸಿ ಎಲ್ಲರೂ ವಿರೋಧಿಸಿದ್ದರು. ಅಂದಿನ ಸಭೆಯಲ್ಲಿ ಈ ಸಂಬಂಧ ನಿರ್ಣಯ ಆಗದಿದ್ದರೂ ನಿರ್ಣಯ ■ 2ನೇ ಪುಟಕ್ಕೆ



ಮೈಸೂರು ಮಿತ್ರ

ಬುಧವಾರ 4 ಸೆಪ್ಟೆಂಬರ್ 2024

ಜೆಎಸ್‌ಎಸ್ ಉನ್ನತ ಶಿಕ್ಷಣ–ಸಂಶೋಧನಾ ಸಂಸ್ಥೆಯ ಎಚ್.ಕೆ.ಶ್ರೇಯಸ್, ಓ.ಸಿ.ಶುಚಿಗೆ ಯುವ ವಿಜ್ಞಾನ ಪ್ರಶಸ್ತಿ


ಶ್ರೇಯಸ್ ಎಚ್.ಕೆ.


ಶುಚಿ ಓ. ಸಿ.

ಮೈಸೂರು, ಸೆ. 3– ಮೈಸೂರಿನ ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆಯ ವೈದ್ಯಕೀಯ ಮಹಾವಿದ್ಯಾಲಯದ ಸೆಂಟರ್ ಆಫ್ ಎಕ್ಸಲೆನ್ಸ್ ಇನ್ ಮಾಲಿಕ್ಯುಲರ್ ಬಯಾಲಜಿ ಅಂಡ್ ರೀಜನರೇಟಿವ್ ಮೆಡಿಸಿನ್ ಮತ್ತು ಜೀವ ರಸಾಯನ ಶಾಸ್ತ್ರ ವಿಭಾಗದ ಸಂಶೋಧನ ವಿದ್ಯಾರ್ಥಿಗಳಾದ ಶ್ರೇಯಸ್ ಎಚ್.ಕೆ. ಮತ್ತು ಶುಚಿ ಓ.ಸಿ. ಅವರು ಕೇರಳದ ತ್ರಿಶೂರಿನ ಜುಬಿಲಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನ ಸಂಸ್ಥೆಯಲ್ಲಿ ಇತ್ತೀಚೆಗೆ ನಡೆದ ರಾಷ್ಟ್ರಮಟ್ಟದ ಜೀವ ವಿಜ್ಞಾನ ಕ್ಷೇತ್ರದ ಮಾಹಿತಿ ತಂತ್ರಜ್ಞಾನ ಮತ್ತು ಆರೋಗ್ಯ ಕುರಿತಾದ ಸಮ್ಮೇಳನದಲ್ಲಿ ತಮ್ಮ ಹೊಸ ಸಂಶೋಧನಾ ಪ್ರಬಂಧ ಮಂಡಿಸಿ ಯುವ ವಿಜ್ಞಾನಿ ಪ್ರಶಸ್ತಿ ಪಡೆದಿದ್ದಾರೆ.

ಈ ಇಬ್ಬರು ವಿದ್ಯಾರ್ಥಿಗಳು ಜೆಎಸ್‌ಎಸ್ ವೈದ್ಯಕೀಯ ಮಹಾವಿದ್ಯಾಲಯದ ಹಿರಿಯ ವಿಜ್ಞಾನಿ, ಪ್ರಾಧ್ಯಾಪಕ, ಲೇಖಕ, ಡಾ.ಪ್ರಸನ್ನ ಸಂತೇಕಡೂರು ಅವರ ಮಾರ್ಗದರ್ಶನದಲ್ಲಿ ತಮ್ಮ ಪಿಹೆಚ್.ಡಿ ಪದವಿಗೆ ಲಿವರ್ ಕ್ಯಾನ್ಸರ್ ಕುರಿತು ಸಂಶೋಧನೆ ಮಾಡುತ್ತಿದ್ದಾರೆ. ಈ ಸಮ್ಮೇಳನಕ್ಕೆ ಹೋಗಿ ಬರಲು ಪ್ರಯಾಣದ ಅನುದಾನವನ್ನು ಈ ವಿದ್ಯಾರ್ಥಿಗಳು ಪ್ರಶಸ್ತಿಯ ಜೊತೆಗೆ ಪಡೆದಿರುತ್ತಾರೆ. ಶ್ರೇಯಸ್ ಎಚ್.ಕೆ. ಅವರು ತಮ್ಮ ಪಿಹೆಚ್.ಡಿಗೆ ಹೆಸರಾಂತ ಟಾಟಾ ಸಂಸ್ಥೆಯ ಲೇಡಿ ಟಾಟಾ ಮೆಮೋರಿಯಲ್ ಫೆಲೋಶಿಪ್ ಪಡೆದಿದ್ದಾರೆ. ಕೇರಳದಲ್ಲಿ ನಡೆದ ಈ ವಿಜ್ಞಾನ ಸಮ್ಮೇಳನ ಭಾರತ ದೇಶದ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯ ಮತ್ತು ಸಿಎಸ್‌ಐಆರ್ ಸಂಸ್ಥೆಗಳ ಆರ್ಥಿಕ ಸಹಾಯದೊಂದಿಗೆ ಆಯೋಜನೆಗೊಂಡಿತ್ತು.

ಪ್ರಸಿದ್ಧಿ ಭಟ್, ಕೌಸ್ತುಭ ತೇಜ್‌ಕುಮಾರ್‌ಗೆ ಅಂಡರ್–17 ಚೆಸ್ ಚಾಂಪಿಯನ್‌ಶಿಪ್





ಇತ್ತೀಚೆಗೆ ಹಾಸನದಲ್ಲಿ ನಡೆದ ಅಂಡರ್–19 ಚೆಸ್ ಚಾಂಪಿಯನ್‌ಶಿಪ್‌ನಲ್ಲಿ ಮೈಸೂರಿನ ಸೇಂಟ್ ಜೋಸೆಫ್ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿನಿ ಪ್ರಸಿದ್ಧಿ ಭಟ್ ಚಾಂಪಿಯನ್ ಆಗಿ ಹೊರಹೊಮ್ಮಿದ್ದಾರೆ. ಇತ್ತೀಚೆಗೆ ಬೆಂಗಳೂರಿನ ಬಿಜಿಎಸ್–ಎನ್‌ಪಿಎಸ್ ಶಾಲೆಯಲ್ಲಿ ನಡೆದ ಅಂಡರ್–17 ಚೆಸ್ ಚಾಂಪಿಯನ್‌ಶಿಪ್‌ನಲ್ಲಿ ಮೈಸೂರಿನ ವಿಜಯನಗರದ ಸೇಂಟ್ ಜೋಸೆಫ್ ಸೆಂಟ್ರಲ್ ಸ್ಕೂಲ್‌ನ ವಿದ್ಯಾರ್ಥಿ ಕೌಸ್ತುಭ ತೇಜ್‌ಕುಮಾರ್ ಚಾಂಪಿಯನ್ ಆಗಿ ಹೊರಹೊಮ್ಮಿದ್ದಾರೆ.

ಇಂದು, ನಾಳೆ ಕೆಲವೆಡೆ ವಿದ್ಯುತ್ ವ್ಯತ್ಯಯ



ಮೈಸೂರು, ಸೆ.3– 2ನೇ ತ್ರೈಮಾಸಿಕ ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವುದರಿಂದ ಸೆ.4ರಂದು ಬೆಳಗ್ಗೆ 10ರಿಂದ ಸಂಜೆ 6 ರವರೆಗೆ ಹೆಚ್.ಡಿ.ಕೋಟೆ ಟೌನ್, ಮೇಟಿಕುಪ್ಪೆ, ಚಿಕ್ಕೂಡನಹಳ್ಳಿ, ಭೀಮನಹಳ್ಳಿ, ಹಿರೇಹಳ್ಳಿ, ಅಣ್ಣೂರು, ಪಡುವಕೋಟೆ, ಸವ್ವೆ, ನಾಗನಹಳ್ಳಿ ಮತ್ತು ಚಿಕ್ಕಕೆರೆಯೂರು, ಹ್ಯಾಂಡ್ ಪೋಸ್ಟ್, ಹೈರಿಗೆ, ಹೆಬ್ಬಲಗುಪ್ಪೆ ಮತ್ತು ನೂರುಲಕುಪ್ಪೆ, ಹಂಪಾಪುರ, ಕಂಚಮಳ್ಳಿ, ಹೊಮ್ಮರಗಳ್ಳಿ, ಮಾದಾಪುರ, ಕೆ.ಬೆಲ್ಲೂರು, ಮನುಗನಹಳ್ಳಿ ಮತ್ತು ಬಾಚೇಗೌಡನಹಳ್ಳಿ ಪಂಚಾಯಿತಿ ವ್ಯಾಪ್ತಿ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಅಲ್ಲದೆ, ಸೌತ್ (ದಕ್ಷಿಣ) ವಿದ್ಯುತ್ ವಿತರಣಾ ಕೇಂದ್ರದಿಂದ ಹೊರ ಹೊಮ್ಮುವ ಆರ್.ಟಿ.ಓ ಫೀಡರ್ ಹಾಗೂ ಕಲಾಮಂದಿರ ವಿದ್ಯುತ್ ವಿತರಣಾ ಕೇಂದ್ರ ವ್ಯಾಪ್ತಿಯಲ್ಲಿ ಬಲ್ಲಾಳ್ ವೃತ್ತ, ಚಾಮರಾಜಪುರಂ, ಆರ್.ಟಿ.ಓ ಕಚೇರಿ ಸುತ್ತ–ಮುತ್ತ, ಚಾಮರಾಜ ಮೊಹಲ್ಲಾ, ಜೈನ್ ಭವನ್, ಬೆಸ್ತರಗೇರಿ, ವಿಷ್ಣುವರ್ಧನ ರಸ್ತೆ ಹಾಗೂ ಸುತ್ತಮುತ್ತ, ಸೀತಾ ರಸ್ತೆ, ಮಹಾರಾಜ ಹಾಸ್ಟೆಲ್, ರಾಮಸ್ವಾಮಿ ವೃತ್ತ, ಜಿಲ್ಲಾ ಪಂಚಾಯತ್ ಕಚೇರಿ, ಕೋರ್ಟ್ ಹಾಗೂ ಸುತ್ತಮುತ್ತಲ ಪ್ರದೇಶದಲ್ಲಿ ಸೆ.4ರಂದು ಬೆಳಗ್ಗೆ 10ರಿಂದ ಸಂಜೆ 6ರವರೆಗೆ ವಿದ್ಯುತ್ ನಿಲುಗಡೆಯಾಗಲಿದೆ.

ನಾಳೆ ಕರೆಂಟ್ ಇಲ್ಲ: ಇದಲ್ಲದೆ, ದೇವನೂರು ವಿದ್ಯುತ್ ವಿತರಣಾ ಕೇಂದ್ರದಿಂದ ಹೊರ ಹೊಮ್ಮುವ ಹುಲಿಯಮ್ಮ ಫೀಡರ್‌ನಲ್ಲಿ ತುರ್ತು ನಿರ್ವಹಣಾ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಸೆ.5ರಂದು ಬೆಳಗ್ಗೆ 10ರಿಂದ ಸಂಜೆ 5ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಕಲ್ಯಾಣಗಿರಿ, ಅಜೀಜ್ ಸೇಟ್‌ನಗರ, ಇಂದಿರಾ ಗಾಂಧಿ ಕಾಲೋನಿ, ಉಸ್ಮಾನಿಯಾ ಬ್ಲಾಕ್, ಹೈದರಾಲಿ ಬ್ಲಾಕ್, ಸುಲ್ತಾನ್ ರಸ್ತೆ, ಬೀಡಿ ಕಾಲೋನಿ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಒಂದನೇ ಪುಟದಿಂದ

ಬೆಳಗಲಿವೆ 25 ಲಕ್ಷ ದೀಪಗಳು

ಮೂಲಕ ಇಡೀ ನಗರವನ್ನು ದೃಶ್ಯ ವೈಭವದಲ್ಲಿ ಕಟ್ಟಿಕೊಡಲಾಗುವುದು. ಬಣ್ಣಬಣ್ಣಗಳ ಎಲ್‌ಇಡಿ ದೀಪಗಳು ಹಾಗೂ ಮಲ್ಟಿಮೀಡಿಯಾ ಪ್ರೊಜೆಕ್ಷನ್‌ಗಳನ್ನು ಮುಖ್ಯ ವೇದಿಕೆ ಹಾಗೂ ನಗರದ ವಿವಿಧ ಭಾಗಗಳಲ್ಲಿ ಅಳವಡಿಸಲಾಗುವುದು ಎಂದಿದೆ.

ಮುಖ್ಯ ದ್ವಾರದಲ್ಲಿ ಹೊಸ ಪರಿಕಲ್ಪನೆಯಲ್ಲಿ ವಿದ್ಯುತ್ ದೀಪಗಳನ್ನು ಅಳವಡಿಸಲಾಗುವುದು. ರಾಮ್ ಕಿ ಪೈದಿ, ನಯಾ ಘಾಟ್, ಭಕ್ತಿ ಪಥ ಹೀಗೆ ಪ್ರಮುಖ ಸ್ಥಳಗಳು ದೀಪ ಹಾಗೂ ಹೂವಿನ ಅಲಂಕಾರದಿಂದ ಕಂಗೊಳಿಸಲಿವೆ. ಗೊಂಡಾ ಸೇತುವೆ, ಬಸ್ತಿ ಸೇತುವೆಗಳಿಗೂ ವಿಭಿನ್ನ ಬಗೆಯ ದೀಪಾಲಂಕಾರಕ್ಕೆ ಯೋಜನೆ ರೂಪಿಸಲಾಗಿದೆ. ಮುಖ್ಯ ದೇಗುಲ ಸಹಿತ ಅಯೋಧ್ಯೆಯ 500 ಸ್ಥಳಗಳನ್ನು ದೀಪಾಲಂಕಾರದಿಂದ ಸಿಂಗರಿಸಲು ನಿರ್ಧರಿಸಲಾಗಿದೆ ಎಂದು ಉತ್ತರ ಪ್ರದೇಶ ಸರ್ಕಾರ ಹೇಳಿದೆ. ಪ್ರತಿದಿನವೂ ವಿಭಿನ್ನ ಬಗೆಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಅಯೋಧ್ಯೆಯ ಹಲವೆಡೆ ಸ್ಥಾಪಿಸಲಾಗುವ ವೇದಿಕೆಗಳಲ್ಲಿ ನೂರಕ್ಕೂ ಹೆಚ್ಚು ಕಲಾವಿದರು ಕಾರ್ಯಕ್ರಮ ನೀಡಲಿದ್ದಾರೆ. ಇವುಗಳು ಭಗವಾನ್ ರಾಮನ ಬದುಕು ಹಾಗೂ ಸಂದೇಶಗಳನ್ನು ಆಧರಿಸಿರುತ್ತವೆ ಎಂದಿದೆ. ಇವುಗಳನ್ನು ಹೊರತುಪಡಿಸಿ ಲೇಸರ್ ಪ್ರದರ್ಶನ, ಪರಿಸರ ಸ್ನೇಹಿ ಸಿಡಿಮದ್ದು ಪ್ರದರ್ಶನ ನಡೆಯಲಿದೆ. ರಾಮಜನ್ಮಭೂಮಿ ದೇಗುಲ, ಹನುಮಾನ್ ಘರ್, ನಾಗೇಶ್ವರನಾಥ್ ದೇವಾಲಯ, ರಾಮ್ ಕಿ ಪೈದಿ ಸೇರಿದಂತೆ ಅಯೋಧ್ಯೆಯ ದೇವಾಲಯಗಳಲ್ಲಿ ದೀಪಾಲಂಕಾರ, ಸಾಂಸ್ಕೃತಿಕ ಕಾರ್ಯಕ್ರಮ ಆಯೋಜನೆಗೆ ಸಿದ್ಧತೆ ಆರಂಭಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಸಿದ್ದರಾಮಯ್ಯ ರಾಜೀನಾಮೆ ನೀಡಲಿ

ಆಗಿದೆ ಎಂದು ನಕಲಿ ನಮೂದಿಸಿ ಅದರ ಪ್ರಕಾರ 14 ನಿವೇಶನಗಳನ್ನು ಇವರಿಗೆ ಕೊಟ್ಟಿದ್ದರು ಎಂದು ಆರೋಪಿಸಿದರು. ಮುಖ್ಯಮಂತ್ರಿ ಗಳು ಇನ್ನೂ ಯಾಕೆ ನ್ಯಾಯಾಲಯದ ತೀರ್ಪನ್ನು ಕಾಯುತ್ತಿದ್ದಾರೆ? ನಿಮಗೇನಾ ದರೂ ಆತ್ಮಗೌರವ, ಕಾನೂನು, ನಿಯಮದ ಕುರಿತು ಗೌರವ, ಸಂವಿಧಾನದ ಕುರಿತು ಗೌರವ ಇರುವುದಾದರೆ, ಮುಖ್ಯಮಂತ್ರಿಗಳ ಸ್ಥಾನದ ಘನತೆ ಕಾಪಾಡುವುದಾದರೆ ಈ ಕೂಡಲೇ ರಾಜೀನಾಮೆ ಕೊಡಬೇಕು. ಅದಕ್ಕಿಂತ ಮೊದಲು ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಅವರನ್ನು ವಜಾ ಮಾಡಿ ಎಂದು ರವಿಕುಮಾರ್ ಒತ್ತಾಯಿಸಿದರು.

ಬಿಜೆಪಿ ರಾಜ್ಯ ಹಿಂದುಳಿದ ವರ್ಗದ ಮೋರ್ಚಾ ಅಧ್ಯಕ್ಷ ರಘು ಕೌಟಿಲ್ಯ ಮಾತನಾಡಿ, ಅಕ್ರಮದ ವಿರುದ್ಧ ಬಿಜೆಪಿ ಸತತ ಹೋರಾಟ ಮಾಡಿದೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ನೇಮಕ ಮಾಡಿದ ತಾಂತ್ರಿಕ ಪರಿಣತರ ಸಮಿತಿ ವರದಿಯನ್ನು 2003ರಲ್ಲೇ ಕೊಟ್ಟಿತ್ತು. ಆಗಿನಿಂದ ಇಲ್ಲಿವರೆಗೆ ಅದನ್ನು ಧೂಳು ಹಿಡಿಸಿ ಇಟ್ಟುಕೊಂಡು ಊರು ಕೊಳ್ಳೆ ಹೊಡೆದ ಮೇಲೆ ದಿಡ್ಡಿ ಬಾಗಿಲು ಹಾಕಿದರು ಎಂಬ ರೀತಿಯಲ್ಲಿ ಈಗ ಒಬ್ಬ ಆಯುಕ್ತರನ್ನು ಅಮಾನತು ಮಾಡಿದ್ದಾರೆ. ಸಿದ್ದರಾಮಯ್ಯನವರ 14 ನಿವೇಶನಗಳೂ ಶೇ.50:50 ಅನುಪಾತದಡಿ ಸಿಕ್ಕಿದ್ದು ತಾನೇ? ಹೀಗಿರುವಾಗ ಆ ನಿವೇಶನಗಳನ್ನು ಕೊಟ್ಟಿದ್ದ ಆಯುಕ್ತ ನಟೇಶ್‌ರನ್ನು ಅಮಾನತು ಮಾಡಿಲ್ಲ? ಎಂದು ಪ್ರಶ್ನಿಸಿದರಲ್ಲದೇ, ಸಿದ್ದರಾಮಯ್ಯನವರ ಕುಟುಂಬಕ್ಕೆ ನಿವೇಶನ ಕೊಟ್ಟಿದ್ದಕ್ಕೆ ಬಳುವಳಿ ಯಾಗಿ ಅವರನ್ನು ಶಿಕ್ಷೆಯಿಂದ ಹೊರಗೆ ಇಟ್ಟಿದ್ದಾರೆ ಎಂದು ಆರೋಪಿಸಿದರು.

ಸೆ.7ರಿಂದ ಎಸ್‌ಪಿವಿಜಿಎಂಸಿ ಟ್ರಸ್ಟ್‌ನಿಂದ 63ನೇ ಪಾರಂಪರಿಕ ಸಂಗೀತೋತ್ಸವ

ಮೈಸೂರು,ಸೆ.3– ಮೈಸೂರಿನ ವಿವಿ ಮೊಹಲ್ಲಾ 8ನೇ ಕ್ರಾಸ್‌ನಲ್ಲಿರುವ ಎಸ್‌ಪಿವಿಜಿಎಂಸಿ ಟ್ರಸ್ಟ್ ವತಿಯಿಂದ ಸೆ.7ರಿಂದ 18ರವರೆಗೆ 63ನೇ ಪಾರಂಪರಿಕ ಸಂಗೀತೋತ್ಸವವನ್ನು ಏರ್ಪಡಿಸಲಾಗಿದೆ.



ಸೆ.7: ಡಾ.ವಿ.ಮಾಲಿನಿ ಮತ್ತು ತಂಡದಿಂದ ಹರಿಕಥೆ, ವಿದ್ವಾನ್ ಎ.ಉದಯ ರಾಜು–ಹಾರ್ಮೋನಿಯಂ, ವಿದ್ವಾನ್ ಎಂ.ಆರ್. ಶ್ರೀಕಂಠ–ತಬಲ, ಸಂಜೆ 6.45ಕ್ಕೆ

ಸೆ.8: ಸಂಜೆ 6.00 ಗಂಟೆಗೆ 63ನೇ ಪಾರಂಪರಿಕ ಸಂಗೀತೋತ್ಸವದ ಉದ್ಘಾಟನಾ ಸಮಾರಂಭ, ಉದ್ಘಾಟನೆ: ಶಾಸಕ ಹರೀಶ್‌ಗೌಡ, ಉಪಸ್ಥಿತರು: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಮಲ್ಲಿಕಾರ್ಜುನಸ್ವಾಮಿ, ಅಧ್ಯಕ್ಷತೆ: ಎಸ್‌ಪಿವಿಜಿಎಂಸಿ ಟ್ರಸ್ಟ್ ಅಧ್ಯಕ್ಷ ಜಗನ್ನಾಥ್ ಶೆಣೈ, ಸಂಜೆ 6.45 ವಿದುಷಿ ಸೂರ್ಯ ಗಾಯತ್ರಿ ಅವರಿಂದ ಗಾಯನ, ವಿದ್ವಾನ್ ಆದರ್ಶ ವಿಜಯಕುಮಾರ್–ವಯೋಲಿನ್, ವಿದ್ವಾನ್ ಕೃಪಾಲ್ ಸಾಯಿ ರಾಮ್– ಮೃದಂಗ, ವಿದ್ವಾನ್ ಪ್ರಶಾಂತ್ ಶಂಕರ್–ತಬಲಾ



ಸೆ.9: ಸಂಜೆ 5.30ರಿಂದ 6.30ರವರೆಗೆ ಗಮಕ ವಾಚನ ಕಾರ್ಯಕ್ರಮ, ಕಾವ್ಯ: ಗಣೇಶ ಪುರಾಣ, ವಾಚನ: ವಿದುಷಿ ಶುಭಾ ರಾಘವೇಂದ್ರ, ವ್ಯಾಖ್ಯಾನ: ಎ.ನಿರಂಜನ, ಸಂಜೆ 6.45ಕ್ಕೆ ವಿದ್ವಾನ್ ತಿರುವಾರೂರ್ ಗಿರೀಶ್ ಅವರಿಂದ ಗಾಯನ, ವಿದ್ವಾನ್ ಆರ್.ಕೆ.ಶ್ರೀರಾಮಕುಮಾರ್–ವಯೋಲಿನ್, ವಿದ್ವಾನ್ ತಿರುವಾರೂರ್ ಭಕ್ತವತ್ಸಲ–ಮೃದಂಗ, ವಿದ್ವಾನ್ ವ್ಯಾಸವಿಠಲ–ಖಂಜಿರಾ



ಸೆ.10: ಸಂಜೆ 5.30 ಗಂಟೆಗೆ ರಿಂದ 6.30ರವರೆಗೆ ಗಮಕ ವಾಚನ ಕಾರ್ಯಕ್ರಮ, ಕಾವ್ಯ: ದೇವೀ ಭಾಗವತ, ವಾಚನ : ವಿದುಷಿ ಧರಿತ್ರೀ ಆನಂದರಾವ್, ವ್ಯಾಖ್ಯಾನ: ಡಾ.ಎನ್.ಕೆ.ರಾಮಶೇಷನ್, ಸಂಜೆ 6.45ಕ್ಕೆ ವಿದ್ವಾನ್ ಹರೀಶ್ ಶಿವರಾಮಕೃಷ್ಣನ್ ಅವರಿಂದ ಗಾಯನ, ವಿದ್ವಾನ್ ಕಾರ್ತಿಕ್ ನಾಗರಾಜ್–ವಯೋಲಿನ್, ವಿದ್ವಾನ್ ಉಮಯಾಳಪುರಂ ಶಿವರಾಮನ್–ಮೃದಂಗ, ವಿದ್ವಾನ್ ಅರುಣ್‌ಕುಮಾರ್–ರಿದಂಪ್ಯಾಡ್





ಸೆ.11: ಸಂಜೆ 5.30ರಿಂದ 6.30ರವರೆಗೆ ಗಮಕ ವಾಚನ ಕಾರ್ಯಕ್ರಮ, ಕಾವ್ಯ: ಆದಿ ಪುರಾಣ–ಭರತ ಬಾಹುಬಲಿ ಯುದ್ಧ, ವಾಚನ: ವಿದ್ವಾನ್ ಸುಹಾಸ್ ಭಾರದ್ವಾಜ್, ವ್ಯಾಖ್ಯಾನ: ಡಾ. ಜ್ಯೋತಿಶಂಕರ್. ಸಂಜೆ 6.45ಕ್ಕೆ ವಿದ್ವಾನ್ ವಿಘ್ನೇಶ್ ಈಶ್ವರ್ ಅವರಿಂದ ಗಾಯನ, ವಿದ್ವಾನ್ ಸಾಯಿ ರಕ್ಷಿತ್–ವಯೋಲಿನ್, ವಿದ್ವಾನ್ ಉಮಯಾಳಪುರಂ ಶಿವರಾಮನ್–ಮೃದಂಗ, ವಿದ್ವಾನ್ ಬಿ.ಎಸ್. ಪುರುಷೋತ್ತಮ್–ಖಂಜಿರಾ.



ಸೆ.12: ಸಂಜೆ 5.30ರಿಂದ 6.30ರವರೆಗೆ ಗಮಕ ವಾಚನ ಕಾರ್ಯಕ್ರಮ, ಕಾವ್ಯ: ಶ್ರೀ ದತ್ತ ಭಾಗವತ ವಾಚನ: ವಿದುಷಿ ವಸಂತ ವೆಂಕಟೇಶ್, ವ್ಯಾಖ್ಯಾನ: ವಿದುಷಿ ಧರಿತ್ರೀ ಆನಂದರಾವ್, ಸಂಜೆ 6.45ಕ್ಕೆ ವಿದ್ವಾನ್ ಕಲ್ಯಾಣಪುರಂ ಎಸ್ ಅರವಿಂದ್–ಗಾಯನ, ವಿದ್ವಾನ್ ಎಚ್.ಎನ್.ಭಾಸ್ಕರ್–ವಯೋಲಿನ್, ವಿದ್ವಾನ್ ಕೆ.ಯು.ಜಯಚಂದ್ರ ರಾವ್–ಮೃದಂಗ, ವಿದ್ವಾನ್ ಬಿ.ಎಸ್.ಪುರುಷೋತ್ತಮ–ಖಂಜಿರಾ.



ಸೆ.13: ಸಂಜೆ 5.30 ರಿಂದ 6.30 ರವರೆಗೆ ಗಮಕ ವಾಚನ ಕಾರ್ಯಕ್ರಮ, ಕಾವ್ಯ: ಕಾಳಿದಾಸ ಮಹಾಕವಿಯ ರಘುವಂಶ, ವಾಚನ: ವಿದುಷಿ ಮಹಿಮಾ ಕಶ್ಯಪ್, ವ್ಯಾಖ್ಯಾನ: ಡಾ.ಹೆಚ್.ವಿ. ನಾಗರಾಜರಾವ್; ಸಂಜೆ 6.45ಕ್ಕೆ ವಿದುಷಿ ಸ್ಫೂರ್ತಿ ರಾವ್–ಗಾಯನ, ವಿದುಷಿ ಶ್ರೀ ಲಕ್ಷ್ಮೀ ಎಸ್.ಭಟ್–ವಯೋಲಿನ್, ವಿದ್ವಾನ್ ಅದಮ್ಯ ರಮಾನಂದ್–ಮೃದಂಗ, ವಿದ್ವಾನ್ ಶಮಿತ್‌ಗೌಡ–ಘಟಂ



ಸೆ.14: ಬೆಳಗೆ 10 ಗಂಟೆಗೆ ಶ್ರೀ ಸತ್ಯನಾರಾಯಣ ಸ್ವಾಮಿ ಪೂಜೆ, ಸಂಜೆ 5.30 ಗಂಟೆಗೆ ರಿಂದ 6.30ರವರೆಗೆ ಗಮಕ ವಾಚನ ಕಾರ್ಯಕ್ರಮ, ಕಾವ್ಯ: ಮಾರುತಿ ಭಕ್ತಿ ದರ್ಪಣ, ವಾಚನ : ಕುಮಾರಿ ಧನ್ಯ, ವ್ಯಾಖ್ಯಾನ: ವಿದ್ವಾನ್ ಕೃಪ ಮಂಜುನಾಥ್, ಸಂಜೆ 6.45 ವಿದುಷಿ ಸಂಗೀತಾ ಕಟ್ಟಿ–ಗಾಯನ, ಪಂಡಿತ್ ಸತೀಶ್ ಕೊಲ್ಲಿ–ಹಾರ್ಮೋನಿಯಂ, ಪಂಡಿತ್ ಕೇಶವ ಜೋಶಿ–ತಬಲಾ

ಸೆ.15: ಬೆಳಗೆ 8 ಗಂಟೆಗೆ ವಿದ್ವಾಂಸರಾದ ಚಳ್ಳಕೆರೆ ಸಹೋದರರಿಂದ ಶ್ರೀ ಗಣಪತಿ ಹೋಮ ಮತ್ತು ಶ್ರೀ ಭೂ ಸೂಕ್ತ ಹೋಮ, ಮಧ್ಯಾಹ್ನ 12.3ಕ್ಕೆ ಶ್ರೀ ಅಭಿನವ ವಾಗೀಶ ಬ್ರಹ್ಮತಂತ್ರ ಸ್ವತಂತ್ರ ಪರಕಾಲ ಸ್ವಾಮೀಜಿ ಅವರ ದಿವ್ಯ ಸಾನ್ನಿಧ್ಯದಲ್ಲಿ ಪೂರ್ಣಾಹುತಿ, ಸಂಜೆ 5.30ರಿಂದ 6.30ರವರೆಗೆ ಗಮಕ ವಾಚನ ಕಾರ್ಯಕ್ರಮ, ಕಾವ್ಯ: ಕನ್ನಡ ಭಾಗವತ, ವಾಚನ: ವಿದುಷಿ ಡಿ.ಎನ್.ಸ್ವಾತಿ, ವ್ಯಾಖ್ಯಾನ: ಶ್ರೀನಿವಾಸ ಫನಿ, ಸಂಜೆ 6.45ಕ್ಕೆ ವಿದ್ವಾನ್ ಶ್ರುತಿ ಸಾಗರ್–ವೇಣುವಾದನ, ವಿದುಷಿ ಚಾರುಮತಿ ರಘುರಾಮನ್–ವಯೋಲಿನ್, ವಿದ್ವಾನ್ ಅನಂತ್ ಕೃಷ್ಣನ್–ಮೃದಂಗ, ವಿದ್ವಾನ್ ವಾಜಪಲ್ಲಿ ಕುಮಾರ್–ಖಂಜಿರಾ



ಸೆ.16: ಸಂಜೆ 5.30ರಿಂದ 6.30ರವರೆಗೆ ಗಮಕ ವಾಚನ ಕಾರ್ಯಕ್ರಮ, ಕಾವ್ಯ: ಶಿವತತ್ವ ಚಿಂತಾಮಣಿ, ವಾಚನ: ವಿದುಷಿ ಭಾಗ್ಯಲಕ್ಷ್ಮಿ ಕೆ.ಎಸ್., ವ್ಯಾಖ್ಯಾನ: ಪ್ರೊ. ಮೊರಬದ ಮಲ್ಲಿಕಾರ್ಜುನ, ಸಂಜೆ 6.45ಕ್ಕೆ ವಿದ್ವಾನ್ ಕುನ್ನಕುಡಿ ಬಾಲಮುರಳಿ ಕೃಷ್ಣ– ಗಾಯನ, ವಿದುಷಿ ಅಕ್ಕರೈ ಶುಭಲಕ್ಷ್ಮಿ–ವಯೋಲಿನ್, ವಿದ್ವಾನ್ ಸುಂದರಕುಮಾರ್–ಮೃದಂಗ, ವಿದ್ವಾನ್ ಗುರುಪ್ರಸನ್ನ–ಖಂಜಿರಾ



ಸೆ.17: ಸಂಜೆ 5.30 ರಿಂದ 6.30ರವರೆಗೆ ವಿದ್ವಾನ್ ಕಿರಗಾಸೂರು ರಾಜಪ್ಪ ಮತ್ತು ತಂಡದವರಿಂದ ರಂಗಗೀತೆಗಳು; ಸಂಜೆ 6.45ಕ್ಕೆ ವಿದುಷಿ ಅಕ್ಕರೈ ಸಹೋದರಿಯರಿಂದ (ಅಕ್ಕರೈ ಸುಬ್ಬುಲಕ್ಷ್ಮಿ / ಅಕ್ಕರೈ ಸ್ವರ್ಣಲತಾ) – ದ್ವಂದ್ವ ವಯೋಲಿನ್ ವಾದನ, ವಿದ್ವಾನ್ ಸುಮೇಶ್ ನಾರಾಯಣ–ಮೃದಂಗ, ವಿದ್ವಾನ್ ಸುಂದರಕುಮಾರ್–ಖಂಜಿರಾ



ಸೆ.18: ಸಂಜೆ 5.30 ಘಂಟೆಗೆ ರಿಂದ 6.30 ರವರೆಗೆ ಪಂಡಿತ್ ಭೀಮಾಶಂಕರ ಬಿದನೂರ ಮತ್ತು ವಿದ್ಯಾರ್ಥಿಗಳ ಸಮೂಹ ತಬಲ, ಸಂಜೆ 6.45ಕ್ಕೆ ಸಂಗೀತ ಕಲಾನಿಧಿ 2024 ಪ್ರಶಸ್ತಿಗೆ ಭಾಜನರಾದ ವಿದ್ವಾನ್ ಟಿ.ಎಂ.ಕೃಷ್ಣ – ಗಾಯನ, ವಿದುಷಿ ಅಕ್ಕರೈ ಶುಭಲಕ್ಷ್ಮಿ–ವಯೋಲಿನ್, ವಿದ್ವಾನ್ ಸುಮೇಶ್ ನಾರಾಯಣ–ಮೃದಂಗ, ವಿದುಷಿ ಸುಕನ್ಯಾ ರಾಮಗೋಪಾಲ್ –ಘಟಂ



ವಿಶ್ವದ ದೊಡ್ಡ ರಾಜಕೀಯ ಪಕ್ಷ ಬಿಜೆಪಿ

ಅಭಿಯಾನ ಕಾರ್ಯಾಗಾರದಲ್ಲಿ ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ



ಬಿಜೆಪಿ ರಾಷ್ಟ್ರೀಯ ಸದಸ್ಯತ್ವ ಅಭಿಯಾನ ಕಾರ್ಯಾಗಾರಕ್ಕೆ ಮೈಸೂರು ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ಚಾಲನೆ ನೀಡಿದರು.

ಮೈಸೂರು,ಸೆ.3–ಭಾರತೀಯ ಜನತಾ ಪಕ್ಷ ವಿಶ್ವದ ಅತಿ ದೊಡ್ಡ ರಾಜಕೀಯ ಪಕ್ಷವಾಗಿ ದೇಶದಲ್ಲಿ ಸದೃಢ ಹಾಗೂ ಸಮರ್ಥ ಆಡಳಿತ ನೀಡುತ್ತಿದೆ, ಬಿಜೆಪಿಯ ರಾಷ್ಟ್ರೀಯ ಸದಸ್ಯತ್ವ ಅಭಿಯಾನ ಮತ್ತೊಂದು ದಾಖಲೆಯಾಗಲಿ ಎಂದು ಮೈಸೂರು ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ಹೇಳಿದರು.

ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಅಭಿಯಾನದ ಕಾರ್ಯಾಗಾರವನ್ನು ಉದ್ದೇಶಿಸಿ ಮಾತನಾಡಿದ ಅವರು, ವಿಶ್ವದ ಅತಿ ದೊಡ್ಡ–ರಾಜಕೀಯ ಪಕ್ಷವಾಗಿರುವ ಬಿಜೆಪಿಯ ಸದಸ್ಯತ್ವ ಪಡೆಯುವುದೇ ಹೆಮ್ಮೆಯ ಸಂಗತಿ. ಕಾರ್ಯಕರ್ತರು ಪ್ರತಿ ಬೂತಿನಲ್ಲೂ ಸದಸ್ಯತ್ವ ನೋಂದಣಿ ನಡೆಸಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ರೇಣುಕರಾಜ್, ಪ್ರಧಾನ ಕಾರ್ಯದರ್ಶಿಗಳಾದ ಗಿರಿಧರ್, ಬಿ.ಎಂ.ರಘು, ಉಪಾಧ್ಯಕ್ಷ ರಮೇಶ್, ಮಹಿಳಾ ಮೋರ್ಚಾ ರಾಜ್ಯ ಕಾರ್ಯಕಾರಿಣಿ ಸದಸ್ಯೆ ಟಿ.ಎನ್. ಶಾಂತ, ಮಹಿಳಾ ಮೋರ್ಚಾ ಪ್ರಧಾನ ಕಾರ್ಯದರ್ಶಿ ಚಂದ್ರಕಲಾ, ಸದಸ್ಯತ್ವ ಅಭಿಯಾನದ ಸಂಚಾಲಕರಾದ ವಿದ್ಯಾ ಅರಸ್, ಕಾರ್ಯದರ್ಶಿ ನಾಗೇಂದ್ರ, ಸಹ ಸಂಚಾಲಕರಾದ ಜಾನ್ಸಿ ಹಾಗೂ ಅನಿತ ಮತ್ತು ಮಹಿಳಾ ಮೋರ್ಚಾ ಕ್ಷೇತ್ರಗಳ ಅಧ್ಯಕ್ಷರು, ಪದಾಧಿಕಾರಿಗಳು ಹಾಜರಿದ್ದರು.

ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ

ಮೈಸೂರು,ಸೆ.3–ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2024–25ನೇ ಸಾಲಿಗೆ ಪರಿಶಿಷ್ಟ ಜಾತಿಯ ಹೊಸ ವಿದ್ಯಾರ್ಥಿಗಳಿಗೆ (ಇದುವರೆಗೂ SSP ತಂತ್ರಾಂಶದಲ್ಲಿ ನೋಂದಣಿಯಾಗದ ಹಾಗೂ ನೋಂದಣಿಯಾದರೂ ಕಾರಣಾಂತರದಿಂದ ವಿದ್ಯಾರ್ಥಿವೇತನ ಮಂಜೂರು ಆಗದೇ ಇರುವವರು) ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು 1ರಿಂದ 8ನೇ ತರಗತಿ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ರೂ.6 ಲಕ್ಷ, 10ನೇ ತರಗತಿ ವಿದ್ಯಾರ್ಥಿಗಳಿಗೆ ರೂ.2.5 ಲಕ್ಷದ ಒಳಗಿರಬೇಕು. ಆಸಕ್ತರು https://ssp.postmatric.karnataka.gov.in/ssppre ಮೂಲಕ ಅರ್ಜಿ ಸಲ್ಲಿಸಬಹುದು. ಮಾಹಿತಿಗೆ ಪಡುವಾರಹಳ್ಳಿಯ ಬಾಬು ಜಗಜೀವನರಾಂ ಭವನ ಕಟ್ಟಡದ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರ ದೂ.ಸಂ.–2520910 ಅನ್ನು ಸಂಪರ್ಕಿಸಿ.

ನಾಳೆ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ

ಮೈಸೂರು, ಸೆ. 3–ಮೈಸೂರಿನ ಲಕ್ಷ್ಮಿಪುರಂನ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಸೆ.5ರಂದು ಬೆಳಗ್ಗೆ 10ರಿಂದ ರಾತ್ರಿ 8 ಗಂಟೆಯವರೆಗೆ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಮಾಹಿತಿಗೆ ದೂ. 0821–4259259 ಸಂಪರ್ಕಿಸಬಹುದು.

ಪಿಂಚಣಿದಾರರ ಸಂಘದ ನೂತನ ಪದಾಧಿಕಾರಿಗಳು



ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯ ನಂಜನಗೂಡು ತಾಲೂಕು ಪಿಂಚಣಿದಾರರ ಸಂಘದ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಪಿ.ಗುರುಸಿದ್ದಪ್ಪ (ಅಧ್ಯಕ್ಷ), ಎನ್.ಮಹದೇವಸ್ವಾಮಿ (ಉಪಾಧ್ಯಕ್ಷ), ಮಹಾಲಿಂಗಯ್ಯ (ಕಾರ್ಯದರ್ಶಿ), ಎಲ್.ಮಾರಣ್ಣ (ಸಹಾಯಕ ಕಾರ್ಯದರ್ಶಿ), ಎಸ್.ಗುರುಸಿದ್ದಶೆಟ್ಟಿ (ಖಜಾಂಚಿ), ಹೆಚ್.ಎಲ್.ಮಹೇಶ, ಪಿ.ಬಸವರಾಜು, ಕೆ.ಬಸವರಾಜು, ಸುನಿತಾಮಣಿ, ಎನ್.ರಾಮಚಂದ್ರ, ಪಿ.ಮಹದೇವಯ್ಯ, ಚಲುವಯ್ಯ (ನಿರ್ದೇಶಕರು).

ವೀಣಾ ವಿದುಷಿ ಎಂ.ಎಸ್.ಜಯಮ್ಮ ಸ್ಮಾರಕ ಕರ್ನಾಟಕ ಸಂಗೀತ ಸ್ಪರ್ಧೆ

ಮೈಸೂರು, ಸೆ. 3– ಮೈಸೂರಿನ ಶ್ರುತಿ ಮಂಜರಿ ಪ್ರತಿಷ್ಠಾನದ ವತಿಯಿಂದ 25ನೇ ವರ್ಷದ ಪ್ರಯುಕ್ತ ವೀಣಾ ವಿದುಷಿ ಎಂ.ಎಸ್.ಜಯಮ್ಮ ಸ್ಮಾರಕ ಕರ್ನಾಟಕ ಸಂಗೀತ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಸ್ಪರ್ಧೆಯು ಕರ್ನಾಟಕ ಶಾಸ್ತ್ರೀಯ ಸಂಗೀತ ಜೂನಿಯರ್, ಸೀನಿಯರ್ ವಿಭಾಗಗಳಿಗೆ, ಹಾಡುಗಾರಿಕೆ, ದೇವರನಾಮ, ವಾದ್ಯ ಸಂಗೀತ, ತಾಳವಾದ್ಯ ಮತ್ತು ಲಿಖಿತ ಸಂಗೀತ ರಸಪ್ರಶ್ನೆ ವಿಭಾಗಗಳಲ್ಲಿ ನಡೆಯಲಿದೆ. ಸ್ಪರ್ಧೆಗಳನ್ನು ಸೆ.15ರಂದು ಬೆಳಗ್ಗೆ 9 ಗಂಟೆಗೆ ರೋಟರಿ ಪಶ್ಚಿಮ ಶಾಲಾ ಆವರಣದಲ್ಲಿ ನಡೆಸಲಾಗುವುದು. ಹೆಚ್ಚಿನ ಮಾಹಿತಿಗೆ ಮೊ.9945124825, 9446622466 ಸಂಪರ್ಕಿಸಬಹುದು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

4.09.2024 ಬುಧವಾರ, ಮಳೆ ನಕ್ಷತ್ರ: ಪುಬ್ಬ, 31.08.2024 ರಿಂದ 12.09.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಭಾದ್ರಪದ ಮಾಸ, ಶುಕ್ಲ ಪಕ್ಷ, ತಿಥಿ: ಪಾಡ್ಯ, ನಕ್ಷತ್ರ: ಉತ್ತರಾ, ರಾಹುಕಾಲ : ಮಧ್ಯಾಹ್ನ 12 ರಿಂದ 1.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** 'ಬಂಜೆತನ, ಮುಟ್ಟಿನ ಸಮಸ್ಯೆ' ಹಾಗೂ ಆರೋಗ್ಯಾಯುಷ್ಯ ಆರೋಗ್ಯವರ್ಧಕ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ಗಂಟೆಯಿಂದ.

■ **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ, ದಸರೆಯ ಬೊಂಬೆ ಪ್ರದರ್ಶನದ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ಆಮ್ರಪಾಲಿ ಸೀರೆ ಮಳಿಗೆಯ ಮೇಲೆ, ನಜರ್‌ಬಾದ್, ಬೆಳಗ್ಗೆ 10ರಿಂದ ಸಂಜೆ 7ರವರೆಗೆ.

■ **ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ :** ಅವಧೂತ ದತ್ತ ಪೀಠಾಧಿಪತಿ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ, ದತ್ತಪೀಠ ಉತ್ತರಾಧಿಕಾರಿ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿಯವರ 21ನೇ ಚಾತುರ್ಮಾಸ್ಯ ವ್ರತ ದೀಕ್ಷಾ ಮಹೋತ್ಸವ, ಇಷ್ಟಿಯಾಗ (ವಿಶೇಷ ಫಲವನ್ನು ನೀಡುವ ಸಾರಸ್ವತೇಷ್ಟಿ ಎಂಬ ಮಹಾಯಾಗವು ನಡೆಯಲಿದೆ) ಸ್ಥಳ: ಆಶ್ರಮದ ಆವರಣ, ಬೆಳಗ್ಗೆಯಿಂದ.

■ **ಬಾಸುದೇವ ಸೋಮಾನಿ ಕಾಲೇಜು :** ರಕ್ತದಾನದ ಮಹತ್ವ ಹಾಗೂ ಅರಿವು ಕಾರ್ಯಕ್ರಮ, ಉದ್ಘಾಟನೆ: ಮುಖ್ಯ ಆಡಳಿತಾಧಿಕಾರಿ ಪಿ.ಗೀತಾಂಜಲಿ, ಮುಖ್ಯ ಅತಿಥಿಗಳು : ಕಾರ್ಯದರ್ಶಿ ಕುಬೇರ್ ಪಿ.ಗೌಡ, ಲಯನ್ಸ್ ಬ್ಲಡ್ ಸೆಂಟರ್ ಜೀವಧಾರ ವ್ಯವಸ್ಥಾಪಕ ನಿರ್ದೇಶಕ ಎಸ್.ಇ. ಗಿರೀಶ್, ಅಧ್ಯಕ್ಷತೆ: ಕಾಲೇಜು ಪ್ರಾಂಶುಪಾಲ ಡಾ.ಎಂ.ಮಹದೇವಸ್ವಾಮಿ, ಸ್ಥಳ: ಕಾಲೇಜು ಸಭಾಂಗಣ, ಬೆಳಗ್ಗೆ 10.30ಕ್ಕೆ.

■ **ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕ, ಕದಳಿ ಮಹಿಳಾ ವೇದಿಕೆ, ಜೆಎಸ್‌ಎಸ್ ಪ್ರೌಢಶಾಲೆ:** ರಾಜಗುರುತಿಲಕ ಡಾ. ಶ್ರೀ ರಾಜೇಂದ್ರ ಮಹಾಸ್ವಾಮಿಗಳ ಜಯಂತಿ ಹಾಗೂ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆ, ಉದ್ಘಾಟನೆ : ಸಾಹಿತಿ ಶ್ರೀಮತಿ ಎಂ.ಎ. ನೀಲಾಂಬಿಕಾ, ಬಹುಮಾನ ವಿತರಣೆ : ಜೆಎಸ್‌ಎಸ್ ಪ್ರೌಢಶಾಲೆ ಮುಖ್ಯೋಪಾಧ್ಯಾಯ ಕೆ.ಎಸ್.ಸುರೇಶ್, ಉಪಸ್ಥಿತರು: ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಶ್ರೀಮತಿ ಶಾರದಾ ಶಿವಲಿಂಗಸ್ವಾಮಿ, ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಮ.ಗು. ಸದಾನಂದಯ್ಯ, ಸ್ಥಳ: ಜೆಎಸ್‌ಎಸ್ ಪ್ರೌಢಶಾಲೆ, ಶ್ರೀರಾಂಪುರ, ಬೆಳಗ್ಗೆ 11ಕ್ಕೆ.

■ **ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ:** ವಿಧಾನಪರಿಷತ್ ಸದಸ್ಯರಾದ ಡಾ.ಡಿ.ತಿಮ್ಮಯ್ಯ ಅವರ ಜನ್ಮ ದಿನವನ್ನು ವಿಶೇಷ ಚೇತನಗಳೊಂದಿಗೆ ಆಚರಣೆ, ಉಪಸ್ಥಿತರು : ಸಾಹಿತಿಗಳಾದ ಪ್ರೊ.ಕಾಳೇಗೌಡ ನಾಗವಾರ, ಪ್ರೊ.ಕೆ.ಎಸ್.ಭಗವಾನ್, ಡಾ.ಬಿ.ಜೆ.ವಿಜಯಕುಮಾರ್, ಡಾ.ರಘುರಾಂ ವಾಜಪೇಯಿ, ಮಡ್ಡೀಕೆರೆ ಗೋಪಾಲ್, ಎಂ.ಚಂದ್ರಶೇಖರ್, ಕೆ.ಎಸ್.ಶಿವರಾಮು, ಹೆಚ್.ಎಸ್.ಪ್ರಕಾಶ್, ಯೋಗೇಶ್ ಉಪ್ಪಾರ್, ರವಿನಂದನ್, ಮೊಗಣ್ಣಾಚಾರ್, ಸ್ಥಳ: ಕಿವುಡು ಮತ್ತು ಮೂಗರ ಶಾಲೆ, ಬಂಬೂ ಬಜಾರ್, ಮಧ್ಯಾಹ್ನ 1ಕ್ಕೆ

■ **ಜೆಎಸ್‌ಎಸ್ ಪಾಲಿಟೆಕ್ನಿಕ್:** ಬೆಳಗ್ಗೆ 10ಕ್ಕೆ ಅಪ್ಲಿಕೇಷನ್ಸ್ ಆಫ್ ಎಐ ಇನ್ ಇಂಜಿನಿಯರಿಂಗ್ ಫೀಲ್ಡ್ ಕುರಿತು ರಾಷ್ಟ್ರೀಯ ವಿಚಾರ ಸಂಕಿರಣ, ಮುಖ್ಯ ಅತಿಥಿಗಳು : ಎಸ್‌ಜೆಸಿಇ ಪ್ರಿನ್ಸಿಪಾಲ್ ಡಾ.ಸಿ.ನಟರಾಜು, ಅತಿಥಿಗಳು: ಡಾ.ಡಿ.ಗಣೇಶ, ಕೆ.ಎನ್.ಲೋಕೇಶ, ಸುಕುಮಾರನ್ ಕುರುಪತ್, ಮಧ್ಯಾಹ್ನ 3.30ಕ್ಕೆ ಸಮಾರೋಪ ಭಾಷಣ, ಮುಖ್ಯ ಅತಿಥಿಗಳು: ಸಿಡಿಸಿ ಸೆಲ್ ಜಂಟಿ ನಿರ್ದೇಶಕ ಜಿ.ಶ್ರೀಕಾಂತ್, ಎಸ್.ಪುಟ್ಟಸುಬ್ಬಪ್ಪ, ಡಾ.ಎಸ್.ವಿ.ದೊಡ್ಡಯ್ಯ, ಎಸ್.ಸಿ.ಪ್ರಶಾಂತ್, ಸ್ಥಳ: ಜೆಎಸ್‌ಎಸ್ ಪಾಲಿಟೆಕ್ನಿಕ್ ಆವರಣ.

■ **ಕರ್ನಾಟಕ ಜಾನಪದ ಅಕಾಡೆಮಿ, ಏಕತಾರಿ ಸಾಂಸ್ಕೃತಿಕ ಸಂಘಟನೆ :** ಜನಪದ ನೃತ್ಯಗಳು ಮತ್ತು ಜನಪದ ಗೀತೆಗಳ ಕಲಿಕಾ ತರಬೇತಿ ಶಿಬಿರ, ಸ್ಥಳ: ಕಿರುರಂಗಮಂದಿರ, ಕಲಾಮಂದಿರ ಆವರಣ, ಸಂಜೆ 5.30 ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 'ವಾದ್ಯ ವೈಭವ' ಸಂಗೀತ ವಾದ್ಯಗಳ ಪರಿಚಯ ಮಾಲಿಕೆ, ಪ್ರಸ್ತುತಿ: ಚೈತ್ರಿಕಾ. ಎಸ್, 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಗೀತಾ. ವೈಪುಟ್ಟಿ, ವ್ಯಾಖ್ಯಾನ–ಡಾ.ಮ.ರಾಮಕೃಷ್ಣ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಚಿತ್ರಗೀತೆಗಳು, 9.05 ಸಾರ್ಕೋಮ ಜಾಗೃತಿ ಕುರಿತು ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: ಇಂಡಿಯನ್ ಕ್ಯಾನ್ಸರ್ ಕೇರ್ ಸೊಸೈಟಿ, 9.10 ನಂದನ, ಮನೋನಂದನ, ಪ್ರಾಯೋಜಕರು–ಪ್ರೇರಣಾ ಆಸ್ಪತ್ರೆ ಮತ್ತು ಪ್ರೇರಣಾ ಫರ್ಟಿಲಿಟಿ ಮೈಸೂರು, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಉಸ್ತಾದ್ ಅಲ್ಲುದ್ದೀನ್ ಖಾನ್ ಸಾಹೇಬ್–ಸರೋದ್, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ **ಮಧ್ಯಾಹ್ನ:** 12.30 ಆಯುಷವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 12.35 ದೇವರನಾಮ–ಸುಧನ್ವ ಎಂ.ಎಲ್, 12.45 ಜನಪದ ಸಂಗೀತ, 1.20 ಭಾವಗೀತೆಗಳು–ಶ್ರೀಕಾಂತ್. ಎನ್, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಬಿ.ನಾಗೇಂದ್ರಪ್ಪ–ಕ್ಲಾರಿಯೋನೆಟ್, 4.00 ಮಹಿಳಾರಂಗ 'ಹೀಗಿದೆ ನೋಡಿ ನಮ್ ಜೋಡಿ', ಭಾಗವಹಿಸುವವರು–ಪತ್ರಕರ್ತ ದಂಪತಿಯಾದ ಕಮಲ್ ಗೋಪಿನಾಥ್ ಹಾಗೂ ಶೈಲಜಾ. ಪ್ರಸ್ತುತಿ: ಅಬ್ದುಲ್ ರಶೀದ್, 4.45 ಹಿಂದಿ ಪಾಠ–ಕಿಶೋರ್. ಎಂ. ಕಾಕಡೆ, 6.50 ಕೃಷಿರಂಗ, ಕೃಷಿ ದೀವಿಗೆ: 'ಸಂಶೋಧನಾ ಸಂಸ್ಥೆಯೊಂದಿಗೆ ಕೃಷಿ ಕಲಿಕೆ' ಕುರಿತ ಬಾನುಲಿ ಸರಣಿ, ವೈಜ್ಞಾನಿಕ ಎರೆಗೊಬ್ಬರ ಉತ್ಪಾದನಾ ತಾಂತ್ರಿಕತೆಗಳು. ಈ ಕುರಿತು ಮಂಡ್ಯ ತಾಲೂಕು ವಿ.ಸಿ.ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದ ಸಹಾಯಕ ಪ್ರಾಧ್ಯಾಪಕರಾದ ಡಾ.ಪಿ.ತಿಮ್ಮೇಗೌಡ ಅವರೊಂದಿಗೆ ಸಂದರ್ಶನ. ಸಂದರ್ಶಕರು: ಎನ್.ಕೇಶವಮೂರ್ತಿ, 7.45 ಕನ್ನಡದಲ್ಲಿ ಭಾಷಣ, 8.00 'ಕ್ಷಿತಿಜ ಲಿಟರರಿ ಗುರು' ಸಾಹಿತ್ಯ ಸಾಧಕರೊಂದಿಗೆ ಸಂವಾದ, 9.30 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ರಜನ್ ಮಿಶ್ರ ಮತ್ತು ಸಾಜನ್ ಮಿಶ್ರ–ಗಾಯನ, 10.00 ನಾಟಕ, 10.30 ಸವಿನೆನಪು

ಮೈಸೂರು ಮಿತ್ರ

ನಾಡದೇವತೆ ತಾಯಿ ಚಾಮುಂಡೇಶ್ವರಿಗೆ ಸಿಎಂ ಸಿದ್ದರಾಮಯ್ಯ ವಿಶೇಷ ಪೂಜೆ ಸಲ್ಲಿಕೆ



ಮೈಸೂರಿನ ಚಾಮುಂಡಿಬೆಟ್ಟದಲ್ಲಿ ಮಂಗಳವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ನಾಡದೇವತೆ ತಾಯಿ ಚಾಮುಂಡೇಶ್ವರಿ ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಶಾಸಕ ಜಿ.ಟಿ.ದೇವೇಗೌಡ ಸೇರಿದಂತೆ ಇತರರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು, ಸೆ.3(ಪಿಎಲ್‌ಯು)– ಮುಡಾ ಪ್ರಕರಣ ಸಂಬಂಧ ಪ್ರಾಸಿಕ್ಯೂಷನ್ ಸಂಕಷ್ಟಕ್ಕೆ ಸಿಲುಕಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಮೈಸೂರಿನ ಚಾಮುಂಡಿಬೆಟ್ಟದಲ್ಲಿ ನಾಡದೇವತೆ ತಾಯಿ ಚಾಮುಂಡೇಶ್ವರಿ ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು.

ಇಂದು ಬೆಳಿಗ್ಗೆ ಚಾಮುಂಡೇಶ್ವರಿ ದೇವಾಲಯಕ್ಕೆ ಆಗಮಿಸಿದ ಸಿದ್ದರಾಮಯ್ಯ ಅವರಿಗೆ ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳು ವಾದ್ಯವಾದ್ಯದೊಂದಿಗೆ ಸಾಂಪ್ರದಾಯಿಕ ಸ್ವಾಗತ ಕೋರಿದರು.

ಚಾಮುಂಡೇಶ್ವರಿ ದೇವಾಲಯದ ಗರ್ಭಗುಡಿಯ ಪ್ರಾಂಗಣದಲ್ಲಿ ಸುಮಾರು 15 ನಿಮಿಷಗಳ ಕಾಲ ಇದ್ದ ಸಿದ್ದರಾಮಯ್ಯ, ನಾಡದೇವತೆಗೆ ವಿಶೇಷ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಅರ್ಚಕರು ಸಿದ್ದರಾಮಯ್ಯ ಹೆಸರಿನಲ್ಲಿ ಅಷ್ಟೋತ್ತರ ಸೇರಿದಂತೆ ಇತರೆ ಪೂಜಾ ಕೈಂಕರ್ಯ ನೆರವೇರಿಸಿದರು. ತರುವಾಯ ಚಾಮುಂಡೇಶ್ವರಿ ಉತ್ಸವ ಮೂರ್ತಿ, ಆಂಜನೇಯ ಸ್ವಾಮಿ, ವಿಘ್ನ ನಿವಾರಕ ಗಣಪತಿಗೆ ಕೂಡ ಸಿದ್ದರಾಮಯ್ಯ ವಿಶೇಷ ಪೂಜೆ ಸಲ್ಲಿಸಿದರು.

ನಂತರ ದೇವಾಲಯದ ಪ್ರವೇಶ ದ್ವಾರದಲ್ಲಿ ಸಿದ್ದರಾಮಯ್ಯ ಈಡುಗಾಯಿ ಒಡೆದರು. ಈ ವೇಳೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ ಸೇರಿದಂತೆ ಹಲವು ಗಣ್ಯರು ಸಿದ್ದರಾಮಯ್ಯ ಜೊತೆಗಿದ್ದರು.

ಇಂದು ಬೆಳಿಗ್ಗೆ 10 ಗಂಟೆಗೆ ಸಿದ್ದರಾಮಯ್ಯ ಚಾಮುಂಡಿಬೆಟ್ಟಕ್ಕೆ ಆಗಮಿಸಬೇಕಿತ್ತು. ಆದರೆ ಚಾಮುಂಡಿಬೆಟ್ಟ ಗ್ರಾಮದಲ್ಲಿ ನಿನ್ನೆ ರಾತ್ರಿ ನಾಗಣ್ಣ ಎಂಬುವರು ಮೃತಪಟ್ಟ ಹಿನ್ನೆಲೆ ಇಂದು ಬೆಳಿಗ್ಗೆಯಿಂದ ದೇವಸ್ಥಾನದ ಬಾಗಿಲು ತೆರೆದಿರಲಿಲ್ಲ.

ಚಾಮುಂಡಿಬೆಟ್ಟದಲ್ಲಿ ಯಾರೇ ಮೃತಪಟ್ಟರೂ ಮೃತದೇಹವನ್ನು ಅಂತ್ಯಸಂಸ್ಕಾರಕ್ಕೆ ಕೊಂಡೊಯ್ಯುವ ತನಕ ದೇವಾಲಯದ ಬಾಗಿಲು ತೆಗೆಯುವುದಿಲ್ಲ. ಈ ಹಿನ್ನೆಲೆ ಇಂದು ಬೆಳಿಗ್ಗೆ ದೇವಸ್ಥಾನದ ಬಾಗಿಲು ತೆಗೆದಿರಲಿಲ್ಲ. ನಾಗಣ್ಣ ಮೃತದೇಹವನ್ನು ಅಂತ್ಯಸಂಸ್ಕಾರಕ್ಕೆ ಕೊಂಡೊಯ್ದ ನಂತರ ಬೆಳಿಗ್ಗೆ 10.30 ಗಂಟೆಗೆ ಚಾಮುಂಡೇಶ್ವರಿ ದೇವಿಗೆ ಅಭಿಷೇಕ ಸೇರಿದಂತೆ ಇತರೆ ಪೂಜಾ ಕೈಂಕರ್ಯ ನೆರವೇರಿಸಲಾಯಿತು. ತರುವಾಯ 11.15 ಗಂಟೆಗೆ ಸಿದ್ದರಾಮಯ್ಯ ಚಾಮುಂಡಿಬೆಟ್ಟಕ್ಕೆ ಆಗಮಿಸಿದರು.

ಪ್ರಸಾದವಿಲ್ಲದೆ ಭಕ್ತರು ವಾಪಸ್

ದಾಸೋಹ ಭವನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಸಭೆ ನಡೆಯುತ್ತಿದ್ದ ಕಾರಣ ಇಂದು ಪ್ರಸಾದ ವ್ಯವಸ್ಥೆ ರದ್ದು ಮಾಡಲಾಗಿತ್ತು. ಆದರೆ ಈ ವಿಚಾರ ಬಹುತೇಕ ಜನರಿಗೆ ತಿಳಿದಿರಲಿಲ್ಲ. ಇನ್ನೇನು ಪ್ರಸಾದ ಸಿಗಬಹುದು ಎಂದು ಬಹಳಷ್ಟು ಜನರು ಗೇಟ್ ಬಳಿ ಕಾಯುತ್ತಿದ್ದರು. ಆದರೆ ಮಧ್ಯಾಹ್ನ 3 ಗಂಟೆಯಾದರೂ ಸಭೆ ಮುಗಿಯದಿರುವ ಪರಿಸ್ಥಿತಿ ನೋಡಿ ಭಕ್ತಾದಿಗಳು ಪ್ರಸಾದವಿಲ್ಲದೆ ವಾಪಸ್ ತೆರಳಿದರು.



ಮೈಸೂರಿನ ಚಾಮುಂಡಿಬೆಟ್ಟದಲ್ಲಿ ಮಂಗಳವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಮುಂಡೇಶ್ವರಿ ದೇವಾಲಯದ ದ್ವಾರದಲ್ಲಿ ಈಡುಗಾಯಿ ಒಡೆದರು.

ಖಾಕಿ ಬಿಚ್ಚಿಟ್ಟು ಬಾ ನನ್ನ ಪವರ್ ತೋರಿಸ್ತೀನಿ...

ಪೊಲೀಸರಿಗೆ ಕಾಂಗ್ರೆಸ್ ಕಾರ್ಯಕರ್ತ ಅವಾಜ್

ಖಾಕಿ ಬಿಚ್ಚಿಟ್ಟು ಬಾ ನನ್ನ ಪವರ್ ಏನೆಂದು ತೋರಿಸುತ್ತೇನೆ ಎಂದು ವರುಣ ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತನೊಬ್ಬ ಪೊಲೀಸ್ ಅಧಿಕಾರಿಗೆ ಅವಾಜ್ ಹಾಕಿದ ಪ್ರಸಂಗ ಇಂದು ಚಾಮುಂಡಿಬೆಟ್ಟದಲ್ಲಿ ನಡೆಯಿತು.

ಸಿದ್ದರಾಮಯ್ಯ ದೇವಾಲಯದೊಳಗೆ ಪ್ರವೇಶಿಸಿದರು. ಈ ವೇಳೆ ವರುಣ ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತ ಪ್ರದೀಪ್ ಕುಮಾರ್ ಹಾಗೂ ಮಹಿಳಾ ಕಾಂಗ್ರೆಸ್ ಮುಖಂಡರಾದ ಛಾಯಾ ಎಂಬಾಕೆ ಕೂಡ ಸಿದ್ದರಾಮಯ್ಯ ಜೊತೆಗೆ ದೇವಾಲಯ ಪ್ರವೇಶಿಸಲು ಮುಂದಾದರು.

ಆದರೆ ಪೊಲೀಸ್ ಅಧಿಕಾರಿಗಳು ಒಳಗೆ ಹೋಗಲು ಬಿಡಲಿಲ್ಲ. ಇದರಿಂದ ನೂಕಾಟವಾಯಿತು. ಈ ವೇಳೆ ಕೋಪೋದ್ರಿಕ್ತನಾದ ಪ್ರದೀಪ್ ಕುಮಾರ್, ಪೊಲೀಸ್ ಯೂನಿಫಾರಂ ಹಾಕಿದ್ದೀನಿ ಅಂತ ದರ್ಪ ತೋರಿಸುತ್ತಿದ್ದೀಯಾ, ಖಾಕಿ ಬಿಚ್ಚಿಟ್ಟು ಬಾ ನನ್ನ ಪವರ್ ಏನು ಅಂತ ತೋರಿಸುತ್ತೇನೆ ಎಂದು



ಪೊಲೀಸ್ ಅಧಿಕಾರಿಗಳಿಗೆ ಅವಾಜ್ ಹಾಕಿದ. ಪ್ರದೀಪ್ ಕುಮಾರ್ ಅಷ್ಟೆಲ್ಲಾ ಕೂಗಾಡುತ್ತಿದ್ದರೂ ಖಡಕ್ ಆಗಿ ವರ್ತಿಸದ ಪೊಲೀಸರು ಆತನನ್ನೆ ಸಮಾಧಾನ ಮಾಡಲು ಯತ್ನಿಸಿದರು. ಪೊಲೀಸರು ಎಷ್ಟೆ ಸಮಾಧಾನ ಮಾಡಿದರೂ ಮೌನ ವಹಿಸದ ಆತ, ಪೊಲೀಸರಿಗೆ ಏಕವಚನದಲ್ಲೆ ನಿಂದಿಸುತ್ತಿದ್ದ. ಈತ ಸಿದ್ದರಾಮಯ್ಯ ಪ್ರತಿನಿಧಿಸುವ ವರುಣ ಕ್ಷೇತ್ರದವನು, ಜೊತೆಗೆ ಕಾಂಗ್ರೆಸ್ ಕಾರ್ಯಕರ್ತನಾಗಿದ್ದ ಕಾರಣ ಪೊಲೀಸರು ಆತನಿಗೆ ಎಚ್ಚರಿಕೆ ನೀಡುವ ಗೋಜಿಗೂ ಹೋಗದೆ ಅವನನ್ನೆ ಸಮಾಧಾನ ಮಾಡಲು ಮುಂದಾದರು.

ಪೊಲೀಸ್ ಅಧಿಕಾರಿಗಳು ಸೇರಿದಂತೆ ನೂರಾರು ಪೊಲೀಸ್ ಸಿಬ್ಬಂದಿ ಇದ್ದರೂ ಕೇರ್ ಮಾಡದ ಆತ ಖಾಕಿಗೆ ಸವಾಲು ಹಾಕಿದ.

ಚಾಮುಂಡಿಬೆಟ್ಟ ಅಭಿವೃದ್ಧಿಗೆ ಮಾಸ್ಟರ್ ಪ್ಲಾನ್

ಒಂದನೇ ಪುಟದಿಂದ

ನಿರ್ಧರಿಸಲಾಗಿದೆ ಎಂದು ಸಿದ್ದರಾಮಯ್ಯ ತಿಳಿಸಿದರು. ದಾಸೋಹ ಭವನವನ್ನು ನವೀಕರಣ ಮಾಡಲಾಗುವುದು. ಜೊತೆಗೆ ದಾಸೋಹ ಭವನದಲ್ಲಿ ಭಕ್ತರಿಗೆ ರುಚಿ ಹಾಗೂ ಶುಚಿಯಾದ ಊಟದ ವ್ಯವಸ್ಥೆ ಮಾಡುವಂತೆ ಸೂಚಿಸಲಾಗಿದೆ ಎಂದರು.

ಕೇಂದ್ರ ಸರ್ಕಾರದ ಪ್ರಸಾದ ಯೋಜನೆಯಲ್ಲಿ ಚಾಮುಂಡಿಬೆಟ್ಟವನ್ನು ಸಮಗ್ರವಾಗಿ ಅಭಿವೃದ್ಧಿ ಮಾಡಲಾಗುತ್ತಿದೆ. ಆದರೆ ಇದರ ಅಭಿವೃದ್ಧಿಗೆ ಇನ್ನು ಹೆಚ್ಚುವರಿಯಾಗಿ 11 ಕೋಟಿ ಕೊರತೆ ಇದ್ದು, ಇದನ್ನು ರಾಜ್ಯ ಸರ್ಕಾರ ನೀಡಲಿದೆ ಎಂದು ಹೇಳಿದರು. ಪ್ರಾಧಿಕಾರ ರಚನೆಗೂ ಮೊದಲೆ ರೂಪಿಸಿದ್ದ ಎಲ್ಲಾ ಅಭಿವೃದ್ಧಿ ಕಾರ್ಯ ಪೂರ್ಣಗೊಳಿಸಲು ಸೂಚನೆ ನೀಡಲಾಗಿದೆ. 2018 ರಲ್ಲೆ ಚಾಲನೆ ನೀಡಿದ್ದ ಚಾಮುಂಡಿಬೆಟ್ಟಕ್ಕೆ ಕುಡಿಯುವ ನೀರು ಸರಬರಾಜು ಯೋಜನೆ ಪೂರ್ಣಗೊಳಿಸಲು ಕೂಡ ಆದೇಶ ನೀಡಲಾಗಿದೆ ಎಂದರು. ಚಾಮುಂಡಿಬೆಟ್ಟದ ಸ್ವಚ್ಛತೆಗೆ ಮೊದಲ ಆದ್ಯತೆ ನೀಡಲಾಗಿದೆ. ಕಸ ವಿಲೇವಾರಿ ಘಟಕದ ಸಿವಿಲ್ ಕಾಮಗಾರಿ ಪೂರ್ಣಗೊಂಡಿದ್ದರೂ ವಿದ್ಯುತ್ ಸಂಪರ್ಕ ನೀಡಿಲ್ಲ. ಈ ಹಿನ್ನೆಲೆ ಕೂಡಲೇ ವಿದ್ಯುತ್ ಸಂಪರ್ಕ ಕಲ್ಪಿಸಿ, ಕಸ ವಿಲೇ ವಾರಿ ಕಾರ್ಯ ಆರಂಭಿಸಬೇಕು, ಚಾಮುಂಡಿ ಬೆಟ್ಟ ಪ್ಲಾಸ್ಟಿಕ್ ಮುಕ್ತವಾಗಬೇಕು ಎಂದು ಅಧಿಕಾರಿಗಳಿಗೆ ಆದೇಶಿಸಲಾಗಿದೆ ಸಿದ್ದರಾಮಯ್ಯ ತಿಳಿಸಿದರು.

ಚಾಮುಂಡಿಬೆಟ್ಟದ ಒಳಗೆ ಫೋಟೋ ತೆಗೆಯುವುದನ್ನು ನಿಷೇಧಿಸಲಾಗಿದೆ. ದೇವಸ್ಥಾನದ ಒಳಗೆ ಪ್ರವೇಶ ನೀಡಿದ ಕೂಡಲೆ ಮೊಬೈಲ್ ಫೋನ್ ಆಫ್ ಮಾಡಿಕೊಳ್ಳುವುದನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲಾಗುವುದು. ದೇವಾಲಯದ ನೌಕರರಿಗೆ ವೈದ್ಯಕೀಯ ಸೌಲಭ್ಯ ಕಲ್ಪಿಸಿ, ಅವರ ಮಕ್ಕಳಿಗೆ ಶಿಕ್ಷಣ ನೀಡಲಾಗುವುದು ಎಂದು ಮಾಹಿತಿ ನೀಡಿದರು.

ಚಾಮುಂಡಿಬೆಟ್ಟದಲ್ಲೇ ಇರುವ ದೇವಿಕೆರೆ ಹಾಗೂ ನಂದಿ ಪ್ರತಿಮೆ ಇರುವ ಸ್ಥಳವನ್ನು ಅಭಿವೃದ್ಧಿ ಮಾಡಲಾಗುವುದು. ಒಟ್ಟಾರೆ ಚಾಮುಂಡಿಬೆಟ್ಟವನ್ನು ಮತ್ತಷ್ಟು ಅಭಿವೃದ್ಧಿಪಡಿಸಿ, ಆಕರ್ಷಣೀಯವಾಗಿ ಮಾಡಲಾಗುವುದು ಎಂದು ತಿಳಿಸಿದರು.

ಚಾಮುಂಡಿಬೆಟ್ಟದಲ್ಲಿ ಸಮರ್ಪಕ ವಿದ್ಯುತ್ ಸಂಪರ್ಕ ಕಲ್ಪಿಸಬೇಕು. ಜೊತೆಗೆ ಅಗತ್ಯವಿರುವ ಕಡೆ ವಿದ್ಯುತ್ ದೀಪ ಅಳವಡಿಸುವಂತೆ ಸೂಚಿಸಲಾಗಿದೆ ಎಂದರು.

ಈ ಮೊದಲು ಜಿಲ್ಲಾಧಿಕಾರಿ ಅಧ್ಯಕ್ಷತೆಯ ಸಮಿತಿಯಲ್ಲಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಇದ್ದರು. ಆದರೆ ಈಗ ಪ್ರಾಧಿಕಾರ ರಚನೆ ಮಾಡಲಾಗಿದ್ದು, ಹುಲಿಗಮ್ಮ ದೇವಸ್ಥಾನ ಪ್ರಾಧಿಕಾರ, ಸವದತ್ತಿ ಎಲ್ಲಮ್ಮ ದೇವಸ್ಥಾನ ಪ್ರಾಧಿಕಾರ ಹಾಗೂ ಘಾಟಿ ಸುಬ್ರಹ್ಮಣ್ಯ ದೇವಸ್ಥಾನ ಪ್ರಾಧಿಕಾರದಂತೆ ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ರಚನೆ ಮಾಡಲಾಗಿದ್ದು, ಇಲ್ಲಿನ ದೇವಸ್ಥಾನ ಮಾತ್ರವಲ್ಲದೆ ಬೆಟ್ಟವನ್ನು ಸಮಗ್ರವಾಗಿ ಅಭಿವೃದ್ಧಿ ಮಾಡಲಾಗುವುದು ಎಂದು ಸಿದ್ದರಾಮಯ್ಯ ತಿಳಿಸಿದರು.

ಇಂದಿನ ಪ್ರಾಧಿಕಾರದ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಮುಜರಾಯಿ ಸಚಿವ ರಾಮಲಿಂಗರೆಡ್ಡಿ, ಪ್ರವಾಸೋದ್ಯಮ ಸಚಿವ ಹೆಚ್.ಕೆ.ಪಾಟೀಲ್, ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ, ಶಾಸಕರಾದ ಕೆ.ಹರೀಶ್‌ಗೌಡ, ರವಿಶಂಕರ್, ಡಾ. ಯತೀಂದ್ರ, ಡಾ.ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ವಿವೇಕಾನಂದ, ಮುಜರಾಯಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯಾ, ಪ್ರವಾಸೋದ್ಯಮ ಇಲಾಖೆಯ ನಿರ್ದೇಶಕ ಡಾ.ಕೆ.ವಿ.ರಾಜೇಂದ್ರ, ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ, ದಕ್ಷಿಣ ವಲಯ ಐಜಿಪಿ ಡಾ.ಬೋರಲಿಂಗಯ್ಯ, ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ.ಗಾಯತ್ರಿ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದಲ್ಲಿದೆ 169 ಕೋಟಿ

ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದಲ್ಲಿ ಒಟ್ಟು 169 ಕೋಟಿ ಹಾಗೂ ಉಳಿತಾಯ ಖಾತೆಯಲ್ಲಿ 20 ಕೋಟಿ ರೂಪಾಯಿ ಇದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಪ್ರಾಧಿಕಾರದ ನಿಶ್ಚಿತ ಠೇವಣಿಯಲ್ಲಿ 1,62,51,35,023 ರೂಪಾಯಿ, ದೇವಾಲಯದ ಪುದುವಟ್ಟಿನಲ್ಲಿ 3,61,99,301 ರೂಪಾಯಿ, ದಾಸೋಹ ಪುದುವಟ್ಟಿನಲ್ಲಿ 3,08,69,635 ರೂಪಾಯಿ ಸೇರಿದಂತೆ ಒಟ್ಟು 1,69,22,03,977 ರೂಪಾಯಿ ಇದೆ. ಇದರ ಜೊತೆಗೆ ಉಳಿತಾಯ ಖಾತೆಯಲ್ಲಿ 20,24,84,157 ರೂಪಾಯಿ ಇದೆ ಎಂದು ಅಂಕಿ ಅಂಶಗಳ ಮಾಹಿತಿ ನೀಡಿದರು. 2023–24ರ ಖರ್ಚು ವೆಚ್ಚದ ವಿವರ ನೀಡಿದ ಸಿದ್ದರಾಮಯ್ಯ, 43.64 ಕೋಟಿ ಆದಾಯ ಬಂದಿದ್ದು, 21 ಕೋಟಿ ಖರ್ಚಾಗಿದೆ. ಅಂತಿಮವಾಗಿ 22 ಕೋಟಿ ಉಳಿದಿದೆ. ಜುಲೈ ತಿಂಗಳ ತನಕ 17.04 ಕೋಟಿ ಆದಾಯ ಬಂದಿದ್ದು, ಇದರಲ್ಲಿ 6.97 ಕೋಟಿ ಖರ್ಚಾಗಿದ್ದು, 10 ಕೋಟಿ ಉಳಿದಿದೆ ಎಂದು ಹೇಳಿದರು. ಈ ಮೂಲಕ ಪ್ರತಿ ವರ್ಷ ಆದಾಯದ ಪ್ರಮಾಣ ಹೆಚ್ಚಾಗುತ್ತಿದೆ. ರಾಜ್ಯ ಸರ್ಕಾರದ ಶಕ್ತಿ ಯೋಜನೆ ಜಾರಿಯಾದ ನಂತರ ಭಕ್ತಾದಿಗಳ ಸಂಖ್ಯೆ ಹೆಚ್ಚಾಗಿದ್ದು, ಆದಾಯ ಹೆಚ್ಚಾಗಲು ಇದು ಒಂದು ಕಾರಣ ಎಂದು ತಿಳಿಸಿದರು.

ಒಟ್ಟಾರೆ ಚಾಮುಂಡೇಶ್ವರಿ ದೇವಸ್ಥಾನ ಹಾಗೂ ಚಾಮುಂಡಿಬೆಟ್ಟದ ಅಭಿವೃದ್ಧಿಗೆ ಹಣದ ಕೊರತೆ ಇಲ್ಲ ಎಂದು ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

ರೋಪ್ ವೇ ಬಗ್ಗೆ ಚರ್ಚೆಯಾಗಿಲ್ಲ

ಚಾಮುಂಡಿಬೆಟ್ಟದ ರೋಪ್ ವೇ ಯೋಜನೆ ಅನುಷ್ಠಾನ ಮಾಡುವ ಬಗ್ಗೆ ಇಂದಿನ ಪ್ರಾಧಿಕಾರದ ಸಭೆಯಲ್ಲಿ ಚರ್ಚೆ ಮಾಡಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದರು. ರೋಪ್ ವೇ ಯೋಜನೆ ಬಹಳ ಹಿಂದೆ ರೂಪಿಸಲಾಗಿತ್ತು. ಆದರೆ ಪರಿಸರವಾದಿಗಳಿಂದ ತೀವ್ರ ವಿರೋಧ ವ್ಯಕ್ತವಾಯಿತು. ಜೊತೆಗೆ ಪರಿಸರ ಇಲಾಖೆಯಿಂದ ಅನುಮತಿ ಕೂಡ ಸಿಕ್ಕಿಲ್ಲ. ಈ ಹಿನ್ನೆಲೆಯಲ್ಲಿ ರೋಪ್ ವೇ ಯೋಜನೆ ಅನುಷ್ಠಾನ ಮಾಡುವ ಬಗ್ಗೆ ಇಂದಿನ ಸಭೆಯಲ್ಲಿ ಚರ್ಚೆ ಮಾಡಿಲ್ಲ ಎಂದು ಹೇಳಿದರು. ನೆನಗುದಿಗೆ ಬಿದ್ದಿರುವ ಚಾಮುಂಡಿಬೆಟ್ಟದ ನಂದಿ ರಸ್ತೆಯ ನಿರ್ಮಾಣ ಕಾರ್ಯವನ್ನು ಶೀಘ್ರವೇ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ಸಿದ್ದರಾಮಯ್ಯ ತಿಳಿಸಿದರು.

ಚಾಮುಂಡಿಬೆಟ್ಟದ ಅಭಿವೃದ್ಧಿಗೆ ಮಾಸ್ಟರ್ ಪ್ಲಾನ್

ಮುಂದಿನ ಐದು ವರ್ಷದ ಅವಧಿಯಲ್ಲಿ ಚಾಮುಂಡಿಬೆಟ್ಟವನ್ನು ಯಾವ ರೀತಿ ಸಮಗ್ರವಾಗಿ ಅಭಿವೃದ್ಧಿ ಮಾಡಬಹುದು ಎಂಬ ಬಗ್ಗೆ ಮಾಸ್ಟರ್ ಪ್ಲಾನ್ ರೂಪಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಸಿದ್ದರಾಮಯ್ಯ ತಿಳಿಸಿದರು. ಚಾಮುಂಡಿಬೆಟ್ಟದಲ್ಲಿ ಅನಧಿಕೃತ ಕಟ್ಟಡಗಳ ಕಾಮಗಾರಿ ನಿಲ್ಲಿಸಬೇಕು. ಜೊತೆಗೆ ಭವಿಷ್ಯತ್ತಿನಲ್ಲಿ ಅನಧಿಕೃತ ಕಟ್ಟಡಗಳ ನಿರ್ಮಾಣ ಆಗದಂತೆ ಕ್ರಮ ವಹಿಸಬೇಕು ಎಂದು ಕಟ್ಟುನಿಟ್ಟಿನ ಆದೇಶ ನೀಡಲಾಗಿದೆ.

ಚಾಮುಂಡೇಶ್ವರಿ ದೇವಸ್ಥಾನದ ಆಸ್ತಿ ಪಾಸ್ತಿಗಳ ಬಗ್ಗೆ ಸರ್ವೆ ಮಾಡಲು ಕೂಡ ಸೂಚನೆ ನೀಡಲಾಗಿದೆ. ಚಾಮುಂಡೇಶ್ವರಿ ದೇವಸ್ಥಾನದ ಜಮೀನು ಒತ್ತುವರಿ ಮಾಡಿಕೊಂಡಿದ್ದರೆ ಗುರುತಿಸಬೇಕು. ಜೊತೆಗೆ ಕೂಡಲೇ ಅದನ್ನು ತೆರವು ಮಾಡುವಂತೆ ಆದೇಶ ನೀಡಲಾಗಿದೆ ಎಂದು ಸಿದ್ದರಾಮಯ್ಯ ತಿಳಿಸಿದರು.

ವಸ್ತ್ರ ಸಂಹಿತೆ ಜಾರಿ ಇಲ್ಲ

ಚಾಮುಂಡಿಬೆಟ್ಟದ ಚಾಮುಂಡೇಶ್ವರಿ ದೇವಸ್ಥಾನದಲ್ಲಿ ವಸ್ತ್ರ ಸಂಹಿತೆ ಜಾರಿ ಮಾಡುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

ಚಾಮುಂಡೇಶ್ವರಿ ದೇವಸ್ಥಾನಕ್ಕೆ ಯಾವುದೇ ಜಾತಿ, ಮತದ ಬೇಧ ಭಾವವಿಲ್ಲದೆ ಎಲ್ಲರೂ ಭೇಟಿ ನೀಡಬಹುದು. ಯಾವುದೇ ರೀತಿಯ ಲಿಂಗ ತಾರತಮ್ಯ ಕೂಡ ಮಾಡಬಾರದು ಎಂದು ಹೇಳಿದರು. ಚಾಮುಂಡೇಶ್ವರಿ ದೇವಸ್ಥಾನದಲ್ಲಿ ಜಾತ್ಯಾತೀತ ಭಾವನೆಯಿಂದ ನೋಡಬೇಕು. ಯಾರಿಗೂ ನಿರ್ಬಂಧ ವಿಧಿಸುವಂತಿಲ್ಲ ಎಂದು ಸೂಚನೆ ನೀಡಲಾಗಿದೆ ಎಂದು ಸಿದ್ದರಾಮಯ್ಯ ತಿಳಿಸಿದರು.

ಶ್ರೀ ವೀರಭದ್ರೇಶ್ವರ ಸ್ವಾಮಿ ಜಯಂತ್ಯುತ್ಸವ





ಮೈಸೂರಿನ ಡಿ.ಬನುಮಯ್ಯ ರಸ್ತೆಯಲ್ಲಿರುವ ಶ್ರೀ ವೀರಭದ್ರೇಶ್ವರ ಹಾಗೂ ಚಾಮರಾಜೇಶ್ವರ ದೇವಾಲಯದಲ್ಲಿ ಮಂಗಳವಾರ ಸಂಜೆ ಶ್ರೀ ವೀರಭದ್ರೇಶ್ವರ ಸ್ವಾಮಿ ಜಯಂತ್ಯುತ್ಸವದ ಪ್ರಯುಕ್ತ ಶ್ರೀ ಭದ್ರಕಾಳಿ ಸಮೇತ ಶ್ರೀ ವೀರಭದ್ರೇಶ್ವರ ಸ್ವಾಮಿಗೆ ಮಹಾರುದ್ರಾಭಿಷೇಕ ಹಾಗೂ ಪಂಚಾಮೃತ ಅಭಿಷೇಕ ನಂತರ ಮಹಾಮಂಗಳಾರತಿ ನೆರವೇರಿಸಲಾಯಿತು. ಬೆಳಗ್ಗೆ ದೇವಾಲಯದ ಪ್ರಾಂಗಣದಲ್ಲಿ ದೇವರ ಉತ್ಸವ ನಡೆಸಿ, ಭಕ್ತರಿಗೆ ಪ್ರಸಾದ ವಿತರಿಸಲಾಯಿತು.

ವಿ.ವಿಜಯಲಕ್ಷ್ಮಿ ಅವರಿಂದ ದೇವರನಾಮ ಸಂಕೀರ್ತನ

ಮೈಸೂರು, ಸೆ. 3– ಮೈಸೂರಿನ ದಟ್ಟಗಳ್ಳಿಯಲ್ಲಿರುವ ಶ್ರೀ ಮಹಾಲಕ್ಷ್ಮಿ ದೇವಸ್ಥಾನದಲ್ಲಿ ಸೆ.6ರಂದು ಸಂಜೆ 6.30ರಿಂದ ಸಂಗೀತ ವಿದುಷಿ ವಿಜಯಲಕ್ಷ್ಮಿ (ಲಕ್ಷ್ಮಿ) ವಸಂತ್ ಅವರಿಂದ ದೇವರನಾಮ ಸಂಕೀರ್ತನವನ್ನು ಏರ್ಪಡಿಸಲಾಗಿದೆ.



ವಿದ್ವಾನ್ ಯಶಸ್ವಿ– ವಯಲಿನ್, ವಿದ್ವಾನ್ ವಿಕ್ರಂ ಭಾರದ್ವಾಜ್– ಮೃದಂಗದ ಮೂಲಕ ಕಾರ್ಯಕ್ರಮದಲ್ಲಿ ಸಾಥ್ ನೀಡಲಿದ್ದಾರೆ. ಶ್ರೀಮತಿ ವಿಜಯಲಕ್ಷ್ಮಿ ಅವರು ಮೈಸೂರಿನ ಕೇರ್ಗಳ್ಳಿಯ ರಿಷಬ್ ಸಿದ್ದಿ ಲೇಔಟ್ ನಿವಾಸಿಯಾಗಿದ್ದು, ರಾಜ್ಯಾದ್ಯಂತ ಸಂಗೀತ ಕಾರ್ಯಕ್ರಮಗಳನ್ನು ನೀಡುತ್ತಿದ್ದಾರಲ್ಲದೇ, ಬಡಾವಣೆಯ ಮಹಿಳೆಯರಿಗೆ ಉಚಿತ ಸಂಗೀತ ಮತ್ತು ದೇವರನಾಮ ಕಲಿಸುವ ಕಾರ್ಯದಲ್ಲಿ ತೊಡಗಿದ್ದಾರೆ.

ನಕಲಿ ಕೀ ಬಳಸಿ ಚಿನ್ನಾಭರಣ ಕಳವು

ಮೈಸೂರು, ಸೆ.3(ಎಸ್‌ಬಿಡಿ)– ನಕಲಿ ಕೀ ಬಳಸಿ ಮನೆಯೊಂದರಲ್ಲಿ ಚಿನ್ನಾಭರಣ ದೋಚಿರುವ ಘಟನೆ ಮೈಸೂರಿನ ವಿಜಯನಗರ 4ನೇ ಹಂತದಲ್ಲಿ ನಡೆದಿದೆ.

ಇಲ್ಲಿನ ಬೆಳವಾಡಿ ರಸ್ತೆ, ಪಂಚಚಾರ್ಯ ಲೇಔಟ್ ನಿವಾಸಿ, ನಿವೃತ್ತ ಬೋಧಕ ಎಂ.ಚಂದ್ರಶೇಖರ್ ಅವರ ಮನೆಯಲ್ಲಿ ಸುಮಾರು 77 ಗ್ರಾಂ ಚಿನ್ನಾಭರಣ ಹಾಗೂ 5 ಸಾವಿರ ರೂ. ನಗದನ್ನು ಕಳ್ಳತನ ಮಾಡಲಾಗಿದೆ.

ಚಂದ್ರಶೇಖರ್ ಅವರ ಇಬ್ಬರು ಮಕ್ಕಳಲ್ಲಿ ಒಬ್ಬರು ಬೆಂಗಳೂರು ಮತ್ತೊಬ್ಬರು ಚಿಕ್ಕಮಗಳೂರಿನಲ್ಲಿ ನೆಲೆಸಿದ್ದಾರೆ. ಕಳೆದ ಎರಡು ವರ್ಷಗಳಿಂದ ವಿಜಯನಗರದಲ್ಲಿ ನೆಲೆಸಿರುವ ಚಂದ್ರಶೇಖರ್ ದಂಪತಿ, ಆ.17ರಂದು ಮನೆಗೆ ಬೀಗ ಹಾಕಿಕೊಂಡು ಸಂಬಂಧಿಕರ ಗೃಹಪ್ರವೇಶ ಕಾರ್ಯಕ್ರಮಕ್ಕಾಗಿ ಶಿವಮೊಗ್ಗಕ್ಕೆ ಹೋಗಿದ್ದರು. ಅಲ್ಲಿಂದ ಚಿಕ್ಕಮಗಳೂರಿಗೆ ಹೋಗಿ ಆ.30ರಂದು ಸಂಜೆ ಮನೆಗೆ ವಾಪಸ್ಸಾದಾಗ ಮುಂಬಾಗಿಲು ತೆರೆದಿತ್ತು. ಒಳಹೋಗಿ ನೋಡಿದಾಗ ರೂಂನ ಕಬೋರ್ಡ್ ಬಾಗಿಲುಗಳು ತೆಗೆದಿದ್ದು, ಅಲ್ಲಿದ್ದ ಬಟ್ಟೆಗಳೆಲ್ಲಾ ಚೆಲ್ಲಾಪಿಲ್ಲಿಯಾಗಿ ಬಿದ್ದಿದ್ದವು. ಡ್ರಾಯರ್‌ನಲ್ಲಿ ನೋಡಿದಾಗ ಅದರಲ್ಲಿದ್ದ ಚಿನ್ನಾಭರಣ ಹಾಗೂ ಹಣ ಕಳವುವಾಗಿರುವುದು ತಿಳಿಯಿತು.

ಈ ಸಂಬಂಧ ವಿಜಯನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಖದೀಮರ ಪತ್ತೆಗೆ ಪೊಲೀಸರು ಶೋಧ ನಡೆಸಿದ್ದಾರೆ.

ಹೆಚ್.ಡಿ.ರೇವಣ್ಣ ಜಾಮೀನು ಷರತ್ತು ಸಡಿಲಿಸಿದ ನ್ಯಾಯಾಲಯ

ಬೆಂಗಳೂರು, ಸೆ.3– ಮೈಸೂರು ಜಿಲ್ಲೆಯ ಕೆ.ಆರ್.ನಗರ ಮಹಿಳೆಯ ಅಪಹರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾಮೀನು ಷರತ್ತು ಸಡಿಲಿಕೆ ಕೋರಿದ್ದ ಹೆಚ್.ಡಿ.ರೇವಣ್ಣ ಅವರ ಅರ್ಜಿಯನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಪುರಸ್ಕರಿಸಿದೆ. ಈ ಮೂಲಕ ಹೊರ ರಾಜ್ಯಗಳಿಗೆ ಸಂಚರಿಸಲು ಅನುಮತಿ ನೀಡಿದೆ. ಆದರೆ, ಕೋರ್ಟ್ ಅನುಮತಿಯಿಲ್ಲದೇ ದೇಶ ಬಿಟ್ಟು ತೆರಳದಂತೆ ಷರತ್ತು ಮಾರ್ಪಾಡು ಮಾಡಿ ವಿಶೇಷ ಕೋರ್ಟ್‌ನ ಜಡ್ಜ್ ಸಂತೋಷ್ ಗಜಾನನ ಭಟ್ ಆದೇಶಿಸಿದ್ದಾರೆ.

ಹಾಸನ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರದ್ದು ಎಂದು ಬಿಡುಗಡೆಯಾಗಿದ್ದ ಅಶ್ಲೀಲ ವಿಡಿಯೋದಲ್ಲಿ ನನ್ನ ತಾಯಿಯ ಚಿತ್ರವೂ ಇದ್ದು, ಇದೀಗ ಅವರು ಕಣ್ಮರೆಯಾಗಿದ್ದಾರೆ ಎಂದು ಮೇ 2ರ ತಡರಾತ್ರಿ ಮೈಸೂರಿನ ಕೆಆರ್ ನಗರ ಠಾಣೆಯಲ್ಲಿ ಸಂತ್ರಸ್ತೆ ಪುತ್ರ ದೂರು ನೀಡಿದ್ದರು.

ಪ್ರಾಧಿಕಾರದ ಸಭೆ ಕಾನೂನುಬಾಹಿರ

ಹಾಕಿ ರಾಜ್ಯ ಸರ್ಕಾರದ ಕ್ರಮದ ವಿರುದ್ಧ ಚಾಲೆಂಜ್ ಮಾಡುತ್ತೇವೆ ಎಂದ ಯದುವೀರ್, ಪ್ರಾಧಿಕಾರದ ಕಾಯ್ದೆ ಜಾರಿಗೆ ಬರಬಾರದು, ಪ್ರಾಧಿಕಾರದಿಂದ ನಮ್ಮ ನಂಬಿಕೆ, ಆಚರಣೆ, ಪರಂಪರೆಗೆ ಧಕ್ಕೆ ಬರುತ್ತದೆ ಎಂದರು. ಯದುವಂಶದವರು ಚಾಮುಂಡಿಬೆಟ್ಟದ ಪೋಷಕರು, ಈ ಹಕ್ಕನ್ನು ನಾವು ಯಾವತ್ತೂ ಬಿಟ್ಟುಕೊಡುವುದಿಲ್ಲ. ಚಾಮುಂಡಿಬೆಟ್ಟವನ್ನು ನಿಯಂತ್ರಿಸಲು ಸರ್ಕಾರ ಪ್ರಾಧಿಕಾರ ರಚನೆ ಮಾಡುತ್ತಿದೆ.

ಹುಂಡಿ ಹಣವನ್ನು ಆಯಾ ದೇವಸ್ಥಾನದ ಅಭಿವೃದ್ಧಿಗೇ ಬಳಸಬೇಕು. ಪ್ರಾಧಿಕಾರ ರಚನೆಯಾದರೆ ನಮ್ಮ ಧಾರ್ಮಿಕ ಆಚರಣೆಗಳಿಗೂ ಬ್ರೇಕ್ ಬೀಳುತ್ತದೆ ಎಂದು ಅವರು ಸುದ್ದಿಗಾರರಿಗೆ ತಿಳಿಸಿದರು.

ಗಣೇಶ ಚತುರ್ಥಿಗೂ ಮುನ್ನ ದರ್ಶನ್ ವಿರುದ್ಧ ಚಾರ್ಜ್‌ಶೀಟ್



ಪರಮೇಶ್ವರ್

ಬೆಂಗಳೂರು, ಸೆ.3(ಕೆಎಂಶಿ)–ಗಣೇಶ ಚತುರ್ಥಿಗೂ ಮುನ್ನವೇ ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಆರೋಪಿ ಚಿತ್ರ ನಟ ದರ್ಶನ್ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಕೆಯಾಗಲಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಇಂದಿಲ್ಲಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ಪ್ರಕರಣದ ತನಿಖೆ ಬಹುತೇಕ ಪೂರ್ಣಗೊಂಡಿದೆ, ದರ್ಶನ್ ಹಾಗೂ ಅವರ ಸಹಚರರ ವಿರುದ್ಧ ನ್ಯಾಯಾಲಯಕ್ಕೆ ಪ್ರಾಥಮಿಕ ಹಂತದ ಆರೋಪ ಪಟ್ಟಿ ಸಲ್ಲಿಸಲಾಗುವುದು ಎಂದರು. ಈ ಮಧ್ಯೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್, ಮೃತ ರೇಣುಕಾಸ್ವಾಮಿ ಕೊಲೆ ಪ್ರಕರಣದ ತನಿಖೆ ಪೂರ್ಣಗೊಂಡಿದ್ದು ಸಿದ್ಧಪಡಿಸಿರುವ ಚಾರ್ಜ್‌ಶೀಟ್ ಅನ್ನು ಅಡ್ವೋಕೇಟ್ ಜನರಲ್ ಅವರ ಸಲಹೆಗೆ ಕಳುಹಿಸಲಾಗಿತ್ತು.

ಅವರು ಕೆಲವು ಮಾರ್ಪಾಡುಗಳಿಗೆ ಸಲಹೆ ಮಾಡಿದ್ದಾರೆ, ಅದರ ಪರಿಷ್ಕರಣೆ ನಂತರ ಒಂದೆರಡು ದಿನದಲ್ಲೇ ನ್ಯಾಯಾಲಯಕ್ಕೆ ಸಲ್ಲಿಸುತ್ತೇವೆ. ಕೊಲೆ ಆರೋಪಿ ದರ್ಶನ್ ಸೇರಿದಂತೆ ಇತರರನ್ನು ಬಂಧಿಸಿ ಮೂರು ತಿಂಗಳಾಗುತ್ತಿದೆ, ನಾವು 90 ದಿನಗಳ ಮುನ್ನವೇ ಚಾರ್ಜ್‌ಶೀಟ್ ಸಲ್ಲಿಸಬೇಕಿದೆ ಎಂದು ಮಾಹಿತಿ ನೀಡಿದರು.

ಪ್ರಕರಣಕ್ಕೆ ಸಂಬಂಧಿಸಿದಂತೆ ಎಲ್ಲಾ ದಾಖಲೆ ಸಂಗ್ರಹಿಸಿದ್ದೇವೆ, ಬೆಂಗಳೂರಿನ ವಿಧಿ ವಿಜ್ಞಾನ ವರದಿ ಬಂದಿದೆ, ಹೈದರಾ



ಬಾದ್ ವಿಧಿ ವಿಜ್ಞಾನ ಪ್ರಯೋಗಾಲಯದ ವರದಿ ಬರಬೇಕಿದೆ. ನಮಗೆ ದೊರೆತಿರುವ ವರದಿಯನ್ನೇ ದಾಖಲೆಗೆ ಸೇರಿಸಿ ನ್ಯಾಯಾಲಯಕ್ಕೆ ಪ್ರಾಥಮಿಕ ಆರೋಪ ಪಟ್ಟಿ ಜೊತೆ ಸಲ್ಲಿಸುತ್ತೇವೆ, ಹೈದರಾಬಾದ್ ವರದಿ ಬಂದ ನಂತರ ಪೂರಕ ಆರೋಪಪಟ್ಟಿ ಸಲ್ಲಿಸಲಾಗುವುದು ಎಂದರು.

ಕಳೆದ ಜೂನ್ 9ರಂದು ರೇಣುಕಾಸ್ವಾಮಿ ಹತ್ಯೆಯಾಗಿತ್ತು, ಕೊಲೆಗೆ ಸಂಬಂಧಿಸಿದಂತೆ ದರ್ಶನ್ ಸೇರಿದಂತೆ ಇತರರನ್ನು 11ರಂದು ವಶಕ್ಕೆ ಪಡೆಯಲಾಗಿತ್ತು.

ಘಟನೆ ಸಮಯದಲ್ಲಿ ಆರು ಮಂದಿ ಆರೋಪಿಗಳು ಧರಿಸಿದ್ದ ಬಟ್ಟೆ, ಪಾದರಕ್ಷೆ ಹಾಗೂ ಚರ್ಮದ ವಸ್ತುಗಳು, ಅವರುಗಳ ಬಂಧನದ ನಂತರ ಅವರ ಮನೆಗಳಿಂದ ವಶಪಡಿಸಿಕೊಳ್ಳಲಾದ ವಸ್ತುಗಳೂ ಸೇರಿದಂತೆ 200ಕ್ಕೂ ಹೆಚ್ಚು ಸಾಕ್ಷ್ಯಗಳನ್ನು ತನಿಖಾಧಿಕಾರಿಗಳು ಸಂಗ್ರಹಿಸಿದ್ದಾರೆ. ರೇಣುಕಾಸ್ವಾಮಿ ತೀವ್ರತರ ಗಾಯ, ಆಘಾತ ಮತ್ತು ರಕ್ತಸ್ರಾವದಿಂದ ಸಾವನ್ನಪ್ಪಿರುವುದು, ಮರಣೋತ್ತರ ಪರೀಕ್ಷಾ ವರದಿಯಿಂದ ದೃಢಪಟ್ಟಿದೆ.

ಇದಾದ ನಂತರ ಪೋಲಿಸರು ಕಾನೂನು ತಜ್ಞರ ಸಲಹೆ ಪಡೆದು ಸವಿಸ್ತಾರವಾದ ಚಾರ್ಜ್‌ಶೀಟ್ ಸಿದ್ಧಪಡಿಸಿದ್ದು, ಯಾವುದೇ ಸಮಯದಲ್ಲಿ ನ್ಯಾಯಾಲಯಕ್ಕೆ ಸಲ್ಲಿಸಲಾಗುವುದು ಎಂದರು.

ಸಿಇಟಿ–ನೀಟ್ ಚಾಯ್ಸ್ ದಾಖಲು: ಇಂದು ಮಧ್ಯಾಹ್ನ 12 ಗಂಟೆಗೆ ಕೊನೆ

ಬೆಂಗಳೂರು, ಸೆ.3– ಯುಜಿಸಿಇಟಿ– ನೀಟ್ ಕೋರ್ಸ್‌ಗಳಲ್ಲಿ ಮೊದಲ ಸುತ್ತಿನಲ್ಲಿ ಸೀಟು ಹಂಚಿಕೆಯಾಗಿದೆ. ಸುಮಾರು 15 ಸಾವಿರ ಅಭ್ಯರ್ಥಿಗಳು ಯಾವ ಚಾಯ್ಸ್‌ಗಳನ್ನು ದಾಖಲು ಮಾಡಲಿಲ್ಲ. ಈ ಕಾರಣ ಅವರಿಗೆ ಅನುಕೂಲ ಆಗಲೆಂದು ಚಾಯ್ಸ್ ದಾಖಲು ದಿನಾಂಕವನ್ನು ಸೆ.4ರ ಮಧ್ಯಾಹ್ನ 12 ಗಂಟೆವರೆಗೆ ವಿಸ್ತರಿಸಲಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್. ಪ್ರಸನ್ನ ತಿಳಿಸಿದ್ದಾರೆ

ಚಾಯ್ಸ್ ದಾಖಲಿಗೆ ಸೆ.3ರ ರಾತ್ರಿ 12ಗಂಟೆವರೆಗೂ ಅವಕಾಶ ಇತ್ತು. ಅದನ್ನು ವಿಸ್ತರಿಸಲಾಗಿದೆ. ಹಾಗೆಯೇ ಶುಲ್ಕ ಪಾವತಿಗೆ ನಾಳೆ ಸಂಜೆ 4 ಗಂಟೆವರೆಗೆ ಅವಕಾಶ ಇರಲಿದೆ. ನಿಗದಿತ ಅವಧಿಯೊಳಗೆ ಚಾಯ್ಸ್ ದಾಖಲು ಮಾಡಿಕೊಳ್ಳದಿದ್ದರೆ ಅಂತಹ ಅಭ್ಯರ್ಥಿಗಳ ಸೀಟು ರದ್ದಾಗಲಿದೆ ಎಂದು ತಿಳಿಸಿದ್ದಾರೆ.

ಅಭ್ಯರ್ಥಿಗಳು ಕೊನೆ ದಿನಾಂಕದವರೆಗೂ ಕಾಯದೇ ಚಾಯ್ಸ್ ದಾಖಲು ಮಾಡಿ, ನಂತರದ ಪ್ರವೇಶ ಪ್ರಕ್ರಿಯೆಯಲ್ಲಿ ಭಾಗವಹಿಸಬೇಕು ಎಂದು ಸಲಹೆ ನೀಡಿದ್ದಾರೆ. ಶುಲ್ಕ ಪಾವತಿ ನಂತರ ಆದೇಶ ಪತ್ರ ಡೌನ್‌ಲೋಡ್ ಮಾಡಿಕೊಂಡು ಕಾಲೇಜುಗಳಿಗೆ ವರದಿ ಮಾಡಿಕೊಳ್ಳಬೇಕು ಎಂದು ಹೇಳಿದರು.

ಇವತ್ತಿನವರೆಗೂ 92 ಸಾವಿರ ಮಂದಿ ತಮ್ಮ ಚಾಯ್ಸ್ ದಾಖಲು ಮಾಡಿಕೊಂಡಿದ್ದಾರೆ ಎಂದು ಮಾಹಿತಿ ನೀಡಿದರು.

ನಕ್ಕರೆ ಅದೇ ಸ್ವರ್ಗ

ಹನುಮ : ಯಾಕೋ ಬಸ್ಯಾ ಬಹಳ ದಿನ ಆಯಿತು ಸ್ಕೂಲ್‌ಗೆ ಬರ್‍ತಿಲ್ಲ.. ಏನ್ ಪ್ರಾಬ್ಲಮ್?

ಬಸ್ಯಾ : ಆಗೇನಿಲ್ಲ! ನಮ್ಮಪ್ಪ ಹೇಳ್ಯಾನಾ ನಮ್ಗ ಎಲ್ಲಿ ಮರ್ಯಾದೆ ಸಿಗಲ್ವೊ ಅಂತಲ್ಲಿ ತಲೆ ಎತ್ತಿ ಸಹ ನೋಡಬಾರದಂತ. ಅದಕ್ಕ ಸ್ಕೂಲ್‌ಗೆ ಬರ್‍ತಿಲ್ಲ.

ಮೈಸೂರು ಮಿತ್ರ

ಬುಧವಾರ, 4 ಸೆಪ್ಟೆಂಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........

ಯಾವತ್ತೂ ಕಾಯುತ್ತಾ, ಯೋಚಿಸುತ್ತಾ ಕಾಲ ಕಳೆಯಬೇಡಿ. ಯಾಕೆಂದರೆ ಬದುಕು ಯೋಚನೆಗಿಂತಲೂ ವೇಗವಾಗಿ ಸಾಗುತ್ತಿರುತ್ತದೆ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಭಾಷೆ ಕೊಟ್ಟವನು ಪೋಷಣೆ ಮಾಡನೇ?

ನಿಮ್ಮ ಪತ್ರಗಳು

ರಿಫ್ಲೆಕ್ಟರ್, ಫ್ಲೆಕ್ಸಿಬಲ್ ರಿಫ್ಲೆಕ್ಟರ್ ಅಳವಡಿಸಿ



ಮಾನ್ಯರೆ,

ಮೈಸೂರಿನ ವಿಜಯನಗರ ಒಂದನೇ ಹಂತ, 2ನೇ ಮುಖ್ಯ ರಸ್ತೆ, 2ನೇ ತಿರುವು (ಆಧಾರ್ ಸೆಂಟರ್ ರಸ್ತೆ) ನಗರಪಾಲಿಕೆ ಬೋರ್‌ವೆಲ್ ಬಳಿ ಒಳಚರಂಡಿಯ ತೆರೆದ ಬಾಯಿಗೆ ಮುಚ್ಚಳಕ್ಕೆ ಬದಲಾಗಿ ಹಾಕಿರುವ ಅಪಾಯಕಾರಿಯಾಗಿದ್ದ ಕಿರಿದಾದ ಕಲ್ಲಿನ ಚಪ್ಪಡಿಯನ್ನು ಪತ್ರಿಕೆಯಲ್ಲಿ ಎರಡು ಬಾರಿ ಮಾಡಿದ ಮನವಿಗೆ ಸ್ಪಂದಿಸಿ ಬದಲಾಯಿಸಿರುತ್ತಾರೆ. ಅದಕ್ಕಾಗಿ ಮೆಚ್ಚಿನ 'ಮೈಸೂರು ಮಿತ್ರ'ನಿಗೆ ಹಾಗೂ ಪಾಲಿಕೆಗೆ ಧನ್ಯವಾದಗಳು. ಈ ಬಗ್ಗೆ ಪಾಲಿಕೆ ಆಯುಕ್ತರಿಗೆ ನನ್ನ ಸಲಹೆ ಏನೆಂದರೆ ಇಂತಹ ಮಾಧ್ಯಮ ವರದಿಗಳನ್ನು ಇತರೆ ಇಲಾಖೆಗಳಲ್ಲಿ ಸಾರ್ವಜನಿಕ ಸಂಪರ್ಕಾಧಿಕಾರಿ ಆಯಾ ದಿನವೇ ಇಲಾಖಾ ಮುಖ್ಯಸ್ಥರ ಗಮನಕ್ಕೆ ತರುತ್ತಾರೆ. ಅದರಂತೆ ನಿಮ್ಮ ವ್ಯಾಪ್ತಿಗೆ ಸಂಬಂಧಿಸಿದಂತೆ ಮಾಧ್ಯಮಗಳಲ್ಲಿ ಪ್ರಕಟವಾಗುವ ಸುದ್ದಿ, ವರದಿಗಳು ಇತ್ಯಾದಿಗಳನ್ನು ಪಾಲಿಕೆಯ ಸಾರ್ವಜನಿಕ ಸಂಪರ್ಕಾಧಿಕಾರಿ ನಿಮ್ಮ ಮತ್ತು ಸಂಬಂಧಪಟ್ಟ ವಿಭಾಗದ ಮುಖ್ಯಸ್ಥರ ಗಮನಕ್ಕೆ ಕೂಡಲೇ ತರುವಂತೆ ವ್ಯವಸ್ಥೆಯಾಗಬೇಕು. ಆಗ ಇಂತಹ ವಿಳಂಬಗಳಿಗೆ ಆಸ್ಪದವಿರುವುದಿಲ್ಲ.

ಹಲವಾರು ರಸ್ತೆ ವಿಭಜಕಗಳು ಆರಂಭವಾಗುವ ಕಡೆ ಅನೇಕ ಅಪಘಾತಗಳು ಆಗಿರುವುದನ್ನು ಆ ವಿಭಜಕಗಳ ಮುಕ್ಕಾದ ಆರಂಭಿಕ ಭಾಗಗಳನ್ನು ಗಮನಿಸಿದಾಗ ಗೊತ್ತಾಗುತ್ತದೆ. ಇದರಲ್ಲಿ ಎಷ್ಟು ಜನಕ್ಕೆ ಗಂಭೀರ ಪೆಟ್ಟಾಗಿರುತ್ತದೋ ಪ್ರಾಣಾಪಾಯವಾಗಿರುತ್ತದೋ ಎಂಬ ಆತಂಕ ಒಮ್ಮೆ ಮನಸಿನಲ್ಲಿ ಸುಳಿಯದಿರದು. ಇತ್ತೀಚೆಗಂತೂ ವಿಭಜಕಗಳು ಹೇಗಿರುತ್ತವೆಂದರೆ ಅದಕ್ಕೆ ಅಪ್ಪಳಿಸಿದ ವಾಹನಕ್ಕೆ ಹಾಗೂ ಸವಾರರಿಗೆ ಏನೂ ಬೇಕಾದರೂ ಆಗಲಿ ವಿಭಜಕಕ್ಕೆ ಏನೂ ಆಗಬಾರದು ಅನ್ನುವಷ್ಟು ಗಟ್ಟಿಮುಟ್ಟಾಗಿ ಹಾಗೂ ಯಾವುದೇ ಸೂಚನಾ ಫಲಕವನ್ನು ಹಾಕದೆ ಕಟ್ಟಿರುತ್ತಾರೆ. ರಾತ್ರಿ ಸಮಯವಂತೂ ಎದುರುಗಡೆಯಿಂದ ಬರುವ ವಾಹನದ ಬೆಳಕಿನಲ್ಲಿ ಆ ವಿಭಜಕ ಕಾಣುವುದೇ ಇಲ್ಲ. ಇದಕ್ಕೆ ಉದಾಹರಣೆಯಾಗಿ ಪಾಲಿಕೆಯ ಮುಂಭಾಗದಲ್ಲಿ ಇರುವ ಮುಕ್ಕಾದ ವಿಭಜಕವನ್ನೇ ಗಮನಿಸಬಹುದು. ಆದುದರಿಂದ ವಿಭಜಕ ಆರಂಭವಾಗುವ ಮುನ್ನ ಪ್ರಖರವಾದ ರಿಫ್ಲೆಕ್ಟರ್‌ಗಳನ್ನು ಹಾಗೂ ಫ್ಲೆಕ್ಸಿಬಲ್ ರಿಫ್ಲೆಕ್ಟರ್ ಪೈಪುಗಳನ್ನು ಹಾಕುವುದಲ್ಲದೇ ಅವುಗಳನ್ನು ಪ್ರತಿ ಮಾಹೆಗೆ ಒಂದು ದಿನವಾದರೂ ಪರಿಶೀಲಿಸಿ ನಿರ್ವಹಣೆ ಮಾಡಿದಲ್ಲಿ ಸಾಕಷ್ಟು ಅಪಘಾತಗಳು ಹಾಗು ಜೀವಹಾನಿಯನ್ನು ತಡೆಗಟ್ಟಬಹುದು.

–ಕೆ.ಎಂ. ನಾಗರಾಜು, ವಿಜಯನಗರ 1ನೇ ಹಂತ, ಮೈಸೂರು

ಪಾದಚಾರಿ ಮಾರ್ಗ ತೆರವಿಗೆ ಮನವಿ



ಮಾನ್ಯರೆ,

ಮೈಸೂರಿನ ದಕ್ಷಿಣ ಭಾಗದಲ್ಲಿರುವ ಜೆ.ಪಿ. ನಗರದ ಗೊಬ್ಬಳಿಮರ ಸರ್ಕಲ್ ಮತ್ತು ಸುತ್ತಮುತ್ತಲಿನ ಮುಖ್ಯ ರಸ್ತೆಗಳ ಅಕ್ಕ–ಪಕ್ಕದಲ್ಲಿ ಪಾದಚಾರಿ ಮಾರ್ಗಗಳನ್ನು ಆಕ್ರಮಣ ಮಾಡಿಕೊಂಡು ಹೋಟೇಲ್‌ಗಳು, ಬೇಕರಿ, ಹಣ್ಣು ಹಂಪಲು, ತರಕಾರಿ ಅಂಗಡಿಗಳು, ಹೂವಿನ ಅಂಗಡಿಗಳವರು ಆಕ್ರಮಿಸಿಕೊಂಡು ದಿನನಿತ್ಯ ವ್ಯಾಪಾರ ವಹಿವಾಟು ಮಾಡುತ್ತಿರುವುದರಿಂದ ಪಾದಚಾರಿಗಳಿಗೆ ತುಂಬಾ ತೊಂದರೆಯಾಗಿದೆ. ವ್ಯಾಪಾರಿಗಳು ವಾಹನಗಳ ಪಾರ್ಕಿಂಗ್ ಜಾಗವನ್ನು ಸಹ ಬಿಟ್ಟಿಲ್ಲ. ಈ ಪ್ರದೇಶವು ಹೆಚ್ಚು ಜನಸಂಖ್ಯೆ ಹೊಂದಿರುವುದರಿಂದ ವಿದ್ಯಾರ್ಥಿಗಳು, ಹಿರಿಯ ನಾಗರಿಕರು, ಮಹಿಳೆಯರು ಸೇರಿದಂತೆ ಇತರರಿಗೆ ಪಾದಚಾರಿ ಮಾರ್ಗದಲ್ಲಿ ನಡೆದಾಡಲು ಕಷ್ಟಕರವಾಗಿದೆ. ಇದರಿಂದಾಗಿ ಸಾರ್ವಜನಿಕರು ರಸ್ತೆಯ ಮಧ್ಯದಲ್ಲಿಯೇ ನಡೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಅಲ್ಲದೆ ಮುಖ್ಯ ರಸ್ತೆಯ ತಿರುವಿನಲ್ಲಿ ಆಗಾಗ ಅಪಘಾತಗಳು ಸಹ ಸಂಭವಿಸುತ್ತಿವೆ. ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಜನಪ್ರತಿನಿಧಿಗಳು ಮತ್ತು ನಗರಪಾಲಿಕೆ ಅಧಿಕಾರಿಗಳು ಕೂಡಲೇ ಜೆ.ಪಿ.ನಗರದ ಪಾದಚಾರಿ ಮಾರ್ಗಗಳಿಗೆ ಭೇಟಿ ನೀಡಿ ಸಮಸ್ಯೆ ಗಮನಿಸಿ ಪಾದಚಾರಿ ಮಾರ್ಗವನ್ನು ತೆರವುಗೊಳಿಸಬೇಕಾಗಿ ವಿನಂತಿ.

–ನಾಗೇಶ್, ಮಾನಸಗಂಗೋತ್ರಿ, ಮೈಸೂರು

ಮೈ'ಸೂರೆ' ಮಾಡೋ ಮೈಸೂರು

ಮಾನ್ಯರೆ,

ಒಂದೊಂದು ಊರು ಒಂದೊಂದು ವಿಷಯಕ್ಕೆ ಪ್ರಸಿದ್ಧಿ ಪಡೆದಿರುತ್ತದೆ. ಆದರೆ 'ಮೈಸೂರು' ಎಂಬ ಪಾರಂಪರಿಕ ನಗರಿ, ಸ್ವಚ್ಛ ನಗರಿ ಅನೇಕ ವಿಷಯಗಳಿಂದ ಪ್ರಸಿದ್ಧಿ ಪಡೆದಿದೆ. ಇಲ್ಲಿ ಸಿಗುವ ಮೈಸೂರು ರೇಷ್ಮೆ ಸೀರೆ, ಮೈಸೂರು ಪಾಕು, ಮೈಸೂರು ಮಲ್ಲಿಗೆ, ಮೈಸೂರು ಮಸಾಲೆ ದೋಸೆ, ಮೈಸೂರು ಸ್ಯಾಂಡಲ್, ಮೈಸೂರು ವೀಳ್ಯದೆಲೆ, ಮೈಸೂರು ಕಾಸಿನ ಸರ, ಮೈಸೂರು ವೀಣೆ, ನಂಜನಗೂಡು ರಸಬಾಳೆ ಮುಂತಾದವುಗಳು ಮೈಸೂರಿಗೆ ಮೆರಗು ತಂದುಕೊಟ್ಟಿವೆ. ಮೈಸೂರಿನಲ್ಲಿ ಮೈಸೂರು ವಿಶ್ವವಿದ್ಯಾಲಯ ಮಾನಸಗಂಗೋತ್ರಿ, ಮೆಡಿಕಲ್ ಕಾಲೇಜು, ಇಂಜನಿಯರಿಂಗ್ ಕಾಲೇಜ್‌ಗಳು ಸಾಕಷ್ಟಿದ್ದು ಶೈಕ್ಷಣಿಕ ಕ್ಷೇತ್ರದಲ್ಲೂ ಮುಂದಿದೆ. ಪ್ರಸಿದ್ಧ ಪ್ರವಾಸಿ ತಾಣಗಳಾದ ಕೃಷ್ಣರಾಜ ಸಾಗರ, ಮೈಸೂರು ಅರಮನೆ, ಮೃಗಾಲಯ, ಚಾಮುಂಡಿ ಬೆಟ್ಟ, ನಂಜನಗೂಡು, ಶ್ರೀರಂಗಪಟ್ಟಣ ಮುಂತಾದ ಸ್ಥಳಗಳು ಪ್ರವಾಸಿಗರ ಮೆಚ್ಚಿನ ತಾಣಗಳಾಗಿವೆ. ಇಲ್ಲಿ ನಡೆಯುವ ಮೈಸೂರು ದಸರಾ ಜಗತ್ಪ್ರಸಿದ್ಧಿ ಪಡೆದಿದ್ದು ಪ್ರತೀ ವರ್ಷ ಲಕ್ಷಾಂತರ ಜನ ಬಂದು ನೋಡಿ ಕಣ್ಣು ತುಂಬಿಕೊಳ್ಳುತ್ತಿದ್ದಾರೆ. ಮುಮ್ಮಡಿ ಕೃಷ್ಣರಾಜ ಒಡೆಯರ್ ಆಳ್ವಿಕೆಯಿಂದ ಹಿಡಿದು ಜಯಚಾಮರಾಜ ಒಡೆಯರ್ ಆಳ್ವಿಕೆವರೆಗೂ ಅನೇಕ ಒಳ್ಳೆಯ ಕೆಲಸಗಳು, ಅಭಿವೃದ್ಧಿಯು ಆಗಿದೆ. ನಂತರವೂ ಆಗಿದೆ.

ಇಷ್ಟೆಲ್ಲಾ ಹೆಸರುವಾಸಿಯಾದ ಪ್ರಸಿದ್ಧಿ ಪಡೆದ ಮೈಸೂರು ನಗರ ಇತ್ತೀಚೆಗೆ 'ಮುಡಾ' ಹಗರಣದಿಂದ ಬೇರೆ ರೀತಿಯಲ್ಲಿ ಜನರ ಗಮನಸೆಳೆಯುತ್ತಿರುವುದು ಬೇಸರದ ವಿಷಯ.

ಇಂತಹ ಸುಂದರ ನಗರ ಮೈಸೂರಿನಲ್ಲಿ ತನ್ನದೊಂದು ಸೂರು (My 'ಸೂರು') ಮಾಡಿಕೊಳ್ಳಬೇಕೆಂದು ಅನೇಕರ ಕನಸಾಗಿರುತ್ತದೆ. ಅವರ ಕನಸ್ಸು ನನಸು ಮಾಡಲು ಸ್ಥಾಪಿಸಿದ ಈ ಸಂಸ್ಥೆ ಮೂಲ ಆಶಯದಂತೆ ಇನ್ನಾದರೂ ನಡೆಯಲಿ. ಪಾರದರ್ಶಕತೆ, ಪ್ರಾಮಾಣಿಕತೆಯಿಂದ ಅಗತ್ಯವಿದ್ದವರಿಗೆ, ಅರ್ಹತೆ ಇದ್ದವರಿಗೆ ವಸತಿ ಕಲ್ಪಿಸುವ ಕೆಲಸವಾಗಲಿ. ಒಳ್ಳೆಯ ವಿಷಯಗಳಿಗೆ ಹೆಸರು ಮಾಡಿದ ಪಾರಂಪರಿಕ ನಗರ ಮೈಸೂರಿನ ಘನತೆ, ಗೌರವಕ್ಕೆ ಚ್ಯುತಿ ಬರದೆ ಇರುವ ಹಾಗೆ ನೋಡಿಕೊಳ್ಳುವ ಜವಾಬ್ದಾರಿ ರಾಜಕಾರಣಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳ ಮೇಲಿದೆ.

–ರಾಘವೇಂದ್ರ ಜೋಯಿಸ್, ಮೈಸೂರು



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಹರಿದಾಸರ ಮುಂಡಿಗೆಗಳು: ಸ್ವರೂಪ ಮತ್ತು ಸೌಂದರ್ಯ

ಕನ್ನಡ ಸಾಹಿತ್ಯದ ಎರಡು ಕಣ್ಣುಗಳೆಂದರೆ ದಾಸ ಸಾಹಿತ್ಯ ಮತ್ತು ವಚನ ಸಾಹಿತ್ಯ. ಕನ್ನಡದ ಬೆಳವಣಿಗೆಗೆ ಮತ್ತು ವೈಭವಕ್ಕೆ ಹರಿದಾಸರ ಕೊಡುಗೆ ಅಪ್ರತಿಮ, ಅಪಾರ. ಹರಿಭಕ್ತಿಯ ಸಂದೇಶವನ್ನು ಮಾಧ್ವ ಸಿದ್ಧಾಂತದ ಸಾರವನ್ನೂ ಜನಸಾಮಾನ್ಯರಿಗೆ ಸರಳ ಕನ್ನಡದ ನುಡಿಯಲ್ಲಿ ತಲುಪಿಸುವ ಕಾರ್ಯವನ್ನು ಹರಿದಾಸರು ಮಾಡಿದರು. ಪುರಂದರ ದಾಸರು, ಕನಕದಾಸರು ಕನ್ನಡದ ಭಾಗ್ಯದಿಂದ ಇಲ್ಲಿ ಹುಟ್ಟಿ ಸಾಹಿತ್ಯ ರಚನೆಯನ್ನು ಮಾಡಿದರು. ಎಷ್ಟು ಶತಮಾನಗಳು ಕಳೆದರೂ ಅವರ ಕೀರ್ತನೆಗಳ ಸವಿ ಕಡಿಮೆಯಾಗಿಲ್ಲ. ನಾವು ಜಗತ್ತಿನಲ್ಲಿ ನಮ್ಮ ಭಾಷೆಯ ಸಾಹಿತ್ಯದ ರತ್ನಗಳೆಂದು ಹೆಮ್ಮೆಯಿಂದ ಹೇಳಿಕೊಳ್ಳಬಹುದಾದ ರಚನೆಗಳನ್ನು ಹರಿದಾಸರು ಕೊಟ್ಟಿದ್ದಾರೆ.

ಹರಿದಾಸ ಸಾಹಿತ್ಯದಲ್ಲಿ ಮುಂಡಿಗೆಗಳೆಂಬ ವಿಶಿಷ್ಟ ಕೃತಿಗಳಿವೆ. ಇವುಗಳ ಬಗೆಗೆ ತಿಳಿದುಕೊಂಡಿರುವ ವಿದ್ವಾಂಸರು ವಿರಳ. ನಮ್ಮ ಸುದೈವದಿಂದ ಪ್ರಾಚೀನ ಮತ್ತು ಆಧುನಿಕ ಮುಂಡಿಗೆಗಳ ಆಳವಾದ ಅಧ್ಯಯನ ಮತ್ತು ವಿಮರ್ಶೆಯನ್ನು ಮಾಡಿ ಡಾ. ಕಬ್ಬಿನಾಲೆ ವಸಂತ ಭಾರದ್ವಾಜರು ರಚಿಸಿರುವ ಗ್ರಂಥ ಹರಿದಾಸರ ಮುಂಡಿಗೆಗಳು : ಸ್ವರೂಪ ಮತ್ತು ಸೌಂದರ್ಯ. ಅತ್ಯಂತ ಅಮೂಲ್ಯವಾದ ಈ ಗ್ರಂಥವನ್ನು ಮೈಸೂರಿನ ಡಾ. ಕೆ. ಕೃಷ್ಣಮೂರ್ತಿ ಸಂಶೋಧನಾ ಪ್ರತಿಷ್ಠಾನವು ಬೆಳಕಿಗೆ ತಂದು ವಿದ್ವತ್ ಪ್ರಪಂಚಕ್ಕೆ ಮಹೋಪಕಾರವನ್ನು ಮಾಡಿದೆ.

ಡಾ. ವಸಂತ ಭಾರದ್ವಾಜರು ಬಹುಮುಖ ಪ್ರತಿಭೆಯ ವ್ಯಕ್ತಿ. ಅವರು ಸಭೆಯಲ್ಲಿ ಮಾತನಾಡಿದರೆ ಸಾಮಾನ್ಯರಿರಲಿ, ಸಾಕ್ಷಾತ್ ನಿಟಿಲಾಕ್ಷನೂ ತಲೆದೂಗುತ್ತಾನೆ. ಅವರ ಬರವಣಿಗೆಯಲ್ಲಿ ಕನ್ನಡದ ಪದಗಳು ಹೊಸ ಜೀವಂತಿಕೆಯನ್ನು ಪಡೆಯುತ್ತವೆ. ಅಷ್ಟಾವಧಾನದಲ್ಲಿ ಅವರು ಅಷ್ಟಮೂರ್ತಿ ಶಿವನಾಗುತ್ತಾರೆ. ಯಕ್ಷಗಾನದಲ್ಲಿ ಅವರು ವೀಕ್ಷಕರನ್ನು ಯಕ್ಷಲೋಕ ಪ್ರವಾಸಿಗಳನ್ನಾಗಿ ಮಾಡುತ್ತಾರೆ. ವಿದ್ವಜ್ಜನರು ಇಷ್ಟಪಡುವ ಸಾಹಿತ್ಯವನ್ನೂ ಮಕ್ಕಳಿಗೆ ಇಷ್ಟವಾಗುವ ಶಿಶು ಸಾಹಿತ್ಯವನ್ನೂ ರಚಿಸಬಲ್ಲ ಸವ್ಯಸಾಚಿ ನಮ್ಮ ವಸಂತ ಭಾರದ್ವಾಜ್. ಪ್ರತಿಭೆ, ಪರಿಶ್ರಮ, ಅಧ್ಯಯನಗಳ ಸಂಗಮ. ಅವರು ರಚಿಸಿರುವ ಸಾಹಿತ್ಯ ಬೃಹತ್ತೂ ಮಹತ್ತೂ ಆಗಿದೆ.

ಮುಂಡಿಗೆ ಎಂದರೇನು?

ಪುಸ್ತಕದ ಒಂದನೆಯ ಅಧ್ಯಾಯದಲ್ಲಿ ಈ ಪ್ರಶ್ನೆಯ ಉತ್ತರವನ್ನು ಭಾರದ್ವಾಜರು ಹೀಗೆ ಕೊಟ್ಟಿದ್ದಾರೆ. "ಕಟ್ಟಿಗೆಯ ದೊಡ್ಡ ತೊಲೆಯೆಂಬ ಅರ್ಥದಲ್ಲಿ 'ಮುಂಡಿಗೆ' ಬಳಕೆಯಾಗಿರುವುದರಿಂದ ಎತ್ತಲು ಕಷ್ಟಸಾಧ್ಯವೆಂಬ ಅರ್ಥವನ್ನು ಕೆಲವರು ಹೇಳಿದ್ದುಂಟು. ಅಬಿಂದುಕರೂಪವಾದ 'ಮುಡಿಗೆ' ಎಂಬುದು ಮುಂಡಾಸನ್ನು ಸೂಚಿಸುವುದರಿಂದ, ಸವಾಲೆಸೆಯುವ ಸಂದರ್ಭಗಳಲ್ಲಿ ಮುಂಡಾಸಿನ ಬಟ್ಟೆಯನ್ನು ಎಸೆಯುವ ಪರಿಪಾಟವಿದ್ದ ಕಾರಣದಿಂದ ಆ ಪ್ರಯೋಗ ಬಂದಿರಬೇಕೆಂದು ಇನ್ನು ಕೆಲವು ವಿದ್ವಾಂಸರು ಊಹಿಸಿದ್ದಾರೆ. ಹಾಗಾಗಿ ಮುಂಡಿಗೆ ಎಂದರೆ ಒಗಟಿನಂತೆ ಅರ್ಥೈಸಲು ಕಷ್ಟವಾದ ಕೀರ್ತನ ಪ್ರಕಾರ ಎಂದು ತಿಳಿಯಬಹುದು. 'ಹರಿದಾಸ ಕನಕನು ಹಾಕಿದ ಮುಂಡಿಗೆ' ಎಂದು ಕನಕದಾಸರು ಹೇಳಿರುವುದರಿಂದ ಹದಿನಾರನೆಯ ಶತಮಾನದಲ್ಲೇ ಈ ಪ್ರಯೋಗವಿದ್ದಿತೆಂದು ಭಾವಿಸಬಹುದು. (ಪು. 1)

ಮುಂಡಿಗೆಗಳು ಸಾಮಾನ್ಯ ಕೀರ್ತನೆಗಳಷ್ಟು ಜನಪ್ರಿಯವಾಗಿಲ್ಲದೆ ಇರುವುದಕ್ಕೆ ಅವುಗಳನ್ನು ಅರ್ಥೈಸುವುದರಲ್ಲಿರುವ ಕಷ್ಟವೂ ಕಾರಣ ಆಗಿರಬಹುದು. ಶ್ರೋತೃಗಳಿಗೆ ಅವು ಒಂದು ಸವಾಲು. ಪ್ರಸ್ತುತ ಗ್ರಂಥಕಾರ ಡಾ. ವಸಂತ ಭಾರದ್ವಾಜರು ಉದಾಹರಿಸಿರುವ ಮುಂಡಿಗೆಗಳಿಗೆ ಸ್ವಯಂ ಅರ್ಥವನ್ನು ವಿವರಿಸಿರುವುದರಿಂದ ಎಲ್ಲರೂ ಅವುಗಳ ಸ್ವಾರಸ್ಯವನ್ನು ಆಸ್ವಾದಿಸಬಹುದು. ಮೊದಲು ಮುಂಡಿಗೆಯನ್ನು ಓದಬೇಕು. ಆಮೇಲೆ ಅದರ ಅರ್ಥವನ್ನು ಊಹಿಸಲು ಪ್ರಯತ್ನಿಸಬೇಕು. ಅನಂತರ ಗ್ರಂಥಕಾರರು ಕೊಟ್ಟಿರುವ ವಿವರಣೆಯನ್ನು ಓದಬೇಕು. ಆಗ ಮುಂಡಿಗೆಯ ಸವಿ ಮದುವೆಯ ಊಟದಲ್ಲಿ ಬಡಿಸುವ ಮುಂಡಿಗೆಯ ಸವಿಗಿಂತ ಹೆಚ್ಚಿನದು ಎಂಬ ಅನುಭವವಾಗುತ್ತದೆ. ಉದಾಹರಣೆಗೆ ಪುರಂದರದಾಸರ ಒಂದು ಮುಂಡಿಗೆಯನ್ನು ನೋಡೋಣ–

ಪುಟ್ಟಿದಾರಭ್ಯ ಕಣ್ಣು ಮುಚ್ಚ ನಮ್ಮಾ
ಎಷ್ಟಾದರೂ ಮೊಲೆ ಉಣ್ಣನಮ್ಮಾ
ತುಟುಕು ಮುಖ ಮೇಲಕ್ಕೆತ್ತನಮ್ಮಾ
ಎಷ್ಟು ಹೇಳಲಿ ಬಾಯಿ ಮುಚ್ಚನಮ್ಮಾ॥
ಕಾಯ ಇದ್ದ ಹಾಗಿದ್ದು, ಹೆಚ್ಚಿತಮ್ಮಾ
ಹೆತ್ತ ತಾಯಿ ನೆಲೆ ಇಲ್ಲವಾಯಿತಮ್ಮಾ
ನೋಯ ನೋಟದಿ ಅಬ್ಧಿ ಭತ್ತಿತಮ್ಮಾ
ಇವನ ಬಾಯೊಳಗೆ ವಿಶ್ವ ತೋರಿತಮ್ಮಾ॥
ಅತ್ಯಂತ ಮಾತುಗಳ ಆಡುವನಮ್ಮಾ
ಮುಂದೆ ಸತ್ಯಾಗಿ ಕುದುರೆ ಏರುವನಮ್ಮಾ
ನಿತ್ಯ ನಿರ್ದೋಷ ಶ್ರೀ ಪುರಂದರವಿಠಲನು ತನ್ನ
ಭಕ್ತರ ಸಲಹುವ ದೇವನಮ್ಮಾ ॥

ಇಲ್ಲಿ ಯಾವುದೋ ಮಗುವಿನ ಬಗೆಗೆ ತಾಯಿ ಹೇಳಿದ ಮಾತು ಎಂದು ಮಾತ್ರ ನಮಗೆ ತೋರುತ್ತದೆ. ಆದರೆ ಭಾರದ್ವಾಜರು ಇಲ್ಲಿ ದಶಾವತಾರಗಳ ಕಥೆಯನ್ನು ತೋರಿಸುತ್ತಾರೆ.

ಹುಟ್ಟಿದಾರಭ್ಯ ಕಣ್ಣನ್ನು ಮುಚ್ಚದಿರುವುದು ಮೀನು. ಅದಕ್ಕೆ ರೆಪ್ಪೆಗಳೇ ಇಲ್ಲವಲ್ಲ! ಎಂದರೆ ಮತ್ಸ್ಯಾವತಾರ. ಮೊಲೆಯನ್ನು ಎಂದೂ ಉಣ್ಣದ ಪ್ರಾಣಿ ಆಮೆ. ಎಂದರೆ ಕೂರ್ಮಾವತಾರ. ಮುಖವನ್ನು ಮೇಲಕ್ಕೆ ಎತ್ತಲಾಗದ ಪ್ರಾಣಿ ಹಂದಿ ಎಂದರೆ ವರಾಹಾವತಾರ. ಬಾಯಿ ಮುಚ್ಚದ ಸಿಂಹ ಎಂದರೆ ನರಸಿಂಹಾವತಾರ. ಇದ್ದ ಹಾಗಿದ್ದು ಕಾಯ ಹೆಚ್ಚಿತು ಎಂದರೆ ವಾಮನಾವತಾರ. ಅದರಲ್ಲಿ ವಾಮನನು ತ್ರಿವಿಕ್ರಮನಾಗಿ ಬೆಳೆದವನಲ್ಲವೆ?

ಹೆತ್ತ ತಾಯಿ ನೆಲೆ (ತಲೆ) ಇಲ್ಲದಾಯಿತಮ್ಮಾ ಎಂದರೆ ತಾಯಿ ರೇಣುಕೆಯ ತಲೆಯನ್ನೇ ಕಡಿದ ಪರಶುರಾಮಾವತಾರ, ನೋಟದಿಂದಲೇ ಅಬ್ಧಿಯನ್ನು (ಸಮುದ್ರವನ್ನು) ಬತ್ತಿಸಿದ್ದು ರಾಮಾವತಾರ, ಬಾಯಿಯಲ್ಲಿ ತಾಯಿಗೆ ವಿಶ್ವವನ್ನು ತೋರಿಸಿದ್ದು ಕೃಷ್ಣಾವತಾರ, ಮಾತುಗಳನ್ನಾಡಿ ಉಪದೇಶವನ್ನು ಮಾಡಿದ್ದು ಬೌದ್ಧಾವತಾರ, ಕುದುರೆಯನ್ನೇರಿ ಧರ್ಮವನ್ನು ರಕ್ಷಿಸುವುದು ಕಲ್ಕಿಯ ಅವತಾರ. ಭಾರದ್ವಾಜರ ವಿವರಣೆ ಇಲ್ಲದೇ ಈ ಸೂಕ್ಷ್ಮಾರ್ಥಗಳು ನಮಗೆಲ್ಲಿ ತಿಳಿಯುತ್ತಿದ್ದುವು. ಇಂತಹ ನೂರನಲವತ್ತು ಮುಂಡಿಗೆಗಳು ಈ ಪುಸ್ತಕದಲ್ಲಿವೆ ಎಂಬುದು ಈ ಗ್ರಂಥಕಾರರ ಚಿಂತನೆಯ ಆಳ–ಅಗಲಗಳನ್ನು ತಿಳಿಸುತ್ತದೆ.

ವಿಶೇಷವೆಂದರೆ ಮುಂಡಿಗೆಗಳನ್ನು ಬರೆದಿರುವವರು ಕೇವಲ ಪುರಂದರದಾಸಾದಿ ಪ್ರಾಚೀನರಲ್ಲ. ನಮ್ಮ ಎದುರಿನಲ್ಲೇ ಇದ್ದ ಕೆಲವರು ಅಧುನಿಕರೂ ಬರೆದಿದ್ದಾರೆ ಎಂದು ಭಾರದ್ವಾಜರು ಸೋದಾಹರಣ ಮಾಹಿತಿ ಕೊಟ್ಟಿದ್ದಾರೆ. ದಿ ಬನ್ನಂಜೆ ಗೋವಿಂದಾಚಾರ್ಯ, ಡಾ. ಅರಳು ಮಲ್ಲಿಗೆ ಪಾರ್ಥಸಾರಥಿ, ರತ್ನಾಮೂರ್ತಿ ಮುಂತಾದವರೂ ಮುಂಡಿಗೆಗಳನ್ನು ರಚಿಸಿದ್ದಾರೆ. ರತ್ನಾ ಮೂರ್ತಿಯವರ ಒಂದು ಮುಂಡಿಗೆ ಇಂತಿದೆ–

ಎಲ್ಲರೂ ಒಪ್ಪುವಂತರೆ ಹೇಳಬಹುದೇನು
ನಿಲ್ಲದೆಲೆ ಅರಿಯುತಿರ ಗುರಿಮುಟ್ಟದೇನು
ತಾತ ಮೊಮ್ಮಗರಿವರು ಎರವಿನಾ ಶಿರದವರು
ವೀತಿಹೋತ್ರಜರಿವರು ಬೇರೆ ಯುಗದವರು
ಪ್ರೇತಪತಿಸೋದರರು ಮನ್ವಂತರಾಧಿಪರು
ಸೂತ್ರಧಾರರು ಇವರು ಅಣ್ಣತಮ್ಮಂದಿರು

ನಾಗಮರ್ದಿಸಿದವರು ಭಾವ ಭಾಮೈದುನರು
ಕಾಗೆಯಾದವರಿವರು ಸೋದರರ ಸುತರು.
ಭಾಗಿನೇಯರ ಇವರು ಬದ್ಧಹಗೆಯಾದವರು
ಭೋಗಿ ಭಂಜಕರಿವರು ತುರಗವಾದವರು
ಶಕಲಗಳ ಜೋಡಿಸುತ ಜೀವ ತುಂಬಿದಳಿವಳು
ಶಕಲವಾಗಿಸುತೆಸೆದು ಅಸುಗಳೆದನಿವನು
ವಿಕಲಕೃತ್ಯಕೆ ಕೆರಳಿ ಛಾತಿ ಬಗೆದವರಿವರು
ಸಕಲವನು ಬಲ್ಲವನು ಚೆನ್ನಕೇಶವನು

ಇತಿಹಾಸ ಪುರಾಣಗಳ ಜ್ಞಾನವಿದ್ದವರಿಗೆ ಮಾತ್ರ ಈ ಮುಂಡಿಗೆಯ ಅರ್ಥ ಹೊಳೆಯುತ್ತದೆ. ಎರವಿನ ಶಿರವನ್ನು (ತಲೆಯನ್ನು) ಪಡೆದ ತಾತ–ಮೊಮ್ಮಗ ಎಂದರೆ ದಕ್ಷ ಮತ್ತು ಗಣಪತಿ. ದಕ್ಷನ ಮಗಳಾಗಿದ್ದ ಪಾರ್ವತಿಯ ಮಗ ಗಣಪತಿಯಾದ್ದರಿಂದ ಅವರು ತಾತ–ಮೊಮ್ಮಗ ಅವರಿಬ್ಬರಿಗೂ ತಲೆ ಹೋದ ಮೇಲೆ ಎರವಿನ ತಲೆಗಳು ಬಂದುವು ಎಂಬುದನ್ನಿಲ್ಲಿ ಸ್ಮರಿಸಿಕೊಳ್ಳಬೇಕು. ಇದೇ ರೀತಿ ಪೌರಾಣಿಕ ಕಥೆಗಳ ಆಧಾರದಿಂದ ಈ ಮುಂಡಿಗೆ ರಚಿತವಾಗಿದೆ. ಎಲ್ಲ ಅರ್ಥಗಳನ್ನೂ ಗ್ರಂಥಕಾರರು ಸಾಧಾರವಾಗಿ ವಿವರಿಸಿದ್ದಾರೆ.

ಯೋಗಶಾಸ್ತ್ರ ಪ್ರವೀಣರಾಗಿದ್ದ ವಾದಿರಾಜರ ಮುಂಡಿಗೆಗಳನ್ನು ಈ ಗ್ರಂಥದ ಒಂದು ಅಧ್ಯಾಯದಲ್ಲಿ ಕೊಡಲಾಗಿದೆ.

ನೆಲದಲ್ಲಿ ಪಸರಿಸಿದ ಪಾಲಮೇಲೊರಗಿದ್ದ
ಹಳೆಯ ಹಾವ ಕಂಡೆನದಶಲದ್ಭುತವ ಕಂಡೆ
ನಡುಗಡಿದ ಸಿಂಗಡಿಯ ಬಿಲ್ಲ ಕಂಡೆನೆದರ
ಮೇಲ್ಲಡೆಯಲಧೋಮುಖದ ತುಂಬಿಗಳ ಹಿಂಡ ಕಂಡೆ
ಮಡುವೆರಡ ಕಡೆಯಲ್ಲಿ ಒಂದೊಂದು ಮಕರಿಯ ಕಂಡೆ
ಕಡೆದ ಶಂಖ ಚತುರ್ವೇದಕೊದಗುವುದಕಂಡೆ ॥

ಇತ್ಯಾದಿ. ಇದರಲ್ಲಿ ಮೂಲಾಧಾರ, ಸ್ವಾಧಿಷ್ಠಾನ ಮುಂತಾದ ದೇಹಸ್ಥ ಚಕ್ರಗಳ ವರ್ಣನೆ ಇದೆ ಎನ್ನಲಾಗಿದೆ. ಸಾವಿರ ಬಾರಿ ಓದಿದರೂ ಇದು ಸಾಮಾನ್ಯರ ಅನುಭವಕ್ಕೆ ಬರುವ ವಿಷಯವಲ್ಲ. ನನಗೆ ಕುಂಡಲಿನೀ ಜಾಗೃತವಾಗಿದೆ ಎಂದು ಹೇಳಿಕೊಂಡವರನ್ನೂ ನೋಡಿದ್ದೇವೆ. ಅದರಿಂದ ಅವರಿಗೆ ಯಾವ ಶಕ್ತಿಗಳು ಬಂದಿವೆಯೋ ನಮಗೆ ತಿಳಿಯುವುದಿಲ್ಲ. ಒಟ್ಟಿನಲ್ಲಿ ಹೇಳಬೇಕೆಂದರೆ ನಮಗೆ ಅರ್ಥವಾಗದ ವಿಷಯ. ಅದನ್ನು ಸಾಧಕರಿಗೇ ಬಿಡುವುದು ಲೇಸು. ಭಾರದ್ವಾಜರು ಪಾಂಡಿತ್ಯಪೂರ್ಣವಾಗಿ ಇದನ್ನು ವಿವರಿಸಿದ್ದಾರೆ. ಅಷ್ಟು ಯೋಗ ಸಾಧನೆಯನ್ನು ಮಾಡಿದವರಿಗೆ ಇದು ಅರ್ಥದ ಹೊಳಹನ್ನು ನೀಡಬಹುದೆಂದು ತೋರುತ್ತದೆ.

ಬೆಡಗಿನ ವಚನಗಳಂತೆ ಹಲವು ವ್ಯಾಖ್ಯಾನಗಳಿಗೆ ಮುಂಡಿಗೆಗಳು ಅವಕಾಶಗಳನ್ನು ಕೊಡಬಹುದು. ಇವು ಬುದ್ಧಿಶಕ್ತಿಗೆ ಸವಾಲುಗಳಾಗಿ ಚಿಂತನೆಯನ್ನು ಬೆಳೆಸಬಹುದು. ಮನಸ್ಸಿಗೆ ಒಪ್ಪುವ ಉತ್ತರವು ದೊರಕಿದಾಗ ಚಮತ್ಕಾರ ಉಂಟಾಗಿ ಹರ್ಷ ಉಂಟಾಗುವುದಂತೂ ಸತ್ಯ. ಕನ್ನಡ ಸಾಹಿತ್ಯದ ಈ ಆಯಾಮವನ್ನು ಓದುಗರ ಮುಂದೆ ಇಟ್ಟಿರುವ ವಿದ್ವದ್ವರೇಣ್ಯರಾದ ಡಾ. ಕಬ್ಬಿನಾಲೆ ವಸಂತ ಭಾರದ್ವಾಜ ಅವರಿಗೆ ತಲೆಬಾಗಿ ವಂದಿಸೋಣ. ವಿದ್ವತ್ ಕೃತಿಗಳು ಅತ್ಯಂತ ವಿರಳವಾಗಿರುವ ಈ ಕಾಲದಲ್ಲಿ ಆ ಕೊರತೆಯನ್ನು ನೀಗಿಸಲು ಅವರು ಮಾಡಿರುವ ಪ್ರಯತ್ನ ಸಾರ್ಥಕವಾಗಲೆಂದು ಆಶಿಸೋಣ.

ಕ್ರಿಮಿನಲ್ ಕೇಸು ದಾಖಲಿಸಿ ದಿನೇಶ್‌ಕುಮಾರ್‌ನನ್ನು ಬಂಧಿಸಿ

ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್‌ರಿಂದ ರಾಜೀನಾಮೆ ಪಡೆಯಬೇಕು: ಶಾಸಕ ಟಿ.ಎಸ್.ಶ್ರೀವತ್ಸ



ಟಿ.ಎಸ್.ಶ್ರೀವತ್ಸ

ಮೈಸೂರು, ಸೆ.3(ಆರ್‌ಕೆ)–ಅಕ್ರಮವಾಗಿ ನಿವೇಶನ ಹಂಚಿಕೆ ಹಗರಣದ ಪ್ರಮುಖ ರೂವಾರಿಯಾದ ಮುಡಾ ಮಾಜಿ ಆಯುಕ್ತ ಜಿ.ಟಿ.ದಿನೇಶ್ ಕುಮಾರ್ ವಿರುದ್ಧ ಕ್ರಿಮಿನಲ್ ಕೇಸು ದಾಖಲಿಸಿ ಅವರನ್ನು ಬಂಧಿಸುವಂತೆ ಶಾಸಕ ಟಿ.ಎಸ್.ಶ್ರೀವತ್ಸ ಅವರು ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಮೈಸೂರು ಮಹಾನಗರ ಪಾಲಿಕೆ ಕಚೇರಿಯಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿದ ಅವರು, ಜಿ.ಟಿ.ದಿನೇಶ್ ಕುಮಾರ್ ಅವರನ್ನು ಸೇವೆಯಿಂದ ಅಮಾನತು ಮಾಡಿರುವುದರಿಂದ ಮುಡಾದಲ್ಲಿ ಹಗರಣ ನಡೆದಿದೆ ಎಂದು ಸರ್ಕಾರವೇ ಒಪ್ಪಿಕೊಂಡಂತಾಗಿರುವುದರಿಂದ ಅವರ ವಿರುದ್ಧ ಕ್ರಿಮಿನಲ್ ಕೇಸು ದಾಖಲಿಸಿ ಕಾನೂನು ರೀತಿಯ ಕ್ರಮ ಜರುಗಿಸಬೇಕು ಎಂದು ಹೇಳಿದರು.

ತಪ್ಪು ಮಾಡಿದ ಅಧಿಕಾರಿಗಳಿಗೆ ಖಡಕ್ ಎಚ್ಚರಿಕೆ ನೀಡುತ್ತಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಮುಡಾ ನಿವೇಶನ ಹಂಚಿಕೆ ಹಗರಣದಲ್ಲಿ ಮೌನ ವಹಿಸುತ್ತಿರುವುದು ಸಂಶಯ ಮೂಡಿಸಿದೆ ಎಂದ ಅವರು, 50:50 ಅನುಪಾತದಡಿ ಅಕ್ರಮ ನಡೆದಿದೆ ಎಂದು ನಾನು ದೂರು ನೀಡಿದಾಗಲೇ ಆಯುಕ್ತರನ್ನು ಅಮಾನತುಗೊಳಿಸಿದ್ದರೆ ಮುಖ್ಯಮಂತ್ರಿಗಳಿಗೆ ಈ ಸ್ಥಿತಿ ಬರುತ್ತಿರಲಿಲ್ಲ ಎಂದು ಹೇಳಿದರು.



ದಿನೇಶ್‌ಕುಮಾರ್


ಈ ಪ್ರಕರಣದ ಮೂಲ ರೂವಾರಿಯಾದ ಹಿಂದಿನ ಮುಡಾ ಆಯುಕ್ತ ಡಾ. ಡಿ.ಬಿ.ನಟೇಶ್‌ರನ್ನೂ ಅಮಾನತುಗೊಳಿಸಬೇಕು. ವಿಷಯ ತಿಳಿದಿದ್ದರೂ ತಡೆಯದೇ ಕುಮ್ಮಕ್ಕು ನೀಡಿರುವ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂದು ಶ್ರೀವತ್ಸ ಒತ್ತಾಯಿಸಿದರು.

50:50 ಅನುಪಾತದಡಿ 2009ನೇ ಸಾಲಿನ ನಂತರದ ಪ್ರಕರಣಗಳಿಗೆ ಮಾತ್ರ ಪರಿಹಾರವಾಗಿ ನಿವೇಶನ ನೀಡಬೇಕು. ಆದರೆ ಅದರ ಹಿಂದಿನ ವರ್ಷಗಳಲ್ಲಿ ಭೂ ಸ್ವಾಧೀನವಾಗದೇ ಬಳಸಿಕೊಂಡಿರುವ ಜಾಗಕ್ಕೆ ಪರಿಹಾರ ನೀಡಿಲ್ಲವೆಂದು ವರದಿ ತರಿಸಿಕೊಂಡು ಅಕ್ರಮವಾಗಿ ಪರಿಹಾರಾತ್ಮಕ ನಿವೇಶನ ನೀಡಿರುವ ಭಾರಿ ಹಗರಣದ ಸಮಗ್ರ ತನಿಖೆ ನಡೆಸಬೇಕು ಹಾಗೂ ಈ ರೀತಿಯಲ್ಲಿ ಹಂಚಿಕೆ ಮಾಡಿರುವ ಎಲ್ಲಾ ನಿವೇಶನಗಳನ್ನು ವಾಪಸ್ ಪಡೆಯಬೇಕೆಂದು ಶಾಸಕ ಶ್ರೀವತ್ಸ ಆಗ್ರಹಿಸಿದರು.

2009ರಿಂದೀಚೆಗೆ 50:50 ಅನುಪಾತದ ಆದೇಶ ಜಾರಿಗೆ ಬರುತ್ತದೆ ಎಂದು ಸರ್ಕಾರವೇ ದಿನೇಶ್ ಕುಮಾರ್ ಅಮಾನತು ಆದೇಶದಲ್ಲಿ ತಿಳಿಸಿರುವುದರಿಂದ ಮುಖ್ಯಮಂತ್ರಿಗಳ ಪತ್ನಿಗೆ ಹಂಚಿಕೆ ಮಾಡಿರುವ 14 ಸೈಟುಗಳೂ ಸಹ ಅಮಾನ್ಯವಲ್ಲವೇ? ಎಂದು ಪ್ರಶ್ನಿಸಿದ ಶಾಸಕ ಶ್ರೀವತ್ಸ ಅವರು, ಒಟ್ಟಾರೆ ಮುಡಾ ನಿವೇಶನ ಹಂಚಿಕೆ ಹಗರಣವನ್ನು ಸಿಬಿಐನಿಂದ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ವಹಿಸಬೇಕೆಂದು ಇದೇ ವೇಳೆ ಆಗ್ರಹಿಸಿದರು.

ಮೇಕೆದಾಟು ಯೋಜನೆಯಿಂದ ತಮಿಳುನಾಡಿಗೆ ಹೆಚ್ಚು ಉಪಯೋಗ

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್



ಬೆಂಗಳೂರು, ಸೆ.3(ಕೆಎಂಶಿ)–ಈ ವರ್ಷ ವರುಣದೇವ ನಮ್ಮನ್ನು ಕಾಪಾಡಿದ್ದಾನೆ, ಮೇಕೆದಾಟು ಯೋಜನೆ ಸಾಕಾರಗೊಂಡರೆ ಕರ್ನಾಟಕಕ್ಕಿಂತ ತಮಿಳುನಾಡಿನ ಜನತೆಗೆ ಹೆಚ್ಚು ಉಪಯೋಗ ಆಗಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಶ್ರೀನಿವಾಸ ಸಾಲಿಡ್ ವೇಸ್ಟ್ ಮ್ಯಾನೇಜ್‌ಮೆಂಟ್ ಘಟಕಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಮೇಕೆದಾಟು ಅಣೆಕಟ್ಟಿಗೆ ತಮಿಳುನಾಡು ವಿರೋಧ ವ್ಯಕ್ತಪಡಿಸಿರುವ ಬಗ್ಗೆ ಪ್ರತಿಕ್ರಿಯಿಸಿ, ಈ ಬಾರಿ ಉತ್ತಮ ಮಳೆಯಿಂದ ತಮಿಳುನಾಡಿಗೆ ಒಳ್ಳೆಯದಾಗಿದೆ ಎಂದು ಚುಟುಕಾಗಿ ನುಡಿದರು.



ಘನ ತ್ಯಾಜ್ಯ ನಿರ್ವಹಣೆ ಸೇರಿದಂತೆ ಕಸದಿಂದ ಅನಿಲ ಉತ್ಪಾದನೆ ಬಗ್ಗೆ ತಿಳಿದುಕೊಳ್ಳಲು 15 ಅಧಿಕಾರಿಗಳ ತಂಡದ ಜೊತೆ ಚೆನ್ನೈಗೆ ಅಧ್ಯಯನಕ್ಕೆ ಬಂದಿದ್ದು, ತ್ಯಾಜ್ಯ ನಿರ್ವಹಣೆ ಕುರಿತು ಹಲವು ವಿಚಾರಗಳನ್ನು ತಿಳಿದುಕೊಂಡಂತಾಯಿತು, ಘಟಕಕ್ಕೆ ಭೇಟಿ ನೀಡಲು ಈಗ ಸಮಯ ಸಿಕ್ಕಿದೆ, ಕರ್ನಾಟಕದಲ್ಲೂ ತ್ಯಾಜ್ಯ ನಿರ್ವಹಣೆಗೆ ಇಲ್ಲಿನ ಉತ್ತಮ ಅಂಶಗಳನ್ನು ಅಳವಡಿಸಿಕೊಳ್ಳಲಾಗುವುದು ಎಂದರು.

ಹಲವೆಡೆ ಘನ ತ್ಯಾಜ್ಯದಿಂದ ವಿದ್ಯುತ್ ಉತ್ಪಾದನೆ ಯಶಸ್ಸು ಕಂಡಿಲ್ಲ, ಕರ್ನಾಟಕದಲ್ಲೂ 10 ಕಡೆ ಕಸದಿಂದ ವಿದ್ಯುತ್ ಉತ್ಪಾದನೆಗೆ ಅವಕಾಶ ನೀಡಲಾಗಿತ್ತು, ಹೈದರಾಬಾದ್‌ನಲ್ಲಿ ನಗರದ ನಡುವೆಯೇ ಸಿಎನ್‌ಜಿ ಉತ್ಪಾದನಾ ಘಟಕವನ್ನು ಅಚ್ಚುಕಟ್ಟಾಗಿ ನಿರ್ಮಿಸಿದ್ದಾರೆ, ನಮ್ಮ ರಾಜ್ಯದಲ್ಲೂ ಒಂದಷ್ಟು ಒಳ್ಳೆಯ ಕೆಲಸ ಮಾಡಿದ್ದೇವೆ ಎಂದರು.

ಕರ್ನಾಟಕದಲ್ಲಿ ಸಿಎ ನಿವೇಶನ ಹಂಚಿಕೆ ಕಾನೂನಾತ್ಮಕವಾಗಿ ನಡೆದಿದೆ, ಯಾವುದೇ ಅಕ್ರಮವಾಗಿಲ್ಲ, ವ್ಯಕ್ತಿಗೆ ಸೈಟು ಹಂಚಿಲ್ಲ, ಚಾರಿಟೆಬಲ್ ಟ್ರಸ್ಟಿಗೆ ಹಂಚಿದ್ದೇವೆ. ತಮಿಳುನಾಡು ಡಿಸಿಎಂ ಅವರನ್ನು ಸಮಯ ಹೊಂದಿಸಿಕೊಂಡು ಸ್ನೇಹಪೂರ್ವಕ ಭೇಟಿ ಮಾಡುವುದಾಗಿ ತಿಳಿಸಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy News papers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಆರ್‌ಟಿಐ ಕಾರ್ಯಕರ್ತನ ಮೇಲೆ ಹಲ್ಲೆಗೆ ಯತ್ನ ಆರೋಪ

ಪೊಲೀಸ್ ಆಯುಕ್ತರಿಗೆ ಗಂಗರಾಜು ದೂರು

ಮೈಸೂರು ಸೆ.3(ಆರ್‌ಕೆ)– ಮುಡಾ ನಿವೇಶನ ಹಂಚಿಕೆ ಹಗರಣ ಸಂಬಂಧ ದಾಖಲಾತಿಗಳನ್ನು ಬಯಲಿಗೆಳೆದ ನನ್ನ ಮೇಲೆ ಕೆಲ ಭೂಗಳ್ಳರು ಹಲ್ಲೆಗೆ ಯತ್ನಿಸಿದ್ದಾರೆ ಎಂದು ಆರ್‌ಟಿಐ ಕಾರ್ಯಕರ್ತ ಎನ್.ಗಂಗರಾಜ್ ಆರೋಪಿಸಿದ್ದಾರೆ.

ಈ ಕುರಿತು ಇಂದು ಮೈಸೂರು ನಗರ ಪೊಲೀಸ್ ಆಯುಕ್ತರಿಗೆ ದೂರು ನೀಡಿರುವ ಅವರು, ಸೆಪ್ಟೆಂಬರ್ 1ರಂದು ತಾನು ಪತ್ನಿ, ಪುತ್ರಿಯೊಂದಿಗೆ ತುರವೇಕೆರೆಗೆ ಹೋಗಿ ಕಾರಿನಲ್ಲಿ ಹಿಂದಿರುಗುತ್ತಿದ್ದಾಗ ಮಧ್ಯಾಹ್ನ 1.30 ಗಂಟೆ ವೇಳೆ ಪಾಂಡವಪುರ–ಶ್ರೀರಂಗಪಟ್ಟಣ ನಡುವೆ ಬೈಕ್‌ನಲ್ಲಿ ಬಂದ ಇಬ್ಬರು, ಕಾರನ್ನು ಅಡ್ಡ ಹಾಕಿ ಕೆಳಗಿಳಿಯುವಂತೆ ಗದರಿಸಿದರು.

ನಾನು ಹೇಗೋ ತಪ್ಪಿಸಿಕೊಂಡು ಮುಂದೆ ಬರುತ್ತಿದ್ದಾಗ ಶ್ರೀರಂಗಪಟ್ಟಣ–ಮೈಸೂರು ನಡುವೆ ಬೇರೆ ಬೈಕ್‌ನಲ್ಲಿ ಮತ್ತೆ ದಾಳಿ ನಡೆಸಿದ ಬೇರೆ ಅಪರಿಚಿತ ವ್ಯಕ್ತಿಗಳು, ಕಾರನ್ನು ಪಕ್ಕದಲ್ಲಿ ನಿಲ್ಲಿಸುವಂತೆ ಹೇಳಿದರು ಎಂದು ಗಂಗರಾಜು ದೂರಿನಲ್ಲಿ ತಿಳಿಸಿದ್ದಾರೆ.

ನನ್ನ ಮೇಲೆ ಹಲ್ಲೆ ನಡೆಸಲು ಯತ್ನಿಸಿದಾಗ ಸ್ಥಳದಲ್ಲಿ ಟ್ರಾಫಿಕ್ ಜಾಮ್ ಆದ ಕಾರಣ ಅಪರಿಚಿತರು ಓಡಿ ಹೋದರು. ಅವರು ಬಂದಿದ್ದ ಎರಡೂ ವಾಹನಗಳಿಗೆ ನಂಬರ್ ಪ್ಲೇಟ್ ಇರಲಿಲ್ಲ ಎಂದಿರುವ ಗಂಗರಾಜ್, ತಾನು ಮುಡಾ ಹಗರಣಕ್ಕೆ ಸಂಬಂಧಿಸಿದ ದಾಖಲೆಗಳನ್ನು ಹೊರ ತೆಗೆದು ಬಯಲು ಮಾಡಿದ್ದರಿಂದ ಭೂಗಳ್ಳರ ಜೊತೆ ಶಾಮೀಲಾಗಿ ಅಕ್ರಮ ಕೂಟ ರಚಿಸಿಕೊಂಡು, ಪಿತೂರಿ ನಡೆಸಿ ಕೆಲ ವ್ಯಕ್ತಿಗಳು ಹೊಂಚು ಹಾಕಿ ನನ್ನ ಮೇಲೆ ಹಲ್ಲೆಗೆ ಯತ್ನಿಸಿರುವವರ ವಿರುದ್ಧ ಕಾನೂನು ರೀತಿಯ ಕ್ರಮ ಜರುಗಿಸಿ ನನಗೆ ಸೂಕ್ತ ರಕ್ಷಣೆ ನೀಡಬೇಕೆಂದು ಕೋರಿದ್ದಾರೆ.

ಎಂ.ವಿವೇಕಾನಂದಗೆ ಸನ್ಮಾನ...



ಡಿಡಿಪಿಐ ಆಗಿ ಬಡ್ತಿ ಹೊಂದಿದ ಮೈಸೂರು ಗ್ರಾಮಾಂತರ ಬಿಇಓ ಎಂ.ವಿವೇಕಾನಂದ ಅವರನ್ನು ಮೈಸೂರು ತಾಲೂಕಿನ ಮೆಲ್ಲಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸನ್ಮಾನಿಸಲಾಯಿತು. ಜಿಲ್ಲಾ ಸರ್ಕಾರಿ ನೌಕರರ ಸಂಘದ ನಿರ್ದೇಶಕ ಟಿ.ಸತೀಶ್ ಜವರೇಗೌಡ, ನಿಕಟಪೂರ್ವ ಕ್ಷೇತ್ರಸಮನ್ವಯಾಧಿಕಾರಿ ಮಹದೇವ, ಸಿ.ಆರ್.ಪಿ. ದೀಪು, ಹೋಬಳಿ ಕಾರ್ಯದರ್ಶಿ ಕುಮಾರ್ ಉಪಸ್ಥಿತರಿದ್ದರು.

ಸೆ.14, ಬ್ರಹ್ಮಶ್ರೀ ನಾರಾಯಣಗುರು ಜಯಂತಿ



ಮೈಸೂರು,ಸೆ.3–ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿಯನ್ನು ಸೆ.14ರಂದು ಬೆಳಗ್ಗೆ 10 ಗಂಟೆಗೆ ಕಲಾಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ. ಸೋಲೂರು ಆರ್ಯ ಈಡಿಗ ಮಹಾಸಂಸ್ಥಾನದ ಪೀಠಾಧ್ಯಕ್ಷರಾದ ಶ್ರೀ ವಿಖ್ಯಾತಾನಂದ ಸ್ವಾಮೀಜಿ ಹಾಗೂ ಶಿವಮೊಗ್ಗದ ನಾರಾಯಣಗುರು ಮಹಾಸಂಸ್ಥಾನದ ಪೀಠಾಧ್ಯಕ್ಷರಾದ ಶ್ರೀ ರೇಣುಕಾನಂದ ಸ್ವಾಮೀಜಿ ದಿವ್ಯ ಸಾನ್ನಿಧ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಕ್ಕು ಮತ್ತು ಬೃಹತ್ ಕೈಗಾರಿಕಾ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಘನ ಉಪಸ್ಥಿತಿಯಲ್ಲಿ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ ಮಹದೇವಪ್ಪ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಕೆ.ಹರೀಶ್‌ಗೌಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ರೇಷ್ಮೆ ಸಚಿವ ಕೆ.ವೆಂಕಟೇಶ್, ಅರಣ್ಯ ವಸತಿ ಮತ್ತು ವಿಹಾರಧಾಮಗಳ ನಿಗಮದ ಅಧ್ಯಕ್ಷ ಅನಿಲ್‌ಕುಮಾರ್.ಸಿ, ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷ ಎ.ಬಿ.ರಮೇಶ್ ಬಂಡಿಸಿದ್ದೇಗೌಡ ಹಾಗೂ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್ ಗೌರವ ಉಪಸ್ಥಿತರಿರಲಿದ್ದಾರೆ.

ಜೆಎಸ್‌ಎಸ್ ಶಾಲೆ ವಿದ್ಯಾರ್ಥಿಗಳು ವಿಭಾಗೀಯ ಮಟ್ಟಕ್ಕೆ ಆಯ್ಕೆ



ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ಮೈಸೂರಿನ ಸಂತ ಫಿಲೋಮಿನ ಶಾಲೆಯಲ್ಲಿ ನಡೆದ ಜಿಲ್ಲಾಮಟ್ಟದ ಫುಟ್‌ಬಾಲ್ ಪಂದ್ಯಾವಳಿಯಲ್ಲಿ ಸುತ್ತೂರಿನ ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆದು ವಿಭಾಗೀಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಚಿತ್ರದಲ್ಲಿ ಮುಖ್ಯ ಶಿಕ್ಷಕರು, ದೈಹಿಕ ಶಿಕ್ಷಣ ಶಿಕ್ಷಕರಿದ್ದಾರೆ.

ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಾಗಿ ಕರ್ತವ್ಯ ನಿರ್ವಹಿಸಲು ಅರ್ಜಿ ಆಹ್ವಾನ

ಮೈಸೂರು,ಸೆ.3–ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಗ್ರಾಮೀಣ ಪುನರ್ವಸತಿ ಕಾರ್ಯಕ್ರಮದಡಿಯಲ್ಲಿ ಹುಣಸೂರು ತಾಲೂಕಿನ ಮೋದೂರು, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಾಗಿ ಮಾಸಿಕ 9000 ರೂ.ಗಳ ಗೌರವಧನದ ಆಧಾರದ ಮೇರೆಗೆ ಕರ್ತವ್ಯ ನಿರ್ವಹಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಸಮರ್ಥ ವಿಕಲಚೇತನ ವ್ಯಕ್ತಿಗಳು ಅರ್ಜಿಯನ್ನು ತಾಲೂಕು ಪಂಚಾಯಿತಿಯಲ್ಲಿರುವ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಿಂದ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಸೆ.17ರೊಳಗೆ ಸಲ್ಲಿಸಬೇಕು. ಮಾಹಿತಿಗಾಗಿ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತ ದೇವರಾಜು ಮೊ: 9739644342 ಅನ್ನು ಸಂಪರ್ಕಿಸಬಹುದು

ಮುಡಾ ಪ್ರಕರಣ: ನನಗೆ ಯಾವುದೇ ಟೆನ್ಷನ್ ಇಲ್ಲ

ಮೈಸೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟ ನುಡಿ



ಮೈಸೂರಿನ ರಾಮಕೃಷ್ಣನಗರದಲ್ಲಿರುವ ತಮ್ಮ ನಿವಾಸದ ಬಳಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರಕರ್ತರೊಂದಿಗೆ ಮಾತನಾಡಿದರು.

ಮೈಸೂರು, ಸೆ.3(ಎಂಟಿವೈ)– ಮುಡಾ ನಿವೇಶನ ಹಂಚಿಕೆ ಪ್ರಕರಣದಲ್ಲಿ ನಾನು ಯಾವುದೇ ತಪ್ಪು ಮಾಡಿಲ್ಲ. ಹಾಗಾಗಿ ನನಗೆ ಯಾವುದೇ ಟೆನ್ಷನ್ ಆಗಲೀ, ಆತಂಕವಾಗಲೀ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ಮೈಸೂರಿನ ರಾಮಕೃಷ್ಣನಗರದ ತಮ್ಮ ನಿವಾಸದ ಬಳಿ ಮಂಗಳವಾರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಮುಡಾ ಪ್ರಕರಣದಲ್ಲಿ ಬಿಜೆಪಿ ಮತ್ತು ಜೆಡಿಎಸ್‌ನವರು ನನ್ನ ವಿರುದ್ಧ ಅಪಪ್ರಚಾರ ಹಾಗೂ ಸುಳ್ಳು ಹೇಳುತ್ತಲೇ ಇದ್ದಾರೆ. ಅದರಲ್ಲೂ ಬಿಜೆಪಿಯವರು ಹೇಳಬಾರದಷ್ಟು ಸುಳ್ಳನ್ನು ಹೇಳುತ್ತಿದ್ದಾರೆ. ಅಲ್ಲದೆ, ಮುಡಾ ಪ್ರಕರಣದಲ್ಲಿ ನಾನು ಟೆನ್ಷನ್‌ನಲ್ಲಿದ್ದೇನೆ ಎಂದು ಹೇಳುತ್ತಿದ್ದಾರೆ. ವಾಸ್ತವವಾಗಿ ನಾನು ಯಾವುದೇ ಟೆನ್ಷನ್‌ನಲ್ಲೂ, ಆತಂಕದಲ್ಲೂ ಇಲ್ಲ. ತಪ್ಪು ಮಾಡದೇ ಇದ್ದ ಮೇಲೆ ಟೆನ್ಷನ್ ಯಾಕೆ? ನನ್ನ ನೋಡಿದರೆ ಟೆನ್ಷನ್ ಇರೋ ರೀತಿ ಕಾಣುತ್ತೀನಾ ಎಂದು ಪ್ರಶ್ನಿಸಿದರು.

ಸಚಿವ ಸಂಪುಟದಲ್ಲಿ ಚರ್ಚೆ: ಕೋವಿಡ್ ಸಂದರ್ಭದಲ್ಲಿ ಅಂದಿನ ಸರ್ಕಾರ ನಡೆಸಿರುವ ಭ್ರಷ್ಟಾಚಾರ ಕುರಿತ ವರದಿ ಸ್ವೀಕರಿಸಲಾಗಿದೆ. ಈ ವರದಿ ಸಂಬಂಧಿಸಿದಂತೆ ಗುರುವಾರ ಸಚಿವ ಸಂಪುಟ ಸಭೆ ಕರೆಯಲಾಗಿದೆ. ಅಂದು ವರದಿ ಬಗ್ಗೆ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದರು.

ಕುಂಬಳಕಾಯಿ ಕಳ್ಳ ಎಂದರೆ: ಕೋವಿಡ್ ಸಂದರ್ಭದ ಭ್ರಷ್ಟಾಚಾರದ ವರದಿಯನ್ನು ಇನ್ನು ನಾನು ನೋಡಿಲ್ಲ. ಆದರೆ, ಈಗಾಗಲೇ ಸಂಸದ ಡಾ.ಕೆ.ಸುಧಾಕರ್ ವರದಿಯನ್ನು ರಾಜಕೀಯ ಉದ್ದೇಶದಿಂದ ತಯಾರಿಸಲಾಗಿದೆ ಎಂದು ಹೇಳಿಕೆ ನೀಡಿರುವುದನ್ನು ಗಮನಿಸಿದರೆ 'ಕುಂಬಳಕಾಯಿ ಕಳ್ಳ ಎಂದರೆ ಹೆಗಲು ಮುಟ್ಟಿ ನೋಡಿಕೊಳ್ಳುವಂತಾಗಿದೆ'. ಸಲ್ಲಿಕೆಯಾಗಿರುವ ವರದಿಯಲ್ಲಿ ಏನಿದೆ ಎಂದು ನನಗೆ ತಿಳಿದಿಲ್ಲ. ಆಗಲೇ ಸುಧಾಕರ್ ಪ್ರತಿಕ್ರಿಯೆ ನೀಡಿದ್ದಾರೆ. ಇದರಿಂದ ಅವರು ತಪ್ಪು ಮಾಡಿ ಚಡಪಡಿಸುತ್ತಿರುವುದು ಗೊತ್ತಾಗುತ್ತಿದೆ. ಇನ್ನು ವರದಿ ಬಹಿರಂಗವಾಗಿಲ್ಲದೇ ಇದ್ದರೂ, ಅದನ್ನು ಸುಳ್ಳು ವರದಿ ಎಂದು ಹೇಗೆ ಹೇಳುತ್ತಾರೆ? ಆದರೂ ಇಂತಹ ಹೇಳಿಕೆ ನೀಡುತ್ತಾರೆ ಎಂದರೆ ಮನಸ್ಥಿತಿ ಏನಾಗಿದೆ ತಿಳಿಯುತ್ತದೆ. ತಪ್ಪು ಮಾಡಿರುವುದರಿಂದ ಕೆ.ಸುಧಾಕರ್ ಮಾನಸಿಕವಾಗಿ ತೊಳಲಾಡುತ್ತಿದ್ದಾರೆ ಎಂದು ಸಿದ್ದರಾಮಯ್ಯ ಕಿಡಿಕಾರಿದರು.

ತಪ್ಪು ಮಾಡಿದವರ ಮೇಲೆ ಕ್ರಮ: ಮುಡಾ ಹಿಂದಿನ ಆಯುಕ್ತ ಜಿ.ಟಿ.ದಿನೇಶ್ ಕುಮಾರ್ ಅವರನ್ನು ಸರ್ಕಾರ ಅಮಾನತು ಮಾಡಿರುವ ಬಗ್ಗೆ ಮಾತನಾಡಿ, ನಗರಾಭಿವೃದ್ಧಿ ಇಲಾಖೆ ಅಮಾನತು ಮಾಡಿದೆ. ಅಮಾನತು ಆದೇಶದಲ್ಲಿ ಏನಿದೆ ಎಂದು ನಾನು ಇನ್ನು ನೋಡಿಲ್ಲ. ಮುಡಾ ಪ್ರಕರಣದಲ್ಲಿ ಯಾರು ತಪ್ಪು ಮಾಡಿದ್ದಾರೆ ಎಂದು ಪತ್ತೆ ಮಾಡಲು ಆಯೋಗ ರಚಿಸಲಾಗಿದೆ. ಆಯೋಗ ನೀಡುವ ವರದಿಯನ್ನು ಪರಿಶೀಲಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತದೆ. ಆ ವರದಿಯಲ್ಲಿ ಈ ಹಿಂದಿನ ಆಯುಕ್ತ ಡಿ.ಬಿ.ನಟೇಶ್ ತಪ್ಪು ಮಾಡಿರುವುದು ಕಂಡು ಬಂದರೆ ಅವರ ವಿರುದ್ಧವೂ ಕ್ರಮ ಕೈಗೊಳ್ಳುವುದಾಗಿ ಪ್ರತಿಕ್ರಿಯಿಸಿದರು.

ಮುಖ್ಯಮಂತ್ರಿಯನ್ನು ಶಾಸಕರು, ವರಿಷ್ಠರು ಆಯ್ಕೆ ಮಾಡುತ್ತಾರೆ: ಕಾಂಗ್ರೆಸ್ ಹಿರಿಯ ನಾಯಕ, ಶಾಸಕ ಆರ್.ವಿ.ದೇಶಪಾಂಡೆ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಐದು ವರ್ಷ ಮುಖ್ಯಮಂತ್ರಿಗಳಾಗಿರುತ್ತಾರೆ. ಆದರೆ ಸಿಎಂ ಒಪ್ಪಿಗೆ ಕೊಟ್ಟರೆ ತಾವು ಮುಖ್ಯಮಂತ್ರಿಯಾಗುವುದಾಗಿ ನೀಡಿರುವ ಹೇಳಿಕೆಗೆ ಸಂಬಂಧಿಸಿದಂತೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಿಎಂ ಸಿದ್ದರಾಮಯ್ಯ, ಮುಖ್ಯಮಂತ್ರಿ ಮಾಡುವುದು ಶಾಸಕರು, ಪಕ್ಷದ ವರಿಷ್ಠರು. ಅವರು ತೀರ್ಮಾನ ಮಾಡುತ್ತಾರೆ. ಸಿಎಂ ಮಾಡುವುದು ನಾನಲ್ಲ ಎಂದರು.

ಅಂಗನವಾಡಿ ಕಾರ್ಯಕರ್ತೆಯರಿಗೆ ವೇತನ ವಿಳಂಬ ಪರಿಶೀಲನೆ: ಅಂಗನವಾಡಿ ಕಾರ್ಯಕರ್ತೆಯರಿಗೆ ಮೂರು ತಿಂಗಳಿಂದ ಸಂಬಳ ಬಂದಿಲ್ಲದಿರುವುದಕ್ಕೆ ಸಂಬಂಧಿಸಿದ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿ, ಅಂಗನವಾಡಿ ಕಾರ್ಯಕರ್ತೆಯರಿಗೆ ಸಂಬಳ ನೀಡದೇ ಇರುವುದನ್ನು ಪರಿಶೀಲಿಸಿ ಕ್ರಮ ಕೈಗೊಳ್ಳುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಈ ಸಂದರ್ಭದಲ್ಲಿ ಸಚಿವ ಕೆ.ವೆಂಕಟೇಶ್, ಶಾಸಕರಾದ ಕೆ.ಹರೀಶ್‌ಗೌಡ, ಡಿ.ರವಿಶಂಕರ್, ಮಾಜಿ ಸಚಿವ ಎಂ.ಶಿವಣ್ಣ, ಮಾಜಿ ಸಂಸದ ಕಾಗಲವಾಡಿ ಶಿವಣ್ಣ, ಮುಖಂಡರಾದ ಕೋಟೆಹುಂಡಿ ಮಹದೇವ, ಉತ್ತನಹಳ್ಳಿ ಶಿವಣ್ಣ, ಅಶೋಕ, ರಘು ಇನ್ನಿತರರು ಉಪಸ್ಥಿತರಿದ್ದರು.

ಪೊಲೀಸ್ ಪಬ್ಲಿಕ್ ಶಾಲೆಯಲ್ಲಿ ಇಂಟರಾಕ್ಟ್ ಕ್ಲಬ್ ಪದಗ್ರಹಣ



ಮೈಸೂರಿನ ಪೊಲೀಸ್ ಪಬ್ಲಿಕ್ ಸ್ಕೂಲ್‌ನಲ್ಲಿ ಇತ್ತೀಚೆಗೆ ರೋಟರಿ ಪಂಚಶೀಲ ಮೈಸೂರು ವತಿಯಿಂದ ಇಂಟರಾಕ್ಟ್ ಕ್ಲಬ್ ಪದಗ್ರಹಣ ಕಾರ್ಯಕ್ರಮ ನಡೆಯಿತು

ಮೈಸೂರು,ಸೆ.3(ಪಿಎಂ)– ರೋಟರಿ ಪಂಚಶೀಲ ಮೈಸೂರು ವತಿಯಿಂದ ನಗರದ ಪೊಲೀಸ್ ಪಬ್ಲಿಕ್ ಸ್ಕೂಲ್‌ನಲ್ಲಿ ಇತ್ತೀಚೆಗೆ ಇಂಟರಾಕ್ಟ್ ಕ್ಲಬ್ ಪದಗ್ರಹಣ ಕಾರ್ಯಕ್ರಮ ನಡೆಯಿತು.

ಚಾರ್ಟರ್ ಅಧ್ಯಕ್ಷೆ ಭೂಮಿಕಾ ಅವರು 2023–24ರಲ್ಲಿ ಇಂಟರಾಕ್ಟ್ ಕ್ಲಬ್ ಕೈಗೊಂಡ ವಿವಿಧ ಯೋಜನೆಗಳು ಹಾಗೂ ಚಟುವಟಿಕೆಗಳ ಬಗ್ಗೆ ತಿಳಿಸಿದರು. ಅಲ್ಲದೆ, ಯೋಜನೆ ಹಾಗೂ ಚಟುವಟಿಕೆಗಳನ್ನು ಅನುಷ್ಠಾನಗೊಳಿಸಲು ಮಾರ್ಗದರ್ಶನ ನೀಡಿದ ಸಂಯೋಜಕಿ ಸುಧಾ ಹಾಗೂ ಪ್ರಭಾರ ಪ್ರಾಂಶುಪಾಲರಾದ ದೀನಾ ಉತ್ತಪ್ಪ ಅವರಿಗೆ ಧನ್ಯವಾದ ಅರ್ಪಿಸಿದರು.

ರೋಟರಿ ಪಂಚಶೀಲ ಕಾರ್ಯದರ್ಶಿ ಹಾಗೂ ನಿವೃತ್ತ ಐಪಿಎಸ್ ಅಧಿಕಾರಿ ರಾಜೇಂದ್ರ ಪ್ರಸಾದ್ ಮಾತನಾಡಿ, ವಿದ್ಯಾರ್ಥಿ ದೆಸೆಯಿಂದಲೇ ಅರ್ಥಪೂರ್ಣ ಸೇವಾ ಚಟುವಟಿಕೆಗಳಲ್ಲಿ ಭಾಗವಹಿಸಲು ಇಂಟರಾಕ್ಟ್ ಕ್ಲಬ್ ಅವಕಾಶ ಕಲ್ಪಿಸುತ್ತದೆ. ಆ ಮೂಲಕ ನಾಯಕತ್ವದ ಕೌಶಲ್ಯ ವೃದ್ಧಿಸಿಕೊಳ್ಳಲು ಅವಕಾಶ ಒದಗಿಸುತ್ತದೆ ಎಂದು ತಿಳಿಸಿದರು.

ಕರ್ನಾಟಕ ಪೊಲೀಸ್ ಅಕಾಡೆಮಿಯ ಉಪ ನಿರ್ದೇಶಕ ಎಸ್.ಎಲ್.ಚನ್ನಬಸವಣ್ಣ ಮಾತನಾಡಿ, ಸಮಾಜದಲ್ಲಿ ಯುವ ಜನರ ಪಾತ್ರದ ಪ್ರಾಮುಖ್ಯತೆ ಹಾಗೂ ನಾಯಕತ್ವ ಹಾಗೂ ಸಮುದಾಯ ಸೇವೆಯ ಮಹತ್ವವನ್ನು ಒತ್ತಿ ಹೇಳಿದರು.

ಇದೇ ವೇಳೆ ಶಾಲೆಯ ಆರ್ಯನ್ ಬಿ.ಅಯ್ಯರ್ ಹಾಗೂ ಯಶಿಕಾ ಅವರನ್ನು 2024–25ನೇ ಸಾಲಿನ ಇಂಟರಾಕ್ಟ್ ಕ್ಲಬ್‌ನ ಅಧ್ಯಕ್ಷ ಹಾಗೂ ಕಾರ್ಯದರ್ಶಿಯಾಗಿ (ಕ್ರಮವಾಗಿ) ನೇಮಿಸಿದರು. ಅಲ್ಲದೆ, ಇಡೀ ತಂಡವು ಶೈಕ್ಷಣಿಕ ಹಾಗೂ ಸಮುದಾಯ ಸೇವೆಯಲ್ಲಿ ಉತ್ಸಾಹದಿಂದ ತೊಡಗಿಸಿಕೊಳ್ಳುವಂತೆ ಹಾರೈಸಿದರು.

ರೋಟರಿ ಜಿಲ್ಲೆ 3181ರ ಸಹಾಯಕ ಗವರ್ನರ್ ಚೇತನ್ ವಿಶ್ವನಾಥ್, ರೋಟರಿ ಪಂಚಶೀಲ ಅಧ್ಯಕ್ಷ ಅಶ್ವಿನ್ ಪಾಳೇಗಾರ್, ರೋಟೇರಿಯನ್‌ಗಳಾದ ಕಿರಣ್‌ರಾಬರ್ಟ್, ರಾಜಾರಾಂ, ಬಾಲಸುಬ್ರಮಣಿಯನ್, ಮಹೇಶ್‌ಕುಮಾರ್, ಡಾ.ಇಡಾ ಮಿನೇಜಸ್ ಮತ್ತಿತರರು ಹಾಜರಿದ್ದರು.

ಬದುಕಿನಲ್ಲಿ ಬದಲಾವಣೆ ತರುವ ಶ್ರಾವಣಮಾಸ



ಮೈಸೂರು ಶ್ರೀ ಸುತ್ತೂರು ಮಠದಲ್ಲಿ ಶ್ರಾವಣ ಮಾಸದ ಪೂಜಾನುಷ್ಠಾನ ಮತ್ತು ಪ್ರವಚನ ಸಮಾರೋಪ ಸಮಾರಂಭದಲ್ಲಿ ಮಹಾರಾಣಿ ಕಲಾ ಕಾಲೇಜಿನ ಪ್ರಾಂಶುಪಾಲ ಡಾ.ಬಿ.ವಿ.ವಸಂತಕುಮಾರ್ ಮಾತನಾಡಿದರು.

ಮೈಸೂರು, ಸೆ. 3– ಲೌಕಿಕ ಜಂಜಾಟಗಳಲ್ಲಿ ಮುಳುಗಿ ಹೋಗಿರುವ ಮನುಷ್ಯನ ಬದುಕಿನಲ್ಲಿ ಹೊಸ ಬದಲಾವಣೆಯನ್ನು ತರುವಲ್ಲಿ ಶ್ರಾವಣ ಮಾಸ ಮಹತ್ವದ ಪಾತ್ರವನ್ನು ವಹಿಸುತ್ತದೆ ಎಂದು ಮಹಾರಾಣಿ ಕಲಾ ಕಾಲೇಜಿನ ಪ್ರಾಂಶುಪಾಲರು ಹಾಗೂ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಮಾಜಿ ಅಧ್ಯಕ್ಷ ಡಾ.ಬಿ.ವಿ. ವಸಂತಕುಮಾರ್ ಹೇಳಿದರು.

ಮೈಸೂರು ಶ್ರೀ ಸುತ್ತೂರು ಮಠದಲ್ಲಿ ಶ್ರಾವಣ ಮಾಸದ ಪೂಜಾನುಷ್ಠಾನ ಮತ್ತು ಪ್ರವಚನ ಸಮಾರೋಪದಲ್ಲಿ ಅವರು ಮಾತನಾಡಿದರು.

ಸೃಷ್ಟಿಯ ವಿಕಾಸದ ಬಹುದೊಡ್ಡ ಪ್ರಕ್ರಿಯೆ ಶ್ರಾವಣ ಮಾಸದಲ್ಲಿ ನಡೆಯುತ್ತದೆ. ಮಳೆಯಿಂದ ಗಿಡ–ಮರಗಳು ಚಿಗುರಿ ಬಲಿಷ್ಠವಾಗುತ್ತವೆ. ರೈತರು ಬಿತ್ತಿದ ಬೆಳೆಗಳು ತೆನೆ ಬಿಡುವ ಸಂದರ್ಭವಿದು. ಹಾಗೆಯೇ ಮನುಷ್ಯನ ಜೀವನದಲ್ಲೂ ಹೊಸ ಹುಟ್ಟು ಮತ್ತು ಬೆಳವಣಿಗೆಗೆ ಶ್ರಾವಣ ಮಾಸ ಸಕಾಲವಾದುದು. ನಿಸರ್ಗದಂತೆ ಮನುಷ್ಯನು ಶಾರೀರಿಕ ಮತ್ತು ಮಾನಸಿಕವಾಗಿ ಸಾಕಷ್ಟು ಬದಲಾವಣೆಯನ್ನು ಈ ಮಾಸದಲ್ಲಿ ಪಡೆದುಕೊಳ್ಳುತ್ತಾನೆ. ಬದುಕಿನ ಬದಲಾವಣೆಗೆ ಇದು ಸುಸಂದರ್ಭವಾದ ಕಾಲ. ನಮ್ಮನ್ನು ನಾವು ಅರಿತುಕೊಂಡು ನಡೆ–ನುಡಿಯಲ್ಲಿ ಸದ್ವಿಚಾರಗಳನ್ನು ಅಳವಡಿಸಿಕೊಂಡು ಮುನ್ನಡೆಯಬೇಕು ಎಂದು ಹೇಳಿದರು.

ಡಾ.ಕೆ.ಅನಂತರಾಮು ಅವರು ಶ್ರಾವಣದಲ್ಲಿ ಭೂಮಿ ಹದವಿರುವಂತೆ ಮನುಷ್ಯನ ಮನಸ್ಸು ಹದವಾಗಿರುತ್ತದೆ. ಇಂತಹ ಸಂದರ್ಭದಲ್ಲಿ ಭೂಮಿಯಲ್ಲಿ ಉತ್ತಮ ಬೀಜ ಬಿತ್ತಿದಂತೆ ನಮ್ಮ ಮನಸ್ಸಿನಲ್ಲಿಯೂ ಭಕ್ತಿ ಎಂಬ ಬೀಜದ ಸದ್ವಿಚಾರಗಳನ್ನು ಬಿತ್ತಿದರೆ ಉತ್ತಮ ಫಸಲನ್ನು ಪಡೆಯಬಹುದು. ಒಮ್ಮೆ ಮಳೆ, ಒಮ್ಮೆ ಬಿಸಿಲು, ಒಮ್ಮೆ ನಗು, ಒಮ್ಮೆ ಅಳು ಇದುವೇ ನಮ್ಮ ಜೀವನ ಅದೇ ಶ್ರಾವಣ ಎಂದು ಕವಿಯು ಶ್ರಾವಣವನ್ನು ಅತ್ಯಂತ ಅರ್ಥಪೂರ್ಣವಾಗಿ ವರ್ಣಿಸಿದ್ದಾನೆ ಎಂದರು.

ಮೈಸೂರು ಶ್ರೀ ನೀಲಕಂಠಸ್ವಾಮಿ ಮಠದ ವಿದ್ವಾನ್ ಶ್ರೀ ಸಿದ್ಧಮಲ್ಲ ಸ್ವಾಮಿಗಳು ಸುತ್ತೂರು ಶ್ರೀಮಠದಲ್ಲಿ ರಾಜೇಂದ್ರ ಶ್ರೀಗಳ ಕಾಲದಿಂದಲೂ ಶ್ರಾವಣ ಮಾಸದ ಪೂಜಾನುಷ್ಠಾನ ಮತ್ತು ಪ್ರವಚನವನ್ನು ಏರ್ಪಡಿಸಿಕೊಂಡು ಬರಲಾಗುತ್ತಿದೆ. ನಾವು ಆಗಲೂ ಪ್ರವಚನ ಕೇಳಲು ಬರುತ್ತಿದ್ದೆವು. ಪರಮಪೂಜ್ಯ ದೇಶಿಕೇಂದ್ರ ಜಗದ್ಗುರುಗಳವರ ದೂರದೃಷ್ಟಿಯ ಫಲವಾಗಿ ಇಂದು ಶ್ರೀಮಠದಲ್ಲಿ ಇಂತಹ ಅನೇಕ ವೈಶಿಷ್ಟ್ಯಪೂರ್ಣವಾದ ಕಾರ್ಯಕ್ರಮಗಳು ನಡೆಯುತ್ತಿವೆ. ಇಂತಹ ಮೊಬೈಲ್ ಯುಗದಲ್ಲೂ ಅನೇಕ ಜನರು ಆಗಮಿಸಿ ಮಾಸಪೂರ್ತಿ ಒಳ್ಳೆಯ ವಿಚಾರಗಳನ್ನು ಆಲಿಸಿರುವಿರಿ, ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಬದುಕು ರೂಪಿಸಿಕೊಳ್ಳಬೇಕು ಎಂದು ತಿಳಿಸಿದರು.

ಹುಲಿಯೂರುದುರ್ಗದ ಶ್ರೀ ಸಿದ್ಧಲಿಂಗ ಶಿವಾನಂದ ಸ್ವಾಮಿಗಳು ದಾರಿ ತಪ್ಪುತ್ತಿರುವ ಮನುಷ್ಯ ನೈತಿಕ ಮಾರ್ಗದಲ್ಲಿ ನಡೆಯಲು ಪೂಜ್ಯರು ಇಂತಹ ಕಾರ್ಯಕ್ರಮಗಳನ್ನು ಏರ್ಪಡಿಸುತ್ತಾರೆ. ಶ್ರಾವಣ ಮಾಸದ ಪೂಜಾನುಷ್ಠಾನದಿಂದ ಸೃಷ್ಟಿಯಲ್ಲಿ ಒಳ್ಳೆಯ ವಾತಾವರಣ ನಿರ್ಮಾಣವಾಗುತ್ತದೆ. ಗುರುಗಳು ಮಾಡುವ ಅನುಷ್ಠಾನದ ಫಲ ಸಾರ್ವತ್ರಿಕವಾಗಿ ಎಲ್ಲರಿಗೂ ಲಭ್ಯವಾಗುತ್ತದೆ. ಭಕ್ತಿಯಿಂದ ಬದುಕಿನಲ್ಲಿ ಏನನ್ನಾದರೂ ಸಾಧಿಸಬಹುದು ಎಂದರು. ಹೊಸಮಠ ಮತ್ತು ಕುದೇರು ಮಠದ ಕಿರಿಯ ಶ್ರೀಗಳು ಆಗಮಿಸಿದ್ದರು. ಶ್ರೀಮತಿ ಜಲಜಾಕ್ಷಿ, ಶ್ರೀಮತಿ ಉಮಾ ನಾಗೇಶ್ ಅನಿಸಿಕೆ ಹಂಚಿಕೊಂಡರು.

ವಿದುಷಿ ಧರಿತ್ರಿ ಆನಂದರಾವ್ ಕಾವ್ಯ ವಾಚನ ಮಾಡಿದರು. ವಿದುಷಿ ಎಂ.ವಿ. ಶುಭಾ ರಾಘವೇಂದ್ರ, ವಿದುಷಿ ವಸಂತ ವೆಂಕಟೇಶ ಉಪಸ್ಥಿತರಿದ್ದರು. ಪ್ರವಚನ ಆಲಿಸಿ ಉತ್ತಮ ಪ್ರಬಂಧ ರಚಿಸಿದವರಿಗೆ ಬಹುಮಾನ ವಿತರಿಸಲಾಯಿತು.

ಪ್ರೊ. ಮೊರಬದ ಮಲ್ಲಿಕಾರ್ಜುನ ಸ್ವಾಗತಿಸಿದರು. ಶ್ರೀ ಮಲ್ಲಿನಾಥ ಶಿವಾಚಾರ್ಯ ಸ್ವಾಮಿಗಳು ವಂದಿಸಿದರು. ಶ್ರೀ ಕುಮಾರಸ್ವಾಮಿ ವಿರಕ್ತಮಠ ಕಾರ್ಯಕ್ರಮ ನಿರೂಪಿಸಿದರು.

ದೈವಜ್ಞ ಸಮಾಜದ ನೂತನ ಪದಾಧಿಕಾರಿಗಳು

ಮೈಸೂರು, ಸೆ.3–ಮೈಸೂರಿನ ದೈವಜ್ಞ ಸಮಾಜದ 2024–27ರ ಅವಧಿಗೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ವಿಮಲೇಶ್ವರ ಎನ್.ರೇವಣಕರ್ (ಅಧ್ಯಕ್ಷ), ಎಸ್.ಪಿ.ಕಿರಣ್‌ಕುಮಾರ್ (ಕಾರ್ಯದರ್ಶಿ), ಕೆ.ರಾಮದಾಸರಾವ್ (ಖಜಾಂಚಿ), ವಿ. ಗಂಗಾಧರ (ಉಪಾಧ್ಯಕ್ಷ), ಕೆ.ಎನ್. ರಾಜೇಶ್ (ಜಂಟಿ ಕಾರ್ಯದರ್ಶಿ), ಕೆ. ಕಮಲೇಶ್, ಉಮೇಶ್ ಜಿ.ಶೇಠ್ (ಗೌರವ ಸಲಹೆಗಾರರು), ಎಂ.ಜಿ.ಮಹೇಶ್, ಕೆ.ನಾಗೇಶ್ ಶೇಠ್, ವಿ.ಪ್ರಶಾಂತ್, ಜಿ. ರವೀಂದ್ರ, ಸುಭಾಷ್ ರೇವಣ್‌ಕರ್, ಕೌಶಿಕ್ ಆನಂದ್, ಎಂ.ಎನ್. ಗಣೇಶ್ ಶೇಠ್, ಜಿ.ಎಸ್.ಶ್ರೀಧರಮೂರ್ತಿ, ಚಿತ್ರಾನಂದ, ಪೂರ್ಣಿಮಾ ಸಾಯಿರಾಂ (ನಿರ್ದೇಶಕರು).

ಬೆನ್ನು ಮೂಳೆ ತಪಾಸಣಾ ಶಿಬಿರ

ಮೈಸೂರು,ಸೆ.3–ಮೈಸೂರಿನ ರಾಮಕೃಷ್ಣನಗರದ ಸುಯೋಗ ಆಸ್ಪತ್ರೆ ವತಿಯಿಂದ ಸೆ.3ರಿಂದ 7ರವರೆಗೆ ಬೆನ್ನು ಮೂಳೆ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ಶಿಬಿರದಲ್ಲಿ ಬೆನ್ನು ನೋವು, ಬೆನ್ನುಮೂಳೆಯ ಸ್ಥಾನಪಲ್ಲಟ, ಕತ್ತು ನೋವು, ಕೈ ಕಾಲು ಜೋಮು ಹಿಡಿಯುವಿಕೆ ಮುಂತಾದ ರೋಗ ಲಕ್ಷಣಗಳಿರುವವರು ಈ ಶಿಬಿರದ ಪ್ರಯೋಜನ ಪಡೆದುಕೊಳ್ಳಬಹುದು. ಮಾಹಿತಿಗೆ ದೂ. 0821–2533600, 9739555908 ಸಂಪರ್ಕಿಸಿ.

ದೇಶ – ವಿದೇಶ

ಯಮೆನ್ ಹೌತಿಗಳಿಂದ ಕೆಂಪು ಸಮುದ್ರದಲ್ಲಿ ತೈಲ ಟ್ಯಾಂಕರ್ ಮೇಲೆ ದಾಳಿ



ದುಬೈ: ಕೆಂಪು ಸಮುದ್ರದಲ್ಲಿ ಯೆಮೆನ್‌ನ ಹೌತಿ ಬಂಡುಕೋರರು ಪನಾಮಾದ ತೈಲ ಟ್ಯಾಂಕರ್‌ನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿದ್ದಾರೆ. ಇದೇ ವೇಳೆ ಸೌದಿಯ ಟ್ಯಾಂಕರ್ ಶಿಪ್‌ನ್ನೂ ಸಹ ಈ ಬಂಡುಕೋರರ ಗುಂಪು ಟಾರ್ಗೆಟ್ ಮಾಡಿತ್ತು.

ಇದು ಇರಾನ್ ಬೆಂಬಲಿತ ಬಂಡುಕೋರರ ಕಾರ್ಯಾಚರಣೆಯಲ್ಲಿ ಇತ್ತೀಚಿನ ದಾಳಿ ಎನ್ನಲಾಗಿದೆ. ಗಾಜಾ ಪಟ್ಟಿಯಲ್ಲಿ ಇಸ್ರೇಲ್–ಹಮಾಸ್ ಯುದ್ಧಕ್ಕೆ ಸಂಬಂಧಿಸಿದಂತೆ ಕೆಂಪು ಸಮುದ್ರದ ಮೂಲಕ ಹಾದುಹೋಗುವ $1 ಟ್ರಿಲಿಯನ್ ಸರಕುಗಳನ್ನು ಪ್ರತಿ ವರ್ಷ ಅಡ್ಡಿಪಡಿಸಿದೆ ಮತ್ತು ಸಂಘರ್ಷ ಪೀಡಿತ ಸುಡಾನ್ ಮತ್ತು ಯೆಮೆನ್‌ಗೆ ಕೆಲವು ಸಹಾಯ ಸಾಗಣೆಯನ್ನು ನಿಲ್ಲಿಸಿದೆ.

ತೈಲ ಟ್ಯಾಂಕರ್‌ಗಳ ಮೇಲಿನ ಹೊಸ ದಾಳಿಗಳು ಹೌತಿಗಳಿಂದ ಈ ಹಿಂದೆ ಹೊಡೆದ ಇನ್ನೂ ಉರಿಯುತ್ತಿರುವ ಸೌನಿಯನ್ ತೈಲ ಟ್ಯಾಂಕರ್‌ನ್ನು ರಕ್ಷಿಸುವ ಪ್ರಯತ್ನಗಳ ನಡುವೆ ವರದಿಯಾಗಿದೆ. ಸೋಮವಾರದ ಮೊದಲ ದಾಳಿಯಲ್ಲಿ, 2 ಬ್ಯಾಲಿಸ್ಟಿಕ್ ಕ್ಷಿಪಣಿಗಳು ತೈಲ ಟ್ಯಾಂಕರ್ ಬ್ಲೂ ಲಗೂನ್ Iಅನ್ನು ಹೊಡೆಯಲಾಗಿದ್ದು, ಮೂರನೆಯದು ಹಡಗಿನ ಬಳಿ ಸ್ಫೋಟಿಸಿದೆ.

ಮಣಿಪುರ ಹಿಂಸಾಚಾರದಲ್ಲಿ ಡ್ರೋನ್ ದಾಳಿ: ಮೂವರಿಗೆ ಗಾಯ



ಇಂಫಾಲ: ಮಣಿಪುರದಲ್ಲಿ ಮತ್ತೆ ಹಿಂಸಾಚಾರ ಭುಗಿಲೆದ್ದಿದ್ದು, ಡ್ರೋನ್ ದಾಳಿಯಲ್ಲಿ 23 ವರ್ಷದ ಮಹಿಳೆ ಸೇರಿ ಮೂವರಿಗೆ ಗಾಯಗಳಾಗಿವೆ. ಮಣಿಪುರದ ಇಂಫಾಲ್ ಪಶ್ಚಿಮ ಜಿಲ್ಲೆಯಲ್ಲಿ ಡ್ರೋನ್ ಬಳಸಿ ಬಾಂಬ್ ದಾಳಿ ನಡೆಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಸೋಮವಾರ ಸಂಜೆ 6.20ರ ವೇಳೆಗೆ ವಸತಿ ಪ್ರದೇಶದಲ್ಲಿ ಡ್ರೋನ್‌ನಿಂದ ಕನಿಷ್ಠ 2 ಸ್ಫೋಟಕಗಳನ್ನು ಸ್ಫೋಟಿಸಲಾಯಿತು. ಇದರಲ್ಲಿ ಮಹಿಳೆ ಮತ್ತು ಇಬ್ಬರು ಗಾಯಗೊಂಡಿದ್ದಾರೆ. ಮಹಿಳೆ ಸೆಂಜಮ್ ಚಿರಾಂಗ್ ಪ್ರದೇಶದ ತನ್ನ ನಿವಾಸದಲ್ಲಿದ್ದಾಗ ಬಾಂಬ್ ತನ್ನ ಮನೆಯ ಕಬ್ಬಿಣದ ಮೇಲ್ಛಾವಣಿಯ ಶೀಟ್‌ಗಳ ಮೂಲಕ ತೂರಿಕೊಂಡು ಸ್ಫೋಟಗೊಂಡಿದೆ. ಗಾಯಗೊಂಡ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಕಾಂಗ್‌ಪೋಕ್ಪಿ ಜಿಲ್ಲೆಯ ಬೆಟ್ಟದ ಮೇಲಿನ ತಗ್ಗು ಪ್ರದೇಶದ ಸೆಜಮ್ ಚಿರಾಂಗ್ ಗ್ರಾಮದ ಮೇಲೆ ಉಗ್ರರು ಮನಬಂದಂತೆ ಗುಂಡು ಹಾರಿಸಿದ್ದರು. ಭದ್ರತಾ ಪಡೆಗಳು ಪ್ರತಿದಾಳಿ ನಡೆಸಿವೆ. ಶೋಧ ಕಾರ್ಯಾಚರಣೆಯ ಸಮಯದಲ್ಲಿ ಕಾಂಗ್‌ಪೋಕ್ಪಿ ಜಿಲ್ಲೆಯ ಸಮೀಪದ ಖರಂ ವೈಫೇಯ್ ಗ್ರಾಮದಿಂದ ಡ್ರೋನ್ ಅನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಸಮುದ್ರದಲ್ಲಿ ಹೆಲಿಕಾಪ್ಟರ್ ತುರ್ತು ಲ್ಯಾಂಡಿಂಗ್; ಮೂವರು ನಾಪತ್ತೆ



ನವದೆಹಲಿ: ಭಾರತೀಯ ಕೋಸ್ಟ್ ಗಾರ್ಡ್‌ನ ಹೆಲಿಕಾಪ್ಟರ್ ಸೋಮವಾರ ತಡರಾತ್ರಿ ಗುಜರಾತ್ ಬಳಿ ಅರಬ್ಬಿ ಸಮುದ್ರದಲ್ಲಿ ತುರ್ತು ಲ್ಯಾಂಡಿಂಗ್ ಮಾಡಿದೆ. ನಂತರ ಅದರ ಮೂವರು ಸಿಬ್ಬಂದಿ ನಾಪತ್ತೆಯಾಗಿದ್ದಾರೆ. ರಾತ್ರಿ 11 ಗಂಟೆಯ ನಂತರ ಸಂಭವಿಸಿದ ಘಟನೆಯ ನಂತರ ಒಬ್ಬ ಸದಸ್ಯನನ್ನು ರಕ್ಷಿಸಲಾಗಿದೆ. ತುರ್ತು ಲ್ಯಾಂಡಿಂಗ್ ಮಾಡಿದ್ದು, ಅಡ್ವಾನ್ಸ್ಡ್ ಲೈಟ್ ಹೆಲಿಕಾಪ್ಟರ್ ಎಂದು ಕೋಸ್ಟ್ ಗಾರ್ಡ್ ಹೇಳಿದ್ದಾರೆ. ಗಾಯಗೊಂಡ ಸಿಬ್ಬಂದಿಯನ್ನು ಪೋರಬಂದರ್‌ನ ಮೋಟಾರು ಟ್ಯಾಂಕರ್ ಹರಿಲೀಲಾದಿಂದ ಸ್ಥಳಾಂತರಿಸಲಾಗಿದೆ. ನಾಪತ್ತೆಯಾಗಿರುವ ಸಿಬ್ಬಂದಿ ಪತ್ತೆಗೆ ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದೆ ಎಂದು ತಿಳಿಸಿದ್ದಾರೆ.

ಸೆ.2ರಂದು, ಹೆಲಿಕಾಪ್ಟರ್ ಸಮುದ್ರದಲ್ಲಿ ತುರ್ತು ಲ್ಯಾಂಡಿಂಗ್ ಮಾಡಬೇಕಾಯಿತು. ಒಬ್ಬ ಸಿಬ್ಬಂದಿ ಚೇತರಿಸಿಕೊಂಡಿದ್ದಾರೆ. ಉಳಿದ ಮೂವರು ಸಿಬ್ಬಂದಿಗಾಗಿ ಹುಡುಕಾಟ ಪ್ರಗತಿಯಲ್ಲಿದೆ. ಗುಜರಾತ್‌ನ ಪೋರಬಂದರ್‌ನಿಂದ ಮೋಟಾರು ಟ್ಯಾಂಕರ್ ಹರಿಲೀಲಾದಿಂದ ಗಾಯಗೊಂಡ ಸಿಬ್ಬಂದಿಯನ್ನು ಸ್ಥಳಾಂತರಿಸಲು 23.00 ಗಂಟೆಗೆ ALH ಹೆಲಿಕಾಪ್ಟರ್ ಅನ್ನು ಪ್ರಾರಂಭಿಸಲಾಯಿತು. ಐಸಿಜಿ ರಕ್ಷಣಾ ಕಾರ್ಯಕ್ಕಾಗಿ 4 ಹಡಗುಗಳು ಮತ್ತು 2 ವಿಮಾನಗಳನ್ನು ನಿಯೋಜಿಸಿದೆ ಎಂದು ಭಾರತೀಯ ಕೋಸ್ಟ್ ಗಾರ್ಡ್ ಎಕ್ಸ್‌ನಲ್ಲಿ ತಿಳಿಸಿದೆ.

ಪತ್ನಿಗೆ ಮತ್ತು ಬರುವ ಔಷಧ ನೀಡಿ ಆಗಂತುಕರಿಂದ ಅತ್ಯಾಚಾರ ಮಾಡಿಸಿದ ಪತಿ!



ಪ್ಯಾರಿಸ್ (ಫ್ರಾನ್ಸ್): ಪತಿಯೊಬ್ಬ ತನ್ನ ಪತ್ನಿಗೆ ಪ್ರತಿ ದಿನವೂ ಅಮಲು ಬರುವ ಔಷಧ ನೀಡಿ ಆಕೆಯ ಮೇಲೆ ನೂರಾರು ಮಂದಿ ಅತ್ಯಾಚಾರ ಎಸಗುವಂತೆ ಮಾಡಿದ್ದಾನೆ. ಈ ಘಟನೆ ನಡೆದಿರುವುದು ಫ್ರಾನ್ಸ್‌ನ ಅವಿಗ್ನಾನ್ ನಗರದಲ್ಲಿ. ಫ್ರಾನ್ಸ್‌ನ ಸರ್ಕಾರಿ ಸ್ವಾಮ್ಯದ ವಿದ್ಯುತ್ ಸರಬರಾಜು ಸಂಸ್ಥೆಯಾದ ಇಡಿಎಫ್‌ನಲ್ಲಿ ಕಾರ್ಯನಿರ್ವಹಿಸುತ್ತಿದ್ದ ಆರೋಪಿಗೆ ಈಗಾಗಲೇ ನಿವೃತ್ತಿಯಾಗಿದೆ. ಆತನ ವಯಸ್ಸು 71 ವರ್ಷ. ಈತ ತನ್ನ 72 ವರ್ಷ ವಯಸ್ಸಿನ ಪತ್ನಿ ಮೇಲೆ ಅನಾಮಿಕರು ಲೈಂಗಿಕ ದೌರ್ಜನ್ಯ ಎಸಗುವಂತೆ ಮಾಡಿದ್ದಾನೆ. ಆನ್‌ಲೈನ್ ಮೂಲಕ ಜಾಹೀರಾತು ನೀಡಿ ಪುರುಷರನ್ನು ಸೆಳೆಯುತ್ತಿದ್ದ ಆರೋಪಿ, ತನ್ನ ಪತ್ನಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಲು ಪುರುಷರನ್ನು ಪ್ರೇರೇಪಿಸುತ್ತಿದ್ದ. ಮೂಲಗಳ ಪ್ರಕಾರ ಪೊಲೀಸರ ತನಿಖೆ ವೇಳೆ ಸುಮಾರು 92 ಬಾರಿ ಮಹಿಳೆ ಮೇಲೆ ಅತ್ಯಾಚಾರ ನಡೆದಿರಬಹುದು ಎಂದು ಅಂದಾಜು ಮಾಡಲಾಗಿದೆ. 72 ಪುರುಷರು ಈ ಕೃತ್ಯ ಎಸಗಿರಬಹುದು ಎಂದು ಶಂಕಿಸಲಾಗಿದ್ದು, ಈ ಸಂಬಂಧ 51 ಪುರುಷರನ್ನು ಪೊಲೀಸರು ಗುರ್ತಿಸಿದ್ದಾರೆ.

ಸುಮಾರು 10 ವರ್ಷಗಳ ಕಾಲ ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ನಡೆಯುತ್ತಿತ್ತು. 2020ರಲ್ಲಿ ಆಕೆಗೆ ತನ್ನ ಮೇಲೆ ಲೈಂಗಿಕ ದೌರ್ಜನ್ಯ ನಡೆಯುತ್ತಿದೆ ಎಂಬುದು ಗೊತ್ತಾಯಿತು. ಆಕೆಗೆ ಮೂವರು ಮಕ್ಕಳಿದ್ದಾರೆ. ಎಲ್ಲ ಮಕ್ಕಳೂ ಆಕೆಯ ಪರ ನಿಂತಿದ್ದಾರೆ.

ಬಸ್ತಾರ್ ಎನ್‌ಕೌಂಟರ್‌ನಲ್ಲಿ 9 ನಕ್ಸಲರು ಹತ್ಯೆ



ಬಸ್ತಾರ್: ಛತ್ತೀಸ್‌ಗಢದ ಬಸ್ತಾರ್ ಪ್ರದೇಶದಲ್ಲಿ ಮಂಗಳವಾರ ಭದ್ರತಾ ಸಿಬ್ಬಂದಿಯೊಂದಿಗೆ ನಡೆದ ಎನ್‌ಕೌಂಟರ್‌ನಲ್ಲಿ 9 ನಕ್ಸಲೀಯರು ಹತರಾಗಿದ್ದಾರೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಭದ್ರತಾ ಪಡೆಗಳ ಜಂಟಿ ತಂಡವು ನಕ್ಸಲ್ ವಿರೋಧಿ ಕಾರ್ಯಾಚರಣೆಯಲ್ಲಿ ತೊಡಗಿದ್ದಾಗ ದಾಂತೇವಾಡ ಮತ್ತು ಬಿಜಾಪುರ ಜಿಲ್ಲೆಗಳ ಗಡಿಯಲ್ಲಿರುವ ಕಾಡಿನಲ್ಲಿ ಇಂದು ಬೆಳಗ್ಗೆ 10.30ರ ಸುಮಾರಿಗೆ ಗುಂಡಿನ ಚಕಮಕಿ ನಡೆಯಿತು ಎಂದು ಬಸ್ತಾರ್ ರೇಂಜ್ ಪೊಲೀಸ್ ಮಹಾನಿರೀಕ್ಷಕ ಸುಂದರರಾಜ್ ತಿಳಿಸಿದ್ದಾರೆ. ಖಚಿತ ಮಾಹಿತಿಯ ಆಧಾರದ ಮೇಲೆ ಕಾರ್ಯಾಚರಣೆ ಪ್ರಾರಂಭಿಸಲಾಗಿತ್ತು. ಜಿಲ್ಲಾ ಮೀಸಲು ಗಾರ್ಡ್ ಮತ್ತು ಕೇಂದ್ರೀಯ ಮೀಸಲು ಪೊಲೀಸ್ ಪಡೆಗೆ ಸೇರಿದ ಸಿಬ್ಬಂದಿ ಜಂಟಿ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು. ಗುಂಡಿನ ಚಕಮಕಿಯು ದೀರ್ಘಕಾಲದವರೆಗೆ ನಡೆಯಿತು. ನಂತರ ಸಮವಸ್ತ್ರ ಧರಿಸಿದ್ದ 9 ನಕ್ಸಲೀಯರ ಶವಗಳನ್ನು ವಶಪಡಿಸಿಕೊಳ್ಳಲಾಗಿದೆ. ಅಲ್ಲದೆ, ಎನ್‌ಕೌಂಟರ್ ಸ್ಥಳದಿಂದ ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಮೈಸೂರು ಮಿತ್ರ ಬುಧವಾರ 4 ಸೆಪ್ಟೆಂಬರ್ 2024

ಪಾಂಡವಪುರ ಪುರಸಭೆಯಲ್ಲಿ ಮೈತ್ರಿ ಧರ್ಮ ಪಾಲನೆ

ಅಧ್ಯಕ್ಷೆಯಾಗಿ ಜೆಡಿಎಸ್‌ನ ಜ್ಯೋತಿಲಕ್ಷ್ಮಿ ಬಾಬು, ಉಪಾಧ್ಯಕ್ಷರಾಗಿ ಬಿಜೆಪಿಯ ಅಶೋಕ್ ಆಯ್ಕೆ


ಪಾಂಡವಪುರ ಪಟ್ಟಣದ ಪುರಸಭೆಯ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾದ ಜೆಡಿಎಸ್‌ನ ಜ್ಯೋತಿಲಕ್ಷ್ಮಿ ಬಾಬು ಅಧ್ಯಕ್ಷೆಯಾಗಿ, ಬಿಜೆಪಿ ಸದಸ್ಯ ಎಲ್.ಅಶೋಕ್ ಉಪಾಧ್ಯಕ್ಷರಾಗಿ ಆಯ್ಕೆಯಾದರು.

ಪಾಂಡವಪುರ, ಸೆ.3– ಪಾಂಡವಪುರ ಪುರಸಭೆಯ ಅಧ್ಯಕ್ಷೆಯಾಗಿ ಜೆಡಿಎಸ್‌ನ ಜ್ಯೋತಿಲಕ್ಷ್ಮಿ ಬಾಬು, ಬಿಜೆಪಿಯ ಎಲ್. ಅಶೋಕ್ ಉಪಾಧ್ಯಕ್ಷರನ್ನಾಗಿ ಅವಿರೋಧವಾಗಿ ಆಯ್ಕೆ ಮಾಡಿಸುವ ಮೂಲಕ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರು ಮೈತ್ರಿಧರ್ಮ ಪಾಲನೆ ಮಾಡಿದರು.

ಪುರಸಭೆಯ ಒಟ್ಟು 23 ಸದಸ್ಯರ ಸಂಖ್ಯಾ ಬಲ ಹೊಂದಿದ್ದು, ಜೆಡಿಎಸ್–18, ಕಾಂಗ್ರೆಸ್–3, ಬಿಜೆಪಿ–1 ಹಾಗೂ ರೈತ ಸಂಘ–1 ಸದಸ್ಯರಿದ್ದಾರೆ. ಅಧ್ಯಕ್ಷ ಸ್ಥಾನ ಸಾಮಾನ್ಯ ಮಹಿಳೆ ಹಾಗೂ ಉಪಾಧ್ಯಕ್ಷ ಸ್ಥಾನ ಸಾಮಾನ್ಯ ವರ್ಗ ಮೀಸಲಾಗಿತ್ತು. ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರ ಸೂಚನೆ ಮೇರೆಗೆ ಅಧ್ಯಕ್ಷ ಸ್ಥಾನಕ್ಕೆ 9ನೇ ವಾರ್ಡ್ ಜೆಡಿಎಸ್ ಸದಸ್ಯೆ ಜ್ಯೋತಿಲಕ್ಷ್ಮಿಬಾಬು ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ 15ನೇ ವಾರ್ಡ್ ಬಿಜೆಪಿಯ ಏಕೈಕ ಸದಸ್ಯ ಎಲ್.ಅಶೋಕ್ ನಾಮಪತ್ರ ಸಲ್ಲಿಸಿದರು.

ಇವರಿಬ್ಬರನ್ನು ಹೊರತುಪಡಿಸಿ ಉಳಿದ ಯಾವೊಬ್ಬ ಸದಸ್ಯರು ಸಹ ನಾಮಪತ್ರ ಸಲ್ಲಿಸದ ಹಿನ್ನೆಲೆಯಲ್ಲಿ ಚುನಾವಣಾಧಿಕಾರಿಯೂ ಆದ ತಹಶೀಲ್ದಾರ್ ಸಂತೋಷ್ ಅವರು ಜೆಡಿಎಸ್‌ನ ಜ್ಯೋತಿ ಲಕ್ಷ್ಮಿಬಾಬು ಅವರನ್ನು ಅಧ್ಯಕ್ಷರಾಗಿ, ಬಿಜೆಪಿಯ ಎಲ್. ಅಶೋಕ್ ಅವರನ್ನು ಉಪಾಧ್ಯಕ್ಷರನ್ನಾಗಿ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಘೋಷಿಸಿದರು. ನೂತನ ಅಧ್ಯಕ್ಷೆ ಜ್ಯೋತಿಲಕ್ಷ್ಮಿಬಾಬು, ಉಪಾಧ್ಯಕ್ಷ ಎಲ್. ಅಶೋಕ್ ಅವರನ್ನು ಎಲ್ಲಾ ಸದಸ್ಯರು, ಮುಖಂಡರು ಅಭಿನಂದನೆ ಸಲ್ಲಿಸಿದರು.

ಮೈತ್ರಿ ಧರ್ಮಪಾಲಿಸಿದ ಮಾಜಿ ಸಚಿವ ಸಿಎಸ್‌ಪಿ: ಪುರಸಭೆಯಲ್ಲಿ ಒಟ್ಟು 23 ಸದಸ್ಯರ ಪೈಕಿ 19 ಮಂದಿ ಜೆಡಿಎಸ್ ಸದಸ್ಯರಿದ್ದು ಸಂಪೂರ್ಣ ಬಹುಮತದೊಂದಿಗೆ ಜೆಡಿಎಸ್ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನವನ್ನು ಪಡೆದುಕೊಳ್ಳಬಹುದಾಗಿತ್ತು. ಆದರೆ, ಸಿ.ಎಸ್.ಪುಟ್ಟರಾಜು ಅವರು ಪುರಸಭೆಯಲ್ಲಿ ಇರುವ ಏಕೈಕ ಬಿಜೆಪಿ ಸದಸ್ಯ ಎಲ್. ಅಶೋಕ್ ಅವರನ್ನು ಉಪಾಧ್ಯಕ್ಷರ ನ್ನಾಗಿ ಮಾಡುವ ಮೂಲಕ ಮೈತ್ರಿಧರ್ಮ ಪಾಲನೆ ಮಾಡಿದರು. ಬಿಜೆಪಿ ಸದಸ್ಯರನ್ನು ಉಪಾಧ್ಯಕ್ಷರನ್ನಾಗಿ ಮಾಡಿದ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರ ನಡೆಗೆ ಬಿಜೆಪಿ ಕಾರ್ಯಕರ್ತರು ಮೆಚ್ಚುಗೆ ವ್ಯಕ್ತಪಡಿಸಿದರು.

ಅಧ್ಯಕ್ಷೆ ಜ್ಯೋತಿಲಕ್ಷ್ಮಿಬಾಬು ಮಾತನಾಡಿ, ನಮ್ಮ ನಾಯಕರಾದ ಸಿ.ಎಸ್.ಪುಟ್ಟರಾಜು ಅವರ ಆಶೀರ್ವಾದದಿಂದ ಪುರಸಭೆಯ ಅಧ್ಯಕ್ಷೆಯಾಗಿ ಆಯ್ಕೆಯಾಗಿದ್ದೇನೆ. ಮುಂದಿನ ದಿನಗಳಲ್ಲಿ ಎಲ್ಲರ ಜತೆಗೂಡಿ ಕೆಲಸ ಮಾಡುವ ಮೂಲಕ ಪುರಸಭೆ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದರು.

ಉಪಾಧ್ಯಕ್ಷ ಎಲ್.ಅಶೋಕ್ ಮಾತನಾಡಿ, ಪುರಸಭೆಯಲ್ಲಿ ಜೆಡಿಎಸ್ ಸಂಪೂರ್ಣ ಬಹುಮತದೊಂದಿಗೆ ಅಧಿಕಾರ ಹಿಡಿಯುವ ಅವಕಾಶ ಇದ್ದರು ಸಹ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಮೈತ್ರಿ ಧರ್ಮಪಾಲನೆಗಾಗಿ ಏಕೈಕ ಬಿಜೆಪಿ ಸದಸ್ಯನಾದ ನನ್ನನ್ನು ಉಪಾಧ್ಯಕ್ಷರನ್ನಾಗಿ ಮಾಡಿದ್ದಾರೆ. ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಪುರಸಭೆಯ ಆವರಣದಲ್ಲಿ ಜೆಡಿಎಸ್ ಹಾಗೂ ಬಿಜೆಪಿ ಸದಸ್ಯರು ಪಟಾಕಿ ಸಿಡಿಸಿ, ಸಿಹಿಹಂಚಿ ಸಂಭ್ರಮಿಸಿದರು. ಅಧ್ಯಕ್ಷೆ ಜ್ಯೋತಿ ಲಕ್ಷ್ಮಿಬಾಬು ಅವರನ್ನು ಮೆರವಣಿಗೆ ಮೂಲಕ ಕರೆದುಕೊಂಡು ಹೋಗಲಾಯಿತು.

ಶ್ರೀರಂಗಪಟ್ಟಣದಲ್ಲಿ ವಿಜೃಂಭಣೆಯ ದಸರಾ ಆಚರಣೆ ಹಿನ್ನೆಲೆ

ಬನ್ನಿಮಂಟಪಕ್ಕೆ ಜಿಪಂ ಸಿಇಓ ಭೇಟಿ, ಪರಿವೀಕ್ಷಣೆ


ದಸರಾ ಮಹೋತ್ಸವ ಹಿನ್ನೆಲೆ ಕಿರಂಗೂರಿನ ಬನ್ನಿಮಂಟಪಕ್ಕೆ ಜಿಪಂ ಸಿಇಓ ಭೇಟಿ ನೀಡಿ, ಪರಿಶೀಲಿಸಿದರು.

ಶ್ರೀರಂಗಪಟ್ಟಣ, ಸೆ.3– ಶ್ರೀರಂಗಪಟ್ಟಣದಲ್ಲಿ ವಿಜೃಂಭಣೆಯಿಂದ ದಸರಾ ಮಹೋತ್ಸವವನ್ನು ಆಚರಿಸಲು ನಿರ್ಧರಿಸಿರುವ ಹಿನ್ನೆಲೆಯಲ್ಲಿ ಜಿಪಂ ಮುಖ್ಯ ಕಾರ್ಯ ನಿರ್ವಾಹಕಾಧಿಕಾರಿ ಶೇಕ್ ತನ್ವೀರ್ ಆಸಿಫ್ ತಾಲೂಕಿನ ಕಿರಂಗೂರಿನ ಬನ್ನಿಮಂಟಪಕ್ಕೆ ಭೇಟಿ ನೀಡಿ, ಪೂರ್ವಭಾವಿ ಸಭೆ ನಡೆಸಿ, ಪರಿವೀಕ್ಷಿಸಿದರು.

ಕೆಲವೇ ದಿನಗಳಲ್ಲಿ ಶ್ರೀರಂಗಪಟ್ಟಣ ದಸರಾ ಪ್ರಾರಂಭವಾಗಲಿದೆ. ಈ ಹಿನ್ನೆಲೆಯಲ್ಲಿ ದಸರಾ ಉದ್ಘಾಟನೆಯಾಗಲಿರುವ ಬನ್ನಿಮಂಟಪ ಆವರಣದಲ್ಲಿ ಸ್ವಚ್ಛತೆಯನ್ನು ಕಾಯ್ದುಕೊಳ್ಳಿ. ಅಲ್ಲದೆ ಐತಿಹಾಸಿಕ ಕೊಳಕ್ಕೆ ಸುಣ್ಣಬಣ್ಣ ಮಾಡಿಸಿ ಮಂಟಪದ ಮುಂದಿನ ಭಾಗದಲ್ಲಿ ಗೇಟ್ ಹಾಗೂ ಬೇಲಿಯನ್ನು ಅಳವಡಿಸಿ ನೀರಿನ ವ್ಯವಸ್ಥೆ ಮಾಡುವಂತೆ ಸ್ಥಳೀಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಟಿ.ಎ.ಪ್ರಶಾಂತ್ ಬಾಬು ಅವರಿಗೆ ನಿರ್ದೇಶನ ನೀಡಿದರು.

ಇದೇ ಸಂದರ್ಭದಲ್ಲಿ ಶ್ರೀರಂಗಪಟ್ಟಣ ತಾಲೂಕು ಕಾರ್ಯ ನಿರ್ವಾಹಕ ಅಧಿಕಾರಿಗಳಾದ ಎ.ಬಿ. ವೇಣು ಹಾಗೂ ಸಹಾಯಕ ನಿರ್ದೇಶಕ ಮೃತ್ಯುಂಜಯ ಹಾಜರಿದ್ದು, ಸಿದ್ಧತೆ ಕೈಗೊಳ್ಳುವ ಬಗ್ಗೆ ಮಾಹಿತಿ ನೀಡಿದರು. ನಂತರ, ಮದ್ದೂರು ತಾಪಂ ಕಚೇರಿಗೆ ಅನಿರೀಕ್ಷಿತ ಭೇಟಿ ನೀಡಿ ಕಚೇರಿ ಕಾರ್ಯ ಕ್ಷಮತೆ, ಸಿಬ್ಬಂದಿಗಳ ಹಾಜರಾತಿ ಪರಿಶೀಲಿಸಿ ವಿಷಯವಾರು ವಿಷಯ ನಿರ್ವಾಹಕರ ಹಂತದಲ್ಲಿ ಬಾಕಿ ಇರುವ ಕಡತಗಳ ಮಾಹಿತಿ ಪಡೆದು, ಸದರಿ ಕಡತಗಳ ವಿಲೇವಾರಿಗೆ ಸಂಬಂಧಿಸಿ ದಂತೆ ಯಾವುದೇ ದೂರುಗಳು ಬಂದಲ್ಲಿ ಸಂಬಂಧಪಟ್ಟ ವಿಷಯ ನಿರ್ವಾಹಕರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮವಹಿಸ ಲಾಗುವುದೆಂದು ಎಚ್ಚರಿಕೆ ನೀಡಿದರು.

ತದನಂತರ ಭಾರತೀನಗರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಭಾರತೀನಗರ ಎ.ಜಿ.ಕಾಲೋನಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಶಾಲಾ ಆವರಣದಲ್ಲಿ ಶುಚಿತ್ವವನ್ನು ಕಾಪಾಡಿಕೊಳ್ಳುವಂತೆ ಹಾಗೂ 1ನೇ ತರಗತಿಗೆ ಹೆಚ್ಚಿನ ಮಕ್ಕಳು ದಾಖಲಾಗುವಂತೆ ಅಗತ್ಯ ಕ್ರಮವಹಿಸಲು ಸೂಚಿಸಿದರು.

ತರುವಾಯ ಮಣಿಗೆರೆ ಗ್ರಾಮದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಭೇಟಿ ನೀಡಿ ಪರಿಶೀಲಿಸಿ ಕಾಲೇಜು ಆವರಣದ ಅಭಿವೃದ್ಧಿ ಕಾಮಗಾರಿ ಹಾಗೂ ಕುಡಿಯುವ ನೀರು ಸಂಪರ್ಕ ಕಾಮಗಾರಿಗಳನ್ನು ತುರ್ತಾಗಿ ಕೈಗೊಳ್ಳಲು ಕ್ರಮವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಮಳವಳ್ಳಿ ತಾಲೂಕು ಪಂಚಾಯಿತಿ ಕಚೇರಿಗೆ ಅನಿರೀಕ್ಷಿತ ಭೇಟಿ ನೀಡಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಕಾರ್ಯಕ್ಷಮತೆ ಬಗ್ಗೆ ಪರಿಶೀಲಿಸಿ, ಲೋಕಾಯುಕ್ತ, ನ್ಯಾಯಾಲಯ ಪ್ರಕರಣಗಳು, ಸಕಾಲ ಯೋಜನೆ, ಮಹಾತ್ಮಗಾಂಧಿ ನರೇಗಾ, ಎನ್.ಆರ್.ಎಲ್.ಎಂ., ಕುಡಿಯುವ ನೀರು, ವಸತಿ ಮತ್ತು ನಿವೇಶನ ಯೋಜನೆಗಳ ಬಗ್ಗೆ ಪರಿಶೀಲಿಸಿದರು. ಸಾರ್ವಜನಿಕರು ಹಾಗೂ ಜನಪ್ರತಿನಿಧಿಗಳಿಂದ ಬರುವ ದೂರು ಹಾಗೂ ಸರ್ಕಾರದಿಂದ ಬರುವ ಇನ್ನಿತರೆ ಪತ್ರಗಳಿಗೆ ಸಂಬಂಧಿಸಿದಂತೆ ನಿಯಮಾನುಸಾರ ನಿಗದಿತ ಅವಧಿಯಲ್ಲಿ ಕ್ರಮ ಕೈಗೊಳ್ಳುವಂತೆ ಹಾಗೂ ವಿವಿಧ ಯೋಜನೆಗಳಡಿ ನಿಗದಿತ ಗುರಿಗನುಗುಣವಾಗಿ ಪ್ರಗತಿ ಸಾಧಿಸುವಂತೆ ಹಾಜರಿಂದ ತಾಲೂಕು ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ನಿರ್ದೇಶನ ನೀಡಿದರು.

ಜಮೀನಿಗಿಳಿದು ನಾಟಿ ಮಾಡಿದ ಎಂಎಲ್‌ಸಿ ವಿವೇಕಾನಂದ


ಕೆ.ಜೆ.ಕೊಪ್ಪಲು ಗ್ರಾಮದಲ್ಲಿ ಎಂಎಲ್‌ಸಿ ವಿವೇಕಾನಂದ ಜಮೀನಿನಲ್ಲಿ ನಾಟಿ ಮಾಡಿದರು.

ಮದ್ದೂರು, ಸೆ.3– ತಾಲೂಕಿನ ಕೌಡ್ಲೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆ.ಜೆ. ಕೊಪ್ಪಲು ಗ್ರಾಮದಲ್ಲಿ ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ಭತ್ತದ ಗದ್ದೆಗಿಳಿದು ರೈತರೊಂದಿಗೆ ಸೇರಿ ನಾಟಿ ಕಾರ್ಯ ಮಾಡುವ ಮೂಲಕ ರೈತಾಪಿ ಮಂದಿಗೆ ಆತ್ಮಸ್ಥೈರ್ಯ ತುಂಬಿದರು.

ಕಳೆದ ಒಂದು ತಿಂಗಳ ಹಿಂದೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಪಾಂಡವಪುರ ತಾಲೂಕಿನ ಸೀತಾಪುರ ಗ್ರಾಮದಲ್ಲಿ ಸ್ವತಃ ತಾವೇ ಗದ್ದೆಗಿಳಿದು ರೈತ ಮಹಿಳೆಯರೊಂದಿಗೆ ನಾಟಿ ಮಾಡುವ ಮೂಲಕ ರಾಜ್ಯದ ಗಮನ ಸೆಳೆದಿದ್ದರು. ಅದೇ ಮಾದರಿಯಲ್ಲಿ ಜೆಡಿಎಸ್‌ನ ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ನಾಟಿ ಮಾಡುವ ಮೂಲಕ ಗಮನ ಸೆಳೆದರು.

ಬಳಿಕ ಮಾತನಾಡಿದ ಅವರು, ನಾನು ಶಿಕ್ಷಕರ ಕ್ಷೇತ್ರದಿಂದ ವಿಧಾನಪರಿಷತ್ತಿಗೆ ಆಯ್ಕೆಯಾಗಿರಬಹುದು. ನಾನು ಸಹ ಹಳ್ಳಿಗಾಡಿನಿಂದ ರೈತನ ಮಗನಾಗಿ ಬಂದಿದ್ದೇನೆ. ಈ ನಿಟ್ಟಿನಲ್ಲಿ ಮಂಡ್ಯ, ಮೈಸೂರು ಭಾಗದ ರೈತರ ಕಷ್ಟಗಳು ನನಗೆ ತಿಳಿದಿದೆ. ರೈತರು ಬೆಳೆ ನಷ್ಟದಿಂದ ಸಾಲದ ಕೂಪಕ್ಕೆ ಸಿಲುಕಿ ಆತ್ಮಹತ್ಯೆಯ ದಾರಿ ಹಿಡಿದಿದ್ದಾರೆ. ಅವರಿಗೆ ಆತ್ಮಸ್ಥೈರ್ಯ ತುಂಬಲು ಜನಪ್ರತಿನಿಧಿಗಳಾದ ನಾವು ಸದನದಲ್ಲಿ ಧನಿ ಎತ್ತುವ ಜೊತೆಗೆ ಇಂತಹ ಕಾರ್ಯಕ್ರಮಗಳಲ್ಲಿ ಭಾಗಿಯಾಗುವ ಮೂಲಕ ರೈತರಿಗೆ ಆತ್ಮಸ್ಥೈರ್ಯ ತುಂಬಬೇಕು ಎಂದರು.

ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ಭತ್ತದ ನಾಟಿ ಮಾಡಲು ನನಗೆ ಪ್ರೇರಣೆಯಾಗಿದ್ದು, 2018ರಲ್ಲಿ ಮುಖ್ಯಮಂತ್ರಿಯಾದ ಸಂದರ್ಭದಲ್ಲಿ ಮಂಡ್ಯದ ಪಾಂಡವಪುರದಲ್ಲಿ ಭತ್ತದ ನಾಟಿ ಮಾಡುವ ಮೂಲಕ ರೈತರಿಗೆ ಧೈರ್ಯ ತುಂಬಿ ನಾನು ನಿಮ್ಮ ಪರ ಇದ್ದೇನೆ ಎಂದಿದ್ದರು. ಅದರಂತೆ ರೈತರ ಸಾಲವನ್ನೂ ಸಹ ಮನ್ನಾ ಮಾಡಿದ್ದರು. ಬಳಿಕ ಇತ್ತೀಚೆಗೆ ಕೇಂದ್ರ ಸಚಿವರಾದ ಮೇಲೂ ಸಹ ರೈತರೊಂದಿಗೆ ನಾಟಿ ಮಾಡಿ ಗಮನ ಸೆಳೆದಿದ್ದರು. ಅವರ ಹಾದಿಯಲ್ಲೇ ನಾನು ಸಹ ಈ ರೀತಿಯ ರೈತ ಪರ ಕೆಲಸಗಳನ್ನು ಮಾಡುತ್ತಾ ಅವರ ಬೆನ್ನಿಗೆ ನಿಲ್ಲುವ ಕೆಲಸ ಮಾಡುತ್ತಿದ್ದೇನೆ ಎಂದು ತಿಳಿಸಿದರು.

ಸಾಹಿತ್ಯ ಸಮ್ಮೇಳನಕ್ಕೆ ಆಗಮಿಸುವ ಮಹಿಳೆಯರ ಆತಿಥ್ಯಕ್ಕೆ ಸಿದ್ಧತೆ


ಕಸಾಪ ಸಭೆಯಲ್ಲಿ ಸುನಂದಾ ಜಯರಾಂ ಮಾತನಾಡಿದರು.

ಮಂಡ್ಯ, ಸೆ.3– ಮಂಡ್ಯ ಜಿಲ್ಲೆಯಲ್ಲಿ ಡಿ.20 ರಿಂದ ಮೂರು ದಿನಗಳ ಕಾಲ ನಡೆಯಲಿರುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಆಗಮಿಸಲಿರುವ ಮಹಿಳೆಯರಿಗೆ ಉತ್ತಮ ಆತಿಥ್ಯ ನೀಡಬೇಕು ಎಂದು ಮಹಿಳಾ ಸಮಿತಿಯ ಅಧ್ಯಕ್ಷೆ ಹಾಗೂ ಮಹಿಳಾ ರೈತ ನಾಯಕಿ ಸುನಂದಾ ಜಯರಾಂ ತಿಳಿಸಿದರು.

ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಮಹಿಳಾ ಸಮಿತಿಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಹಿಳೆಯರಿಗೆ ಬೇಕಿರುವ ಎಲ್ಲಾ ರೀತಿಯ ಮೂಲ ಸೌಕರ್ಯಗಳನ್ನು ಒದಗಿಸಲಾಗುವುದು. ಈ ಬಾರಿ ಹೆಚ್ಚಿನ ಮಹಿಳೆಯರು ನೋಂದಣಿ ಮಾಡಿಕೊಂಡು ಭಾಗವಹಿಸಲು ಯೋಜನೆ ರೂಪಿಸಬೇಕು. ಈ ಬಾರಿ ಪೂರ್ಣಕುಂಭ ವಿನೂತನವಾಗಿರಬೇಕು. ಮಹಿಳೆಯರು ಅಕ್ಷರ ಜಾತ್ರೆಯ ರೀತಿ ವಿವಿಧ ಸಾಹಿತಿಗಳ ಪುಸ್ತಕಗಳನ್ನು ಸಹ ಪೂರ್ಣಕುಂಭದಲ್ಲಿ ಕನ್ನಡ ಬಾವುಟ ಹಿಡಿದು ಸಾಗಲಿ. ಇದರಿಂದ ಮಹಿಳಾ ಸಾಕ್ಷರತೆಯ ಜಾಗೃತಿಗೆ ಜಿಲ್ಲೆ ನೀಡಿರುವ ಪ್ರಾಮುಖ್ಯತೆ ಇಡಿ ರಾಷ್ಟ್ರಕ್ಕೆ ತಿಳಿಯಲಿ ಎಂದರು.

ಕನ್ನಡ ಸಾಹಿತ್ಯ ಸಮ್ಮೇಳನದ ಸಮನ್ವಯ ಸಮಿತಿ ಅಧ್ಯಕ್ಷೆ ಡಾ.ಮೀರಾ ಶಿವಲಿಂಗಯ್ಯ ಅವರು ಮಾತನಾಡಿ, ಪ್ರತಿ ದಿನ ಒಂದು ಲಕ್ಷ್ಕೂ ಹೆಚ್ಚಿನ ಮಹಿಳೆಯರು ಭಾಗವಹಿಸುವ ನಿರೀಕ್ಷೆ ಇದೆ. ಬರುವ ಮಹಿಳೆಯರಿಗೆ ಮೂಲ ಸೌಕರ್ಯಗಳಲ್ಲಿ ಯಾವುದೇ ರೀತಿಯ ತೊಂದರೆಯಾಗದಂತೆ ವ್ಯವಸ್ಥೆ ಮಾಡಬೇಕು. ಕನ್ನಡ ಸಾಹಿತ್ಯ ಪರಿಷತ್ತಿನಿಂದ ಸಮ್ಮೇಳನದ ನೋಂದಣಿಗೆ ಕೊನೆಯವರೆಗೂ ಅವಕಾಶವಿದೆ ಆದರೆ ನೆನಪಿನ ಕಾಣಿಕೆ ನೀಡಲು ಒಂದು ಅಂತಿಮ ದಿನಾಂಕ ನಿಗದಿ ಮಾಡಿ ಆ ದಿನಾಂಕದವರೆಗೆ ನೋಂದಣಿ ಮಾಡಿಕೊಂಡವರಿಗೆ ಮಾತ್ರ ನೀಡಲಾಗುವುದು. ಈ ಬಗ್ಗೆ ನಿಖರ ಮಾಹಿತಿಯನ್ನು ನೀಡಲಾಗುವುದು. ಅದನ್ನು ಸಹ ಮಹಿಳೆಯರಿಗೆ ತಲುಪಿಸಬೇಕು ಎಂದು ಹೇಳಿದರು.

ಮಹಿಳಾ ಸಮಿತಿಯ ಸದಸ್ಯ ಕಾರ್ಯದರ್ಶಿ ಡಾ.ಸೀತಾಲಕ್ಷ್ಮಿ ಮಾತನಾಡಿ, ಮಹಿಳಾ ಸಮಿತಿ ಬೇರೆ ಸಮಿತಿಯೊಂದಿಗೆ ಸಮನ್ವಯವಾಗಿ ಕಾರ್ಯನಿರ್ವಹಿಸಿ ಮಹಿಳೆಯರಿಗೆ ಸೌಲಭ್ಯಗಳನ್ನು ಒದಗಿಸಿಕೊಡಬೇಕು ಈ ಹಿನ್ನೆಲೆಯಲ್ಲಿ ಮಹಿಳಾ ಸಮಿತಿಯ 5 ಸದಸ್ಯರನ್ನೊಳಗೊಂಡ 9 ಉಪ ಸಮಿತಿಗಳನ್ನು ರಚಿಸಲಾಗುವುದು ಎಂದರು.

ಆರೋಗ್ಯ, ವಸತಿ, ಸಾರಿಗೆ, ಆಹಾರ, ಆಸನ, ಸ್ವಯಂ ಸೇವಕರು, ಸಾಂಸ್ಕೃತಿಕ, ನೋಂದಣಿ ಹಾಗೂ ಸಮನ್ವಯ ಉಪ ಸಮಿತಿಗಳನ್ನು ಸಭೆಯಲ್ಲಿ ರಚಿಸಲಾಯಿತು.

ಸಮಿತಿಯ ಸದಸ್ಯರು ಸಮ್ಮೇಳನದ ಮಹಿಳಾ ಗೋಷ್ಠಿಯಲ್ಲಿ ಮಂಡಿಸಬೇಕಾದ ವಿಷಯಗಳ ಕುರಿತು ಮುಂದಿನ ಸಭೆಯಲ್ಲಿ ವಿಷಯಗಳನ್ನು ತಿಳಿಸಲಾಗುವುದು. ವಿಷಯಗಳನ್ನು ಮಾನ್ಯ ರಾಜ್ಯ ಅಧ್ಯಕ್ಷರಿಗೆ ಕಳುಹಿಸುವಂತೆ ಮನವಿ ಮಾಡಿದರು. ಸಮಿತಿಯ ಸದಸ್ಯರು ಸಮ್ಮೇಳನಕ್ಕೆ ಕೊನೆಯ ಕ್ಷಣದಲ್ಲಿ ಸಮ್ಮೇಳನಕ್ಕೆ ಮಹಿಳೆಯರು ಆಗಮಿಸಿ ವಸತಿಯ ತೊಂದರೆಯಾದಲ್ಲಿ ತಮ್ಮ ಮನೆಯಲ್ಲೇ ಆತಿಥ್ಯ ನೀಡಲು ಸಿದ್ಧರಿದ್ದೇವೆ ಎಂದರು.

ಸಭೆಯಲ್ಲಿ ಮಹಿಳಾ ಸಮಿತಿ ಉಪಾಧ್ಯಕ್ಷರಾದ ಸೌಭಾಗ್ಯ ಮಹದೇವು, ಸಂಚಾಲಕಿ ಸಿ.ಜಿ.ಸುಜಾತ ಕೃಷ್ಣ, ಸದಸ್ಯರಾದ ಮಾಲತಿ, ಹೇಮಾವತಿ, ಉಷಾರಾಣಿ, ಚಂದ್ರ ಕಲಾ ಶಿವರಾಮು, ಸಿ.ಕುಮಾರಿ, ಡಾ.ಅನು ಸೂಯ, ನೀಲಾ ಶಿವಮೂರ್ತಿ, ಸುಜಾತಮಣಿ, ಗಾಯಿತ್ರಿ, ಶೋಭಾ ವೆಂಕಟೇಶ್, ವಿನುತಾ, ಶಕುಂತಲ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರಿನ ನಾರಾಯಣ ಆಸ್ಪತ್ರೆಯಲ್ಲಿ ಕಿಡ್ನಿ ಕಸಿ ಸೇವೆ ಆರಂಭ


ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಇತ್ತೀಚೆಗೆ ನಾರಾಯಣ ಆಸ್ಪತ್ರೆ ವೈದ್ಯರ ತಂಡವು ಪತ್ರಿಕಾಗೋಷ್ಠಿ ನಡೆಸಿತು.

ಮೈಸೂರು,ಸೆ.3(ಪಿಎಂ)– ನಾರಾಯಣ ಹೆಲ್ತ್‌ನ ಘಟಕವಾದ ಮೈಸೂರಿನ ನಾರಾಯಣ ಆಸ್ಪತ್ರೆಯಲ್ಲಿ 60 ವರ್ಷದ ಪುರುಷರೊಬ್ಬರಿಗೆ ಯಶಸ್ವಿ ಮೂತ್ರಪಿಂಡ ಕಸಿ ನಡೆಸಿದ್ದು, ಆ ಮೂಲಕ ಕಿಡ್ನಿ ಟ್ರಾನ್ಸ್ ಪ್ಲಾಂಟೇಷನ್ (ಮೂತ್ರಪಿಂಡ ಕಸಿ) ಸೇವೆಗೆ ಆಸ್ಪತ್ರೆಯಲ್ಲಿ ಚಾಲನೆ ನೀಡಲಾಗಿದೆ.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಇತ್ತೀಚೆಗೆ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಆಸ್ಪತ್ರೆಯ ವೈದ್ಯರ ತಂಡ ಈ ವಿಷಯ ಪ್ರಕಟಿಸಿತು. ಆಸ್ಪತ್ರೆಯ ಕ್ಲಿನಿಕಲ್ ನಿರ್ದೇಶಕ ಡಾ.ಎಂ.ಎನ್.ರವಿ ಮಾತನಾಡಿ, ಇದು ಸಮಗ್ರ ಮತ್ತು ಸುಧಾರಿತ ವೈದ್ಯಕೀಯ ಸೇವೆ ಒದಗಿಸುವಲ್ಲಿ ಆಸ್ಪತ್ರೆಯ ಮಹತ್ವದ ಮೈಲುಗಲ್ಲು. ಆ ಮೂಲಕ ಮೈಸೂರು ಹಾಗೂ ನೆರೆ ಜಿಲ್ಲೆಗಳಲ್ಲಿ ವೈದ್ಯಕೀಯ ಸೇವೆಯಲ್ಲಿ ಹೊಸ ಭರವಸೆ ಮೂಡಿಸಿದ್ದೇವೆ ಎಂದು ಹರ್ಷ ವ್ಯಕ್ತಪಡಿಸಿದರು.

60 ವರ್ಷದ ಶಂಕ್ರಪ್ಪ (ಹೆಸರು ಬದಲಿಸಿದೆ) ಅವರಿಗೆ ಯಶಸ್ವಿ ಮೂತ್ರಪಿಂಡ ಕಸಿಯೊಂದಿಗೆ ಈ ಸೇವೆ ಪ್ರಾರಂಭ ಮಾಡಲಾಗಿದೆ. ವರ್ಷದ ಹಿಂದೆ ಮೈಸೂರಿನ ನಾರಾಯಣ ಆಸ್ಪತ್ರೆಯು ನಾಗಮಂಗಲದಲ್ಲಿ ಆಯೋಜಿಸಿದ್ದ ಆರೋಗ್ಯ ಶಿಬಿರದಲ್ಲಿ ಶಂಕ್ರಪ್ಪ ಭಾಗವಹಿಸಿದ್ದರು. ಈ ವೇಳೆ ಇವರಲ್ಲಿ ಅಸಹಜ ರಕ್ತದೊತ್ತಡ ಮಟ್ಟವನ್ನು ಕನ್ಸಲ್ಟೆಂಟ್ ಹೃದ್ರೋಗ ತಜ್ಞ ಡಾ.ಪಿ.ಶ್ರೀನಿವಾಸ್ ಪತ್ತೆಹಚ್ಚಿದ್ದರು. ನಂತರದ ಪರೀಕ್ಷೆಯಲ್ಲಿ ಮೂತ್ರಪಿಂಡ ಸಮಸ್ಯೆ ಪತ್ತೆಯಾಯಿತು. ಬಳಿಕ ಅವರನ್ನು ಆಸ್ಪತ್ರೆಯ ನೆಫ್ರಾಲಜಿ ವಿಭಾಗಕ್ಕೆ ಶಿಫಾರಸ್ಸು ಮಾಡಲಾಯಿತು ಎಂದರು.

ಕನ್ಸಲ್ಟೆಂಟ್ ನೆಫ್ರಾಲಜಿಸ್ಟ್ ಡಾ.ಕೆ.ವೈ.ಯಶವಂತ ಕುಮಾರ್ ಅವರ ಮೇಲ್ವಿಚಾರಣೆಯ ಪರೀಕ್ಷೆಯಲ್ಲಿ ಶಂಕ್ರಪ್ಪರಲ್ಲಿ ಮೂತ್ರಪಿಂಡ ವೈಫಲ್ಯ ಖಾತ್ರಿಯಾಯಿತು. ಕೂಡಲೇ ಅವರಿಗೆ ಡಯಾಲಿಸಿಸ್ ಪ್ರಾರಂಭಿಸಲಾಯಿತು. ಶಂಕ್ರಪ್ಪರ ಕುಟುಂಬವು ಮೂತ್ರಪಿಂಡ ಕಸಿಗೆ ತೀರ್ಮಾನಿಸಿತು. ಬಳಿಕ ಶಂಕ್ರಪ್ಪರ ಕಿರಿಯ ಸಹೋದರ ಸ್ವಪ್ರೇರಣೆಯಿಂದ ಕಿಡ್ನಿ ದಾನಕ್ಕೆ ಮುಂದಾದರು. ಡಾ.ಸಂಜಯ್‌ರಾವ್, ಡಾ. ಪ್ರಶಾಂತ್ ಎಂ.ಕುಲಕರ್ಣಿ, ಡಾ.ಎಸ್. ನಾಗೇಶ್ ಮತ್ತು ಡಾ.ಎಸ್.ನಿತೇಶ್ ಸೇರಿದಂತೆ ಮೂತ್ರಪಿಂಡ ಕಸಿ ತಜ್ಞ ವೈದ್ಯರ ತಂಡವು ಇದೇ ಜುಲೈ 8ರಂದು ಯಶಸ್ವಿ ಕಸಿ ಶಸ್ತ್ರಚಿಕಿತ್ಸೆ ನಡೆಸಿತು. ಕನ್ಸಲ್ಟೆಂಟ್ ನೆಫ್ರಾಲಜಿಸ್ಟ್‌ಗಳಾದ ಡಾ.ವಿಕಾಸ್ ಶೆಟ್ಟರ್, ಡಾ.ಕೆ.ವೈ.ಯಶವಂತ ಕುಮಾರ್ ಅವರ ಮಾರ್ಗದರ್ಶನದಲ್ಲಿ ಶಂಕ್ರಪ್ಪರ ಚಿಕಿತ್ಸೆಯ ಉದ್ದಕ್ಕೂ ಸಮಗ್ರ ಆರೈಕೆಗೆ ಒತ್ತು ನೀಡಲಾಯಿತು ಎಂದು ವಿವರಿಸಿದರು.

ಆಸ್ಪತ್ರೆಯ ಸೌಲಭ್ಯ ನಿರ್ದೇಶಕ ಪವನ್ ಕುಮಾರ್ ಮಾತನಾಡಿ, ಕಿಡ್ನಿ ಕಸಿ ಸೇವೆ ಪ್ರಾರಂಭವು ನಮ್ಮ ಆಸ್ಪತ್ರೆಯ ಪ್ರಮುಖ ಮೈಲಿಗಲ್ಲು. ಇದು ಆಸ್ಪತ್ರೆಯ ವೈದ್ಯಕೀಯ ಕೊಡುಗೆಗಳ ವ್ಯಾಪ್ತಿ ವಿಸ್ತರಿಸಿದ್ದು, ಆಸ್ಪತ್ರೆಯ ಆಡಳಿತದ ಎಲ್ಲಾ ಅಂಶಗಳಲ್ಲೂ ಉನ್ನತ ಗುಣಮಟ್ಟವನ್ನು ಕಾಪಾಡಿಕೊಳ್ಳಲು ನಾವು ಗಮನಹರಿಸಿದ್ದೇವೆ. ನಮ್ಮ ಆಸ್ಪತ್ರೆಯಲ್ಲಿನ ಕಿಡ್ನಿ ಟ್ರಾನ್ಸ್‌ಪ್ಲಾಂಟೇಷನ್ ಸೇವೆ ಕುರಿತು ಹೆಚ್ಚಿನ ಮಾಹಿತಿಗಾಗಿ ಅಥವಾ ಅಪಾಯಿಂಟ್‌ಮೆಂಟ್‌ಗಾಗಿ ಮೊ.ಸಂ. 95380 52378 ಅನ್ನು ಸಂಪರ್ಕಿಸಬಹುದು ಎಂದು ಹೇಳಿದರು.

ಸಾಹಸದಲ್ಲೂ ನೈಪುಣ್ಯತೆ ಮೆರೆದ ನೈಪುಣ್ಯ ಶಾಲೆ ವಿದ್ಯಾರ್ಥಿಗಳು



ಮೈಸೂರಿನ ನೈಪುಣ್ಯ ಶಿಕ್ಷಣ ಸಂಸ್ಥೆ ಮಕ್ಕಳು ವಿವಿಧ ಸಾಹಸ ಕ್ರೀಡೆಗಳಲ್ಲಿ ಭಾಗವಹಿಸಿದ್ದರು.

ಮೈಸೂರು, ಸೆ.3(ಎಸ್‌ಬಿಡಿ)– ಮೈಸೂರಿನ ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್ ಶಿಕ್ಷಣ ಸಂಸ್ಥೆಯ ಮಕ್ಕಳು ಕಲಿಕೆ ಜೊತೆಗೆ ಸಾಹಸ ಚಟುವಟಿಕೆಗಳಲ್ಲೂ ನೈಪುಣ್ಯತೆ ತೋರಿದ್ದಾರೆ.

ವಿದ್ಯಾರ್ಥಿಗಳಲ್ಲಿ ಸಾಹಸ ಪ್ರವೃತ್ತಿ ಮತ್ತು ನಾಯಕತ್ವದ ಗುಣವನ್ನು ಉತ್ತೇಜಿಸಲು ಉದ್ದೇಶದಿಂದ ನೈಪುಣ್ಯ ಶಾಲೆಯ ಕನಕದಾಸನಗರ(ದಟ್ಟಗಳ್ಳಿ) ಹಾಗೂ ಆರ್.ಟಿ. ನಗರ ಕ್ಯಾಂಪಸ್‌ನ ವಿದ್ಯಾರ್ಥಿಗಳಿಗೆ ಸಾಹಸ ಚಟುವಟಿಕೆಗಳ ಪ್ರವಾಸ ಆಯೋಜಿಸಲಾಗಿತ್ತು ನ್ಯಾಷನಲ್ ಅಡ್ವೆಂಚರ್ ಫೌಂಡೇಷನ್ ಸಹಕಾರದೊಂದಿಗೆ ರೇವಣ ಸಿದ್ದೇಶರ ಬೆಟ್ಟದಲ್ಲಿ ನಡೆದ ಸಾಹಸ ಪ್ರವಾಸದಲ್ಲಿ ವಿದ್ಯಾರ್ಥಿಗಳು ಟ್ರೆಕಿಂಗ್ ಜೊತೆಗೆ ಪಕ್ಕದಲ್ಲಿರುವ ಕೆರೆಯಲ್ಲಿ ಕಯಾಕಿಂಗ್, ರಾಫ್ಟಿಂಗ್, ಜಿಪ್ ಲೈನ್ ಹಾಗೂ ಜಿಪ್ ಲೈನ್ ಸೈಕ್ಲಿಂಗ್‌ನಲ್ಲಿ ಭಾಗವಹಿಸಿ, ಸಂಭ್ರಮಿಸಿದರು. ಕ್ರೀಡಾ ಮಾರ್ಗದರ್ಶಕರಾದ ನವೀನ್ ಮತ್ತು ಸೋಮಶೇಖರ್ ಅವರು ಮಕ್ಕಳಿಗೆ ಸಾಹಸ ಚಟುವಟಿಕೆಗಳ ತರಬೇತಿ ನೀಡಿದರು.

ಪಠ್ಯೇತರ ಚಟುವಟಿಕೆ ಭಾಗ: ನೈಪುಣ್ಯ ಶಿಕ್ಷಣ ಸಂಸ್ಥೆಯಲ್ಲಿ ಸಾಹಸ ಕ್ರೀಡೆಯನ್ನು ಪಠ್ಯೇತರ ಚಟುವಟಿಕೆಗಳಲ್ಲಿ ಅಳವಡಿಸಿಕೊಂಡಿದ್ದು, ಪ್ರತಿ 3 ತಿಂಗಳಿಗೊಮ್ಮೆ ವಿವಿಧ ಸಾಹಸ ಕ್ರೀಡೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಈ ಮೂಲಕ ಮಕ್ಕಳಲ್ಲಿ ಧೈರ್ಯ ಹಾಗೂ ನಾಯಕತ್ವ ಬೆಳೆಸುವುದರ ಜೊತೆಗೆ ಅವರಲ್ಲಿ ಪರಿಸರ ಕಾಳಜಿ ಹಾಗೂ ಪರಿಸರ ಸಂರಕ್ಷಣೆಯ ಜವಾಬ್ದಾರಿಯನ್ನು ಮನದಟ್ಟು ಮಾಡಲಾಗುತ್ತಿದೆ ಎಂದು ಕಾರ್ಯಕ್ರಮದ ಸಂಯೋಜಕಿ ಶ್ರೀಮತಿ ರುಕ್ಮಿಣಿ ಚಂದ್ರ ತಿಳಿಸಿದ್ದಾರೆ.

ಇಂದು ಎಂಎಲ್‌ಸಿ ಡಾ.ಡಿ.ತಿಮ್ಮಯ್ಯ ಹುಟ್ಟುಹಬ್ಬ



ಮೈಸೂರು, ಸೆ.3– ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ವತಿಯಿಂದ ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಹುಟ್ಟುಹಬ್ಬವನ್ನು ಬುಧವಾರ ಮಧ್ಯಾಹ್ನ 1ಕ್ಕೆ ತಿಲಕ್‌ನಗರದ ಕಿವುಡು ಮತ್ತು ಅಂಧ ಮಕ್ಕಳ ಶಾಲೆಯ ವಿಶೇಷ ಚೇತನರೊಂದಿಗೆ ಆಚರಿಸಲಾಗುತ್ತಿದೆ.

ಸಾಹಿತಿಗಳಾದ ಪ್ರೊ.ಕಾಳೇಗೌಡ ನಾಗವಾರ, ಪ್ರೊ.ಕೆ.ಎಸ್.ಭಗವಾನ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ್ ಕುಮಾರ್, ಸಮಾಜ ಸೇವಕ ಕೆ.ರಘುರಾಮ್ ವಾಜಪೇಯಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಕನ್ನಡ ಸಾಹಿತ್ಯ ಕಲಾ ಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್, ಜಿಲ್ಲಾ ಕುಂಬಾರರ ಸಂಘದ ಅಧ್ಯಕ್ಷ ಹೆಚ್.ಎಸ್.ಪ್ರಕಾಶ್, ಜಿಲ್ಲಾ ಉಪ್ಪಾರರ ಸಂಘದ ಯೋಗೇಶ್ ಉಪ್ಪಾರ್, ಜಿಲ್ಲಾ ಮಡಿವಾಳರ ಸಂಘದ ರವಿನಂದನ್, ಜಿಲ್ಲಾ ವಿಶ್ವಕರ್ಮ ಬಡಗಿ ಸಂಘದ ಮೊಗಣ್ಣಾಚಾರ್ ಮತ್ತಿತರರು ಭಾಗವಹಿಸಲಿದ್ದಾರೆ ಎಂದು ವೇದಿಕೆ ಅಧ್ಯಕ್ಷ ಕೆ.ಎಸ್.ಶಿವರಾಮು ತಿಳಿಸಿದ್ದಾರೆ.

ಅರಣ್ಯ ಇಲಾಖೆ ಸಿಬ್ಬಂದಿಗೆ ಪದಕ ಪ್ರದಾನ

ಅರಣ್ಯ ಒತ್ತುವರಿ ಕಟ್ಟುನಿಟ್ಟಾಗಿ ತಡೆಯಬೇಕು

ಮುಖ್ಯಮಂತ್ರಿ ಸಿದ್ದರಾಮಯ್ಯ ಖಡಕ್ ಸೂಚನೆ


ಮೈಸೂರು ಜಿಲ್ಲೆಯ ಉಪವಲಯ ಅರಣ್ಯಾಧಿಕಾರಿ ಹಾಗೂ ಮೋಜಣಿದಾರ ಎನ್.ಶ್ರೀನಿವಾಸ, ಗಸ್ತು ಅರಣ್ಯಪಾಲಕ ಎ.ಎಂ.ಮಂಜುನಾಥ್, ಉಪವಲಯ ಅರಣ್ಯಾಧಿಕಾರಿ ಹಾಗೂ ಮೋಜಣಿದಾರ ಎಸ್.ಎಂ. ಮಂಜುನಾಥ, ಆನೆ ಮಾವುತ ಜೆ.ಎಸ್.ವಸಂತರಿಗೆ 'ಅರಣ್ಯ ಮತ್ತು ವನ್ಯಜೀವಿ ಸಂರಕ್ಷಣೆ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಬೆಂಗಳೂರು, ಸೆ.3– ಅರಣ್ಯ ಸಂಪತ್ತಿನ ಸಂರಕ್ಷಣೆಯ ಮಹತ್ವ ಅರಿತಿದ್ದ ಇಂದಿರಾ ಗಾಂಧಿಯವರು ಅರಣ್ಯ ಸಂರಕ್ಷಣಾ ಕಾಯ್ದೆ ಜಾರಿಗೆ ತಂದರು. ಇದು ಅತ್ಯಂತ ನಿಷ್ಠುರವಾಗಿದೆ. ಅರಣ್ಯಾಧಿಕಾರಿಗಳೂ ಅಷ್ಟೇ ನಿಷ್ಠುರವಾಗಿ ಅರಣ್ಯ ಒತ್ತುವರಿ ತಡೆಯಬೇಕು ಎಂದು ಸಿಎಂ ಸಿದ್ದರಾಮಯ್ಯ ಖಡಕ್ ಸೂಚನೆ ನೀಡಿದರು.

ಅರಣ್ಯ ಇಲಾಖೆ ವತಿಯಿಂದ ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆಯೋಜಿಸಿದ್ದ ಮುಖ್ಯಮಂತ್ರಿಗಳ ಪದಕ ಪ್ರದಾನ ಸಮಾರಂಭದಲ್ಲಿ 2022, 2023ನೇ ಸಾಲಿನ ಪದಕ ವಿತರಿಸಿ ಮಾತನಾಡಿದರು.

ಕಾಡುಪ್ರಾಣಿಗಳಿಗೆ ಆಹಾರ, ಮೇವು ಮತ್ತು ನೀರು ಕಾಡಿನ ಒಳಗೇ ಅಗತ್ಯವಿದ್ದಷ್ಟು ದೊರೆತರೆ ಅವು ಕಾಡಿನಿಂದ ಹೊರಗೆ ಬರುವುದಿಲ್ಲ. ಆಗ ಮಾನವ–ಪ್ರಾಣಿ ಸಂಘರ್ಷಕ್ಕೆ ತಡೆ ಬೀಳುತ್ತದೆ. ಮಹಾತ್ಮಗಾಂಧಿಯವರು ಪ್ರಕೃತಿ ಪ್ರಿಯರಾಗಿದ್ದರು. ಪ್ರಕೃತಿ ಮನುಷ್ಯನ ಅಗತ್ಯಗಳನ್ನು ಪೂರೈಸುತ್ತದೆ. ಆದರೆ ಮನುಷ್ಯನ ದುರಾಸೆಗಳನ್ನು ಪೂರೈಸಲು ಆಗುವುದಿಲ್ಲ ಎಂದು ಗಾಂಧಿ ಹೇಳಿದ್ದಾರೆ. ಇವತ್ತಿನ ಪರಿಸರದ ಅನಾಹುತಗಳಿಗೆ ಮನುಷ್ಯನ ದುರಾಸೆಯೇ ಕಾರಣ ಎಂದರು.

ಇಂದು ಪ್ರಶಸ್ತಿ ಸ್ವೀಕರಿಸಿದವರು ಉಳಿದವರಿಗೆ, ಸಮಾಜಕ್ಕೆ ಸ್ಫೂರ್ತಿಯಾಗಲಿ ಎಂದು ಹಾರೈಸಿ, ಆಯಾ ವರ್ಷದ ಪದಕಗಳನ್ನು ಆಯಾ ವರ್ಷವೇ ವಿತರಿಸಬೇಕು ಎಂದು ಸೂಚಿಸಿದರು.

ಸಚಿವ ಈಶ್ವರ್ ಖಂಡ್ರೆಯವರು ಅತ್ಯುತ್ತಮ ಕೆಲಸ ಮಾಡುತ್ತಿದ್ದಾರೆ. ಇವರಿಗೆ ನಿಮ್ಮ ಸಂಪೂರ್ಣ ಸಹಕಾರ ಸಿಕ್ಕರೆ ಇನ್ನಷ್ಟು ಕ್ರಾಂತಿಕಾರಕ ಕೆಲಸ ಮಾಡುತ್ತಾರೆ. ವನ್ಯಜೀವಿ ಮತ್ತು ಅರಣ್ಯ ಸಂಪತ್ತು ಕಾಪಾಡುವ ಜವಾಬ್ದಾರಿ ಪ್ರತಿಯೊಬ್ಬರದ್ದು. ಆಫ್ರಿಕಾ ಬಿಟ್ಟರೆ ಅತಿ ಹೆಚ್ಚು ಅರಣ್ಯ ಪ್ರಾಣಿ ಸಂಪತ್ತು ಇರುವುದು ಭಾರತದಲ್ಲೇ. ಹಾಗೆಯೇ ಅರಣ್ಯದ ಪ್ರಮಾಣ ಇನ್ನೂ ಹೆಚ್ಚಾಗಬೇಕಿದೆ ಎಂದು ಹೇಳಿದರು. ಅರಣ್ಯ, ಜೀವ ಪರಿಸ್ಥಿತಿ ಮತ್ತು ಪರಿಸರ ಇಲಾಖೆ ಸಚಿವರಾದ ಈಶ್ವರ್ ಖಂಡ್ರೆ, ಅರಣ್ಯ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಮಂಜುನಾಥ್ ಪ್ರಸಾದ್, ಅರಣ್ಯಪಡೆ ಮುಖ್ಯಸ್ಥರಾದ ಬ್ರಿಜೇಶ್ ಕುಮಾರ್ ದೀಕ್ಷಿತ್ ಅವರು ಉಪಸ್ಥಿತರಿದ್ದರು.

ವರದಕ್ಷಿಣೆ ಕಿರುಕುಳ; ಗೃಹಿಣಿ ಆತ್ಮಹತ್ಯೆ

ಮೈಸೂರು, ಸೆ3(ಎಸ್‌ಬಿಡಿ)– ಗಂಡನ ಮನೆಯವರ ವರದಕ್ಷಿಣೆ ಕಿರುಕುಳದಿಂದ ಬೇಸತ್ತು 15 ದಿನಗಳಿಂದ ತವರಿನಲ್ಲಿದ್ದ ಗೃಹಿಣಿಯೊಬ್ಬರು ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಮೈಸೂರು ತಾಲೂಕು ಬೆಳವಾಡಿಯಲ್ಲಿ ನಡೆದಿದೆ.

ಇಲ್ಲಿನ ಅಮೃತೇಶ್ವರನಗರದ ಲಕ್ಷ್ಮಮ್ಮ ಅವರ ಪುತ್ರಿ ಜೆ.ಶಿಲ್ಪಾ(22) ನಿನ್ನೆ ಮುಂಜಾನೆ ಆತ್ಮಹತ್ಯೆ ಮಾಡಿಕೊಂಡಿದ್ದು, ಈಕೆಯ ಪತಿ ಹಾಗೂ ಅತ್ತೆ ವಿರುದ್ಧ ಮೈಸೂರಿನ ವಿಜಯನಗರ ಪೊಲೀಸ್ ಠಾಣೆಯಲ್ಲಿ ವರದಕ್ಷಿಣೆ ಕಿರುಕುಳ ಪ್ರಕರಣ ದಾಖಲಾಗಿದೆ.

ಕೂಲಿ ಮಾಡಿಕೊಂಡು ಜೀವನ ನಡೆಸುತ್ತಿರುವ ಲಕ್ಷ್ಮಮ್ಮ ಅವರ ಮೂರು ಮಕ್ಕಳಲ್ಲಿ ಎರಡನೆಯವರಾದ ಶಿಲ್ಪಾ ಅವರನ್ನು ರಾಮನಗರ ಜಿಲ್ಲೆ, ಹೊಸ ದೊಡ್ಡಿ ಗ್ರಾಮದ ಮಹೇಶ್(32) ಅವರೊಂದಿಗೆ 2021ರ ಏಪ್ರಿಲ್ 19ರಂದು ವಿವಾಹ ಮಾಡಿಕೊಡಲಾಗಿತ್ತು. ಆಗ ಮದುವೆ ಮಾಡಿಕೊಟ್ಟರೆ ಸಾಕು ಎಂದಿದ್ದವರು ದಿನ ಕಳೆದಂತೆ ವರದಕ್ಷಿಣೆಗೆ ಪೀಡಿಸುತ್ತಿದ್ದರಂತೆ. ಬೇಡ ಎಂದರೂ ವಿವಾಹದ ಸಂದರ್ಭದಲ್ಲಿ 23 ಗ್ರಾಂ ಚಿನ್ನಾಭರಣ ನೀಡಿದ್ದು, ಶಿಲ್ಪಾ ಬಾಣಂತನ ಮುಗಿಸಿಕೊಂಡು ಗಂಡನ ಮನೆಗೆ ತೆರಳುವಾಗಲೂ 20 ಗ್ರಾಂ ಚಿನ್ನಾಭರಣ ನೀಡಿದ್ದರಂತೆ. ಆದರೂ ವರದಕ್ಷಿಣೆಗಾಗಿ ಶಿಲ್ಪಾಗೆ ಪತಿ ಹಾಗೂ ಅತ್ತೆ ಕಿರುಕುಳ ನೀಡುತ್ತಿದ್ದರಂತೆ. ಈ ಬಗ್ಗೆ ಹೇಳಿಕೊಂಡಿದ್ದ ಶಿಲ್ಪಾ ಅವರನ್ನು ಕಳೆದ ಆಗಸ್ಟ್ 19ರಂದು ತವರಿಗೆ ಕರೆದುಕೊಂಡು ಬರಲಾಗಿತ್ತು. ಎಷ್ಟೇ ಸಮಾಧಾನ ಹೇಳಿದರೂ ಮತ್ತೆ ಕಿರುಕುಳ ನೀಡುತ್ತಾರೆಂಬ ಭಯದಿಂದ ಪತಿ ಮನೆಗೆ ಹೋಗಲು ಹಿಂದೇಟು ಹಾಕಿದ್ದರು. ಕಳೆದ ಭಾನುವಾರ ರಾತ್ರಿ ಊಟ ಮುಗಿಸಿ ಎಲ್ಲರೂ ಮಲಗಿದ್ದರು. ಮುಂಜಾನೆ ಸುಮಾರು 3 ಗಂಟೆ ಸಮಯದಲ್ಲಿ ಶಿಲ್ಪಾ ಅವರ ಮಗು ಅಳುತ್ತಿದ್ದ ಕಾರಣ ಲಕ್ಷ್ಮಮ್ಮ ಕೊಠಡಿಗೆ ಹೋಗಿ ನೋಡಿದಾಗ ಶಿಲ್ಪಾ ಸೀರೆಯಿಂದ ಫ್ಯಾನ್‌ಗೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದರು.

ಈ ಸಂಬಂಧ ಲಕ್ಷ್ಮಮ್ಮ ನೀಡಿರುವ ದೂರಿನನ್ವಯ ವಿಜಯನಗರ ಪೊಲೀಸರು, ಶಿಲ್ಪಾ ಪತಿ ಮಹೇಶ್ ಹಾಗೂ ಅತ್ತೆ ರತ್ನಮ್ಮ ವಿರುದ್ಧ ವರದಕ್ಷಿಣೆ ನಿಷೇಧ ಕಾಯ್ದೆಯಡಿ ಪ್ರಕರಣ ದಾಖಲಿಸಿ, ಮುಂದಿನ ಕ್ರಮ ವಹಿಸಿದ್ದಾರೆ.

ಬಿಜೆಪಿ ಶಾಸಕ ಸುರೇಶ್ ಕುಮಾರ್ ಆಸ್ಪತ್ರೆಗೆ ದಾಖಲು



ಬೆಂಗಳೂರು, ಸೆ.3– ರಾಜಾಜಿನಗರ ಕ್ಷೇತ್ರದ ಬಿಜೆಪಿ ಶಾಸಕ ಎಸ್. ಸುರೇಶ್ ಕುಮಾರ್ ಅವರು ಅನಾರೋಗ್ಯದಿಂದ ಬಳಲುತ್ತಿದ್ದು, ಇಂದು (ಸೆ. 3) ಆಸ್ಪತ್ರೆಗೆ ದಾಖಲಾಗಿದ್ದಾರೆ. ಕೆಲ ದಿನಗಳಿಂದ ಬಹಳ ಆಯಾಸಗೊಂಡಿದ್ದ ಸುರೇಶ್ ಕುಮಾರ್ ಅವರು ಅಪರೂಪದ ಜ್ವರಕ್ಕೆ ತುತ್ತಾಗಿದ್ದಾರೆ ಎಂದು ತಿಳಿದುಬಂದಿದೆ. ಸದ್ಯ ಸುರೇಶ್‌ಕುಮಾರ್ ಅವರನ್ನು ಶೇಷಾದ್ರಿಪುರಂನ ಅಪೋಲೋ ಆಸ್ಪತ್ರೆಗೆ ದಾಖಲು ಮಾಡಲಾಗಿದ್ದು, ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಮೈಸೂರು ಪಾದಯಾತ್ರೆ ಬಳಿಕ, ತಿರುಪತಿ ಪ್ರವಾಸ ಮಾಡಿದ್ದ ಸುರೇಶ್ ಕುಮಾರ್‌ಗೆ ಕಳೆದ ನಾಲ್ಕು ದಿನಗಳ ಹಿಂದೆ ಜ್ವರ ಕಾಣಿಸಿಕೊಂಡಿದೆ. ಅಪರೂಪದ ಮ್ಯೂಟೆಂಟ್ ಚಿಕನ್ ಗುನ್ಯಾ ಎಂದು ಹೇಳಲಾಗುತ್ತಿದೆ. ಅಲ್ಲದೇ ಬ್ರೈನ್ ಮತ್ತು ಸ್ಪೈನಲ್ ಕಾರ್ಡ್‌ನಲ್ಲಿ ಸಮಸ್ಯೆ ಕಾಣಿಸಿಕೊಂಡಿದೆ ಎಂದು ತಿಳಿದುಬಂದಿದೆ. ಇದರಿಂದ ಸುರೇಶ್ ಕುಮಾರ್ ತೀವ್ರ ಸುಸ್ತಾಗಿದ್ದಾರೆ.

ಕೊಡಗು ಜಿಲ್ಲಾದ್ಯಂತ 'ಕೈಲ್ ಪೊಳ್ದ್' ಸಂಭ್ರಮ

ಸಾಂಪ್ರದಾಯಿಕ ಕೋವಿ, ಒಡಿಕತ್ತಿ, ಪೀಚೆಕತ್ತಿ ಆಯುಧಗಳಿಗೆ ಪೂಜೆ



ಕೈಲ್‌ಪೊಳ್ದ್ ಅಂಗವಾಗಿ ಕೊಡವರ ಸಾಂಪ್ರದಾಯಿಕ ಕೋವಿ, ಒಡಿಕತ್ತಿ, ಪೀಚೆಕತ್ತಿ ಆಯುಧಗಳನ್ನು ಪೂಜಿಸಲಾಯಿತು.

ಮಡಿಕೇರಿ, ಸೆ.3–ಕೊಡಗು ಜಿಲ್ಲಾದ್ಯಂತ 'ಕೈಲ್ ಪೊಳ್ದ್' ಹಬ್ಬವನ್ನು ಸಂಪ್ರಾಯದಂತೆ ಸಂಭ್ರಮದಿಂದ ಆಚರಿಸಲಾಯಿತು.

ಸೆ.3 ರಂದು ಜಿಲ್ಲಾ ಕೇಂದ್ರ ಮಡಿಕೇರಿ ಸೇರಿದಂತೆ ಕೊಡಗಿನ ವಿವಿಧೆಡೆ ಕೈಲ್ ಪೊಳ್ದ್ ಆಚರಿಸಲಾಗುವುದು. ನಾಲ್ಕು ನಾಡ್ ಹಾಗೂ ಮುತ್ತ್‌ನಾಡ್‌ಗಳಲ್ಲಿ ಶಾಸ್ತ್ರ ನೋಡಿಯೇ ಆಗಸ್ಟ್ ಕೊನೆಯ ವಾರದಲ್ಲಿ ಹಬ್ಬಕ್ಕೆ ದಿನ ನಿಶ್ಚಯಿಸುತ್ತಾರೆ. ಹೀಗಾಗಿ ಹಲವು ಕಡೆಗಳಲ್ಲಿ ಒಂದೊಂದು ದಿನ ಹಬ್ಬ ಆಚರಣೆ ನಡೆಯುತ್ತದೆ.

ಕೈಲ್‌ಪೊಳ್ದ್ ಹಬ್ಬದ ಹಿನ್ನೆಲೆಯಲ್ಲಿ ಕುಟುಂಬ ಸದಸ್ಯರು ತಮ್ಮ ಐನ್‌ಮನೆಗಳಲ್ಲಿ ಸೇರಿ ಪವಿತ್ರ ಸ್ಥಾನವಾದ ನೆಲ್ಲಕ್ಕಿ ನಡುಬಾಡೆ ದೇವನೆಲೆಗೆ ನಮಸ್ಕರಿಸಿ ನಂತರ ಹಿರಿಯರ ಆರ್ಶೀವಾದ ಪಡೆದರು. ನೆಲ್ಲಕ್ಕಿ ನಡುಬಾಡೆಯಲ್ಲಿ ಶುಭ್ರಗೊಳಿಸಿ ಅಲಂಕರಿಸಿಟ್ಟ ಸಾಂಪ್ರದಾಯಿಕ ಆಯುಧಗಳಾದ ಕೋವಿ, ಒಡಿಕತ್ತಿ, ಪೀಚೆಕತ್ತಿ, ಕೃಷಿ ಪರಿಕರಗಳಾದ ನೊಗ, ನೇಗಿಲು, ಬೇಟೆಗೆ ಬಳಸುವ ಈಟಿ, ಭರ್ಜಿ ಸೇರಿದಂತೆ ವಿವಿಧ ಆಯುಧಗಳನ್ನು ಗಂಧದ ತಿಲಕ ಹಾಗೂ ವಿಶೇಷವಾದ 'ತೋಕ್ ಪೂ' ಅನ್ನು ಅಲಂಕರಿಸಿಡಲಾಗಿತ್ತು. ಎಲ್ಲಾ ಆಯುಧಗಳಿಗೂ ಪೂಜಿಸಿ, ಕೊಡಿಬಾಳೆ ಎಲೆಯಲ್ಲಿ ಹಬ್ಬದ ವಿಶೇಷ ಭೋಜನವನ್ನು ದೇವರಿಗೆ ಸಮರ್ಪಿಸಿ ನೆಮ್ಮದಿಗಾಗಿ ಸಾಮೂಹಿಕವಾಗಿ ಪ್ರಾರ್ಥಿಸಲಾಯಿತು.

ಹಲವು ಕಡೆಗಳಲ್ಲಿ ತೆಂಗಿನ ಕಾಯಿಗೆ ಗುಂಡು ಹೊಡೆಯುವ ಸ್ಪರ್ಧೆ ಏರ್ಪಡಿಸಿ ಹಿರಿಯರು, ಕಿರಿಯರು, ಮಹಿಳೆಯರು ತೆಂಗಿನ ಕಾಯಿಗೆ ಗುಂಡು ಒಡೆದು ಶೌರ್ಯ ಪ್ರದರ್ಶಿಸಿದರು. ಕೈಲ್‌ಪೊಳ್ದ್ ಹಬ್ಬಕ್ಕೆ ತನ್ನದೆ ಸಂಪ್ರದಾಯಿಕ ಹಿನ್ನೆಲೆ ಇದ್ದು, ಕೊಡವ ಜನಾಂಗದವರ ಪಾಲಿಗೆ ಆಯುಧ ಪೂಜೆ ಎಂದೇ ಕರೆಯಲಾಗುತ್ತದೆ. ಕೊಡವ ಜಾನಪದ ಸಾಹಿತ್ಯ ಒಂದರ ಪ್ರಕಾರ ಕೊಡವರು ಆಯುಧಗಳನ್ನು ಪೂಜಿಸುವ ಸಾಂಕೇತವಾಗಿ ಕೈಲ್‌ಪೊಳ್ದ್ ಆಚರಿಸುತ್ತಿರುವ ಬಗ್ಗೆ ಪುರಾಣಗಳು ಹೇಳುತ್ತವೆ.

ವಿವಿಧ ಖಾದ್ಯಗಳ ಸವಿ



ಗುಮ್ಮನಕೊಲ್ಲಿಯಲ್ಲಿ ಕೊಡಗು ಗೌಡ ಸಮಾಜಗಳ ಒಕ್ಕೂಟದ ಉಪಾಧ್ಯಕ್ಷ ಪೊನ್ನಚ್ಚನ ಎಂ.ಮೋಹನ್ ಮನೆಯಲ್ಲಿ ಆಯುಧಗಳಿಗೆ ಪೂಜಿಸಲಾಯಿತು.

ಕುಶಾಲನಗರ, ಸೆ.3–ಕುಶಾಲನಗರ, ಸುಂಟಿಕೊಪ್ಪ, ಕೂಡಿಗೆ, ಗುಡ್ಡೆಹೊಸೂರು, ನಂಜರಾಯಪಟ್ಟಣ, ರಂಗಸಮುದ್ರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮಂಗಳವಾರ ಕೈಲ್ ಪೋಳ್ದ್ ಆಚರಿಸಲಾಯಿತು.

ಭತ್ತದ ಕೃಷಿ ಕೆಲಸ ಮುಗಿದ ನಂತರ ಕೈಲ್ ಪೋಳ್ದ್ ಆಚರಣೆಯಲ್ಲಿ ರೈತರು ಕೃಷಿ ಉಪಕರಣಗಳನ್ನು ಒಪ್ಪೋರೋಣವಾಗಿಟ್ಟು ಸಾಂಪ್ರದಾಯಿಕವಾಗಿ ಪೂಜೆ ಸಲ್ಲಿಸಿದರು. ಹಬ್ಬದ ಆಚರಣೆಯಲ್ಲಿ ಕುಟುಂಬಸ್ಥರು, ಸ್ನೇಹಿತರು ಹಾಗೂ ನೆರೆ ಹೊರೆಹೊರೆಯವರ ಜತೆಗೂಡಿ ಹಬ್ಬದ ಸಂಭ್ರಮದಲ್ಲಿ ಪಾಲ್ಗೊಂಡಿದ್ದರು.

ಮನೆಗಳಲ್ಲಿ ಪಂದಿಕರಿ ಸೇರಿದಂತೆ ಕಡುಬಿಟ್ಟು, ಪಾಯಸ ಮತ್ತಿತರ ಖಾದ್ಯಗಳನ್ನು ತಯಾರಿಸಿ ಎಲ್ಲರೂ ಜತೆಗೂಡಿ ಊಟ ಸವಿದು ಸಂಭ್ರಮಿಸಿದರು. ಕುಶಾಲನಗರದ ಗುಮ್ಮನಕೊಲ್ಲಿಯಲ್ಲಿ ಕೊಡಗು ಗೌಡ ಸಮಾಜಗಳ ಒಕ್ಕೂಟದ ಉಪಾಧ್ಯಕ್ಷ ಪೊನ್ನಚ್ಚನ ಎಂ.ಮೋಹನ್ ಮತ್ತು ಕವಿತಾ ದಂಪತಿ ಮನೆಯಲ್ಲಿ ಆಯುಧಗಳನ್ನು ಒಪ್ಪೋರಣವಾಗಿಟ್ಟು ಪೂಜಿಸಿ ಕೈಲ್ ಪೋಳ್ದ್ ಆಚರಿಸಲಾಯಿತು.

ಸಿದ್ದಾಪುರದಲ್ಲಿ ವಿಜೃಂಭಣೆಯ ಶೋಭಾಯಾತ್ರೆ



ಸಿದ್ದಾಪುರದಲ್ಲಿ ವಿಶ್ವ ಹಿಂದೂ ಪರಿಷತ್ ಸ್ಥಾಪನ ದಿನದ ಅಂಗವಾಗಿ ಶೋಭಾಯಾತ್ರೆ ನಡೆಸಲಾಯಿತು.

ಸಿದ್ದಾಪುರ, ಸೆ.3–ವಿಶ್ವ ಹಿಂದೂ ಪರಿಷತ್‌ನ 60ನೇ ವರ್ಷದ ಸ್ಥಾಪನ ದಿನ ಹಾಗೂ ಷಷ್ಠಿಪೂರ್ತಿ ಸಂಭ್ರಮದ ಪ್ರಯುಕ್ತ ಸಿದ್ದಾಪುರದಲ್ಲಿ ವಿಜೃಂಭಣೆಯಿಂದ ಶೋಭಾಯಾತ್ರೆ ನಡೆಸಲಾಯಿತು.

ವಿಶ್ವ ಹಿಂದೂ ಪರಿಷತ್ ಹಾಗೂ ಶ್ರೀ ಕೃಷ್ಣ ಜನ್ಮಾಷ್ಟಮಿ ಸಮಿತಿ ವತಿಯಿಂದ ಇಲ್ಲಿನ ಶ್ರೀ ದುರ್ಗಾ ಭಗವತಿ ದೇವಾಲಯದಲ್ಲಿ ಗೋ ಪೂಜೆ ಸಲ್ಲಿಸಿ, ಶೋಭಾಯಾತ್ರೆಗೆ ಚಾಲನೆ ನೀಡಲಾಯಿತು. ಇದೇ ವೇಳೆ ಶ್ರೀಕೃಷ್ಣ ವೇಷ ಧರಿಸಿದ ಪುಟಾಣಿಗಳು ಕೃಷ್ಣ ಲೋಕವನ್ನೇ ಸೃಷ್ಟಿಸಿದರು. ಇನ್ನೂ ಮಕ್ಕಳೊಂದಿಗೆ ಪೋಷಕರು ಮೆರವಣಿಗೆಯಲ್ಲಿ ಪಾಲ್ಗೊಂಡು ಗಮನ ಸೆಳೆದರು.

ಇಲ್ಲಿನ ಮುಖ್ಯ ರಸ್ತೆ ಮಾರ್ಗವಾಗಿ ಬಸ್ ನಿಲ್ದಾಣವರೆಗೆ ಸಾಗಿದ ಮೆರವಣಿಗೆಯಲ್ಲಿ ಕೃಷ್ಣ, ರಾಧೆ ವೇಷಧಾರಿ ಪುಟಾಣಿಗಳು, ಮಾಲ್ದಾರೆಯ ಮುತ್ತಪ್ಪನ್ ಚಂಡೆ ವಾದ್ಯದೊಂದಿಗೆ ಭಾರತಾಂಬೆ ಹಾಗೂ ಶ್ರೀಕೃಷ್ಣನ ಚಿತ್ರಗಳು ಶೋಭಾಯಾತ್ರೆಗೆ ಮೆರಗು ನೀಡಿದವು. ನಂತರ ಎಸ್‌ಎನ್‌ಡಿಪಿ ಸಭಾಂಗಣದಲ್ಲಿ ಸಮರೋಪಗೊಂಡಿತು.

ವಿಶ್ವ ಹಿಂದೂ ಪರಿಷತ್ ಜಿಲ್ಲಾಧ್ಯಕ್ಷ ಬೋಪಣ್ಣ, ಸಹ ಕಾರ್ಯದರ್ಶಿ ಯತೀಶ್, ಅಖಿಲ ಭಾರತ ವಿದ್ಯಾರ್ಥಿ ಪರಿಷತ್ ಪ್ರಮುಖ ಧನಂಜಯ್, ಭಜರಂಗ ದಳದ ಜಿಲ್ಲಾ ಸಂಚಾಲಕ ಪ್ರವೀಣ್ ಸಿದ್ದಾಪುರ, ಜಿಲ್ಲಾ ಅಖಾಡ ಪ್ರಮುಖ್ ರದೀಶ್, ಪ್ರಮುಖರಾದ ಸಂತೋಷ್, ಸುರೇಶ್, ಮುತ್ತಪ್ಪ, ರಿಷ ಸುರೇಂದ್ರನ್ ಹಾಗೂ ನೂರಾರು ಹಿಂದೂ ಕಾರ್ಯಕರ್ತರು, ಪೋಷಕರು ಪಾಲ್ಗೊಂಡಿದ್ದರು.

ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಸುಂದರರಾಜ್ ಹಾಗೂ ಮಡಿಕೇರಿ ಗ್ರಾಮಾಂತರ ವೃತ್ತ ನಿರೀಕ್ಷಕರಾದ ಅನುಪ್ ಮಾದಪ್ಪ, ಪಿ.ಕೆ.ರಾಜು, ಸಿದ್ದಾಪುರ ಠಾಣಾಧಿಕಾರಿ ರಾಘವೇಂದ್ರ ನೇತೃತ್ವದಲ್ಲಿ ಬಿಗಿಬಂದೋಬಸ್ತ್ ಏರ್ಪಡಿಸಲಾಗಿತ್ತು.

ಅಂಗನವಾಡಿ ಮಕ್ಕಳಿಗೆ ಕಲಿಕಾ ಸಾಮಗ್ರಿ ವಿತರಣೆ



ಪಾಲಂಗಾಲ ಕಿರಿಯ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳು ಮತ್ತು ಅಂಗನವಾಡಿ ಮಕ್ಕಳಿಗೆ ಜೈ ಭಾರತ್ ಆಟೋ ಚಾಲಕರು ಹಾಗೂ ಮಾಲೀಕರ ಸಂಘದ ವತಿಯಿಂದ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು.

ಮಡಿಕೇರಿ, ಸೆ.3–ಕೆದಮುಳ್ಳೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪಾಲಂಗಾಲ ಕಿರಿಯ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳು ಮತ್ತು ಅಂಗನವಾಡಿ ಮಕ್ಕಳಿಗೆ ವಿರಾಜಪೇಟೆಯ ಜೈ ಭಾರತ್ ಆಟೋ ಚಾಲಕರು ಹಾಗೂ ಮಾಲೀಕರ ಸಂಘದ ವತಿಯಿಂದ ಪುಸ್ತಕ ಮತ್ತು ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು.

ಸಂಘದ ಅಧ್ಯಕ್ಷ ಎಂ.ಎನ್.ಶಿವು ಮಾತನಾಡಿ, ಸಂಘ ನಿರಂತರವಾಗಿ ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕ, ಲೇಖನಿ ಮತ್ತಿತರ ಶೈಕ್ಷಣಿಕ ಕಲಿಕಾ ಸಾಮಗ್ರಿಗಳನ್ನು ವಿತರಿಸುವ ಕಾರ್ಯ ಮಾಡುತ್ತಿದೆ. ಈ ಸಮಾಜಮುಖಿ ಕಾರ್ಯಕ್ರಮಗಳಿಗೆ ಆಟೋ ಚಾಲಕರು ಹಾಗೂ ಮಾಲೀಕರು ನೀಡುತ್ತಿರುವ ಸಂಪೂರ್ಣ ಸಹಕಾರವೇ ಕಾರಣವಾಗಿದೆ ಎಂದರು.

ಗ್ರಾಪಂ ಉಪಾಧ್ಯಕ್ಷ ಎಂ.ಎಂ. ಪರಮೇಶ್ವರ್ ಮಾತನಾಡಿದರು. ಸಂಘದ ಗೌರವಾಧ್ಯಕ್ಷ ತೋರೆರ ಪ್ರಭು ಕುಟ್ಟಪ್ಪ, ಪ್ರಧಾನ ಕಾರ್ಯದರ್ಶಿ ಬಿ.ಕೆ.ಜೀವನ್, ಖಜಾಂಚಿ ಅರ್ಜುನ್ ತಿಮ್ಮಯ್ಯ, ಕಾರ್ಯದರ್ಶಿ ಜಾಕೂಬ್ ನರೋನ್, ಕಾರ್ಯದರ್ಶಿ ಬೆಳ್ಳಿಯಪ್ಪ ಪುಟ್ಟ, ಸದಸ್ಯ ಈರಪ್ಪ, ಗ್ರಾಪಂ ಮಾಜಿ ಅಧ್ಯಕ್ಷ ಶೀಲಾ ಮೇದಪ್ಪ, ಶಿಕ್ಷಕರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಮೊಸರು ಕುಡಿಕೆ ಒಡೆಯುವ ಸ್ಪರ್ಧೆ



ಮಡಿಕೇರಿಯಲ್ಲಿ ಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ಮೊಸರು ಕುಡಿಕೆ ಒಡೆಯುವ ಸ್ಪರ್ಧೆ ನಡೆಯಿತು.

ಮಡಿಕೇರಿ, ಸೆ.3–ನಗರದ ಗೌಳಿಬೀದಿಯ ಶ್ರೀ ಕಂಚಿ ಕಾಮಾಕ್ಷಿಯಮ್ಮ ದೇವಾಲಯದಲ್ಲಿ ಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ಮೊಸರು ಕುಡಿಕೆ ಒಡೆಯುವ ಸ್ಪರ್ಧೆ ಹಾಗೂ ಮಕ್ಕಳ ಛದ್ಮವೇಷ ಸಂಭ್ರಮದಿಂದ ನಡೆಯಿತು.

ಗೌಳಿ ಸಮುದಾಯದವರು ಅನಾದಿ ಕಾಲದಿಂದಲೂ ವಿಶೇಷವಾಗಿ ಆಚರಿಸಿಕೊಂಡು ಬರುತ್ತಿರುವಂತೆ ಶ್ರೀಕೃಷ್ಣ ಜಯಂತಿಯನ್ನು ಈ ವರ್ಷವೂ ದೇವಾಲಯ ಸಮಿತಿಯಿಂದ ಭಕ್ತಿಯಿಂದ ಆಚರಿಸಿದರು.

ಮೊಸರು ಕುಡಿಕೆ ಒಡೆಯುವ ಸ್ಪರ್ಧಿಗಳಾಗಿ ಸಂತೋಷ್ ಬಲರಾಮ್ ಹಾಗೂ ಮಹೇಶ್ ರಾಮು ಭಾಗವಹಿಸಿದರು. ಸ್ಪರ್ಧೆಗೂ ಮುನ್ನ ದೇವಾಲಯದಲ್ಲಿ ಶ್ರೀಕೃಷ್ಣನಿಗೆ ವಿಶೇಷ ಪೂಜೆ, ಶ್ರೀ ರಾಮಾಂಜನೇಯ ಭಜನಾ ಮಂಡಳಿಯಿಂದ ಭಜನಾ ಕಾರ್ಯಕ್ರಮ ನಡೆಯಿತು. ನಂತರ ಪ್ರಸಾದ ವಿನಿಯೋಗ ಮಾಡಲಾಯಿತು. ಇದೇ ವೇಳೆ ಇಬ್ಬರು ಯುವಕರು ಮೊಸರು ಕುಡಿಕೆ ಒಡೆಯಲು ಮುಂದಾದರು. ಯುವಕರು ನೀರಿನ ಏಟನ್ನು ಲೆಕ್ಕಿಸದೆ ವಾದ್ಯಕ್ಕೆ ಸರಿಯಾಗಿ ಹೆಜ್ಜೆ ಹಾಕುತ್ತಾ ಮೊಸರು ಕುಡಿಕೆ ಒಡೆಯುವಲ್ಲಿ ಯಶಸ್ವಿಯಾದರು. ವಿಜೇತರಾದ ಸ್ಪರ್ಧಿಗಳಿಗೆ ದೇವಾಲಯದಲ್ಲಿ ಬಹುಮಾನ ನೀಡಲಾಯಿತು.

ಛದ್ಮವೇಷ ಸ್ಪರ್ಧೆ: ಮೊಸರು ಕುಡಿಕೆ ಸ್ಪರ್ಧೆ ನಂತರ ಮಕ್ಕಳಿಗೆ ಏರ್ಪಡಿಸಿದ್ದ ಶ್ರೀಕೃಷ್ಣ, ರಾಧೆ ಛದ್ಮವೇಷ ಸ್ಪರ್ಧೆ ಎಲ್ಲರ ಗಮನ ಸೆಳೆಯಿತು. ಜಿಲ್ಲೆಯ ವಿವಿಧೆಡೆಯಿಂದ ಬಂದ ಶ್ರೀಕೃಷ್ಣ ವೇಷಧಾರಿಗಳು ಉತ್ಸಾಹದಿಂದ ಸ್ಪರ್ಧೆಯಲ್ಲಿ ಪಾಲ್ಗೊಂಡರು.

ಇಂದು ವಿದ್ಯುತ್ ವ್ಯತ್ಯಯ

ಮಡಿಕೇರಿ: ಮಲ್ಲಿಪಟ್ಟಣ–ಶನಿವಾರಸಂತೆ ವಿದ್ಯುತ್ ಮಾರ್ಗದಲ್ಲಿ ದುರಸ್ತಿ ಕಾರ್ಯ ಹಮ್ಮಿಕೊಂಡಿರುವುದರಿಂದ ಸೆ.4ರಂದು ಬೆಳಗ್ಗೆ 10 ರಿಂದ ಸಂಜೆ 5 ಗಂಟೆವರೆಗೆ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದೆ. ಹಂಡ್ಲಿ, ಕೊಡ್ಲಿಪೇಟೆ, ಶನಿವಾರಸಂತೆ, ಆಲೂರು, ಅಂಕನಹಳ್ಳಿ, ಮಣಜೂರು, ಬೀಟಿಕಟ್ಟೆ ಗೋಪಲ್‌ಪುರ, ಬಲ್ಲಾರಳ್ಳಿ, ಬೆಸೂರು, ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ನಿವೃತ್ತ ಮುಖ್ಯ ಶಿಕ್ಷಕಿಗೆ ಸನ್ಮಾನ...

ಕುಶಾಲನಗರ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ ನಿವೃತ್ತ ಮುಖ್ಯ ಶಿಕ್ಷಕಿ ಕೆ.ಆರ್.ರಾಣಿ ಅವರನ್ನು ವಿವಿಧ ಶಾಲಾ ಶಿಕ್ಷಕರು ಸನ್ಮಾನಿಸಿದರು. ಮುಖ್ಯ ಶಿಕ್ಷಕರಾದ ಬಿ.ಎನ್.ಪುಷ್ಪಾ, ಟಿ.ಜಿ.ಪ್ರೇಮಕುಮಾರ್, ಸಿಆರ್‌ಪಿ ಕೆ.ಶಾಂತಕುಮಾರ್, ಶಿಕ್ಷಕರಾದ ಎಸ್.ವಿ.ಸಂತೋಷ್, ಎಂ.ಎಂ.ಭಾರತಿ, ವಿಜಯಲಕ್ಷ್ಮಿ, ಎಚ್.ಎಂ.ವೀಣಾ, ಬಿ.ಬಿ.ಕುಂಞಮ್ಮ, ವಿ.ಪಿ.ಲತಾ, ಎಚ್.ಎಂ.ನೀಲಮ್ಮ, ಎಂ.ಬಿ.ಜಾನಕಿ, ಕೆ.ಭಾಗ್ಯಮ್ಮ, ಪಿ.ಪಿ.ಭವ್ಯ, ಕೆ.ಎ.ಸಿಂಧೂರಾಣಿ, ಎನ್.ಡಿ.ಸೋಮಶೇಖರ್ ಇದ್ದರು.



ಪಕ್ಷೇತರ ಸದಸ್ಯ ಬಸವಣ್ಣ 'ಕೈ' ಸೇರ್ಪಡೆ

ನಗರಸಭೆಯಲ್ಲಿ ಬಲ ಹೆಚ್ಚಿಸಿಕೊಂಡ ಕಾಂಗ್ರೆಸ್



ಚಾಮರಾಜನಗರ ನಗರಸಭೆ ಪಕ್ಷೇತರ ಸದಸ್ಯ ಬಸವಣ್ಣ ಶಾಸಕ ಸಿ.ಪುಟ್ಟರಂಗಶೆಟ್ಟಿ ಹಾಗೂ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಪಿ.ಮರಿಸ್ವಾಮಿ ಸಮ್ಮುಖದಲ್ಲಿ ಕಾಂಗ್ರೆಸ್ ಸೇರ್ಪಡೆಯಾದರು.

ಚಾಮರಾಜನಗರ, ಸೆ.3– ನಗರಸಭೆ 17ನೇ ವಾರ್ಡ್‌ನ ಪಕ್ಷೇತರ ಸದಸ್ಯ ಬಸವಣ್ಣ ಶಾಸಕ ಸಿ.ಪುಟ್ಟರಂಗಶೆಟ್ಟಿ ಹಾಗೂ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಪಿ.ಮರಿಸ್ವಾಮಿ ಸಮ್ಮುಖದಲ್ಲಿ ಮಂಗಳವಾರ ಕಾಂಗ್ರೆಸ್ ಸೇರ್ಪಡೆಯಾದರು.

ನಗರದ ಪ್ರವಾಸಿ ಮಂದಿರದಲ್ಲಿ ಶಾಸಕ ಸಿ.ಪುಟ್ಟರಂಗಶೆಟ್ಟಿ, ಬಸವಣ್ಣ ಅವರನ್ನು ಪಕ್ಷದ ಶಾಲ್ಯ ಹಾಕಿ ಪಕ್ಷಕ್ಕೆ ಬರಮಾಡಿಕೊಂಡರು. ಬಳಿಕ ಮಾತನಾಡಿದ ಶಾಸಕರು, ನಗರಸಭೆ ಅಧಿಕಾರವನ್ನು ಕಾಂಗ್ರೆಸ್ ಹಿಡಿಯುವುದು ಖಚಿತವಾಗಿದೆ. ಈಗಾಗಲೇ ಎಸ್‌ಡಿಪಿಐ ಸದಸ್ಯರು ನಮ್ಮ ಪಕ್ಷಕ್ಕೆ ಬೆಂಬಲ ನೀಡಿರುವುದಾಗಿ ತಿಳಿಸಿದ್ದಾರೆ. ನಗರಸಭೆಯಲ್ಲಿ ಸಂಸದ ಮತ್ತು ಶಾಸಕರು ಸೇರಿ ಕಾಂಗ್ರೆಸ್ ಬಲ ಹೆಚ್ಚಾಗಿದೆ. ಹೀಗಾಗಿ ನಗರಸಭೆ ಆಡಳಿತ ಚುಕ್ಕಾಣಿ ಹಿಡಿಯುವ ಆತ್ಮವಿಶ್ವಾಸ ಇದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಪ್ರಧಾನ ಕಾರ್ಯದರ್ಶಿ ಚಿಕ್ಕಮಹದೇವ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹಮದ್ ಅಸ್ಗರ್, ನಗರಸಭೆ ಸದಸ್ಯರಾದ ಆರ್.ಎಂ.ರಾಜಪ್ಪ, ಆರ್.ಪಿ.ನಂಜುಂಡಸ್ವಾಮಿ, ಮಾಜಿ ಸದಸ್ಯ ಬಸವರಾಜು, ಎಪಿಎಂಸಿ ಸದಸ್ಯ ಆಲೂರು ಪ್ರದೀಪ್, ಮುಖಂಡರಾದ ಎಸ್‌ಪಿಕೆ ಉಮೇಶ್, ಶಿವಮೂರ್ತಿ, ಶ್ರೀಕಾಂತ್ ಇತರರು ಇದ್ದರು.

ಕಾಂಗ್ರೆಸ್‌ನೊಂದಿಗೆ ಗುರುತಿಸಿಕೊಂಡಿರುವ ಬಿಜೆಪಿ ಸದಸ್ಯರ ವಿರುದ್ಧ

ಬಿಜೆಪಿ ಕಾರ್ಯಕರ್ತರ ಬೃಹತ್ ಪ್ರತಿಭಟನೆ



ಗುಂಡ್ಲುಪೇಟೆಯಲ್ಲಿ ಕಾಂಗ್ರೆಸ್‌ನೊಂದಿಗೆ ಗುರುತಿಸಿಕೊಂಡಿರುವ ಬಿಜೆಪಿ ಸದಸ್ಯರ ವಿರುದ್ಧ ಪಕ್ಷದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಗುಂಡ್ಲುಪೇಟೆ, ಸೆ.3– ಪುರಸಭೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಚುನಾವಣೆ ಹಿನ್ನೆಲೆಯಲ್ಲಿ ಕಾಂಗ್ರೆಸ್‌ನೊಂದಿಗೆ ಗುರುತಿಸಿಕೊಂಡಿರುವ ನಾಲ್ವರು ಬಿಜೆಪಿ ಸದಸ್ಯರ ವಿರುದ್ಧ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಪಟ್ಟಣದಲ್ಲಿ ಮಂಗಳವಾರ ಬೃಹತ್ ಪ್ರತಿಭಟನೆ ನಡೆಸಿದರು.

ಮಾಜಿ ಶಾಸಕ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನಕುಮಾರ್ ನೇತೃತ್ವದಲ್ಲಿ ಪಟ್ಟಣದ ಹಳೇ ಬಸ್ ನಿಲ್ದಾಣದಿಂದ ಮೆರವಣಿಗೆ ನಡೆಸಿದ ಕಾರ್ಯಕರ್ತರು, ಪಕ್ಷಾಂತರಿ ಸದಸ್ಯರ ಪ್ರತಿಕೃತಿ ದಹಿಸಿ ಆಕ್ರೋಶ ವ್ಯಕ್ತಪಡಿಸಿದರು. ಬುಧವಾರ (ಸೆ.4) ನಡೆಯುವ ಪುರಸಭೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಚುನಾವಣೆಯಲ್ಲಿ ಪಕ್ಷದ ಅಣತಿಯಂತೆ ನಡೆದುಕೊಳ್ಳದಿದ್ದರೆ ಅಂತಹ ಸದಸ್ಯರ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದರು.

ಸಿ.ಎಸ್.ನಿರಂಜನಕುಮಾರ್ ಮಾತನಾಡಿ, ಸಂವಿಧಾನ ರಕ್ಷಣೆ ಬಗ್ಗೆ ಬೊಬ್ಬೆ ಹೊಡೆಯುವ ಕಾಂಗ್ರೆಸ್ ಶಾಸಕರು ಸಂವಿಧಾನ ವಿರುದ್ಧವಾಗಿ ಪುರಸಭೆ ಅಧಿಕಾರ ಹಿಡಿಯಲು ಮುಂದಾಗಿದ್ದಾರೆ. ಪುರಸಭೆ ಒಟ್ಟು 23 ಸ್ಥಾನಗಳ ಪೈಕಿ ಬಿಜೆಪಿ 13 ಹಾಗೂ ಕಾಂಗ್ರೆಸ್ ಕೇವಲ 8 ಸ್ಥಾನಗಳಿಸಿದೆ. ಆದರೂ ಬಿಜೆಪಿಯ ನಾಲ್ವರು ಸದಸ್ಯರನ್ನು ಕಾಂಗ್ರೆಸ್ ತನ್ನತ್ತ ಸೆಳೆದು ವಾಮಮಾರ್ಗದಲ್ಲಿ ಅಧಿಕಾರ ಹಿಡಿಯಲು ಮುಂದಾಗಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾಂಗ್ರೆಸ್ ಜೊತೆ ಹೋಗಿರುವ ಬಿಜೆಪಿ ಸದಸ್ಯರು ಪಕ್ಷದ ಕಾರ್ಯಕರ್ತರ ಭಾವನೆಗಳ ವಿರುದ್ಧ ನಡೆದುಕೊಂಡಿದ್ದಾರೆ. ಇನ್ನೂ ಕಾಲಮಿಂಚಿಲ್ಲ, ನಾಳೆ ಪಕ್ಷದ ನಿರ್ಧಾರದಂತೆ ಚುನಾವಣೆ ಪ್ರಕ್ರಿಯೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದು ಎಚ್ಚರಿಕೆ ನೀಡಿದರು. ಪುರಸಭೆ ಮಾಜಿ ಅಧ್ಯಕ್ಷ ಪಿ.ಗಿರೀಶ್ ಮಾತನಾಡಿ, ಪಕ್ಷದ ಆದೇಶ ಉಲ್ಲಂಘಿಸಿ ಕಾಂಗ್ರೆಸ್ ಬೆಂಬಲಿಸುವ ಬಿಜೆಪಿ ಸದಸ್ಯರನ್ನು ಯಾವುದೇ ಕಾರಣಕ್ಕೂ ಪುರಸಭೆ ಒಳಗೆ ಹೋಗಲು ಬಿಡುವುದಿಲ್ಲ ಎಂದು ಎಚ್ಚರಿಕೆ ನೀಡಿದರು. ಪ್ರತಿಭಟನೆಯಲ್ಲಿ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಎಸ್.ಸೋಮಶೇಖರ್, ಮಂಡಲಾಧ್ಯಕ್ಷ ಸಿ.ಮಹದೇವಪ್ರಸಾದ್, ಮಾಜಿ ಅಧ್ಯಕ್ಷ ಎಲ್.ಸುರೇಶ್, ಪುರಸಭೆ ಸದಸ್ಯ ನಾಗೇಶ್, ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷ ಬಸವಣ್ಣ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಪ್ರಣಯ್, ತಾಲೂಕು ಅಧ್ಯಕ್ಷ ಸುನಿಲ್ ಮೂಡ್ಲು, ಮುಖಂಡರಾದ ಎಚ್.ವಿ.ಮಂಜುನಾಥ್, ಎಸ್.ಸಿ.ಮಂಜುನಾಥ್, ಬಸವರಾಜು, ಕೃಷ್ಣ, ಮಂಗಳಮ್ಮ, ಕಾರ್ಯಕರ್ತರು ಭಾಗವಹಿಸಿದ್ದರು.

ಚಿರತೆ ದಾಳಿಗೆ ಕರು ಬಲಿ

ಬೇಗೂರು, ಸೆ.3–ಸಮೀಪದ ತಗ್ಗಲೂರು ಗ್ರಾಮದಲ್ಲಿ ಚಿರತೆ ದಾಳಿಗೆ ಕರು ಬಲಿಯಾಗಿದೆ. ಗ್ರಾಮದ ಮಹೇಶ್ ಕುಮಾರ್ ಅವರು ತಮ್ಮ ಕೊಟ್ಟಿಗೆಯಲ್ಲಿ ಹಸುಗಳು ಮತ್ತು ಕರುವನ್ನು ಕಟ್ಟಿ ಹಾಕಿದರು. ಆದರೆ ಸೋಮವಾರ ರಾತ್ರಿ ಆಹಾರ ಅರಸಿ ಬಂದ ಚಿರತೆ ಕರುವಿನ ಮೇಲೆ ದಾಳಿ ನಡೆಸಿ, ಕೊಂದು ಹಾಕಿದೆ.

ಕರುವಿನ ಚೀರಾಟ ಕೇಳಿದ ಮನೆಯವರು ಕೊಟ್ಟಿಗೆಗೆ ಆಗಮಿಸಿದಾಗ ಚಿರತೆ ಕರುವನ್ನು ಅಲ್ಲೇ ಬಿಟ್ಟು ಪರಾರಿಯಾಗಿದೆ. ಮಂಗಳವಾರ ಬಂಡೀಪುರ ಅರಣ್ಯಾಧಿಕಾರಿ ಪರಸಪ್ಪ ಮತ್ತು ಸಿಬ್ಬಂದಿ ಭೇಟಿ ನೀಡಿ, ಪರಿಶೀಲಿಸಿದರು.



ತಗ್ಗಲೂರು ಗ್ರಾಮದಲ್ಲಿ ಚಿರತೆ ದಾಳಿಗೆ ಕರು ಬಲಿಯಾಗಿರುವುದು.

ಗಣಿಗಾರಿಕೆಗೆ ಅವಕಾಶ ನೀಡುವಂತೆ ಹೆಗ್ಗೋಠಾರ ಗ್ರಾಮಸ್ಥರ ಪ್ರತಿಭಟನೆ



ಗಣಿಗಾರಿಕೆಗೆ ಅವಕಾಶ ನೀಡುವಂತೆ ಒತ್ತಾಯಿಸಿ ಹೆಗ್ಗೋಠಾರ ಗ್ರಾಮಸ್ಥರು ಚಾಮರಾಜನಗರ ಜಿಲ್ಲಾಡಳಿತ ಭವನದ ಎದುರು ಪ್ರತಿಭಟನೆ ನಡೆಸಿದರು.

ಚಾಮರಾಜನಗರ, ಸೆ.3–ತಾಲೂಕಿನ ಹೆಗ್ಗೋಠಾರ ಹಾಗೂ ಮುತ್ತಿಗೆ ಗ್ರಾಮ ವ್ಯಾಪ್ತಿಯ ಪ್ರದೇಶಗಳಲ್ಲಿ ಗಣಿಗಾರಿಕೆಗೆ ಅವಕಾಶ ನೀಡುವಂತೆ ಒತ್ತಾಯಿಸಿ ಪ್ರಗತಿಪರ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ಹೆಗ್ಗೋಠಾರ ಗ್ರಾಮಸ್ಥರು ನಗರದ ಜಿಲ್ಲಾಡಳಿತ ಭವನದ ಎದುರು ಮಂಗಳವಾರ ಪ್ರತಿಭಟನೆ ನಡೆಸಿದರು.

ಹೆಗ್ಗೋಠಾರ ಗ್ರಾಮದಲ್ಲಿ ಶೇ.60ರಷ್ಟು ಜನರು ಕೂಲಿ, ಕಟ್ಟಡ ಹಾಗೂ ಗಣಿಗಾರಿಕೆಗೆ ಕಾರ್ಮಿಕರು ವಾಸವಾಗಿದ್ದು, ಇದನ್ನೇ ನಂಬಿಕೊಂಡು ಜೀವನ ಸಾಗಿಸಲಾಗುತ್ತಿದೆ. ಗ್ರಾಮದ ಸರ್ವೆ ನಂ.159ರಲ್ಲಿ ಸುಮಾರು 250 ಎಕರೆ ಪ್ರದೇಶ ಗೋಮಾಳವಾಗಿದ್ದು, ಅದೇ ರೀತಿ ಮುತ್ತಿಗೆ ಗ್ರಾಮದ ಸರ್ವೆ ನಂ.239ರಲ್ಲಿ ಸುಮಾರು 129 ಎಕರೆ ಪ್ರದೇಶ ಸರ್ಕಾರಿ ಖರಾಬು ಆಗಿದೆ. ಈ ಪ್ರದೇಶಗಳಲ್ಲಿ ಗಣಿಗಾರಿಕೆಗೆ ಅವಕಾಶ ನೀಡಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ಪರವಾನಗಿ ಪಡೆದು ಕಲ್ಲು ಗಣಿಗಾರಿಕೆ ನಡೆಸುವುದರಿಂದ ನೂರಾರು ಕಾರ್ಮಿಕರಿಗೆ ಕೆಲಸ ಸಿಗುತ್ತದೆ. ಗಣಿಗಾರಿಕೆಯಿಂದ ಗ್ರಾಮಗಳಿಗೆ ಯಾವುದೇ ತೊಂದರೆ ಇಲ್ಲ. ಆದ್ದರಿಂದ ಗಣಿಗಾರಿಕೆಗೆ ಅವಕಾಶ ನೀಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಬಸವನಪುರ ರಾಜಶೇಖರ್, ಯರಗಂಬಳ್ಳಿ ಪರಶಿವಮೂರ್ತಿ, ಆಲೂರು ಮಲ್ಲು, ಬದನಗುಪ್ಪೆ ಮಹೇಶ್, ಮಗೂರು ಮೂರ್ತಿ, ಕೃಷ್ಣಪ್ಪ, ಸಿ. ಕುಮಾರ್, ಹೆಗ್ಗೋಠಾರ ದುಂಡುಮಾದಯ್ಯ, ವೆಲ್ಡಿಂಗ್ ಲಿಂಗರಾಜು, ಮಂಜು, ಪಟೇಲ್ ಕುಮಾರ್, ಮಹೇಶ್, ಗ್ರಾಪಂ ಸದಸ್ಯ ನಾಗೇಶ್, ಮಲೆಯೂರು ಕುಮಾರ್, ನಾಗೇಂದ್ರ ಪ್ರಸಾದ್, ಯ.ರಾಮಯ್ಯ, ಯ.ನಾಗರಾಜು, ಯ.ಗಿರಿಯಪ್ಪ ಇತರರು ಭಾಗವಹಿಸಿದ್ದರು.

ರುದ್ರಭೂಮಿ ನೀಡುವಂತೆ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಕೆ



ವಿಶ್ವಕರ್ಮ ಸಮುದಾಯಕ್ಕೆ ರುದ್ರಭೂಮಿ ನೀಡುವಂತೆ ಒತ್ತಾಯಿಸಿ ವಿಶ್ವಕರ್ಮ ಕುಶಲಕರ್ಮಿಗಳ ಸಂಘದ ವತಿಯಿಂದ ಡಿಸಿ ಶಿಲ್ಪನಾಗ್ ಅವರಿಗೆ ಮನವಿ ಸಲ್ಲಿಸಲಾಯಿತು.

ಚಾಮರಾಜನಗರ, ಸೆ.3–ತಾಲೂಕಿನ ಚಂದಕವಾಡಿ ಹೋಬಳಿ ವಿಶ್ವಕರ್ಮ ಸಮುದಾಯಕ್ಕೆ ರುದ್ರಭೂಮಿ ನೀಡುವಂತೆ ಒತ್ತಾಯಿಸಿ ವಿಶ್ವಕರ್ಮ ಕುಶಲಕರ್ಮಿಗಳ ಸಂಘದ ವತಿಯಿಂದ ಜಿಲ್ಲಾಧಿಕಾರಿ ಶಿಲ್ಪನಾಗ್ ಅವರಿಗೆ ಮನವಿ ಸಲ್ಲಿಸಲಾಯಿತು.

ಸಂಘದ ಅಧ್ಯಕ್ಷ ಮಂಜುನಾಥ್ ವಿಶ್ವಕರ್ಮ, ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಭಾಗ್ಯ ಸೋಮಣ್ಣಚಾರ್, ಮಾಜಿ ಅಧ್ಯಕ್ಷೆ ಸೌಭಾಗ್ಯ, ಮುಖಂಡರಾದ ನಾಗೇಂದ್ರ ನೇತೃತ್ವದಲ್ಲಿ 50ಕ್ಕೂ ಹೆಚ್ಚು ಮಂದಿ ಜಿಲ್ಲಾಧಿಕಾರಿ ಭೇಟಿ ಮಾಡಿ, ರುದ್ರಭೂಮಿ ನೀಡುವಂತೆ ಮನವಿ ಸಲ್ಲಿಸಿದರು.

ಚಂದಕವಾಡಿ ಸಮೀಪದ ಸರಗೂರು ಗ್ರಾಮದಲ್ಲಿ 40ಕ್ಕೂ ಹೆಚ್ಚು ವಿಶ್ವಕರ್ಮ ಕುಟುಂಬದವರು ವಾಸಿಸುತ್ತಿದ್ದು, ತಲತಲಾಂತರಗಳಿಂದ ಖಾಸಗಿ ಭೂಮಿಯಲ್ಲಿ ಅಂತ್ಯಸಂಸ್ಕಾರ ಮಾಡಲಾಗುತ್ತಿದೆ. ಆದರೆ, ಇತ್ತೀಚೆಗೆ ಖಾಸಗಿ ಜಮೀನಿನ ಮಾಲೀಕರು ಅಂತ್ಯಸಂಸ್ಕಾರಕ್ಕೆ ಅಡ್ಡಿಪಡಿಸುತ್ತಿದ್ದಾರೆ. ಇದರಿಂದ ಅಂತ್ಯಕ್ರಿಯೆ ನಡೆಸಲು ತೊಂದರೆಯಾಗುತ್ತಿದೆ. ರುದ್ರಭೂಮಿ ಕಲ್ಪಿಸುವಂತೆ ತಹಶೀಲ್ದಾರ್ ಹಾಗೂ ಗ್ರಾಮ ಪಂಚಾಯಿತಿಗೆ ಮನವಿ ಸಲ್ಲಿಸಲಾಗಿದೆ. ಆದರೆ, ಯಾವುದೇ ಕ್ರಮ ಕೈಗೊಂಡಿಲ್ಲ. ಆದ್ದರಿಂದ ಅಗತ್ಯ ಕ್ರಮ ಕೈಗೊಂಡು ರುದ್ರಭೂಮಿ ಒದಗಿಸುವಂತೆ ಜಿಲ್ಲಾಧಿಕಾರಿಗೆ ಮನವಿ ಮಾಡಲಾಯಿತು.

ಈ ಸಂದರ್ಭದಲ್ಲಿ ವಿಶ್ವಕರ್ಮ ಮುಖಂಡರಾದ ಶಶಿಕುಮಾರ್, ಬಸವಣ್ಣ, ರವಿಕುಮಾರ್, ರಂಗಸ್ವಾಮಿ, ಪವನ್, ಮಹದೇವಸ್ವಾಮಿ, ವಿನೋದ್ ಕುಮಾರ್, ರವಿ, ಸಿದ್ದರಾಜು, ದೊಡ್ಡ ಸಿದ್ದಾಚಾರ್, ಸಿದ್ದಲಿಂಗಾಚಾರ್, ತಮ್ಮಯ್ಯಚಾರ್, ಮಹೇಂದ್ರ, ಗಿರೀಶ್, ಲಕ್ಷ್ಮಣಾಚಾರ್, ನಾಗರಾಜಾಚಾರ್, ಪಳನಿಚಾರ್, ಮಹೇಶ್, ಲೋಕೇಶ್, ಸತೀಶ್, ನಂಜುಂಡಸ್ವಾಮಿ ಮತ್ತಿತರರು ಇದ್ದರು.

ರಾಮನಾಯ್ಕ ನಿಧನ



ಚಾಮರಾಜನಗರ, ಸೆ.3–ತಾಲೂಕಿನ ವೀರಯ್ಯನಪುರ ಗ್ರಾಮದ ಲಂಬಾಣಿ ಸಮಾಜದ ಮುಖಂಡ ರಾಮನಾಯಕ (70) ಸೋಮವಾರ ನಿಧನರಾದರು. ಮೃತರು ಪುಣಜನೂರು ಗ್ರಾಪಂ ಮಾಜಿ ಅಧ್ಯಕ್ಷ ಮುನಿನಾಯ್ಕ ಸೇರಿದಂತೆ ಇಬ್ಬರು ಪುತ್ರರು ಹಾಗೂ ಪುತ್ರಿ ಅಗಲಿದ್ದಾರೆ. ಸ್ವಗ್ರಾಮದಲ್ಲಿ ಮಂಗಳವಾರ ಅಂತ್ಯಕ್ರಿಯೆ ನಡೆಯಿತು.

ಗಾಂಜಾ ಬೆಳೆದಿದ್ದವನ ಬಂಧನ

ಕೊಳ್ಳೇಗಾಲ, ಸೆ.3–ಕೊಳ್ಳೇಗಾಲ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯ ಸತ್ತೇಗಾಲ–ಜಾಗೇರಿಯ ಹಳೇಕೋಟೆ ಗ್ರಾಮದಲ್ಲಿ ಗಾಂಜಾ ಬೆಳೆದಿದ್ದ ವ್ಯಕ್ತಿಯನ್ನು ಪೊಲೀಸರು ಬಂಧಿಸಿ, 430 ಗ್ರಾಂ ಗಾಂಜಾ ಗಿಡ ವಶಪಡಿಸಿಕೊಂಡಿದ್ದಾರೆ. ಗ್ರಾಮದ ಪೂಮಲೈ ಬಂಧಿತ. ಈ ತನ್ನ ವಾಸದ ಮನೆಯ ಪಕ್ಕದ ಜಮೀನಿನಲ್ಲಿ ಗಾಂಜಾ ಬೆಳೆದಿದ್ದ. ಮಾಹಿತಿ ಮೇರೆಗೆ ದಾಳಿ ನಡೆಸಿದ ಕೊಳ್ಳೇಗಾಲ ಗ್ರಾಮಾಂತರ ಪೊಲೀಸ್ ಠಾಣೆ ಆರಕ್ಷಕ ಉಪನಿರೀಕ್ಷಕ ಎ.ಎಸ್.ಸುಪ್ರೀತ್ ಹಾಗೂ ಸಿಬ್ಬಂದಿ ಆತನನ್ನು ಬಂಧಿಸಿ, ಗಾಂಜಾ ಗಿಡ ವಶಪಡಿಸಿಕೊಂಡಿದ್ದಾರೆ.

ಜಿ.ಪ್ರಣವಿಗೆ ದ್ವಿತೀಯ ಸ್ಥಾನ

ಯಳಂದೂರು, ಸೆ.3– ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ಆಯೋಜಿಸಿದ್ದ ತಾಲೂಕು ಮಟ್ಟದ ವಿಜ್ಞಾನ ವಿಚಾರಗೋಷ್ಠಿಯಲ್ಲಿ ಪಟ್ಟಣದ ಎಸ್‌ಡಿವಿಎಸ್ ವಿದ್ಯಾಸಂಸ್ಥೆಯ 10ನೇ ತರಗತಿ ವಿದ್ಯಾರ್ಥಿ ಜಿ.ಪ್ರಣವಿ ದ್ವಿತೀಯ ಸ್ಥಾನ ಪಡೆದುಕೊಂಡಿದ್ದಾಳೆ. ಈಕೆ 'ಕೃತಿಕ ಬುದ್ಧಿ ಮತ್ತೆ' ಕುರಿತು ವಿಚಾರ ಮಂಡಿಸಿ ದ್ವಿತೀಯ ಸ್ಥಾನ ಗಳಿಸಿದ್ದಾಳೆ. ಈಕೆಗೆ ಮಾರ್ಗದರ್ಶನ ನೀಡಿದ ವಿಜ್ಞಾನ ಶಿಕ್ಷಕರಾದ ಶಿವಮೂರ್ತಿ ಹಾಗೂ ಅಮೃತ ಅವರಿಗೆ ಸಂಸ್ಥೆಯ ಆಡಳಿತ ಮಂಡಳಿ, ಮುಖ್ಯಶಿಕ್ಷಕರು ಹಾಗೂ ಶಿಕ್ಷಕರು ಅಭಿನಂದನೆ ಸಲ್ಲಿಸಿದ್ದಾರೆ.



ಮೈಸೂರು ಮಿತ್ರ ಬುಧವಾರ 4 ಸೆಪ್ಟೆಂಬರ್ 2024

ತಿ.ನರಸೀಪುರ ಪುರಸಭೆಯಲ್ಲಿ ಕಾಂಗ್ರೆಸ್‌ಗೆ ಅಧಿಕಾರ

ಅಧ್ಯಕ್ಷೆಯಾಗಿ ವಸಂತ, ಉಪಾಧ್ಯಕ್ಷೆಯಾಗಿ ರಾಜೇಶ್ವರಿ ಅವಿರೋಧ ಆಯ್ಕೆ



ತಿ.ನರಸೀಪುರ ಪುರಸಭೆ ಅಧ್ಯಕ್ಷೆಯಾಗಿ ವಸಂತ, ಉಪಾಧ್ಯಕ್ಷೆಯಾಗಿ ರಾಜೇಶ್ವರಿ ಅವಿರೋಧವಾಗಿ ಆಯ್ಕೆಯಾದರು.

ತಿ.ನರಸೀಪುರ, ಸೆ.3– ಪಟ್ಟಣದ ಪುರಸಭೆ ಅಧಿಕಾರ ಕಾಂಗ್ರೆಸ್ ಪಕ್ಷ ಹಿಡಿದಿದ್ದು, ಅಧ್ಯಕ್ಷೆಯಾಗಿ 12ನೇ ವಾರ್ಡ್‌ನ ವಸಂತ ಶ್ರೀಕಂಠ ಹಾಗೂ ಉಪಾಧ್ಯಕ್ಷೆಯಾಗಿ 17ನೇ ವಾರ್ಡ್‌ನ ಎಂ.ರಾಜೇಶ್ವರಿ ರಾಘವೇಂದ್ರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದಿನ ಅಧ್ಯಕ್ಷ ಟಿ.ಎಂ.ನಂಜುಂಡಸ್ವಾಮಿ ಅವರು ತಮ್ಮ ಅಧಿಕಾರಾವಧಿ ಪೂರೈಸಿ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದರಿಂದ ತೆರವಾದ ಸ್ಥಾನಕ್ಕೆ ಮಂಗಳವಾರ ನಡೆದ ಚುನಾವಣೆಯಲ್ಲಿ ಹಿಂದುಳಿದ ವರ್ಗ 'ಎ' ಮಹಿಳೆಗೆ ಮೀಸಲಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಬಿ.ವಸಂತ ಶ್ರೀಕಂಠ ಹಾಗೂ ಪ.ಪಂಗಡ ಮಹಿಳೆಗೆ ಮೀಸಲಾಗಿದ್ದ ಉಪಾಧ್ಯಕ್ಷ ಸ್ಥಾನಕ್ಕೆ ಎಂ.ರಾಜೇಶ್ವರಿ ರಾಘವೇಂದ್ರ ಅವರನ್ನು ಹೊರತು ಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ, ತಹಸೀಲ್ದಾರ್ ಟಿ.ಜಿ. ಸುರೇಶಾಚಾರ್ ಘೋಷಿಸಿದರು.

ಚುನಾವಣೆಯಲ್ಲಿ ಪುರಸಭೆಯ ಒಟ್ಟು 23 ಸದಸ್ಯರ ಪೈಕಿ 20 ಮಂದಿ ಭಾಗವಹಿಸಿದ್ದು, ಎಸ್.ಮದನ್‌ರಾಜ್, ರೂಪಾ ಕರಿಯಪ್ಪ ಹಾಗೂ ಮಹದೇವಿ ಗೈರಾಗಿದ್ದರು.

ಅವಿರೋಧ ಆಯ್ಕೆಯಾಗುತ್ತಿದ್ದಂತೆ ಪುರಸಭೆ ಎದುರು ಜಮಾಯಿಸಿದ್ದ ಕಾಂಗ್ರೆಸ್ ಕಾರ್ಯಕರ್ತರು ಪಟಾಕಿ ಸಿಡಿಸಿ ಸಂಭ್ರಮಿಸಿದರು. ಚಿತ್ರನಟ ಹಾಗೂ ಸದಸ್ಯ ಅರ್ಜುನ್ ರಮೇಶ್ ನೂತನ ಅಧ್ಯಕ್ಷ–ಉಪಾಧ್ಯಕ್ಷರಿಗೆ ಶುಭ ಕೋರಿ ಪಟ್ಟಣದ ಅಭಿವೃದ್ಧಿಗೆ ಉಪಯುಕ್ತ ಯೋಜನೆ ಹಮ್ಮಿಕೊಳ್ಳುವ ಮೂಲಕ ಉತ್ತಮ ಆಡಳಿತ ನಡೆಸುವಂತೆ ಸಲಹೆ ನೀಡಿದರು. ನೂತನ ಅಧ್ಯಕ್ಷೆ ಬಿ.ವಸಂತ ಮಾತನಾಡಿ, ಸಿಎಂ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಸಂಸದ ಸುನೀಲ್ ಬೋಸ್, ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಹಾಗೂ ಪುರಸಭೆ ಸದಸ್ಯರೆಲ್ಲರೂ ತಮ್ಮ ಮೇಲೆ ನಂಬಿಕೆ ಇಟ್ಟು ಅವಿರೋಧವಾಗಿ ಆಯ್ಕೆ ಮಾಡಿದ್ದಾರೆ. ಶುದ್ಧ ಕುಡಿಯುವ ನೀರು ಪೂರೈಕೆ ಮತ್ತು ನೈರ್ಮಲ್ಯ ಕಾಪಾಡಲು ಆದ್ಯತೆ ನೀಡುತ್ತೇನೆ. ಅಭಿವೃದ್ಧಿಗೆ ಆದ್ಯತೆ ಕೊಟ್ಟು ದುಡಿಯುವೆನು ಎಂದರು.

ಉಪಾಧ್ಯಕ್ಷೆ ಎಂ.ರಾಜೇಶ್ವರಿ ಮಾತನಾಡಿ, ಪಟ್ಟಣದ ಅಭಿವೃದ್ಧಿಗೆ ಅಧ್ಯಕ್ಷರಿಗೆ ಸಹಕಾರ ನೀಡುವ ಜೊತೆಗೆ ರಸ್ತೆ, ವಿದ್ಯುತ್ ಹಾಗೂ ಪಟ್ಟಣದ ಸ್ವಚ್ಛತೆಗೆ ಆದ್ಯತೆ ನೀಡಿ ಪುರಸಭೆಯನ್ನು ಮಾದರಿಯನ್ನಾಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಪಟ್ಟಣದಲ್ಲಿ ಬಾಕಿ ಉಳಿದಿರುವ ಕಾಮಗಾರಿಗೆ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಸಂಸದ ಸುನೀಲ್ ಬೋಸ್, ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರರೊಡನೆ ಸಂಪರ್ಕ ಸಾಧಿಸಿ ಹೆಚ್ಚಿನ ಅನುದಾನ ಬರುವಂತೆ ಮಾಡಿಸಲು ಎಲ್ಲಾ ಸದಸ್ಯರ ಸಹಕಾರ ಪಡೆದು ಪ್ರಯತ್ನ ಮಾಡುವುದಾಗಿ ತಿಳಿಸಿದರು.

> ಮುಖ್ಯಮಂತ್ರಿ ಸಿದ್ದರಾಮಯ್ಯ, ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಪುರಸಭೆ ವ್ಯಾಪ್ತಿಯ ಸಮಗ್ರ ಅಭಿವೃದ್ಧಿಗೆ ಮಾಸ್ಟರ್ ಪ್ಲಾನ್ ತಯಾರಿಸಿ ಮತ್ತು ಬಡವರ್ಗದವರಿಗೆ ಮನೆ ಹಾಗೂ ಪುರಸಭೆ ವ್ಯಾಪ್ತಿಯಲ್ಲಿ ಆಗಬೇಕಾದ ಅಭಿವೃದ್ಧಿಗೆ ಎಷ್ಟು ಅನುದಾನ ಬೇಕು ಬಿಡುಗಡೆ ಮಾಡಿಕೊಡುತ್ತೇನೆ. ಎಲ್ಲರೂ ಒಗ್ಗಟ್ಟಾಗಿ ಅಭಿವೃದ್ಧಿಯೊಂದಿಗೆ ಸರ್ಕಾರದ ಸೌಲಭ್ಯಗಳನ್ನು ಮತದಾರರಿಗೆ ತಲುಪಿಸಿ ಎಂದಿದ್ದಾರೆ. ಅದರಂತೆ ಪುರಸಭೆಯಲ್ಲಿ ಸದಸ್ಯರೊಟ್ಟಿಗೆ ಚರ್ಚಿಸಿ ಅಭಿವೃದ್ಧಿಗೆ ಎಲ್ಲರೂ ಕೈಜೋಡಿಸೋಣ.
> – ಸಿ.ಪ್ರಕಾಶ್, ಪುರಸಭೆ ಸದಸ್ಯ

14 ತಿಂಗಳ ಅವಧಿ; ನಾಲ್ವರಿಗೆ ಅಧಿಕಾರ: ಪುರಸಭೆಯ ಅಧಿಕಾರಾವಧಿ 14 ತಿಂಗಳಿದ್ದು, ನಾಲ್ವರಿಗೆ ಸ್ಥಾನ ನೀಡಲು ಆಂತರಿಕ ಒಪ್ಪಂದ ಮಾಡಿಕೊಳ್ಳಲಾಗಿದೆ ಎನ್ನಲಾಗಿದೆ. ಅಧ್ಯಕ್ಷ–ಉಪಾಧ್ಯಕ್ಷರು ಮೊದಲ 7 ತಿಂಗಳ ಅವಧಿಗೆ ವಸಂತ ಶ್ರೀಕಂಠ ಹಾಗೂ ರಾಜೇಶ್ವರಿ ರಾಘು ಅವರಿಗೆ ಅಧಿಕಾರ ನೀಡಿ ಮುಂದಿನ 7 ತಿಂಗಳ ಅವಧಿಗೆ ಮಹದೇವಮ್ಮ ಹಾಗೂ ರೂಪಾ ಕರಿಯಪ್ಪ ಅವರಿಗೆ ನೀಡಲು ಒಪ್ಪಂದ ಮಾಡಿಕೊಳ್ಳಲಾಗಿದ್ದು, ಸಿಎಂ ಸಿದ್ದರಾಮಯ್ಯ ಸಮಕ್ಷಮ ಈ ತೀರ್ಮಾನವಾಗಿದೆ ಎಂದು ತಿಳಿದು ಬಂದಿದೆ.

ಈ ವೇಳೆ ಮಾಜಿ ಅಧ್ಯಕ್ಷರಾದ ಟಿ.ಎಂ. ನಂಜುಂಡಸ್ವಾಮಿ, ಎನ್.ಸೋಮಣ್ಣ, ಸದಸ್ಯರಾದ ಬಾದಾಮಿ ಮಂಜು, ಅರ್ಜುನ್, ಎಲ್. ಮಂಜುನಾಥ್, ಅಹಮ್ಮದ್ ಸಯೀದ್, ಮೆಡಿಕಲ್ ನಾಗರಾಜು, ಎಸ್.ಕೆ ಕಿರಣ್, ವಿ.ಮೋಹನ್, ಸಿದ್ದು, ಪ್ರೇಮ ಮರಯ್ಯ, ನಾಗರತ್ನ ಮಾದೇಶ್, ಬಿ.ಬೇಬಿ ಹೇಮಂತ್, ಜಿ.ರೂಪಶ್ರೀ, ಮಹದೇವಮ್ಮ, ಪಿ.ಶೋಭರಾಣಿ, ಆರ್. ತೇಜಸ್ವಿನಿ, ಕುರುಬರ ಸಂಘದ ಅಧ್ಯಕ್ಷ ಮನ್ನೆ ಹುಂಡಿ ಮಹೇಶ್, ನಿರ್ದೇಶಕ ಹೆಚ್.ಸಿ.ಅರುಣ್ ಕುಮಾರ್, ತಾಪಂ ಮಾಜಿ ಸದಸ್ಯರಾದ ಎಂ.ರಮೇಶ್, ಆಲಗೂಡು ಗ್ರಾಪಂ ಮಾಜಿ ಉಪಾಧ್ಯಕ್ಷ ಚಿಕ್ಕನಂಜಯ್ಯ, ತಾಪಂ ಮಾಜಿ ಉಪಾಧ್ಯಕ್ಷ ಬಿ.ಮರಯ್ಯ, ಮೃಗಾಲಯ ಪ್ರಾಧಿಕಾರದ ಮಾಜಿ ನಿರ್ದೇಶಕ ಅಮ್ಜದ್ ಖಾನ್, ಪುರಸಭೆ ಮಾಜಿ ಅಧ್ಯಕ್ಷ ಕನಕ ಪಾಪು, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಕುಪ್ಯ ಭಾಗ್ಯಮ್ಮ, ಮುಖಂಡರಾದ ಪುಟ್ಟು, ಆರ್.ಮಹದೇವು, ಚೇತನ್, ಕೆ.ಗಣೇಶ್, ಎಂ.ಮಿಥುನ್ ಇನ್ನಿತರರಿದ್ದರು.

ಗಾವಡಗೆರೆಯಲ್ಲಿ ಪ್ರತಿಭಾ ಕಾರಂಜಿ



ಪ್ರತಿಭಾ ಕಾರಂಜಿಯಲ್ಲಿ ಪೌರಾಯುಕ್ತೆ ಮಾನಸ ಮಾತನಾಡಿದರು.

ಹುಣಸೂರು, ಸೆ.3– ಶೈಕ್ಷಣಿಕ ದಿನಗಳಲ್ಲಿ ಮಕ್ಕಳ ಪ್ರತಿಭೆ ಅನಾವರಣವಾಗಬೇಕಾದರೆ ಶಿಕ್ಷಕರ ಪಾತ್ರ ಮಹತ್ವವಾದದು ಎಂದು ಪೌರಾಯುಕ್ತೆ ಮಾನಸ ತಿಳಿಸಿದರು.

ತಾಲೂಕಿನ ಗಾವಡಗೆರೆ ಗುರುಲಿಂಗ ಜಂಗಮ ಮಠದ ಆವರಣದಲ್ಲಿ ವಲಯ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳಲ್ಲಿರುವ ಪ್ರತಿಭೆ ಗುರ್ತಿಸುವ ಕೆಲಸವನ್ನು ಶಿಕ್ಷಕರು, ಪೋಷಕರು ಮಾಡಬೇಕಿದೆ ಎಂದರು.

ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಿಗೂ ಆದ್ಯತೆ ನೀಡಬೇಕಿದೆ. ಪ್ರತಿಯೊಬ್ಬ ವಿದ್ಯಾರ್ಥಿ ಸ್ಪರ್ಧಾತ್ಮಕ ಪರೀಕ್ಷೆಗೆ ತಮ್ಮನ್ನು ತೊಡಗಿಸಿಕೊಂಡಾಗ ಮಾತ್ರ ಸಮಾಜದಲ್ಲಿ ಉನ್ನತ ಸ್ಥಾನಕ್ಕೆ ಏರಲು ಸಾಧ್ಯ ಎಂದರು.

ಕ್ಷೇತ್ರ ಸಮನ್ವಯಾಧಿಕಾರಿ ಹೆಚ್.ಪಿ.ಹೇಮ ಮಾತನಾಡಿ, ಶ್ರೀಮಠ ಸರ್ಕಾರದ ಅನುದಾನವಿಲ್ಲದೆ ನೂರಾರು ಮಕ್ಕಳಿಗೆ ಅನ್ನ, ಅಕ್ಷರದ ಜೊತೆಗೆ ವಸತಿ ಸೌಕರ್ಯ ನೀಡಿ ಉತ್ತರ ಕರ್ನಾಟಕದ ಭಾಗದ ಗ್ರಾಮೀಣ ಮಕ್ಕಳಿಗೆ ಆದ್ಯತೆ ಕೊಡುತ್ತಿರುವ ಶ್ರೀನಟರಾಜ ಸ್ವಾಮಿಗಳ ಕಾರ್ಯ ಶ್ಲಾಘನೀಯ ಎಂದರು.

ಶ್ರೀನಟರಾಜ ಸ್ವಾಮೀಜಿ, ಸಂಸ್ಥೆ ವ್ಯವಸ್ಥಾಪಕಿ ಶಿಲ್ಪ, ಹೆಚ್.ಆರ್. ಕೃಷ್ಣಕುಮಾರ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಗ್ರಾಪಂ ಅಧ್ಯಕ್ಷೆ ಎಸ್.ಶೋಭ, ಮಠದ ವ್ಯವಸ್ಥಾಪಕ ಮಲ್ಲೇಶ್, ಪ್ರಾಂಶುಪಾಲ ರಾಮಶೆಟ್ಟಿ, ಶಾಲೆಯ ಎಲ್ಲಾ ಶಿಕ್ಷಕರು ಇದ್ದರು.

ಸುನೀಲ್ ಬೋಸ್ ಪ್ರೀಮಿಯರ್ ಲೀಗ್‌ಗೆ ಚಾಲನೆ



ಪಂದ್ಯಾವಳಿಗೆ ಸೋಸಲೆ ಪಿಎಸಿಎಸ್ ಅಧ್ಯಕ್ಷ ಎಂ.ಪರಶಿವಮೂರ್ತಿ ಚಾಲನೆ ನೀಡಿದರು.

ತಿ.ನರಸೀಪುರ, ಸೆ.3– ಗ್ರಾಮೀಣ ಯುವಕರ ಪ್ರತಿಭೆಗೆ ವೇದಿಕೆ ಕಲ್ಪಿಸುವ ಉದ್ದೇಶದಿಂದ ಸುನೀಲ್ ಬೋಸ್ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯಾವಳಿ ಆಯೋಜಿಸಲಾಗಿದೆ ಎಂದು ಸಂಸದ ಸುನೀಲ್ ಯುವ ಬ್ರಿಗೇಡ್ ಸಂಚಾಲಕ ಕುಮಾರ್ ರಾಮೇಗೌಡ ತಿಳಿಸಿದರು.

ತಾಲೂಕಿನ ಕೇತಹಳ್ಳಿ ಗ್ರಾಮದ ಬಳಿ ಸಂಸದ ಸುನೀಲ್ ಬೋಸ್ ಹುಟ್ಟು ಹಬ್ಬದ ಪ್ರಯುಕ್ತ ಹಮ್ಮಿಕೊಂಡಿದ್ದ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ಮಾತನಾಡಿದ ಅವರು, ಸಂಸದರಿಗೆ ರಾಜಕೀಯ ಬಲ ತುಂಬಲು ಆರಂಭಗೊಂಡ ಬ್ರಿಗೇಡ್ ತಂಡದಿಂದ ಕಳೆದ ವರ್ಷ ರಕ್ತದಾನ ಹಾಗೂ ಉಚಿತ ಆರೋಗ್ಯ ತಪಾಸಣೆ ಶಿಬಿರ ಹಮ್ಮಿಕೊಳ್ಳಲಾಗಿತ್ತು. ಈ ವರ್ಷ ಕ್ರಿಕೆಟ್ ಪಂದ್ಯಾವಳಿಯನ್ನು ಹಳ್ಳಿಗಾಡಿನ ಯುವಕರಿಗಾಗಿ ಆಯೋಜಿಸಲಾಗಿದೆ ಎಂದರು.

ತಿ.ನರಸೀಪುರದಲ್ಲಿ ಸಕ್ರೀಯ ರಾಜಕಾರಣ ಆರಂಭಿಸಿದ ಸುನೀಲ್ ಬೋಸ್ ಸಂಸದರಾಗಿರುವುದು ಬ್ರಿಗೇಡ್ ತಂಡಕ್ಕೆ ಹೆಮ್ಮೆ ವಿಚಾರ. ಯುವ ನಾಯಕ ಸುನೀಲ್ ಬೋಸ್ ಚಾಮರಾಜನಗರ ಅಭಿವೃದ್ಧಿಗೆ ಆದ್ಯತೆ ನೀಡಲಿ. ಬಡವರು ಮತ್ತು ಮಧ್ಯಮ ವರ್ಗದ ಜನರ ಧ್ವನಿಯಾಗಲಿ. ಮುಂದಿನ ದಿನಗಳಲ್ಲಿ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ನಾಯಕತ್ವದಲ್ಲಿ ಕೇಂದ್ರದಲ್ಲಿ ಅಧಿಕಾರಕ್ಕೆ ಬರಲಿರುವ ಇಂಡಿಯಾ ಸರ್ಕಾರದಲ್ಲಿ ಸಚಿವರಾಗಲಿ ಎಂಬುದು ಯುವ ಬ್ರಿಗೇಡ್‌ನ ಪ್ರತಿಯೊಬ್ಬ ಪದಾಧಿಕಾರಿ ಬಯಕೆಯಾಗಿದೆ ಎಂದರು.

2 ದಿನಗಳ ಕಾಲ ನಡೆಯುವ ಪಂದ್ಯಾವಳಿಯನ್ನು ಸೋಸಲೆ ಪಿಎಸಿಎಸ್ ಅಧ್ಯಕ್ಷ ಎಂ.ಪರಶಿವಮೂರ್ತಿ ಉದ್ಘಾಟಿಸಿದರು. ಪಂದ್ಯಾವಳಿಯಲ್ಲಿ ಹತ್ತಕ್ಕೂ ಹೆಚ್ಚು ತಂಡಗಳು ಭಾಗವಹಿಸಿದ್ದವು. ಸುನೀಲ್ ಬೋಸ್ ಯುವ ಬ್ರಿಗೇಡ್‌ನ ಹರೀಶ್, ರಾಜ್ಯ ಅಹಿಂದ ಬ್ರಿಗೇಡ್ ಅಧ್ಯಕ್ಷ ಕುಮಾರ್, ದೇವರಾಜ್, ಸುದರ್ಶನ್, ಸೋಸಲೆ ಡೈರಿ ಕಾರ್ಯದರ್ಶಿ ನಿಂಗಯ್ಯ, ಅರುಣ್, ಸೋಮುದಾದ, ಅಸ್ಲಾಂ ಪಾಷ, ಕುರುಬರ ಸಂಘದ ನಿರ್ದೇಶಕ ಕೆ.ಅಶ್ವಿನ್ ಕುಮಾರ್, ಅರಣ್ಯ ಇಲಾಖೆಯ ವಿಶ್ವನಾಥ್, ಕಾಂಗ್ರೆಸ್ ಹಿಂದುಳಿದ ವರ್ಗಗಳ ಅಧ್ಯಕ್ಷ ಸಿದ್ದಶೆಟ್ಟಿ, ಮಹದೇವ್, ಪ್ರಶಾಂತ್, ಹರೀಶ್, ಯುವ ಮುಖಂಡರಾದ ತೇಜು, ಮಧು, ನವಾಜ್ ಖಾನ್, ಪ್ರದೀಪ್, ಸಂಪತ್ ಕುಮಾರ್, ಚರಣ, ಆನಂದ್, ಭರತ್, ಆನಂದ್, ತಂಡದ ಮಾಲೀಕರು, ಆಟಗಾರರು ಹಾಗೂ ಸ್ಥಳೀಯರು ಇದ್ದರು.

ನಂಜನಗೂಡು ನಗರಸಭೆಯಲ್ಲಿ ವಾಮಮಾರ್ಗದಿಂದ ಕಾಂಗ್ರೆಸ್ ಅಧಿಕಾರಕ್ಕೆ

ಮಾಜಿ ಶಾಸಕ ಬಿ.ಹರ್ಷವರ್ಧನ್ ವಾಗ್ದಾಳಿ



ಗೋಷ್ಠಿಯಲ್ಲಿ ಮಾಜಿ ಶಾಸಕ ಬಿ.ಹರ್ಷವರ್ಧನ್ ಮಾತನಾಡಿದರು.

ನಂಜನಗೂಡು, ಸೆ.3– ನಂಜನಗೂಡು ನಗರಸಭೆಯಲ್ಲಿ ಕಾಂಗ್ರೆಸ್ ವಾಮಾಮಾರ್ಗದಿಂದ ಅಧಿಕಾರ ಹಿಡಿದಿದೆ ಎಂದು ಮಾಜಿ ಶಾಸಕ ಬಿ.ಹರ್ಷವರ್ಧನ್ ವಾಗ್ದಾಳಿ ನಡೆಸಿದರು.

ನಗರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರಸಭೆಯಲ್ಲಿ ಬಿಜೆಪಿ 15 ಸದಸ್ಯರನ್ನು ಹೊಂದಿದ್ದು, ಮಿತ್ರಪಕ್ಷ ಜೆಡಿಎಸ್ 3 ಸದಸ್ಯರ ಬೆಂಬಲದೊಂದಿಗೆ ಅಧಿಕಾರ ಹಿಡಿಯಬೇಕಿತ್ತು. ಆದರೆ, ಕಾಂಗ್ರೆಸ್‌ನ ಹಿಂಬಾಗಿಲ ರಾಜಕೀಯದಿಂದಾಗಿ ಬಿಜೆಪಿ ಅಧಿಕಾರದಿಂದ ವಂಚಿತವಾಗಿದೆ. ಚುನಾವಣೆಗೂ ಮುನ್ನ ಪಕ್ಷದ ಜಿಲ್ಲಾಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ ಅಧ್ಯಕ್ಷತೆಯಲ್ಲಿ ಸಭೆ ನಡೆಸಿ ಅಭ್ಯರ್ಥಿಗಳ ಆಯ್ಕೆ ಬಗ್ಗೆ ಸದಸ್ಯರ ಅಭಿಪ್ರಾಯ ಸಂಗ್ರಹಿಸಲಾಗಿತ್ತು. ಅದರಂತೆ ಅಧ್ಯಕ್ಷ ಸ್ಥಾನಕ್ಕೆ ಆದಿದ್ರಾವಿಡ ಸಮುದಾಯದ ಪಿ.ದೇವ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಮಿತ್ರ ಪಕ್ಷ ಜೆಡಿಎಸ್‌ನ ರೆಹನಾಭಾನು ಅವರನ್ನು ಆಯ್ಕೆ ಮಾಡಲಾಗಿತ್ತು. ನಮ್ಮ ಸದಸ್ಯರ ವಂಚನೆ, ಪಕ್ಷ ದ್ರೋಹದಿಂದಾಗಿ ನಗರಸಭೆ ಚುನಾವಣೆಯಲ್ಲಿ ಅನಿವಾರ್ಯವಾಗಿ ಸೋಲಬೇಕಾಯಿತು ಎಂದರು.

ಶಿಸ್ತು ಕ್ರಮ: ಪಕ್ಷದ ಚಿಹ್ನೆಯಿಂದ ಗೆದ್ದು ದ್ರೋಹ ಬಗೆದಿರುವ ಸದಸ್ಯರಾದ ಮೀನಾಕ್ಷಿ, ವಿಜಯಲಕ್ಷ್ಮಿ, ಗಾಯತ್ರಿ ಮತ್ತು ಗಿರೀಶ್ ಅವರ ಮೇಲೆ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ನೇತೃತ್ವದಲ್ಲಿ ಶಿಸ್ತುಕ್ರಮ ಜರುಗಿಸಲಾಗುವುದು ಎಂದರು.

ಜೆಡಿಎಸ್ ಜಿಲ್ಲಾಧ್ಯಕ್ಷ ಎನ್. ನರಸಿಂಹಸ್ವಾಮಿ ಮಾತನಾಡಿ, ಬಿಜೆಪಿಯೊಂದಿಗೆ ಜೆಡಿಎಸ್ ಮೈತ್ರಿ ಹೊಂದಿದ್ದು, ನಮ್ಮ ಮೂವರು ಸದಸ್ಯರಿಗೆ ಮೈತ್ರಿ ಅಭ್ಯರ್ಥಿಗಳಿಗೆ ಮತ ಚಲಾಯಿಸುವಂತೆ ವ್ಹಿಪ್ ಜಾರಿ ಮಾಡಿದ್ದರೂ, ನಮ್ಮ ಪಕ್ಷದ ಖಾಲೀದ್ ಅಹಮ್ಮದ್ ಚುನಾವಣೆಯಲ್ಲಿ ತಟಸ್ಥರಾಗಿ ಉಳಿದರು. ರೆಹನಾ ಭಾನು ಕಾಂಗ್ರೆಸ್‌ನೊಂದಿಗೆ ಸೇರಿ ಉಪಾಧ್ಯಕ್ಷರಾಗಿದ್ದಾರೆ. ಪಕ್ಷ ವಿರೋಧಿ ಚಟುವಟಿಕೆ ನಡೆಸಿರುವ ಈ ಇಬ್ಬರು ಸದಸ್ಯರ ಮೇಲೆ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದರು.

ಗೋಷ್ಠಿಯಲ್ಲಿ ಜಿಪಂ ಮಾಜಿ ಸದಸ್ಯ ಸಿ.ಚಿಕ್ಕರಂಗನಾಯಕ, ಬಿಜೆಪಿ ತಾಲೂಕು ಅಧ್ಯಕ್ಷ ಕೆಂಡಗಣ್ಣಪ್ಪ, ನಗರಾಧ್ಯಕ್ಷ ಸಿದ್ದರಾಜು, ಒಬಿಸಿ ಮೋರ್ಚಾ ಜಿಲ್ಲಾಧ್ಯಕ್ಷ ಬಾಲಚಂದ್ರ ಹಾಗೂ ಬಿಜೆಪಿ ನಗರಸಭಾ ಸದಸ್ಯರು ಹಾಜರಿದ್ದರು.

ಬಡ್ತಿ ಮುಖ್ಯ ಶಿಕ್ಷಕರ ಸಂಘಕ್ಕೆ ಸೋಮಸುಂದರ್ ಅಧ್ಯಕ್ಷ



ಹೆಚ್.ಡಿ.ಕೋಟೆ, ಸೆ.3– ಕೋಟೆ, ಸರಗೂರು ತಾಲೂಕು ಬಡ್ತಿ ಮುಖ್ಯ ಶಿಕ್ಷಕರ ಸಂಘದ ನೂತನ ಅಧ್ಯಕ್ಷರಾಗಿ ನೇರಳೆ ಸರ್ಕಾರಿ ಹಿರಿಯ ಶಾಲೆ ಮುಖ್ಯ ಶಿಕ್ಷಕ ಸೋಮಸುಂದರ್ ಆಯ್ಕೆಯಾಗಿದ್ದಾರೆ.

ಕಾರ್ಯಾಧ್ಯಕ್ಷರಾಗಿ ಆಗತ್ತೂರು ಶಾಲೆ ಮುಖ್ಯ ಶಿಕ್ಷಕ ಸಿದ್ದರಾಜು, ಗೌರವಾಧ್ಯಕ್ಷ ಸುಬ್ಬಣ್ಣ, ಸುರೇಶ್, ಕಾರ್ಯದರ್ಶಿಯಾಗಿ ಜಯರಾಮೇಗೌಡ, ಉಪಾಧ್ಯಕ್ಷೆಯಾಗಿ ಹೇಮಲತಾ, ಖಜಾಂಚಿ ನಾಗನಾಯಕ, ಸಂಘಟನಾ ಕಾರ್ಯದರ್ಶಿ ರಾಮಚಂದ್ರ, ರಾಮೇಗೌಡ, ಪುಟ್ಟರಾಜು, ಸಹ ಕಾರ್ಯದರ್ಶಿ ಡಿ.ನಾಗೇಂದ್ರ, ಜಿಲ್ಲಾ ಪ್ರತಿನಿಧಿಯಾಗಿ ವಿಷಕಂಠಪ್ಪ, ಕಾನೂನು ಸಲಹೆಗಾರರಾಗಿ ಜಾನ್ ಕೆನಡಿ ಆಯ್ಕೆಯಾಗಿದ್ದಾರೆ. ಈ ವೇಳೆ ಜಿಲ್ಲಾ ಬಡ್ತಿ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ದುಂಡಯ್ಯ, ಮಾಜಿ ಅಧ್ಯಕ್ಷ ಚಂದ್ರಕುಮಾರ್, ಸಂಘಟನಾ ಕಾರ್ಯದರ್ಶಿ ಲಿಂಗರಾಜು, ಉಪಾಧ್ಯಕ್ಷೆ ರಾಜೇಶ್ವರಿ, ಮುಖ್ಯಶಿಕ್ಷಕರಾದ ಸೋಮಯ್ಯ, ಸಿದ್ದರಾಜು, ಸುರೇಶ್ ಎನ್.ಜಿ.ಅಂಕಯ್ಯ, ಸೋಮಶೇಖರ್, ರಾಜು, ಭೀಮರಾಜು ಇತರರಿದ್ದರು.

ಮಾನಸಿಕ, ದೈಹಿಕ ವಿಕಾಸಕ್ಕೆ ಕ್ರೀಡೆ ಅವಶ್ಯಕ: ಬಿಇಓ



ಸರಗೂರು, ಸೆ.3– ವಿದ್ಯಾರ್ಥಿಗಳ ಮಾನಸಿಕ, ದೈಹಿಕ ವಿಕಾಸಕ್ಕೆ ಕ್ರೀಡೆ ಅವಶ್ಯಕ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಮಾರಯ್ಯ ತಿಳಿಸಿದರು.

ತಾಲೂಕಿನ ಎಂ.ಸಿ.ತಳಲು ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆದ ಸರಗೂರು ವಲಯ ಮಟ್ಟದ ಕ್ರೀಡಾಕೂಟದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಸಕ್ರೀಯವಾಗಿ ಎಲ್ಲಾ ಕ್ರೀಡೆಗಳಲ್ಲಿ ಭಾಗವಹಿಸಬೇಕು. ಮಕ್ಕಳಲ್ಲಿ ಸಾಕಷ್ಟು ಪ್ರತಿಭೆ ಇದ್ದು, ಅದನ್ನು ಗುರ್ತಿಸುವಲ್ಲಿ ದೈಹಿಕ ಶಿಕ್ಷಕರ ಪಾತ್ರ ಅಪಾರ ಎಂದರು.

ಎಂ.ಸಿ.ತಳಲು ಗ್ರಾಪಂ ಸದಸ್ಯ ಪ್ರಕಾಶ್ ಚಂದ್ರು ಕ್ರೀಡಾ ಜ್ಯೋತಿ ಸ್ವೀಕರಿಸಿ ಮಾತನಾಡಿ, ಕ್ರೀಡೆ ವಿದ್ಯಾರ್ಥಿಗಳನ್ನು ಕ್ರಿಯಾಶೀಲರನ್ನಾಗಿಸುವ ಜೊತೆಗೆ ಉತ್ಸಾಹ ತುಂಬಲಿದೆ. ವಿದ್ಯಾರ್ಥಿಗಳು ರಾಜ್ಯ, ಅಂತರಾಷ್ಟ್ರೀಯ ಮಟ್ಟದಲ್ಲಿ ಪಾಲ್ಗೊಳ್ಳಲು ಅತ್ಯುತ್ತಮ ಕ್ರೀಡಾಪಟುಗಳಾಗಿ ರೂಪುಗೊಳ್ಳಲು ದೈಹಿಕ ಶಿಕ್ಷಕರ ಪಾತ್ರ ಪ್ರಮುಖವಾಗಿದೆ ಎಂದರು.

ಗ್ರಾಪಂ ಅಧ್ಯಕ್ಷೆ ಲಕ್ಷ್ಮೀ, ಮುಖ್ಯ ಶಿಕ್ಷಕ ರಾಜು, ಎಸ್‌ಡಿಎಂಸಿ ಅಧ್ಯಕ್ಷ ನಿಜಗುಣ ಮಾತನಾಡಿದರು, ಇದಕ್ಕೂ ಮುನ್ನ ಬಿಇಓ ಮಾರಯ್ಯ ಕ್ರೀಡಾ ಧ್ವಜಾರೋಹಣ ನೆರವೇರಿಸಿದರು. ಮಕ್ಕಳು ಪಥ ಸಂಚಲನ ನಡೆಸಿದರು. ಕ್ರೀಡಾಜ್ಯೋತಿ ಬೆಳಗಿಸಿ ಕ್ರೀಡಾಕೂಟಕ್ಕೆ ಚಾಲನೆ ನೀಡಲಾಯಿತು. ಗ್ರಾಮದ ಯಜಮಾನರಾದ ನಿಜಗುಣ, ಮಹದೇವಪ್ಪ, ಶಿವಲಿಂಗ, ಬಸವಣ್ಣ, ಗ್ರಾಪಂ ಸದಸ್ಯರಾದ ರಾಜಕುಮಾರ್, ಭವಾನೀಶ್, ಶಿವಪ್ಪ ಗುರುಸ್ವಾಮಿ, ಪ್ರಭು, ಕೃಷ್ಣಭೋವಿ, ಸುರೇಶ್, ನಾಗಮಲ್ಲಪ್ಪ, ಅರವಿಂದ್, ನಂದೀಶ್, ಕೆಂಡನಾಯಕ, ರಮೇಶ್, ನಿಂಗಮ್ಮ, ಸಣ್ಣಸ್ವಾಮಿ, ಶಿಕ್ಷಕರಾದ ಶಾರದ, ಕಾಳಸ್ವಾಮಿ, ನುಗು ಅರಣ್ಯ ವಲಯ ಆರ್‌ಎಫ್ ವಿವೇಕ್, ನರಸಿಂಹಮೂರ್ತಿ, ಹೆಚ್.ಎಸ್. ಮದನ್, ಕೃಷ್ಣಮೂರ್ತಿ, ಶ್ರುತಿ, ದೈಹಿಕ ಶಿಕ್ಷಕ ಎಲ್.ನಾಗೇಂದ್ರ ಬಂಗಾರಯ್ಯ, ಶಿವಪ್ಪ ಜ್ಯೋತಿ ಸೇರಿದಂತೆ ಇನ್ನಿತರರಿದ್ದರು.

ಸದಸ್ಯರು ಸಂಘದ ಅಭಿವೃದ್ಧಿಗೆ ಸಹಕರಿಸಿ

ಮೈಮುಲ್ ವಿಸ್ತಾರಣಾಧಿಕಾರಿ ಶಿವಕುಮಾರ್



ಹಾಡ್ಯ ಡೈರಿಯಲ್ಲಿ ಸರ್ವ ಸದಸ್ಯರ ಮಹಾಸಭೆ ನಡೆಯಿತು

ಮಲ್ಕುಂಡಿ, ಸೆ.3– ಸಂಘದ ಸದಸ್ಯರು ಗುಣಮಟ್ಟದ ಹಾಲು ಸರಬರಾಜು ಮಾಡುವ ಮೂಲಕ ಸಂಘದ ಅಭಿವೃದ್ಧಿಗೆ ಸಹಕರಿಸಬೇಕು ಎಂದು ಮೈಮುಲ್ ವಿಸ್ತಾರಣಾಧಿಕಾರಿ ಶಿವಕುಮಾರ್ ತಿಳಿಸಿದರು.

ಸಮೀಪದ ಹಾಡ್ಯ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ 2023–24ನೇ ಸಾಲಿನ ಸರ್ವ ಸದಸ್ಯರ ಮಹಾಸಭೆ ಉದ್ಘಾಟಿಸಿ ಮಾತನಾಡಿದ ಅವರು, ಸದಸ್ಯರು ಸಂಘಕ್ಕೆ ಗುಣಮಟ್ಟದ ಹಾಲನ್ನು ಸರಬರಾಜು ಮಾಡಬೇಕು. ರಾಸುಗಳಿಗೆ ಸಮ ಪ್ರಮಾಣದಲ್ಲಿ ಆಹಾರ ನೀಡಬೇಕು. ಇಲ್ಲದಿದ್ದರೆ ಫ್ಯಾಟ್‌ನಲ್ಲಿ ಏರಿಳಿತ ಕಂಡು ಬರುತ್ತದೆ. ಇದರಿಂದ ಆರ್ಥಿಕ ನಷ್ಟ ಉಂಟಾಗುತ್ತದೆ. ಆದ್ದರಿಂದ ರಾಸುಗಳಿಗೆ ಹಸಿರು ಮೇವಿನ ಜೊತೆಗೆ ಒಣ ಹುಲ್ಲು, ಪೌಷ್ಟಿಕ ಆಹಾರವಾದ ಫಿಡ್ಸ್ ಅನ್ನು ಸಮ ಪ್ರಮಾಣದಲ್ಲಿ ನೀಡಿದರೆ ರಾಸುಗಳು ಹೆಚ್ಚಿನ ಹಾಲನ್ನು ನೀಡುತ್ತವೆ ಎಂದರು.

ಸಂಘದ ಅಧ್ಯಕ್ಷೆ ಗೌರಮ್ಮ, ನಿರ್ದೇಶಕರಾದ ರಾಜಶೇಖರ್, ಕೆಂಪದೇವಮ್ಮ, ಮುದ್ದಮ್ಮ, ನಾಗರಾಜು, ಗುರುಸ್ವಾಮಿ, ಮಹದೇವಸ್ವಾಮಿ, ಸಿಇಓ ಹೆಚ್.ಎಂ.ಉಮೇಶ್ ಇನ್ನಿತರರಿದ್ದರು.

ನಂಜನಗೂಡು ನಗರಸಭೆಯಲ್ಲಿ ಕಾಂಗ್ರೆಸ್–ಜೆಡಿಎಸ್ ಅಧಿಕಾರಕ್ಕೆ

● ಅಧ್ಯಕ್ಷರಾಗಿ 'ಕೈ'ನ ಶ್ರೀಕಂಠಸ್ವಾಮಿ, ಉಪಾಧ್ಯಕ್ಷೆಯಾಗಿ ಜೆಡಿಎಸ್‌ನ ರೆಹನಾಭಾನು ಆಯ್ಕೆ ● ಬಹುಮತವಿದ್ದರೂ ಅಧಿಕಾರ ಹಿಡಿಯುವಲ್ಲಿ ಬಿಜೆಪಿ ವಿಫಲ



ನಗರಸಭೆ ನೂತನ ಅಧ್ಯಕ್ಷ, ಉಪಾಧ್ಯಕ್ಷರನ್ನು ಸನ್ಮಾನಿಸಲಾಯಿತು.

ನಂಜನಗೂಡು, ಸೆ.3– ತೀವ್ರ ಕುತೂಹಲ ಕೆರಳಿಸಿದ್ದ ನಂಜನಗೂಡು ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರ ಹಿಡಿಯುವಲ್ಲಿ ಯಶಸ್ವಿಯಾಗಿದ್ದು, ಅಧ್ಯಕ್ಷರಾಗಿ ಕಾಂಗ್ರೆಸ್‌ನ ಶ್ರೀಕಂಠಸ್ವಾಮಿ, ಉಪಾಧ್ಯಕ್ಷೆಯಾಗಿ ಜೆಡಿಎಸ್‌ನ ರೆಹಾನಾ ಭಾನು ಆಯ್ಕೆಯಾಗಿದ್ದಾರೆ. ಆ ಮೂಲಕ ಬಹುಮತವಿದ್ದರೂ ರಾಜಕೀಯ ತಂತ್ರಗಾರಿಕೆಯಿಂದಾಗಿ ಬಿಜೆಪಿ ಅಧಿಕಾರ ಹಿಡಿಯುವಲ್ಲಿ ವಿಫಲವಾಗಿದೆ.

ಒಟ್ಟು 31 ಸದಸ್ಯ ಬಲದ ನಗರಸಭೆಯಲ್ಲಿ ಬಿಜೆಪಿ 15, ಕಾಂಗ್ರೆಸ್ 10, ಜೆಡಿಎಸ್ 3, ಮೂವರು ಪಕ್ಷೇತರರು ಆಯ್ಕೆಯಾಗಿದ್ದಾರೆ. ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಯಾಗಿರುವ ಕಾರಣ ಬಿಜೆಪಿಯ 15, ಜೆಡಿಎಸ್‌ನ ಮೂವರು ಸೇರಿದಂತೆ 18 ಸದಸ್ಯರಿದ್ದು ಅಧಿಕಾರ ಹಿಡಿಯುವ ಕನಸು ಕಂಡಿದ್ದರು. ಆದರೆ ಕಾಂಗ್ರೆಸ್ ರಾಜಕೀಯ ತಂತ್ರಗಾರಿಕೆಯಿಂದ ಬಿಜೆಪಿಯ ನಾಲ್ವರು ಗೈರಾಗಿ, ಪಕ್ಷೇತರ ಮೂವರು ಸದಸ್ಯರು ಹಾಗೂ ಜೆಡಿಎಸ್‌ನ ಓರ್ವ ಸದಸ್ಯರ ಸಹಕಾರದಿಂದ ನಗರಸಭೆ ಅಧಿಕಾರ ಕಾಂಗ್ರೆಸ್ ಪಾಲಾಯಿತು.

ಮಂಗಳವಾರ ನಗರಸಭೆ ಸಭಾಂಗಣದಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನ ಎಸ್‌ಸಿ ವರ್ಗ, ಉಪಾಧ್ಯಕ್ಷ ಸ್ಥಾನ ಸಾಮಾನ್ಯ ಮಹಿಳೆಗೆ ಮೀಸಲಾಗಿತ್ತು. ಅಧ್ಯಕ್ಷ ಸ್ಥಾನಕ್ಕೆ ಕಾಂಗ್ರೆಸ್‌ನಿಂದ ಶ್ರೀಕಂಠಸ್ವಾಮಿ, ಉಪಾಧ್ಯಕ್ಷ ಸ್ಥಾನಕ್ಕೆ ಜೆಡಿಎಸ್‌ನಿಂದ ರೆಹಾನಾಭಾನು ಕಾಂಗ್ರೆಸ್ ಪಕ್ಷದೊಂದಿಗೆ ಗುರ್ತಿಸಿಕೊಂಡು ನಾಮಪತ್ರ ಸಲ್ಲಿಸಿದ್ದರು. ಬಿಜೆಪಿಯಿಂದ ಪಿ.ದೇವು, ಉಪಾಧ್ಯಕ್ಷ ಸ್ಥಾನಕ್ಕೆ ಮಂಜುಳಾ ನಾಮಪತ್ರ ಸಲ್ಲಿಸಿದ್ದರು.

ನಂತರ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್‌ನ 10, ಮೂವರು ಪಕ್ಷೇತರರು, ಓರ್ವ ಜೆಡಿಎಸ್ ಸದಸ್ಯ, ಶಾಸಕ, ಸಂಸದರು ಸೇರಿ 16 ಮತಗಳೊಂದಿಗೆ ಅಧ್ಯಕ್ಷರಾಗಿ ಶ್ರೀಕಂಠಸ್ವಾಮಿ, ಉಪಾಧ್ಯಕ್ಷೆಯಾಗಿ ರೆಹಾನ ಭಾನು ಆಯ್ಕೆಯಾದರು. ಬಿಜೆಪಿಯಿಂದ ಸ್ಪರ್ಧಿಸಿದ್ದ ಪಿ.ದೇವು, ಉಪಾಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದ ಮಂಜುಳಾ ಬಿಜೆಪಿಯ 11, ಜೆಡಿಎಸ್‌ನ ಓರ್ವ ಸೇರಿದಂತೆ 12 ಮತಗಳನ್ನು ಪಡೆದು ಪರಾಭವಗೊಂಡರು. ಚುನಾವಣೆಗೆ ನಾಲ್ವರು ಬಿಜೆಪಿ ಸದಸ್ಯರಾದ 1ನೇ ವಾರ್ಡ್‌ನ ಗಿರೀಶ್, 12ನೇ ವಾರ್ಡ್‌ನ ಗಾಯತ್ರಿ, 22ನೇ ವಾರ್ಡ್‌ನ ಮೀನಾಕ್ಷಿ, 27ನೇ ವಾರ್ಡ್‌ನ ವಿಜಯಲಕ್ಷ್ಮಿ ಗೈರಾದರೆ, ಜೆಡಿಎಸ್‌ನ 3ನೇ ವಾರ್ಡ್ ಸದಸ್ಯ ಖಾಲಿದ್ ಅಹಮದ್ ಚುನಾವಣೆ ಪ್ರಕ್ರಿಯೆಗೆ ಹಾಜರಾದರೂ ಸಹ ಯಾವುದೇ ಪಕ್ಷದ ಪರ ಮತದಾನ ಮಾಡದೆ ತಟಸ್ಥರಾಗುಳಿದರು. ಜೆಡಿಎಸ್‌ನ ಸಣ್ಣಕ್ಕಿಬಾಬು ಬಿಜೆಪಿ ಪರ ಮತದಾನ ಮಾಡಿದರು. ಚುನಾವಣಾಧಿಕಾರಿ, ಉಪವಿಭಾಗಾಧಿಕಾರಿ ರಕ್ಷಿತ್ ನೂತನ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಯನ್ನು ಘೋಷಿಸಿದರು.


ನೂತನ ಅಧ್ಯಕ್ಷ ಶ್ರೀಕಂಠಸ್ವಾಮಿ ಮಾತನಾಡಿ, ಶಾಸಕ ದರ್ಶನ್, ಸಂಸದ ಸುನೀಲ್ ಬೋಸ್, ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ ಕಾಂಗ್ರೆಸ್ ಸದಸ್ಯರು, ಮೂವರು ಪಕ್ಷೇತರರು ಮತ್ತು ಜೆಡಿಎಸ್‌ನ ಓರ್ವ ಸದಸ್ಯರ ಸಹಕಾರದಿಂದಾಗಿ ಅಧ್ಯಕ್ಷನಾಗಿ ಆಯ್ಕೆಯಾಗಿದ್ದೇನೆ. ಎಲ್ಲಾ ಸದಸ್ಯರು, ಶಾಸಕ ಮತ್ತು ಸಂಸದರ ಸಹಕಾರ ಪಡೆದು ನಂಜನಗೂಡು ನಗರಸಭೆ ಅಭಿವೃದ್ಧಿಗೆ ಶ್ರಮಿಸುವ ಮೂಲಕ ಮಾದರಿ ನಗರಸಭೆಯನ್ನಾಗಿ ರೂಪಿಸಲು ಶ್ರಮಿಸುತ್ತೇನೆ ಎಂದರು.

ಸಂಸದ ಸುನೀಲ್ ಬೋಸ್ ಮಾತನಾಡಿ, ರಾಜಕೀಯ ತಂತ್ರಗಾರಿಕೆಯಿಂದಾಗಿ ಕಾಂಗ್ರೆಸ್ ಪಕ್ಷ ನಂಜನಗೂಡು ನಗರಸಭೆ ಅಧಿಕಾರ ಹಿಡಿದಿದೆ. ಅಧ್ಯಕ್ಷರು ಎಲ್ಲಾ ಸದಸ್ಯರ ಸಹಕಾರ ಪಡೆದು ಅಭಿವೃದ್ಧಿಗೆ ಶ್ರಮಿಸುವಂತಾಗಲಿ ಎಂದು ಶುಭ ಹಾರೈಸಿದರು.

> ಉಸ್ತುವಾರಿ ಸಚಿವರು, ಸಂಸದರು ಮತ್ತು ಪಕ್ಷದ ಸದಸ್ಯರ ಶ್ರಮದಿಂದಾಗಿ ಅಧಿಕಾರ ಹಿಡಿಯುವಲ್ಲಿ ಯಶಸ್ವಿಯಾಗಿದ್ದೇವೆ. ಈ ಅಧಿಕಾರದಿಂದ ಜವಾಬ್ದಾರಿ ಹೆಚ್ಚಾಗಿದ್ದು, ಎಲ್ಲರ ಸಹಕಾರದಿಂದ ನಗರಸಭೆ ಅಭಿವೃದ್ಧಿಪಡಿಸಲಾಗುವುದು.
> – ದರ್ಶನ್, ಶಾಸಕ.

ನೂತನ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಯಾಗುತ್ತಿದ್ದಂತೆ ಕಾಂಗ್ರೆಸ್ ಕಾರ್ಯಕರ್ತರು, ಅಭಿಮಾನಿಗಳು ಪಟಾಕಿ ಸಿಡಿಸಿ, ಜೈಕಾರ ಕೂಗಿ ಮೆರವಣಿಗೆ ನಡೆಸಿ ಸಂಭ್ರಮಾಚರಣೆ ನಡೆಸಿದರು. ಈ ವೇಳೆ ಮಾಜಿ ಶಾಸಕ ಕೇಶವಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹೇಶ್, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಎಂ.ಶಂಕರ್, ವಿಶ್ವಕರ್ಮ ನಿಗಮ ಮಾಜಿ ಅಧ್ಯಕ್ಷ ನಂದಕುಮಾರ್, ಮುಖಂಡರಾದ ಇಂಧನ್‌ಬಾಬು, ಎನ್.ಟಿ.ಗಿರೀಶ್, ಎನ್.ಎಂ.ಮಂಜುನಾಥ್, ರಾಜೇಶ್, ಸೋಮೇಶ್, ನಗರಸಭಾ ಸದಸ್ಯರಾದ ಪ್ರದೀಪ್, ಗಂಗಾಧರ್, ಎಸ್.ಪಿ.ಮಹೇಶ್, ಗಾಯತ್ರಿ, ಸಿದ್ದಿಖ್, ಶ್ವೇತಲಕ್ಷ್ಮಿ ಸೇರಿದಂತೆ ಹಲವರಿದ್ದರು.

ತೋಪಿನಮ್ಮ ದೇವಾಲಯದಲ್ಲಿ ವಿಶೇಷ ಪೂಜೆ



ಬೆಟ್ಟದಪುರ ಸಮೀಪದ ಮರದೂರು ತೋಪಿನಮ್ಮ ದೇವಾಲಯದಲ್ಲಿ ಶ್ರಾವಣ ಮಾಸದ ಅಮಾವಾಸ್ಯೆಯಂದು ವಿಶೇಷ ಪೂಜೆ ನಡೆಯಿತು. ಕೊತ್ತವಳ್ಳಿ ಗ್ರಾಮದ ಅನುತು ಕುಟುಂಬದವರು ಪೂಜೆ ನೇತೃತ್ವ ವಹಿಸಿದ್ದರು. ಭಕ್ತರಿಗೆ ಅನ್ನದಾನ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ಬೆಟ್ಟದಪುರ, ಅತ್ತಿಗೋಡು, ಕಿತ್ತೂರು, ಮರದೂರು, ವಡ್ಡರಹಳ್ಳಿ ಸೇರಿದಂತೆ ಹಲವು ಗ್ರಾಮಗಳ ಭಕ್ತರು ಇದ್ದರು.

ಕರಿಯಪ್ಪ ನಿಧನ



ಹುಣಸೂರು, ಸೆ.3– ದಲಿತ ಮುಖಂಡ, ನಗರದ ಬನ್ನಿಬೀದಿ ನಿವಾಸಿ ಮಲ್ಲೇಶ್ ಅವರ ತಂದೆ ಕರಿಯಪ್ಪ (99) ಸೋಮವಾರ ರಾತ್ರಿ ನಿಧನರಾದರು. ಮೃತರು ಓರ್ವ ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮಂಗಳವಾರ ಮಧ್ಯಾಹ್ನ ನಗರದ ಪಂಪ್ ಹೌಸ್ ಬಳಿಕ ಸಾರ್ವಜನಿಕ ಸ್ಮಶಾನದಲ್ಲಿ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಕರ್ನಾಟಕ ಸುವರ್ಣ ಸಂಭ್ರಮ ರಥ ಮೈಸೂರು ಪ್ರವೇಶ

ಪುಷ್ಪಾರ್ಚನೆಯೊಂದಿಗೆ ಸಿಎಂ ಸಿದ್ದರಾಮಯ್ಯ ಸ್ವಾಗತ



ಮೈಸೂರು ಅರಮನೆ ಮುಂಭಾಗದ ಕೋಟೆ ಆಂಜನೇಯಸ್ವಾಮಿ ದೇವಾಲಯದ ಬಳಿ ಕರ್ನಾಟಕ ಸುವರ್ಣ ಸಂಭ್ರಮ ರಥಯಾತ್ರೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಬರಮಾಡಿಕೊಂಡರು.

ಮೈಸೂರು,ಸೆ.3(ಎಂಟಿವೈ)– ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣಗೊಂಡು 50 ವರ್ಷ ಸಂದ ಹಿನ್ನೆಲೆಯಲ್ಲಿ ರಾಜ್ಯದಾದ್ಯಂತ ಸಂಚರಿಸುತ್ತಿರುವ ಕರ್ನಾಟಕ ಸುವರ್ಣ ಸಂಭ್ರಮ ರಥಯಾತ್ರೆಯನ್ನು ಮಂಗಳವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಬರಮಾಡಿಕೊಂಡರು.

ಮೈಸೂರು ಅರಮನೆಯ ಕೋಟೆ ಆಂಜನೇಯಸ್ವಾಮಿ ದೇವಾಲಯದ ಮುಂಭಾಗ ಮಂಗಳವಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭುವನೇಶ್ವರಿ ಮೂರ್ತಿ ಸೇರಿದಂತೆ ಕನ್ನಡ ನಾಡಿನ ಪ್ರತೀಕವೆಂಬ ಸಂದೇಶ ಸಾರುವ ಸ್ತಬ್ಧಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಬರಮಾಡಿಕೊಂಡು ಶುಭ ಕೋರಿದರು. ಮುಖ್ಯಮಂತ್ರಿಗಳು ಚಾಲನೆ ನೀಡಿದ ಬಳಿಕ ಮೈಸೂರು ತಾಲೂಕಿನ ವಿವಿಧೆಡೆ ಸಂಚರಿಸಿದ ಕನ್ನಡ ರಥ ಕರ್ನಾಟಕ ಉದಯದ ಬಗ್ಗೆ ಮಾಹಿತಿ ಒದಗಿಸಿತು.

ಈಗಾಗಲೇ ಉತ್ತರ ಕರ್ನಾಟಕದ ಎಲ್ಲಾ ಜಿಲ್ಲೆಗಳಲ್ಲೂ ಸಂಚರಿಸಿರುವ ಕನ್ನಡ ರಥಯಾತ್ರೆ ಆ.31ರಂದು ಮೈಸೂರು ಜಿಲ್ಲೆ ಪ್ರವೇಶಿಸಿತ್ತು. ನಂಜನಗೂಡು, ತಿ.ನರಸೀಪುರ ತಾಲೂಕಿನಲ್ಲಿ ಪ್ರಚಾರ ನಡೆಸಿದ್ದ ರಥಯಾತ್ರೆ, ಇಂದು ಮೈಸೂರು ತಾಲೂಕಿನ ವಿವಿಧೆಡೆ ಸಂಚರಿಸಿತು. ನಾಳೆಯಿಂದ ಕೆ.ಆರ್.ನಗರ, ಹುಣಸೂರು, ಪಿರಿಯಾಪಟ್ಟಣ ತಾಲೂಕಿನಲ್ಲಿ ಸಂಚರಿಸಿ, ಕುಶಾಲನಗರ, ಮಡಿಕೇರಿ, ಪೊನ್ನಂಪೇಟೆ, ವಿರಾಜಪೇಟೆಯಲ್ಲಿ ಸಂಚರಿಸಿ, ಬಳಿಕ ಹಾಸನ ಜಿಲ್ಲೆ ಪ್ರವೇಶಿಸಲಿದೆ.

ಇಂದು ಕೋಟೆ ಆಂಜನೇಯಸ್ವಾಮಿ ದೇವಾಲಯದ ಮುಂಭಾಗ ನಡೆದ ಕಾರ್ಯಕ್ರಮದಲ್ಲಿ ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ, ಕೆ.ವೆಂಕಟೇಶ್, ಶಾಸಕರಾದ ಡಿ.ರವಿಶಂಕರ್, ಕೆ.ಹರೀಶ್‌ಗೌಡ, ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ, ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ, ಐಜಿಪಿ ಬೋರಲಿಂಗಯ್ಯ, ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಎಸ್ಪಿ ವಿಷ್ಣುವರ್ಧನ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನಸ್ವಾಮಿ, ಸಹಾಯಕ ನಿರ್ದೇಶಕ ಸುದರ್ಶನ್, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಮಡ್ಡಿಕೆರೆ ಗೋಪಾಲ್, ಕರ್ನಾಟಕ ಕಾವಲುಪಡೆ ರಾಜ್ಯಾಧ್ಯಕ್ಷ ಎಂ.ಮೋಹನ್‌ಕುಮಾರ್‌ಗೌಡ, ಕನ್ನಡಪರ ಹೋರಾಟಗಾರ ಮೂಗೂರು ನಂಜುಂಡಸ್ವಾಮಿ, ಮಲ್ಲೇಶ್, ಮುಖಂಡರಾದ ಎಂ.ಶಿವಣ್ಣ, ಜೆ.ಗೋಪಿ, ಅಬ್ದುಲ್ಲಾ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ಇದೇ ವೇಳೆ ಮಹಿಳಾ ಡೊಳ್ಳು ಕುಣಿತ, ವೀರಗಾಸೆ, ಕಂಸಾಳೆ ಸೇರಿದಂತೆ ವಿವಿಧ ಜಾನಪದ ಕಲಾತಂಡಗಳು ಕನ್ನಡದ ರಥಕ್ಕೆ ಮೆರಗು ತುಂಬಿದವು.

ರಾಮಕೃಷ್ಣ ಹೆಗಡೆಯಂತೆ ಸಿದ್ದರಾಮಯ್ಯ ರಾಜೀನಾಮೆ ಕೊಟ್ಟು ತನಿಖೆ ಎದುರಿಸಲಿ

ವಿಪಕ್ಷ ನಾಯಕ ಆರ್.ಅಶೋಕ್ ಸಲಹೆ



ಬೆಂಗಳೂರು, ಸೆ.3–ಮಾಜಿ ಸಿಎಂ ರಾಮಕೃಷ್ಣ ಹೆಗಡೆಯವರ ಮೇಲೆ ಆರೋಪ ಬಂದಾಗ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿದ್ದರು. ಅದೇ ರೀತಿ ಸಿದ್ದರಾಮಯ್ಯ ರಾಜೀನಾಮೆ ಕೊಟ್ಟು ತನಿಖೆ ಎದುರಿಸಲಿ ಎಂದು ವಿಪಕ್ಷ ನಾಯಕ ಆರ್. ಅಶೋಕ್ ಸಲಹೆ ನೀಡಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಮುಡಾ ಕೇಸ್‌ನಲ್ಲಿ ಹಗರಣ ಆಗಿಯೇ ಇಲ್ಲ ಎಂದವರು ಹಿಂದಿನ ಆಯುಕ್ತರನ್ನು ಯಾಕೆ ಅಮಾನತು ಮಾಡಿದಿರಿ? ಇದರಿಂದ ಮುಡಾದಲ್ಲಿ ಹಗರಣ ಆಗಿರುವುದು ಗೊತ್ತಾಗುತ್ತದೆ ಎಂದು ಸಿಎಂ ಸಿದ್ದರಾಮಯ್ಯ ವಿರುದ್ಧ ವಿಪಕ್ಷ ನಾಯಕ ಆರ್.ಅಶೋಕ್ ವಾಗ್ದಾಳಿ ನಡೆಸಿದ್ದಾರೆ.

ರಾಜ್ಯ ಸರ್ಕಾರ ಒಂದೇ ವರ್ಷದಲ್ಲಿ ಅನೇಕ ಹಗರಣದಲ್ಲಿ ಸಿಕ್ಕಿ ಹಾಕಿಕೊಂಡಿದೆ. ಹೆಡ್ ಮಾಸ್ಟರ್ ಸಿದ್ದರಾಮಯ್ಯ ಹಗರಣದಲ್ಲಿ ಸಿಲುಕಿ ಹಾಕಿಕೊಂಡಿದ್ದಾರೆ. ಇದು ನಾಚಿಕೆಗೇಡು, ಮುಡಾದಲ್ಲಿ ದೊಡ್ಡ ಅಕ್ರಮ ಆಗಿದೆ. ಹೈಕಮಾಂಡ್ ಸಿದ್ದರಾಮಯ್ಯ ಅವರನ್ನು ಎರಡು ಬಾರಿ ಕರೆದು ವಿವರಣೆ ಕೇಳಿದೆ. ಈಗ ಮುಡಾ ಅಧಿಕಾರಿಯನ್ನು ಅಮಾನತು ಮಾಡಿದ್ದಾರೆ. ಸಿದ್ದರಾಮಯ್ಯ, ಕಾಂಗ್ರೆಸ್‌ನವರು ಏನು ತಪ್ಪಿಲ್ಲ ಎಂದಿದ್ದರು. ಹಾಗಾದರೆ ಈಗ ಯಾಕೆ ಅಧಿಕಾರಿ ಅಮಾನತು ಮಾಡಿದ್ದೀರಿ ಎಂದು ಪ್ರಶ್ನಿಸಿದ್ದಾರೆ.

50:50 ಅನುಪಾತವೇ ಅಕ್ರಮ ಆಗಿದೆ ಅಂತ ಅಮಾನತು ಮಾಡಿದ್ದಾರೆ. ಇದಕ್ಕಿಂತ ಸಾಕ್ಷಿ ಬೇಕಾ? ಪದೇ ಪದೆ ರಾಜ್ಯಪಾಲರ ವಿರುದ್ಧ ಕಾಂಗ್ರೆಸ್‌ನವರು ಮಾತಾಡ್ತಾರೆ. ತನಿಖೆಗೆ ಮಾತ್ರ ರಾಜ್ಯಪಾಲರು ಆದೇಶ ಮಾಡಿದ್ದರು. ಸಿಎಂ ಮೇಲೆ ಆರೋಪ ಬಂದಿದೆ. ಅವರೇ ಆಯೋಗ ರಚನೆ ಮಾಡೋಕೆ ಅಧಿಕಾರ ಇದೆಯಾ? ಅವರ ಮೂಗಿನ ನೇರಕ್ಕೆ ಆಯೋಗ ರಚನೆ ಮಾಡೋದಾ? ಇಲ್ಲಿ ಸ್ಪಷ್ಟವಾಗಿ ಹಗರಣ ಆಗಿದೆ. ಕೋರ್ಟ್ ಕೂಡಾ ಎಲ್ಲಾ ನೋಡುತ್ತಿದೆ. ಜನರ ಹಣ ಉಳಿಸೋ ಕೆಲಸ ಕೋರ್ಟ್ ಮಾಡೋ ವಿಶ್ವಾಸ ನಮಗೆ ಇದೆ ಎಂದಿದ್ದಾರೆ.

ಸ್ವಾತಿ ಮಾಲಿವಾಲ್ ಮೇಲಿನ ಹಲ್ಲೆ ಪ್ರಕರಣ

ಬಿಭವ್ ಕುಮಾರ್ ಜೈಲಿನಿಂದ ಬಿಡುಗಡೆ

ನವದೆಹಲಿ, ಸೆ.3– ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಆಪ್ತ ಬಿಭವ್ ಕುಮಾರ್ ಅವರು ಎಎಪಿಯ ರಾಜ್ಯಸಭಾ ಸದಸ್ಯೆ ಸ್ವಾತಿ ಮಾಲಿವಾಲ್ ಮೇಲಿನ ಹಲ್ಲೆ ಪ್ರಕರಣದಲ್ಲಿ ಜಾಮೀನು ಪಡೆದು ಇಂದು (ಮಂಗಳವಾರ) ತಿಹಾರ್ ಜೈಲಿನಿಂದ ಬಿಡುಗಡೆಯಾಗಿದ್ದಾರೆ.

ಮೂರು ತಿಂಗಳಿಗೂ ಹೆಚ್ಚು ಕಾಲ ಜೈಲಿನಲ್ಲಿದ್ದ ಬಿಭವ್ ಕುಮಾರ್ ಅವರನ್ನು ಮಧ್ಯಾಹ್ನ 2 ಗಂಟೆಗೆ ಬಿಡುಗಡೆ ಮಾಡಲಾಯಿತು ಎಂದು ಜೈಲು ಅಧಿಕಾರಿಗಳು ತಿಳಿಸಿದ್ದಾರೆ.

ಹಲ್ಲೆ ಪ್ರಕರಣ ಸಂಬಂಧ ಬಿಭವ್ ಕುಮಾರ್ ಅವರಿಗೆ ಸುಪ್ರೀಂಕೋರ್ಟ್ ಸೋಮವಾರ ಜಾಮೀನು ಮಂಜೂರು ಮಾಡಿತ್ತು.

ಬಿಭವ್ ಅವರು ಕೇಜ್ರಿವಾಲ್ ಅವರ ಆಪ್ತ ಸಹಾಯಕರಾಗಿ ಕಾರ್ಯನಿರ್ವಹಿಸಬಾರದು ಮತ್ತು ಮುಖ್ಯಮಂತ್ರಿ ಕಚೇರಿಯು ಅವರಿಗೆ ಯಾವುದೇ ಅಧಿಕೃತ ಜವಾಬ್ದಾರಿ ನೀಡಬಾರದು ಎಂದು ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಮತ್ತು ಉಜ್ಜಲ್ ಭುಯನ್ ಅವರಿದ್ದ ಪೀಠ ಆದೇಶಿಸಿತ್ತು.

ಎಲ್ಲ ಸಾಕ್ಷ್ಯಗಳ ವಿಚಾರಣೆ ಪೂರ್ಣಗೊಳ್ಳುವವರೆಗೆ ಬಿಭವ್ ಅವರು ಮುಖ್ಯಮಂತ್ರಿಗಳ ನಿವಾಸಕ್ಕೂ ತೆರಳಬಾರದು ಎಂದು ನ್ಯಾಯಾಲಯ ನಿರ್ದೇಶನ ನೀಡಿದೆ. ಇದು ಸಣ್ಣಪುಟ್ಟ ಗಾಯಗಳ ಪ್ರಕರಣವಾಗಿದ್ದು, ಈ ವಿಷಯದಲ್ಲಿ ಜಾಮೀನು ವಿರೋಧಿಸಬಾರದು ಎಂದು ದೆಹಲಿ ಪೊಲೀಸರ ಪರ ಹಾಜರಿದ್ದ ಹೆಚ್ಚುವರಿ ಸಾಲಿಸಿಟರ್ ಜನರಲ್ ಎಸ್.ವಿ. ರಾಜು ಅವರಿಗೆ ನ್ಯಾಯಪೀಠ ಹೇಳಿತು. ಕೇಜ್ರಿವಾಲ್ ಅವರ ಅಧಿಕೃತ ನಿವಾಸದಲ್ಲಿ ಮೇ 13ರಂದು ಎಎಪಿಯ ರಾಜ್ಯಸಭಾ ಸದಸ್ಯೆ ಸ್ವಾತಿ ಮಾಲಿವಾಲ್ ಅವರ ಮೇಲೆ ಬಿಭವ್ ಹಲ್ಲೆ ನಡೆಸಿದ್ದರು ಎಂದು ಆರೋಪಿಸಲಾಗಿತ್ತು.

ಮಣ್ಣಿನ ಗಣಪನಿಗೆ ಜೀವ ತುಂಬಿದ ಮಕ್ಕಳು

ಪರಿಸರಸ್ನೇಹಿ ಮೂರ್ತಿ ತಯಾರಿಕೆ ತರಬೇತಿ



ಮೈಸೂರಿನ ಮಂಚೇಗೌಡನ ಕೊಪ್ಪಲು ಸರ್ಕಾರಿ ಪ್ರೌಢಶಾಲೆ ಮಕ್ಕಳು ಜೇಡಿಮಣ್ಣಿನಿಂದ ಪರಿಸರ ಸ್ನೇಹಿ ಗಣೇಶ ಮೂರ್ತಿಗಳನ್ನು ತಯಾರಿಸಿ, ಸಂಭ್ರಮಿಸಿದರು.

ಮೈಸೂರು, ಸೆ3(ಎಸ್‌ಬಿಡಿ)– ಮೈಸೂರಿನ ಮಂಚೇಗೌಡನ ಕೊಪ್ಪಲು ಸರ್ಕಾರಿ ಶಾಲೆಯಲ್ಲಿ ಜೇಡಿಮಣ್ಣಿನಿಂದ ಪರಿಸರ ಸ್ನೇಹಿ ಜೀವ ಗಣೇಶ ಮೂರ್ತಿಗಳನ್ನು ತಯಾರಿಸುವ ಶಿಬಿರ ಏರ್ಪಡಿಸಲಾಗಿತ್ತು.

ಶ್ರೀ ದುರ್ಗಾ ಫೌಂಡೇಶನ್ ವತಿಯಿಂದ ಆಯೋಜಿಸಲಾಗಿದ್ದ ಪರಿಸರ ಸ್ನೇಹಿ ಜೀವ ಗಣೇಶ ಮೂರ್ತಿ ತಯಾರಿಸುವ ಶಿಬಿರದಲ್ಲಿ ಪ್ರೌಢಶಾಲೆಯ 100ಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿ ತಮ್ಮದೇ ಕಲ್ಪನೆಯಲ್ಲಿ ವಿಭಿನ್ನ ಶೈಲಿಯ ಗಣಪತಿ ಮೂರ್ತಿಗಳನ್ನು ತಯಾರಿಸಿ, ಸಂಭ್ರಮಿಸಿದರು. ಬಳಿಕ ಬೀಜಬಿತ್ತಿದ ಜೀವ ಗಣಪತಿ ಮೂರ್ತಿಯನ್ನು ಮನೆಗೆ ಒಯ್ದರು.

ಈ ವೇಳೆ ಕಲಾವಿದ ಆರ್.ಲಕ್ಷ್ಮೀಚಲಪತಿ ಮಾತನಾಡಿ, ಭಗವಂತನಿಗೆ ಭಕ್ತಿಯಿಂದ ನೆರವೇರಿಸುವ ಪೂಜೆ ಇಷ್ಟವೇ ಹೊರತು ವಿಜೃಂಭಣೆ ಹಾಗೂ ಆಡಂಬರವಲ್ಲ ಆದ್ದರಿಂದ ನಿಜ ಭಕ್ತಿಯೊಂದಿಗೆ ಗೌರಿ–ಗಣೇಶ ಹಬ್ಬ ಆಚರಿಸೋಣ. ವಿಷಕಾರಿ ರಾಸಾಯನಿಕ ವಸ್ತುಗಳಿಂದ ತಯಾರಿಸಿದ ಗಣೇಶ ಮೂರ್ತಿಗಳು ಪರಿಸರಕ್ಕೆ ಮಾರಕ. ಮಣ್ಣು ಹಾಗೂ ಜಲಮಾಲಿನ್ಯದ ಜೊತೆಗೆ ಹಲವು ಜೀವ ಜಂತುಗಳಿಗೂ ಹಾನಿಕಾರಕ. ಆದ್ದರಿಂದ ಶುದ್ಧ ಜೇಡಿಮಣ್ಣಿನಿಂದ ತಯಾರಿಸಿದ ಚಿಕ್ಕ ಗಣೇಶ ಮೂರ್ತಿಗಳನ್ನು ಪೂಜಿಸುವ ಮೂಲಕ ಗೌರಿ–ಗಣಪತಿ ಜೊತೆಗೆ ಪ್ರಕೃತಿ ದೇವರನ್ನೂ ಪೂಜಿಸೋಣ ಎಂದು ಸಲಹೆ ನೀಡಿದರು.

ಇಂದಿರಾ ಗಾಂಧಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಂಚೇಗೌಡನ ಕೊಪ್ಪಲು ರವಿ ಮಾತನಾಡಿ, ಬೃಹತ್ ಪಿಓಪಿ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸುವವರೇ ಹೆಚ್ಚಾಗಿದ್ದಾರೆ. ಇದರಿಂದ ಪರಿಸರ ಹಾಳಾಗುತ್ತದೆ. ಶಾಸ್ತ್ರಗಳ ಪ್ರಕಾರ ಕಲ್ಲು, ಮಣ್ಣು ಮತ್ತು ಲೋಹದ ವಿಗ್ರಹಗಳಲ್ಲಿ ಮಾತ್ರ ದೈವತ್ವದ ಶಕ್ತಿ ಇರುತ್ತದೆ. ಆದ್ದರಿಂದ ನಾವೆಲ್ಲಾ ರಾಸಾಯನಿಕ ಬಣ್ಣವಿಲ್ಲದ ಮಣ್ಣಿನ ಮೂರ್ತಿಗಳನ್ನು ಪೂಜಿಸುವ ಮೂಲಕ ದೇವರ ಕೃಪೆಗೆ ಪಾತ್ರರಾಗೋಣ ಎಂದು ಮನವಿ ಮಾಡಿದರು.

ಶ್ರೀ ದುರ್ಗಾ ಫೌಂಡೇಶನ್ ಅಧ್ಯಕ್ಷರಾದ ರೇಖಾ ಶ್ರೀನಿವಾಸ್ ಮಾತನಾಡಿ, ಗಣೇಶ ಹಬ್ಬದಲ್ಲಿ ಪರಿಸರ ಸ್ನೇಹಿ ಗಣೇಶ ಮೂರ್ತಿಗಳನ್ನು ಪೂಜಿಸುವ ಮೂಲಕ ಮುಂದಿನ ಪೀಳಿಗೆಗೆ ಉತ್ತಮ ಪರಿಸರವನ್ನು ಕಲ್ಪಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು. ಈ ವೇಳೆ ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಸಂತೋಷ್ ಕಿರಾಲು, ಅಶ್ವಿನಿ ಗೌಡ, ಶಾಲೆಯ ಮುಖ್ಯೋಪಾಧ್ಯಾಯರಾದ ಶುಭ ಹಾಗೂ ಶಿಕ್ಷಕರು ಉಪಸ್ಥಿತರಿದ್ದರು.

ಜೈಲಿನಿಂದ ತಪ್ಪಿಸಿಕೊಳ್ಳಲು ಯತ್ನ: 129 ಕೈದಿಗಳು ಸಾವು

ಕಾಂಗೋ: ಡೆಮಾಕ್ರೆಟಿಕ್ ರಿಪಬ್ಲಿಕ್ ಆಫ್ ಕಾಂಗೋದಲ್ಲಿರುವ ಸೆಂಟ್ರಲ್ ಮಕಾಲಾ ಜೈಲಿನಿಂದ ತಪ್ಪಿಸಿಕೊಳ್ಳಲು ಹೋಗಿ 129 ಕೈದಿಗಳು ಸಾವನ್ನಪ್ಪಿರುವ ಘಟನೆ ವರದಿಯಾಗಿದೆ. ಜತೆಗೆ 59 ಕೈದಿಗಳು ಗಂಭೀರವಾಗಿ ಗಾಯಗೊಂಡಿದ್ದಾರೆ. ಎಲ್ಲರೂ ಸೇರಿ ಜೈಲಿನಿಂದ ಓಡಿ ಹೋಗಲು ಪ್ರಯತ್ನ ಮಾಡಿದ್ದರು. ಆಂತರಿಕ ಸಚಿವ ಶಬಾನಿ ಲುಕೋ ಈ ವಿವರಗಳನ್ನು ಎಕ್ಸ್‌ನಲ್ಲಿ ಹಂಚಿಕೊಂಡಿದ್ದಾರೆ. ಮಕಾಲಾ ಜೈಲಿನಿಂದ ಕೈದಿಗಳು ಪರಾರಿಯಾಗಲು ಯತ್ನಿಸಿದ್ದರು, ಜೈಲು ಸಿಬ್ಬಂದಿ ಎಚ್ಚೆತ್ತು ಪರಿಸ್ಥಿತಿ ನಿಭಾಯಿಸಲು ಹೋದಾಗ ಮಾರಾಮಾರಿ ನಡೆದಿದೆ. ಈ ವೇಳೆ ಅಡುಗೆ ಕೋಣೆಯಿಂದ ಬೆಂಕಿ ಆವರಿಸಿ 129 ಕೈದಿಗಳು ಸಾವನ್ನಪ್ಪಿದ್ದಾರೆ. ಈ ಘಟನೆಯಲ್ಲಿ ಜೈಲಿನ ಕಟ್ಟಡಕ್ಕೂ ಹಾನಿಯಾಗಿದೆ ಎಂದು ಸಚಿವ ಶಬಾನಿ ಲುಕೋ ತಿಳಿಸಿದ್ದಾರೆ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ದ ರೂಲರ್ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರಾಯನ್ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಭೀಮಾ (ಕ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಕರಿಯ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಭೀಮಾ (ಕ)	4 ಪ್ರದರ್ಶನಗಳು
ರಾಜಕಮಲ್	
ಸರಿಪೋದಾ ಶನಿವಾರಂ (ತೆ)	4 ಪ್ರದರ್ಶನಗಳು
ಸಂಗಂ	
ಭೀಮಾ (ಕ)	4 ಪ್ರದರ್ಶನಗಳು
ಲಿಡೋ	
ಕರಿಯಾ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಮಿಸ್ಟರ್ ಬಚನ್ (ತೆ)	4 ಪ್ರದರ್ಶನಗಳು
ಪ್ರಭಾ	
ಅಹೋ ವಿಕ್ರಮಾರ್ಕ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ವಾರ್ಝಾ ಬಯೋಪಿಕ್ ಆಫ್ ಎ ಬಿಲಿಯನ್ ಬಾಯ್ಸ್ (ಮ): ಬೆ.10.20ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಮ.12.55ಕ್ಕೆ, ಸಂ.4ಕ್ಕೆ, ಸರಿಪೋದಾ ಶನಿವಾರಂ (ತೆ): ರಾ.7.10ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ಪೆಪೆ (ಕ): ಬೆ.11ಕ್ಕೆ, ಸಂ.4.30ಕ್ಕೆ, ಸ್ತ್ರೀ 2 (ಹಿಂ): ಮ.1.30ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 3	ಅಫ್ರೇಡ್ (ಇಂ): ಬೆ.11.30ಕ್ಕೆ, ರಾ.10ಕ್ಕೆ, ಕೊಟೇಷನ್ ಗ್ಯಾಂಗ್ ಪಾರ್ಟ್ 1 (ತ): ಮ.1.30ಕ್ಕೆ, ಸರಿಪೋದಾ ಶನಿವಾರಂ (ತೆ): ಸಂ.4ಕ್ಕೆ, ಲಾಫಿಂಗ್ ಬುದ್ಧ (ಕ): ರಾ.7.20ಕ್ಕೆ.
ಸ್ಕ್ರೀನ್ 4	ಕೃಷ್ಣಂ ಪ್ರಣಯ ಸಖಿ (ತ): ಬೆ.10.05ಕ್ಕೆ, ರಾ.7.05ಕ್ಕೆ, ರಾ.10.10ಕ್ಕೆ, ಭೀಮಾ (ಕ): ಮ.1.15ಕ್ಕೆ, ಅಹೋ ವಿಕ್ರಮಾರ್ಕ (ತೆ): ಸಂ.4.15ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಕೃಷ್ಣಂ ಪ್ರಣಯ ಸಖಿ (ಕ): ಬೆ.10.30ಕ್ಕೆ, ಪೆಪೆ (ಕ): ಮ.1.35ಕ್ಕೆ, ಲಾಫಿಂಗ್ ಬುದ್ಧ (ಕ): ಸಂ.4.05ಕ್ಕೆ, ವಾರ್ಝಾ ಬಯೋಪಿಕ್ ಆಫ್ ಎ ಬಿಲಿಯನ್ ಬಾಯ್ಸ್ (ಮ): ಸಂ.6.45ಕ್ಕೆ, ಸ್ತ್ರೀ 2 (ಹಿಂ): ರಾ.9.15ಕ್ಕೆ.
ಸ್ಕ್ರೀನ್ 2	ಕೃಷ್ಣಂ ಪ್ರಣಯ ಸಖಿ (ಕ): ಮ.12.30ಕ್ಕೆ, ಸಂ.6.25ಕ್ಕೆ, ರಾ.9.30ಕ್ಕೆ, ಭೀಮಾ (ಕ): ಮ.3.35ಕ್ಕೆ.
ಸ್ಕ್ರೀನ್ 3	ಭೀಮಾ (ಕ): ಮ.12.45ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಮ.3.45ಕ್ಕೆ, ಸ್ತ್ರೀ 2 (ಹಿಂ): ಸಂ.6.45ಕ್ಕೆ, ದೇವಧೂತನ್ (ಮ): ರಾ.9.30ಕ್ಕೆ.
ಸ್ಕ್ರೀನ್ 4	ಪೆಪೆ (ಕ): ಬೆ.10.40ಕ್ಕೆ, ಮ.3.45ಕ್ಕೆ, ಅಹೋ ವಿಕ್ರಮಾರ್ಕ (ತೆ): ಮ.1.05ಕ್ಕೆ, ಸರಿಪೋದಾ ಶನಿವಾರಂ (ತೆ): ಸಂ.6.15ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ನಾನು ಭಲವಾದಿ, ನನ್ನ ವಿರುದ್ಧ ದೂರು ಕೊಟ್ಟರೂ ನಾನು ಹೆದರಲ್ಲ

ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸವಾಲು



ಬೆಂಗಳೂರು, ಸೆ.3– ಕಾಂಗ್ರೆಸ್‌ನವರು ರಾಜ್ಯಪಾಲರಿಗೆ ಕೊಟ್ಟಿರುವ ದೂರನ್ನು ನಾನು ಸ್ವಾಗತ ಮಾಡುತ್ತೇನೆ. ನಾನು ಛಲವಾದಿ. ಯಾವುದಕ್ಕೂ ಹೆದರಲ್ಲ ಎಂದು ಕಾಂಗ್ರೆಸ್ ನಾಯಕರಿಗೆ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸವಾಲ್ ಹಾಕಿದ್ದಾರೆ.

ಛಲವಾದಿ ನಾರಾಯಣಸ್ವಾಮಿ ಸಿಎ ಸೈಟ್ ಅಕ್ರಮವಾಗಿ ಖರೀದಿ ಮಾಡಿದ್ದಾರೆ ಎಂದು ಕಾಂಗ್ರೆಸ್ ಶಾಸಕರು ರಾಜ್ಯಪಾಲರಿಗೆ ದೂರು ನೀಡಿರುವ ವಿಚಾರಕ್ಕೆ ವಿಧಾನಸೌಧದಲ್ಲಿ ಅವರು ಪ್ರತಿಕ್ರಿಯೆ ನೀಡಿದರು. ನನ್ನ ವಿರುದ್ಧ ರಾಜ್ಯಪಾಲರಿಗೆ ಕಾಂಗ್ರೆಸ್ ಅವರು ದೂರು ಕೊಟ್ಟಿರುವುದನ್ನು ಸ್ವಾಗತ ಮಾಡುತ್ತೇನೆ. 20 ವರ್ಷಗಳ ಹಿಂದಿನ ಪ್ರಕರಣ ಇದು. ಇದು ಪೊಲಿಟಿಕಲ್ ಗೇಮ್. ಇದಕ್ಕೆ ನಾನು ಹೆದರಲ್ಲ. ಕಾಂಗ್ರೆಸ್ ಅವರು ಬಹಳ ಕಷ್ಟಪಟ್ಟಿದ್ದಾರೆ. ನಾನು ಕೆಲಸ ಕೊಟ್ಟ ಮೇಲೆ ಅವರು ನನ್ನ ವಿರುದ್ಧ ಕೆಲಸ ಶುರು ಮಾಡಿದ್ದಾರೆ ಎಂದು ಲೇವಡಿ ಮಾಡಿದರು.

ಯಾರೋ ಒಬ್ಬರು ಟ್ರಸ್ಟ್ ಮಾಡಿ ನನ್ನನ್ನು ಟ್ರಸ್ಟ್ ಮೆಂಬರ್ ಮಾಡಿದ್ದರು. ನಾನು ಟ್ರಸ್ಟ್ ಬಿಟ್ಟು 10 ವರ್ಷ ಆಗಿತ್ತು. ಅದಕ್ಕೂ ನನಗೂ ಸಂಬಂಧ ವಿಲ್ಲ. ಯಾಕೆ ದೂರು ಕೊಟ್ಟರು ಎಂದು ನಾನು ಪ್ರಶ್ನೆ ಮಾಡಲ್ಲ. ಆದರೆ ನಮ್ಮ ಆರೋಪಕ್ಕೆ ಇದೇ ಕಾಂಗ್ರೆಸ್‌ನವರ ಉತ್ತರವೇ? ಮೊದಲು ನನ್ನ ಆರೋಪಕ್ಕೆ ಕಾಂಗ್ರೆಸ್ ನಾಯಕರು ಉತ್ತರ ಕೊಡಲಿ ಎಂದು ಆಗ್ರಹಿಸಿದರು.

ದೂರು ಕೊಟ್ಟ ಯಾರೂ ನನ್ನನ್ನು ಎಂಎಲ್‌ಸಿ ಮಾಡಿಲ್ಲ. ಬಿಜೆಪಿ ನನ್ನನ್ನು ವಿಪಕ್ಷ ನಾಯಕ ಮಾಡಿದ್ದು. ನಾನು ತಪ್ಪು ಮಾಡಿದರೆ ಪಕ್ಷ ಕ್ರಮ ತೆಗೆದುಕೊಳ್ಳುತ್ತದೆ. ನಾನು ಛಲವಾದಿ. ನಾನು ಇರೋದೇ ಹೀಗೆ. ನಾನು ಯಾರನ್ನೂ ಸುಮ್ಮನೆ ಬಿಡಲ್ಲ. ಕೆಐಎಡಿಬಿ ಅವರು ಜಮೀನು ನೀಡಿದ್ದಾರೆ. ನಿಯಮದ ಪ್ರಕಾರವೇ ಎಲ್ಲವೂ ಆಗಿದೆ. ಕಾಂಗ್ರೆಸ್‌ನಲ್ಲಿ ಇದ್ದಾಗ ಆ ಸೈಟ್ ವಾಪಸ್ ಪಡೆದರು. ಕೋರ್ಟ್‌ಗೆ ಹೋಗಿ ನಾನು ಆ ಸೈಟ್ ಪಡೆದಿದ್ದೇನೆ ಎಂದು ವಿವರಣೆ ನೀಡಿದರು.

ಆದರ್ಶ ಸ್ಕೂಲ್ ಜಾಗಕ್ಕೆ ನಾನು ಮಾಲೀಕ ಅಲ್ಲ. ಅದೊಂದು ಟ್ರಸ್ಟ್. ಕಾಂಗ್ರೆಸ್ ಅವರು ಧಂ ಬಿರಿಯಾನಿ ಮಾಡಿಕೊಳ್ಳಲಿ ಏನಾದ್ರು ಮಾಡಿಕೊಳ್ಳಲಿ. ನಾನು ಆ ಟ್ರಸ್ಟ್ ಮೆಂಬರ್ ಆಗಿದ್ದೆ ಅಷ್ಟೆ. ಟ್ರಸ್ಟ್ ಜಾಗ ನನ್ನ ಹೆಸರಿಗೆ ಮಾಡಿಕೊಳ್ಳಲು ಆಗಲ್ಲ. 10 ವರ್ಷಗಳ ಹಿಂದೆಯೇ ನಾನು ಮೆಂಬರ್ ಸ್ಥಾನಕ್ಕೆ ರಾಜೀನಾಮೆ ನೀಡಿದ್ದೇನೆ. ಆ ಟ್ರಸ್ಟ್ ಜಾಗ ನಾನು ಖರೀದಿ ಮಾಡಿಲ್ಲ. ಅದು ಟ್ರಸ್ಟ್ ಜಾಗ. ಅದನ್ನು ಖರೀದಿ ಮಾಡಲು ಆಗಲ್ಲ. ಪಾಪ ಕಾಂಗ್ರೆಸ್ ಅವರಿಗೆ ಇದೆಲ್ಲ ಏನು ಗೊತ್ತಿಲ್ಲ ಎಂದು ಕಾಂಗ್ರೆಸ್ ಶಾಸಕರ ವಿರುದ್ಧ ವಾಗ್ದಾಳಿ ನಡೆಸಿದರು.

ನಾನು ಎಲ್ಲೂ ಮಲ್ಲಿಕಾರ್ಜುನ ಖರ್ಗೆ ಹೆಸರು ಹೇಳೇ ಇಲ್ಲ. ದಿನೇಶ್ ಕಲ್ಲಹಳ್ಳಿ ಅವರು ಅಧಿಕಾರ ದುರುಪಯೋಗ ಮಾಡಿಕೊಂಡಿದ್ದಾರೆ ಎಂದು ದೂರು ಕೊಟ್ಟಿದ್ದಾರೆ. ಅದಕ್ಕೆ ನಾವು ಕ್ರಮ ತೆಗೆದುಕೊಳ್ಳಿ ಎಂದು ಮನವಿ ಮಾಡಿದ್ದೆವು. ಖರ್ಗೆ ಮೇಲೆ ಸಂಪೂರ್ಣ ಗೌರವ ಇದೆ. ನಮ್ಮ ಸಮುದಾಯದ ದೊಡ್ಡ ನಾಯಕರು ಅವರು. ಸಮುದಾಯದ ವಿಷಯ ಬೇರೆ. ಪಕ್ಷದ ವಿಷಯ ಬೇರೆ. ಸರ್ಕಾರ ಮಾಡುವ ತಪ್ಪು ನಾನು ಹೇಳಬೇಕು. ದಾಖಲಾತಿ ಬಿಡುಗಡೆ ಮಾಡಿದ್ದೇನೆ. ನಾನು ಎರಡು ಕೇಸ್ ಹೇಳಿದ ಕೂಡಲೇ ಕೆಐಎಡಿಬಿ ಕಚೇರಿ ಬಾಗಿಲು ಹಾಕಿದ್ದಾರೆ. ಯಾವುದೇ ಡಾಕ್ಯುಮೆಂಟ್ ಪಡೆಯಲು ಬಿಡುತ್ತಿಲ್ಲ. ಅನುಮತಿ ಪಡೆದು ಒಳಗೆ ಹೋಗಬೇಕು ಎಂದು ಮಾಡಿದ್ದಾರೆ. ನಿಮ್ಮ ತಪ್ಪು ಇಲ್ಲ ಅಂದರೆ ಯಾಕೆ ಕೆಐಎಡಿಬಿ ಕ್ಲೋಸ್ ಮಾಡಿ ಕೆಲಸ ಮಾಡಿಸುತ್ತಿದ್ದೀರಾ. ನೀವು ಬಾಗಿಲು ಹಾಕಿದರೆ ನಮಗೆ ಡಾಕ್ಯುಮೆಂಟ್ ಸಿಗೋದಿಲ್ಲ. ನಿಯಮದ ಪ್ರಕಾರ 100 ಸೈಟ್ ಬೇಕಾದರೂ ಪಡೆಯಲಿ. ಆದರೆ ಇಲ್ಲಿ ನಿಯಮ ಉಲ್ಲಂಘನೆ ಆಗಿದೆ ಅಂತ ದೂರು ಕೊಟ್ಟಿದ್ದಾರೆ. ಅದನ್ನು ತನಿಖೆ ಮಾಡಿ ಅಂತ ನಾನು ಕೇಳಿದ್ದೇನೆ ಅಷ್ಟೆ, ಇದರಲ್ಲಿ ತಪ್ಪೇನಿದೆ. ಇದಕ್ಕೆ ನನ್ನ ಮೇಲೆ ದೂರು ಕೊಟ್ಟರೆ ಅದನ್ನು ನಾನು ಎದುರಿಸುತ್ತೇನೆ ಎಂದು ತಿರುಗೇಟು ಕೊಟ್ಟರು.

ಸಿದ್ದರಾಮಯ್ಯ ವಿರುದ್ಧ ಹೇಳಿಕೆಗೆ ಕ್ಷಮೆಯಾಚಿಸಿದ ಅರವಿಂದ್ ಬೆಲ್ಲದ್

ಬಿಜೆಪಿ ಶಾಸಕನ ಕ್ಷಮಾಪಣೆ ಪತ್ರಕ್ಕೆ ಸಿಎಂ ಶ್ಲಾಘನೆ



ಬೆಂಗಳೂರು, ಸೆ.3– ಜಿಂದಾಲ್ ಕಂಪನಿಗೆ ಭೂಮಿ ನೀಡುವ ಸಂಪುಟ ತೀರ್ಮಾನದ ವಿಚಾರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಏಕವಚನದಲ್ಲಿ ವಾಗ್ದಾಳಿ ನಡೆಸಿದ್ದ ವಿರೋಧ ಪಕ್ಷದ ಉಪನಾಯಕ ಅರವಿಂದ್ ಬೆಲ್ಲದ್ ಅವರು ಮಂಗಳವಾರ ಸಿದ್ದರಾಮಯ್ಯನವರ ಬಳಿ ಕ್ಷಮೆಯಾಚಿಸಿದ್ದಾರೆ. 'ಸಿದ್ದರಾಮಯ್ಯ ಅವರ ಅಪ್ಪನ ಮನೆ ಆಸ್ತಿನಾ' ಎಂಬ ಪದ ಪ್ರಯೋಗ ಮಾಡಿದ ಕಾರಣಕ್ಕಾಗಿ ಬಿಜೆಪಿ ಶಾಸಕ ಅರವಿಂದ್ ಬೆಲ್ಲದ್ ಅವರು ಕ್ಷಮೆಯಾಚಿಸಿದ್ದಾರೆ.

ಜಿಂದಾಲ್‌ಗೆ ಭೂಮಿ ಕೊಟ್ಟಿರುವ ವಿಚಾರವಾಗಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ್ದ ಅರವಿಂದ್ ಬೆಲ್ಲದ್, ಸಿದ್ದರಾಮಯ್ಯನವರದ್ದು ಏನು ಅಪ್ಪನ ಮನೆಯ ಆಸ್ತಿನಾ ಎಂದು ವಾಗ್ದಾಳಿ ನಡೆಸಿದ್ದರು. ಇದೀಗ ಸಿದ್ದರಾಮಯ್ಯ ಅವರಿಗೆ ಕ್ಷಮಾಪಣಾ ಪತ್ರವನ್ನು ಬರೆದಿರುವ ಬೆಲ್ಲದ್, ನಾನು ಬಳಸಿದ ಪದ ಶೋಭೆ ತರುವಂತದಲ್ಲ. ಹೀಗಾಗಿ ನಾನು ಕ್ಷಮೆ ಕೋರುತ್ತೇನೆ ಎಂದು ಹೇಳಿದ್ದಾರೆ.

ಬೆಲ್ಲದ್ ನಡೆ ಶ್ಲಾಘಿಸಿದ ಸಿಎಂ ಸಿದ್ದರಾಮಯ್ಯ: ಅರವಿಂದ್ ಬೆಲ್ಲದ್ ಅವರ ಕ್ಷಮಾಪಣಾ ಪತ್ರಕ್ಕೆ ಟ್ವೀಟ್ ಮೂಲಕ ಪ್ರತಿಕ್ರಿಯಿಸಿರುವ ಸಿಎಂ ಸಿದ್ದರಾಮಯ್ಯ ಅವರು, ರಾಜಕೀಯದಲ್ಲಿ ಟೀಕೆ, ಟಿಪ್ಪಣಿಗಳು ಸಹಜ. ಕೆಲವೊಮ್ಮೆ ಉದ್ವೇಗದಲ್ಲಿ ಮತ್ತೊಬ್ಬರ ಘನತೆಗೆ ಚ್ಯುತಿ ತರುವಂತಹ ಹೇಳಿಕೆ ಅರಿವಿಗೆ ಬಾರದೆಯೇ ಬಂದು ಬಿಡುತ್ತದೆ.

ಜಿಂದಾಲ್ ಕಂಪನಿಗೆ ಭೂಮಿ ನೀಡಿರುವ ನಮ್ಮ ಸರ್ಕಾರದ ತೀರ್ಮಾನವನ್ನು ವಿರೋಧಿಸಿ ಮಾತನಾಡುವಾಗ ವಿರೋಧ ಪಕ್ಷದ ಉಪನಾಯಕರಾದ ಅರವಿಂದ ಬೆಲ್ಲದ್ ಅವರು ವೈಯಕ್ತಿಕವಾಗಿ ನನ್ನನ್ನು ನಿಂದನೆ ಮಾಡಿದ್ದರು. ತಮ್ಮ ತಪ್ಪಿನ ಅರಿವಾಗಿ ಪತ್ರದ ಮೂಲಕ ಕ್ಷಮೆ ಕೋರಿದ್ದಾರೆ. ಅವರ ಈ ನಡೆಯನ್ನು ನಾನು ಅತ್ಯಂತ ಮುಕ್ತವಾಗಿ ಸ್ವಾಗತಿಸುತ್ತೇನೆ, ಜೊತೆಗೆ ಅವರ ಬಗ್ಗೆ ನನ್ನ ಮನಸ್ಸಿನಲ್ಲಿ ದ್ವೇಷವಾಗಲೀ, ಬೇಸರವಾಗಲೀ ಯಾವುದು ಇಲ್ಲವೆಂಬುದನ್ನು ಈ ಮೂಲಕ ತಿಳಿಸಬಯಸುತ್ತೇನೆ.

ನಾನು ಒಂದೆರಡು ಬಾರಿ ಬಾಯ್ತಪ್ಪಿನಿಂದ ಏಕವಚನ ಬಳಕೆ ಮಾಡಿ ನಂತರ ವಿಷಾದ ವ್ಯಕ್ತಪಡಿಸಿದ್ದೇನೆ, ಆ ತಪ್ಪು ಮರುಕಳಿಸದಂತೆ ತಿದ್ದಿಕೊಳ್ಳುವ ಪ್ರಯತ್ನವನ್ನು ಮಾಡಿದ್ದೇನೆ. ನನ್ನ ಸುದೀರ್ಘ 40 ವರ್ಷಗಳ ರಾಜಕೀಯ ಜೀವನದಲ್ಲಿ ವಿಪಕ್ಷಗಳ ಹಲವು ಕಿರಿಯ, ಹಿರಿಯ ನಾಯಕರಿಂದ ವೈಯಕ್ತಿಕ ನಿಂದನೆ, ಚಾರಿತ್ರ್ಯಹನನ ಮಾಡುವಂತಹ ಪದಬಳಕೆ ಎಲ್ಲವನ್ನೂ ಕೇಳಿದ್ದೇನೆ, ಎದುರಿಸಿದ್ದೇನೆ. ಮೊದಲ ಬಾರಿಗೆ ಅರವಿಂದ ಬೆಲ್ಲದ್ ಅವರು ತಾವು ಬಳಸಿದ ಪದದ ಬಗ್ಗೆ ಸ್ವತಃ ಅವರೇ ಬೇಸರ ವ್ಯಕ್ತಪಡಿಸಿ, ಪತ್ರದ ಮೂಲಕ ಕ್ಷಮೆ ಕೇಳಿ ಹೊಸ ತಲೆಮಾರಿನ ರಾಜಕಾರಣಿಗಳಿಗೆ ಮೇಲ್ಪಂಕ್ತಿ ಹಾಕಿಕೊಟ್ಟಿದ್ದಾರೆ.

ಅರವಿಂದ್ ಅವರ ತಂದೆ ಚಂದ್ರಕಾಂತ ಬೆಲ್ಲದ್ ಅವರು ನನ್ನ ದೀರ್ಘ ಕಾಲದ ಸ್ನೇಹಿತರು. ಅವರೊಬ್ಬ ಸಜ್ಜನ ರಾಜಕಾರಣಿ. ಅವರ ಸಜ್ಜನಿಕೆಯ ಪರಂಪರೆಯನ್ನು ಅರವಿಂದ್ ಮುಂದುವರಿಸಿಕೊಂಡು ಹೋಗಲಿ ಎಂದು ಹಾರೈಸುತ್ತೇನೆ.

ರಾಜಕೀಯವು ಬರೀ ಟೀಕೆ, ಆರೋಪ–ಪ್ರತ್ಯಾರೋಪಗಳಿಂದಲೇ ತುಂಬಿಹೋಗುತ್ತಿರುವ ಈ ಕಾಲದಲ್ಲಿ ಅರವಿಂದ ಬೆಲ್ಲದ್ ಅವರ ನಡೆ ಮೌಲ್ಯಯುತ ರಾಜಕಾರಣದ ಜೀವಂತಿಕೆಯ ಸಂಕೇತವಾಗಿ ಕಾಣುತ್ತಿದೆ. ಪಶ್ಚಾತ್ತಾಪಕ್ಕಿಂತ ದೊಡ್ಡ ಪ್ರಾಯಶ್ಚಿತ ಬೇರೊಂದಿಲ್ಲ ಎಂಬ ಮಾತು ಈ ಸಂದರ್ಭಕ್ಕೆ ಹೆಚ್ಚು ಅರ್ಥಪೂರ್ಣವೆನಿಸುತ್ತಿದೆ.

ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರಕಟ

ಮೈಸೂರು ತಾಲೂಕು ಹಿನಕಲ್ ಹಿರಿಯ ಪ್ರಾಥಮಿಕ ಶಾಲೆಯ ಕೆ.ಎಸ್.ಮಧುಸೂದನ್‌ರಿಗೆ ಪ್ರಶಸ್ತಿ

ಮೈಸೂರು, ಸೆ.3(ಎಸ್‌ಪಿಎನ್)– ಮೈಸೂರು ತಾಲೂಕಿನ ಹಿನಕಲ್ ಹಿರಿಯ ಪ್ರಾಥಮಿಕ ಶಾಲೆಯ ಸಹಶಿಕ್ಷಕ ಕೆ.ಎಸ್.ಮಧುಸೂದನ್ ಸೇರಿದಂತೆ ಪ್ರಾಥಮಿಕ ಶಾಲಾ ವಿಭಾಗದಿಂದ 20 ಮಂದಿ ಹಾಗೂ ಪ್ರೌಢಶಾಲಾ ವಿಭಾಗದಿಂದ 11 ಮಂದಿ (ಓರ್ವ ವಿಶೇಷ ಶಿಕ್ಷಕರೂ ಸೇರಿದಂತೆ) 2024–25ನೇ ಸಾಲಿನ ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.



ಮಧುಸೂದನ್

ಅಲ್ಲದೆ, ರಾಜ್ಯಮಟ್ಟದ ಉತ್ತಮ ಶಿಕ್ಷಕರ ಪ್ರಶಸ್ತಿಗೆ ಆಯ್ಕೆ ಯಾದ ಈ ಪಟ್ಟಿಯಲ್ಲಿನ ಮಹಿಳಾ ಶಿಕ್ಷಕಿಗೆ ಅಕ್ಷರ ಮಾತೆ 'ಸಾವಿತ್ರಿಬಾಯಿ ಫುಲೆ' ಹೆಸರಿನಲ್ಲಿ ಸೆ.5ರಂದು ನಡೆಯುವ ರಾಜ್ಯಮಟ್ಟದ ಶಿಕ್ಷಕರ ದಿನಾಚರಣೆ ಸಂದರ್ಭದಲ್ಲಿ ಪ್ರಶಸ್ತಿ ಪ್ರಧಾನ ಮಾಡಲು ಶಾಲಾ ಶಿಕ್ಷಣ ಇಲಾಖೆ ಅನುಮತಿ ನೀಡಿದೆ.

ರಾಜ್ಯ ಪ್ರಶಸ್ತಿ ಪುರಸ್ಕೃತ ಶಿಕ್ಷಕರು, ಮುಖ್ಯಶಿಕ್ಷಕರು, ವಿಶೇಷ ಶಿಕ್ಷಕರಿಗೆ ತಲಾ 25 ಸಾವಿರ ರೂ.ನಂತೆ ಒಟ್ಟು 7,75,000 ರೂ.ಗಳ ನಗದು ಪುರಸ್ಕಾರ ನೀಡಲು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಅಧೀನ ಕಾರ್ಯದರ್ಶಿ ಮಹಾಂತಯ್ಯ ಎಸ್.ಹೊಸಮಠ ಆದೇಶಿಸಿದ್ದಾರೆ.

ಸಂತಸ ವ್ಯಕ್ತಪಡಿಸಿದ ಸಹ ಶಿಕ್ಷಕ ಕೆ.ಎಸ್.ಮಧುಸೂದನ್: ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ ಕೆ.ಎಸ್.ಮಧುಸೂದನ್ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿ, 2008ರಲ್ಲಿ ಶಾಲಾ ಶಿಕ್ಷಣ ಇಲಾಖೆಗೆ ಕೆ.ಆರ್. ತಾಲೂಕಿನ ಕೆರೆಮನುಗನಹಳ್ಳಿ ಹಿರಿಯ ಪ್ರಾಥಮಿಕ ಶಾಲೆಗೆ ಸಹ ಶಿಕ್ಷಕನಾಗಿ ನೇಮಕಗೊಂಡೆ. ನಂತರ ಅದೇ ತಾಲೂಕಿನ ಮುದ್ದನಹಳ್ಳಿ ಪ್ರಾಥಮಿಕ ಶಾಲೆಗೆ ವರ್ಗಾವಣೆಗೊಂಡು ಕೆಲಸ ಮಾಡಿದ್ದೇನೆ. ಇದೀಗ ಕಳೆದ ಐದು ವರ್ಷದಿಂದ ಮೈಸೂರು ತಾಲೂಕು ಹಿನಕಲ್ ಪ್ರಾಥಮಿಕ ಶಾಲೆಯಲ್ಲಿ ಕೆಲಸ ಮಾಡುತ್ತಿದ್ದೇನೆ.

ಈ ಅಂತರದಲ್ಲಿ ಭೇರ್ಯದಲ್ಲಿ 4 ವರ್ಷ ಸಿಆರ್‌ಪಿ ಆಗಿ ಕೆಲಸ ನಿರ್ವಹಿಸಿದ್ದೇನೆ. ಅಲ್ಲದೆ, ನಾನು ನವೋದಯ ಶಾಲೆಯ ವಿದ್ಯಾರ್ಥಿಯಾಗಿದ್ದ ಹಿನ್ನೆಲೆಯಲ್ಲಿ ನವೋದಯ ಶಾಲೆಯಲ್ಲಿ ಸಿಗುವ ರಾಷ್ಟ್ರಮಟ್ಟದ ಶಿಕ್ಷಣ ರಾಜ್ಯಮಟ್ಟದ ಶಿಕ್ಷಣ ಪದ್ಧತಿಯಲ್ಲಿ ಓದುತ್ತಿರುವ ನಮ್ಮ ಮಕ್ಕಳಿಗೂ ಸಿಗುವಂತೆ ಮಾಡಲು ಎಂ ಟೆಕ್ ಆಂಗ್ಲ ಮಾಧ್ಯಮದ ಶಾಲೆಗೂ ಅಳವಡಿಸಿ, ಇಲ್ಲಿನ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ, ಇಂಗ್ಲಿಷ್ ಕಲಿಕೆ ಆದ್ಯತೆ ನೀಡಿ ಕಲಿಸಲು ಪ್ರಯತ್ನಿಸಿದ್ದೇನೆ.

ನಮ್ಮ ಶಾಲೆಗೆ ನನ್ನ ಹಾಗೂ ಸ್ನೇಹಿತರ ಸಹಾಯದಿಂದ ರೋಬೊಟಿಕ್ ಮೂಲಕ ಬೋಧನಾ ತರಗತಿ ಆರಂಭಿಸಿದ್ದೇವೆ ಒಟ್ಟಿನಲ್ಲಿ ನಮ್ಮ ಶಾಲೆಯಲ್ಲಿ ಅಂತರರಾಷ್ಟ್ರೀಯ ಮಟ್ಟದ ಶಿಕ್ಷಣಕ್ಕೆ ಒತ್ತು ನೀಡಿರುವುದನ್ನು ನಮ್ಮ ಇಲಾಖೆ ಗುರುತಿಸಿ, ರಾಜ್ಯಮಟ್ಟದ 'ಉತ್ತಮ ಶಿಕ್ಷಕ ಪ್ರಶಸ್ತಿ'ಗೆ ಆಯ್ಕೆ ಮಾಡಿರುವುದು ಸಂತಸ ವಿಚಾರದ ಎಂದರು.

ನಾಗರಿಕರ ನಿವೇಶನ, ಕಟ್ಟಡ ಸಂಬಂಧ

ನಿಯಮಬದ್ಧ ಕೆಲಸ ಮಾಡಿಕೊಡಲು ಮುಡಾ, ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿ

ಜಿಲ್ಲಾಧಿಕಾರಿಗಳಲ್ಲಿ ಮಾಜಿ ಮೇಯರ್ ಸಂದೇಶ್‌ಸ್ವಾಮಿ ಮನವಿ


ಮೈಸೂರು,ಸೆ.3(ಪಿಎಂ)– ನಿವೇಶನ ಹಾಗೂ ಕಟ್ಟಡಗಳಿಗೆ ಸಂಬಂಧಿಸಿದಂತೆ ನಿಯಮಬದ್ಧವಾಗಿರುವ ಕೆಲಸ–ಕಾರ್ಯಗಳನ್ನು ಮಾಡಿಕೊಡುವಂತೆ ಮುಡಾ (ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ) ಮತ್ತು ಮೈಸೂರು ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಬೇಕೆಂದು ಜಿಲ್ಲಾಧಿಕಾರಿಗಳಲ್ಲಿ ಮಾಜಿ ಮೇಯರ್ ಸಂದೇಶ್‌ಸ್ವಾಮಿ ಮನವಿ ಮಾಡಿದ್ದಾರೆ.




ಮುಡಾ ಹಗರಣದ ನ್ಯಾಯಾಂಗ ತನಿಖೆ ಹಿನ್ನೆಲೆಯಲ್ಲಿ ಮುಡಾ ಹಾಗೂ ನಗರಪಾಲಿಕೆಯಲ್ಲಿ ನಾಗರಿಕರ ನಿವೇಶನ ಹಾಗೂ ಕಟ್ಟಡಗಳಿಗೆ ಸಂಬಂಧಿಸಿದಂತೆ ಕೆಲಸ–ಕಾರ್ಯಗಳು ಆಗುತ್ತಿಲ್ಲ. ಸಾರ್ವಜನಿಕರಿಗೆ ಅಧಿಕಾರಿಗಳು ಸ್ಪಂದಿಸುತ್ತಿಲ್ಲ.

ಮೈಸೂರು ನಗರದ ಅನಧಿಕೃತ ಬಡಾವಣೆಗಳನ್ನು ಹೊರತುಪಡಿಸಿ ಬಹುತೇಕ ಬಡಾವಣೆಗಳು ಮುಡಾದ ವತಿಯಿಂದ ನಿರ್ಮಾಣವಾಗಿದ್ದು, ಸುಮಾರು 40ರಿಂದ 50 ಸಾವಿರ ನಿವೇಶನಗಳಿವೆ. ಖಾಸಗಿ ಬಡಾವಣೆಯ ಲಕ್ಷಾಂತರ ನಿವೇಶನಗಳೂ ಇವೆ. ಈ ಬಡಾವಣೆಗಳಿಗೆ ಸಂಬಂಧಿಸಿದಂತೆ ನಾಗರಿಕರು ಪ್ರತಿದಿನ ಮುಡಾ ಹಾಗೂ ಪಾಲಿಕೆಗೆ ತೆರಳಿ ತಮ್ಮ ಕೆಲಸಗಳನ್ನು ಮಾಡಿಸಿಕೊಳ್ಳುತ್ತಿದ್ದರು. ಆದರೆ ಮುಡಾ ಹಗರಣದ ತನಿಖೆಯ ಕಾರಣ ಸಾರ್ವಜನಿಕರ ಕೆಲಸ ಕಾರ್ಯಗಳು ಸ್ಥಗಿತವಾಗಿವೆ. ಪ್ರತಿದಿನ ಜನರು ಮುಡಾ ಹಾಗೂ ಪಾಲಿಕೆಗೆ ಅಲೆಯುವಂತಾಗಿದೆ. ಮೊದಲೇ ನಿಗದಿತವಾಗಿ ಜನರ ಕೆಲಸ ಮಾಡಿಕೊಡದ ಕೆಲ ಅಧಿಕಾರಿಗಳಿಗೆ ಇದೀಗ ವಿಳಂಬ ಧೋರಣೆ ಅನುಸರಿಸಲು ಹಾಗೂ ಮಾಮೂಲಿ ವಸೂಲಿ ಮಾಡಲು ಇದೊಂದು ನೆಪವಾಗಿ ಪರಿಣಮಿಸಿದೆ.

ಘಟನೋತ್ತರ ಮಂಜೂರಾತಿ ಎಂದರೇನು ಉತ್ತರಿಸಲಿ: ಮುಡಾಗೆ ಅಧ್ಯಕ್ಷರ ನೇಮಕವಾಗದೆ ಈ ಹಿಂದೆ ವರ್ಷಾನುಗಟ್ಟಲೆಯಿಂದ ಆಡಳಿತ ಮಂಡಳಿ ಸಭೆ ನಡೆದಿರಲಿಲ್ಲ. ಈಗ ಖಾಸಗಿ ಬಡಾವಣೆಗಳ ನಿರ್ಮಾಣ ಮತ್ತು ನಕ್ಷೆಗೆ ಅನುಮತಿ, ಖಾತೆ ವರ್ಗಾವಣೆ ಸೇರಿದಂತೆ ಮುಂತಾದ ಕೆಲಸಗಳು ಸ್ಥಗಿತವಾಗಿವೆ. ಆದರೆ ಕೆಲವು ಕಡತಗಳಿಗೆ ಮಾತ್ರ ಘಟನೋತ್ತರ ಮಂಜೂರಾತಿ ಹೆಸರಿನಲ್ಲಿ ಅಧಿಕಾರಿಗಳು ಅನುಮೋದನೆ ನೀಡುತ್ತಿರುವುದು ಕಂಡುಬಂದಿದೆ. ಘಟನೋತ್ತರ ಅನುಮತಿ ಎಂದರೇನು ಎಂಬ ಪ್ರಶ್ನೆಗೆ ಈ ಅಧಿಕಾರಿಗಳು ಉತ್ತರಿಸಬೇಕು. ಘಟನೋತ್ತರ ಅನುಮತಿ ಹೆಸರಿನಲ್ಲಿಯೂ ಅಕ್ರಮ ಎಸಗುತ್ತಿದ್ದಾರೆಯೇ ಎಂಬ ಅನುಮಾನ ಕಾಡುತ್ತಿದೆ ಎಂದು ಪತ್ರಿಕಾ ಪ್ರಕಟಣೆ ಮೂಲಕ ಡಿಸಿಯವರ ಗಮನಕ್ಕೆ ತಂದಿದ್ದಾರೆ.





ಹೆಸರು ಬದಲಾವಣೆ

ಮಂಗಳಾರಾಮ್ ಚೌಧರಿ ಆದ ನಾನು ನಂ 769/ಎಕ್ಸ್–10, 7ನೇ ಕ್ರಾಸ್, ... ರಸ್ತೆ, ಮೈಸೂರು–570004 ಇಲ್ಲಿ ವಾಸವಿದ್ದು ನನ್ನ ಹೆಸರು ಮತ್ತು ಹುಟ್ಟಿದ ದಿನಾಂಕವನ್ನು ಮಂಗಳಾರಾಮ್ ಚೌಧ್ರಿ (3–7–1969) ಇಂದ ಮಂಗಳಾರಾಮ್ ಚೌಧರಿ (25/7/1967) ಎಂದು ಬದಲಾವಣೆ ಮಾಡಿಕೊಂಡಿರುತ್ತೇನೆ. ಎಂದು ನೋಟರಿ ಎಂ.ಗೀತಾ ರವರ ಎದುರು ಪ್ರಮಾಣೀಕರಿಸಿರುತ್ತೇನೆ.
ಹಳೆ ಹೆಸರು: ಮಂಗಳಾರಾಮ್ ಚೌಧ್ರಿ
ಹೊಸ ಹೆಸರು: ಮಂಗಳಾರಾಮ್ ಚೌಧರಿ

ಸಹಿ/–ಮಂಗಳಾರಾಮ್ ಚೌಧರಿ

PUBLIC NOTICE

Publics are informed that my client Sri. S. RAVI, aged about 49 years S/o Sri. V. Sampath, intends to purchase Apartment No.C-2, Second Floor, 'PRAMUR ESTONIA' bearing Door No. 2713/2, D-4, MCITB. (Mysore City Improvement Trust Board) Site No.16, situated at Adipampa Road, (V.V. Mohalla) Devaraja Mohalla, Mysore, Having undivided share of Land super built area 738 Square feet or 68.59 sq.mtrs and bounded on the,
East : Apartment No.C-3, West : Setback area and Road, North : Common area and Apartment No.C-1, South : Setback area and storm water drain
from Sri. B. C. GANAPATHY, Aged about 63 years, S/o Late B. G. Cariappa Having R/at. Buttiyanda House, Malabar Road, Meenpet Virajpet, Kodagu District, Karnataka-571218. Persons having any right over the said property may lodge their objections/claims with documentary evidence within 21 days from this day to the undersigned.

Sd/- A.R.Advocates and Associates
Ramesh Kumar.C & Pradeep
Advocates
201, 2nd floor, above IDC Hotel,
Gandhinagar, Bangalore-09
Mob : 80731 44313

ಪಟ್ಟಣ ಪಂಚಾಯಿತಿ ಕಾರ್ಯಾಲಯ
ಶ್ರೀರಾಂಪುರ, ಮೈಸೂರು ಜಿಲ್ಲೆ–570008
ದೂರವಾಣಿ ಸಂಖ್ಯೆ: 0821–2330109 ಇ–ಮೇಲ್:– itstaff_ulb_srirampur@yahoo.com

ನಂ.ಪ.ಪಂ.ಶ್ರೀ/ /2024–25 ದಿನಾಂಕ: 03.09.2024

ಸಾರ್ವಜನಿಕ ಪ್ರಕಟಣೆ

ಶ್ರೀರಾಂಪುರ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಸಾರ್ವಜನಿಕರು ತಮ್ಮ ಆಸ್ತಿಗಳಿಗೆ 2024–25ನೇ ಸಾಲಿನ ತೆರಿಗೆ ಪಾವತಿಸಲು 2024ರ ಆಗಸ್ಟ್ 28 ರಿಂದ ಸೆಪ್ಟೆಂಬರ್ 14ರ ವರೆಗೆ ಶೇ.5ರಷ್ಟು ರಿಯಾಯಿತಿ ನೀಡಲಾಗುತ್ತಿದ್ದು, ನಂತರ ಆಸ್ತಿ ತೆರಿಗೆ ಪಾವತಿಸುವವರಿಗೆ ಯಾವುದೇ ರಿಯಾಯಿತಿ ಇರುವುದಿಲ್ಲ. ತದನಂತರದಲ್ಲಿ ತೆರಿಗೆಯನ್ನು ಪಾವತಿಸದ್ದಲ್ಲಿ ಪ್ರತಿ ತಿಂಗಳಿಗೆ ಶೇ.2ರಷ್ಟು ದಂಡವನ್ನು ವಿಧಿಸಲಾಗುವುದು.

ಸಹಿ/– ಮುಖ್ಯಾಧಿಕಾರಿ
ಪಟ್ಟಣ ಪಂಚಾಯಿತಿ, ಶ್ರೀರಾಂಪುರ, ಮೈಸೂರು

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಸಂತೆಸರಗೂರು
ಸರಗೂರು ತಾಲ್ಲೂಕು, ಮೈಸೂರು ಜಿಲ್ಲೆ – 571121
ಕಛೇರಿ : 08228-297209, ಇಮೇಲ್: apmcsaragur@rediffmail.com / apmcsargur@gmail.com

ಸಂ: ಕೃ.ಉ.ಮಾ.ಸ(ಸಂಸ)/120/2024–25 ದಿನಾಂಕ: 31.08.2024

ಸಂಕ್ಷಿಪ್ತ ಟೆಂಡರ್ ಪ್ರಕಟಣೆ (ಇ–ಪ್ರೊಕ್ಯೂರ್‌ಮೆಂಟ್ ಮೂಲಕ)

ಸಂತೆಸರಗೂರು, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮುಖ್ಯ ಮಾರುಕಟ್ಟೆ ಪ್ರಾಂಗಣ ಹಾಗೂ ಯರಹಳ್ಳಿ ಹ್ಯಾಂಡ್ ಪೋಸ್ಟ್ ಉಪ ಮಾರುಕಟ್ಟೆ ಪ್ರಾಂಗಣಗಳಲ್ಲಿ 2024–25ನೇ ಸಾಲಿಗೆ ಸಮಿತಿಯ ಚರ ಮತ್ತು ಸ್ಥಿರ ಆಸ್ತಿಯನ್ನು ಸಂರಕ್ಷಣೆ ಮಾಡಲು ಹಾಗೂ ಕಛೇರಿಯ ಕಾರ್ಯನಿರ್ವಹಿಸಲು ವಿವಿಧ ಭದ್ರತಾ ಸಿಬ್ಬಂದಿ ಸೇವೆ ಒದಗಿಸಲು ಕಾರ್ಮಿಕ ಇಲಾಖೆ ನಿಗಧಿಪಡಿಸಿರುವ ಕನಿಷ್ಠ ವೇತನ ದರಗಳಿಗೆ ಕಡಿಮೆ ಇರದಂತೆ ಕಾರ್ಮಿಕ ಇಲಾಖೆ/ಕಸಬು ನೋಂದಣಾ ಇಲಾಖೆಯಿಂದ ನೋಂದಾಯಿಸಲ್ಪಟ್ಟ ಅರ್ಹ ಗುತ್ತಿಗೆದಾರರಿಂದ ಷರತ್ತುಗಳನ್ವಯ ದ್ವಿಲಕೋಟೆ ಪದ್ಧತಿಯಲ್ಲಿ ಇ–ಪ್ರೊಕ್ಯೂರ್‌ಮೆಂಟ್ ವೆಬ್‌ಸೈಟ್ https://kppp.karnataka.gov.in ಮೂಲಕ ಮಾತ್ರ ಸ್ಪರ್ಧಾತ್ಮಕ ಟೆಂಡರ್‌ಗಳನ್ನು ಸಲ್ಲಿಸಲು ಆಹ್ವಾನಿಸಲಾಗಿದೆ.

ಕ್ರ. ಸಂ.	ಕೆಲಸದ ವಿವರಗಳು	ಟೆಂಡರ್ ಫಾರಂ ಫೀ	ಇ.ಎಂ.ಡಿ. ಮೊತ್ತ (ರೂ. ಗಳಲ್ಲಿ)	ಸೇವಾ ಕಾಲಾವಧಿ
1.	ಸಂತೆಸರಗೂರು, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮುಖ್ಯ ಮಾರುಕಟ್ಟೆ ಪ್ರಾಂಗಣ ಹಾಗೂ ಯರಹಳ್ಳಿ ಹ್ಯಾಂಡ್ ಪೋಸ್ಟ್ ಉಪ ಮಾರುಕಟ್ಟೆ ಪ್ರಾಂಗಣಗಳ ಚರ ಮತ್ತು ಸ್ಥಿರಾಸ್ತಿಗಳ ಸಂರಕ್ಷಣೆಗೆ ಹಾಗೂ ಕಛೇರಿ ಕಾರ್ಯನಿರ್ವಹಣೆಗೆ ಪ್ರತಿದಿನ 8 ಗಂಟೆಗಳ ಪಾಳಿಗಳಲ್ಲಿ ದಿನದ 24 ಗಂಟೆ ಅವಧಿಯಲ್ಲಿ 07 ಜನ ವಿವಿಧ ಭದ್ರತಾ ಸಿಬ್ಬಂದಿ ಸೇವೆ ಒದಗಿಸುವ ಬಗ್ಗೆ.	ಇ–ಪ್ರೋಸೆಸಿಂಗ್ ಫೀ ಇ–ಪೇಮೆಂಟ್‌ನಂತೆ	1,00,000–00 (ಒಂದು ಲಕ್ಷ ಮಾತ್ರ)	ದಿನಾಂಕ: 31.05.2025ರ ಅಂತ್ಯದವರೆಗೆ

ಟೆಂಡರ್ ವೇಳಾ ಪಟ್ಟಿ:– 1) ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ: **07–10–2024 ಸಂಜೆ 4–00 ಗಂಟೆಯುವರೆಗೆ** 2) ತಾಂತ್ರಿಕ ಬಿಡ್ ತೆರೆಯುವ **ದಿನಾಂಕ : 10–10–2024 ಸಂಜೆ 4–30 ಗಂಟೆಗೆ** 3) ಆರ್ಥಿಕ ಬಿಡ್ ತೆರೆಯುವ **ದಿನಾಂಕ : 16–10–2024 ಸಂಜೆ 4–30 ಗಂಟೆಗೆ** 4) ಷರತ್ತು ಮತ್ತು ನಿಬಂಧನೆಗಳ ಹೆಚ್ಚಿನ ಮಾಹಿತಿಯನ್ನು https://kppp.karnataka.gov.in/#/portal-home ನಲ್ಲಿ ಅಥವಾ ಕಛೇರಿಯ ಕೆಲಸದ ಅವಧಿಯಲ್ಲಿ ಪಡೆಯಬಹುದು. ಟೆಂಡರ್‌ಗಳನ್ನು ತೆರೆಯುವ ಸ್ಥಳ ಮತ್ತು ಪತ್ರ ವ್ಯವಹಾರದ ವಿಳಾಸ:– ಕಾರ್ಯದರ್ಶಿಗಳು, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಸಂತೆಸರಗೂರು, ಸರಗೂರು ತಾಲ್ಲೂಕು, ಮೈಸೂರು ಜಿಲ್ಲೆ.

ಸಹಿ/–
(ಹೆಚ್.ಎಸ್.ಕೃಷ್ಣಮೂರ್ತಿ)
ಕಾರ್ಯದರ್ಶಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಸಂತೆಸರಗೂರು.

ಸಹಿ/–
(ರುಕಿಯ ಬೇಗಂ)
ಆಡಳಿತಾಧಿಕಾರಿಗಳು, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಸಂತೆಸರಗೂರು.

DIPR/MYS/KAVITA/514/2024-25

